ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಡಿಸೆಂಬರ್ 10 ಮಂಗಳವಾರ 2024

ಸಂಪುಟ: 45 | ಸಂಚಿಕೆ: 233 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695 ಸುದ್ದಿ
ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಮಂಡ್ಯ ಸಾಹಿತ್ಯ ಸಮ್ಮೇಳನದಲ್ಲಿ ಮಾಂಸಾಹಾರಕ್ಕೆ ನಿರ್ಬಂಧ ವಿಧಿಸಿರುವುದನ್ನು ಖಂಡಿಸಿ ಪ್ರಗತಿಪರರ ಪ್ರತಿಭಟನೆ

'ಬೇಳೆ ಜೊತೆಗೆ ಮೂಳೆ; ಹಪ್ಪಳದೊಂದಿಗೆ ಕಬಾಬ್; ಕೋಸಂಬರಿ ಜೊತೆ ಎಗ್‌ಬುರ್ಜಿ; ಮುದ್ದೆಯೊಂದಿಗೆ ಬೋಟಿ' ಬೇಕೇ ಬೇಕು...

ಮಂಡ್ಯ, ಡಿ.9– ಮಂಡ್ಯದಲ್ಲಿ ಡಿ.20ರಿಂದ 22ರವರೆಗೆ ನಡೆಯಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸಸ್ಯಾಹಾರದ ಜೊತೆಗೆ ಮಾಂಸಾಹಾರವನ್ನೂ ನೀಡಬೇಕು ಹಾಗೂ ಸಮ್ಮೇಳನದ ಆಹಾರ ಮಳಿಗೆಗಳಲ್ಲಿ ಮಾಂಸಾಹಾರ ನಿಷೇಧಿಸಿರುವುದನ್ನು ತೆರವುಗೊಳಿಸಬೇಕೆಂದು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಮೊಟ್ಟೆ ತಿನ್ನುವ ಮೂಲಕ ಪ್ರತಿಭಟನೆ ಆರಂಭಿಸಿದ ಕಾರ್ಯಕರ್ತರು, 'ಬೇಳೆ ಜೊತೆ ಮೂಳೆಯೂ ಇರಲಿ', 'ಹಪ್ಪಳದ ಜೊತೆ ಕಬಾಬ್ ಇರಲಿ', 'ಕೋಸಂಬರಿ ಜೊತೆ ಎಗ್‌ಬುರ್ಜಿ ಇರಲಿ', 'ಮುದ್ದೆ ಜೊತೆ ಬೋಟಿ ಇರಲಿ'! ಘೋಷಣೆ ಕೂಗಿದರು. ಸಮ್ಮೇಳನದ ಆಹಾರ ಮಳಿಗೆಗಳಲ್ಲಿ ಮಾಂಸಾಹಾರ ನಿಷೇಧಿಸುವ ಮೂಲಕ ಜನರ ಆಹಾರದ ಹಕ್ಕನ್ನು ಕಸಿದುಕೊಳ್ಳಲಾಗುತ್ತಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಾಂಸಾಹಾರ ನಿರ್ಬಂಧಿಸುವುದು ಸರಿಯಲ್ಲ. ಅದರಲ್ಲೂ ಮಂಡ್ಯ ಜಿಲ್ಲೆಯಲ್ಲಿ ಹಬ್ಬ–ಹರಿದಿನಗಳಲ್ಲಿ ಮಾಂಸಾಹಾರಿ ಊಟೋಪಚಾರ ಹೆಸರುವಾಸಿಯಾಗಿದೆ. ಅಲ್ಲದೆ ಸಮ್ಮೇಳನಕ್ಕೆ ಆಗಮಿಸುವವರಲ್ಲಿ ಬಹುಸಂಖ್ಯಾತರು ಮಾಂಸಾಹಾರಿಗಳೇ ಆಗಿದ್ದರೂ, ಮಾಂಸಾಹಾರ ನಿಷೇಧಿಸಿರುವುದು ಯಾಕೆ ಎಂದು ಪ್ರಶ್ನಿಸಿದರು.

ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಮಾಂಸಾಹಾರದ ಬೇಡಿಕೆ ಯಾಕೆ ಎಂಬ ಪ್ರಶ್ನೆಯೇ ಅಸಮಂಜಸವಾಗಿದ್ದು, ಆಹಾರ ಎಂದರೆ ಆಹಾರವಷ್ಟೇ ಹೊರತು ಅದನ್ನು ಸಸ್ಯಾಹಾರ, ಮಾಂಸಾಹಾರ ಎಂದು ಬೇರ್ಪಡಿಸುವುದು ಸರಿಯಲ್ಲ. ಮಾಂಸಾಹಾರವನ್ನು ಅಪವಿತ್ರ ಎಂಬ ಭಾವನೆ ಜನರಲ್ಲಿ ಬಿತ್ತುವ ಕೆಲಸ ದೇಶಾದ್ಯಂತ ನಡೆಯುತ್ತಿದೆ. ಆ ಮೂಲಕ



ಪ್ರಗತಿಪರ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಬಹು ಜನರ ಆಹಾರ ಪದ್ಧತಿಯನ್ನು ಅಸ್ಪೃಶ್ಯಗೊಳಿಸುವ ಪ್ರಯತ್ನಗಳು ಶತಮಾನದಿಂದಲೂ ನಡೆಯುತ್ತಿದೆ. ಅದು ಸರಿಯಲ್ಲ. ಕನ್ನಡ ಸಾಹಿತ್ಯ ಪರಂಪರೆಯಲ್ಲಿ 12–13ನೇ ಶತಮಾನದ ಚಾಲುಕ್ಯ ಅರಸ 3ನೇ ಸೋಮೇಶ್ವರರು ಬರೆದಿರುವ ಮನಸೋಲ್ಲಾಸ ಕೃತಿಯಲ್ಲಿ ಮಾಂಸಾಹಾರದ ದೊಡ್ಡ ಪಟ್ಟಿಯೇ ಇದೆ. ಹೀಗಿರುವಾಗ ಸಾಹಿತ್ಯ ಸಮ್ಮೇಳನದಲ್ಲಿ ಮಾಂಸಾಹಾರ ನಿಷೇಧ ಎನ್ನುವುದು ಅಪಾಯಕಾರಿ ಅಜೆಂಡಾವಾಗಿದ್ದು, ನಾಗರಿಕರ ಮೂಲಭೂತ ಅಗತ್ಯವಾದ ಆಹಾರದ ವಿಚಾರದಲ್ಲಿ ಆಯೋಜಕರು ತಾರತಮ್ಯ ತೋರುವುದು ಪ್ರಜಾಪ್ರಭುತ್ವದ ವಿರೋಧಿ ನಿಲುವು ಎಂದು ಕಿಡಿಕಾರಿದರು. ಸಾಹಿತ್ಯ ಸಮ್ಮೇಳನದ ಆಹಾರ ಮಳಿಗೆಗಳಲ್ಲಿ ಮಾಂಸಾಹಾರ ಮಾರಾಟಕ್ಕೆ ನಿಷೇಧ ಹೇರಿರುವುದನ್ನು ತೆರವುಗೊಳಿಸಿ, ಮುಕ್ತ ಅವಕಾಶ ಕಲ್ಪಿಸಬೇಕು. ಸಮ್ಮೇಳನದಲ್ಲಿ ಆಹ್ವಾನಿತರಿಗೆ ನೀಡುವ ಸಸ್ಯಾಹಾರ ಊಟದ ಜೊತೆಗೆ ಎಲ್ಲರೂ ಸೇವಿಸಬಹುದಾದ ಕೋಳಿ ಮಾಂಸ, ಮೊಟ್ಟೆಯನ್ನು ಕಡ್ಡಾಯವಾಗಿ ನೀಡಬೇಕು ಎಂದು ಆಗ್ರಹಿಸಿದ ಪ್ರತಿಭಟನಾಕಾರರು, ಒಂದು ವೇಳೆ ಮಾಂಸಾಹಾರಕ್ಕೆ ಅವಕಾಶ ಕಲ್ಪಿಸದಿದ್ದಲ್ಲಿ ಸಾರ್ವಜನಿಕರಿಂದ ಸಮ್ಮೇಳನದಲ್ಲಿ ಕೋಳಿ, ಮೊಟ್ಟೆ ಮತ್ತು ಪಡಿತರ ಸಂಗ್ರಹಿಸಿ ಮಾಂಸಾಹಾರ ವಿತರಿಸುವ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ಪ್ರಗತಿಪರ ಮುಖಂಡರಾದ ಸಿ.ಕುಮಾರಿ, ಎ.ಎಲ್. ಕೃಷ್ಣೇಗೌಡ, ಎಂ.ಬಿ.ನಾಗಣ್ಣಗೌಡ, ಹೆಚ್.ಡಿ. ಜಯರಾಂ, ಎಂ.ವಿ.ಕೃಷ್ಣ, ಸಂದೇಶ್, ವಕೀಲ ಬಿ.ಟಿ. ವಿಶ್ವನಾಥ್, ಗಂಗರಾಜು, ನಿರಂಜನ್, ಟಿ.ಡಿ. ನಾಗರಾಜು, ನರಸಿಂಹಮೂರ್ತಿ, ಎಂ.ಸಿ. ಲಂಕೇಶ್ ಮಂಗಲ, ಲಕ್ಷ್ಮಣ್ ಚೀರನಹಳ್ಳಿ ಮುಂತಾದವರು ಭಾಗವಹಿಸಿದ್ದರು.

ಬೆಳಗಾವಿ ಅಧಿವೇಶನದ ಮೊದಲ ದಿನ

ಕಲಾಪ ನುಂಗಿದ ವಕ್ಫ್

ಆಡಳಿತಾರೂಢ–ಪ್ರತಿಪಕ್ಷಗಳ ಮಾತಿನ ಚಕಮಕಿ, ಇದರ ನಡುವೆ ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ವಿಚಾರವೂ ಸದ್ದು

ಬೆಳಗಾವಿ, ಸುವರ್ಣ ವಿಧಾನಸೌಧ, ಡಿ.9(ಕೆಎಂಶಿ)– ರೈತರು ಮತ್ತು ಮಠ ಮಾನ್ಯಗಳ ಆಸ್ತಿಗಳನ್ನು ವಕ್ಫ್ ಹೆಸರಿಗೆ ಮಾರ್ಪಡಿಸುತ್ತಿರುವುದರ ಜೊತೆಗೆ ಪಂಚಮಸಾಲಿ ಸಮಾಜದ ಹೋರಾಟ ಹತ್ತಿಕ್ಕಲು ರಾಜ್ಯ ಸರ್ಕಾರ ಮುಂದಾಗಿದೆ ಎಂಬ ವಿಷಯ ವಿಧಾನಸಭೆಯಲ್ಲಿ ಕೋಲಾಹಲ ಸೃಷ್ಟಿಸಿ, ಇಡೀ ದಿನದ ಕಲಾಪವನ್ನು ನುಂಗಿಹಾಕಿತು.

ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಗಾಲದ ಅಧಿವೇಶನದ ಮೊದಲ ದಿನವೇ ವಕ್ಫ್ ವಿಷಯವನ್ನು ಕೈಗೆತ್ತಿಕೊಂಡ ಪ್ರತಿಪಕ್ಷ, ರೈತರು ಹಾಗೂ ಮಠ ಮಾನ್ಯಗಳ ಆಸ್ತಿಯನ್ನು ಒಂದು ನಿರ್ದಿಷ್ಟ ಸಮುದಾಯಕ್ಕೆ ನೀಡಲು ಸರ್ಕಾರ ಹೊರಟಿದೆ ಎಂದು ಆರೋಪಿಸಿತು. ಪ್ರಶ್ನೋತ್ತರ ಅವಧಿ ಕೈಬಿಟ್ಟು ರೈತರ ವಿಚಾರ ಕೈಗೆತ್ತಿಕೊಳ್ಳಲು ಅವಕಾಶ ನೀಡಿ, ನಂತರ ಮುಂದಿನ ಕಲಾಪ ನಡೆಸಿ ಎಂದು ಪ್ರತಿಪಕ್ಷದ ನಾಯಕ ಆರ್.ಅಶೋಕ್ ನಿಲುವಳಿ ಸೂಚನೆ ಮಂಡಿಸಿದರು. ಮೊದಲು ಪ್ರಶ್ನೋತ್ತರ ಅವಧಿ ಮುಗಿಯಲಿ ನಂತರ ಉಳಿದ ವಿಚಾರ ಚರ್ಚಿಸೋಣ, ಪಕ್ಷಾತೀತವಾಗಿ ಸದಸ್ಯರು, ಕ್ಷೇತ್ರ ಮತ್ತು ರಾಜ್ಯದ ಸಮಸ್ಯೆಗಳಿಗೆ ಸರ್ಕಾರದಿಂದ ಉತ್ತರ ಬಯಸಿದ್ದಾರೆ, ಅದಕ್ಕೆ ಮೊದಲು ಸ್ಪಂದಿಸೋಣ ಎಂದರು. ಪ್ರಶ್ನೋತ್ತರ ವೇಳೆ ಮುಗಿಯುತ್ತಿದ್ದಂತೆ ವಕ್ಫ್ ವಿಚಾರ ಪ್ರಸ್ತಾಪಿಸಿದ ಅಶೋಕ್, ರಾಜ್ಯಾದ್ಯಂತ ರೈತರ ಕೃಷಿ ಭೂಮಿಗಳಿಗೆ ವಕ್ಫ್ ಆಸ್ತಿಗಳೆಂದು ನೋಟಿಸ್ ನೀಡಿ ಅವರನ್ನು ಒಕ್ಕಲೆಬ್ಬಿಸುವ ಕಾರ್ಯ ನಡೆದಿದೆ. ಮತ್ತೊಂದೆಡೆ ರೈತರ ಭೂಮಿಯನ್ನಷ್ಟೇ ಅಲ್ಲದೆ, ಮಠ–ಮಾನ್ಯಗಳ ಆಸ್ತಿಗಳ



ಸುವರ್ಣ ವಿಧಾನಸೌಧದಲ್ಲಿ ಚಳಿಗಾಲದ ಅಧಿವೇಶನದ ಮೊದಲ ದಿನವೇ ಗದ್ದಲ, ಧರಣಿ, ಕೋಲಾಹಲವೇ ನಡೆಯಿತು.

ಮೇಲೂ ವಕ್ಫ್ ಕೆಂಗಣ್ಣು ಬಿದ್ದಿದೆ ಎನ್ನುತ್ತಿದ್ದಂತೆ, ಆಡಳಿತ ಪಕ್ಷದ ಸದಸ್ಯರು, ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು, ಮಾನವತಾವಾದಿ ಬಸವಣ್ಣವರ ಬಗ್ಗೆ ಅವಹೇಳನದ ಮಾತುಗಳನ್ನು ಆಡಿದ್ದಾರೆ, ಮೊದಲು ಇದರ ಕುರಿತು ಚರ್ಚೆಗೆ ಅವಕಾಶ ಕೊಡಿ ಎಂದು ಸಭಾಧ್ಯಕ್ಷರ ಮುಂದೆ ಪಟ್ಟು ಹಿಡಿದರು.

6ನೇ ಪುಟಕ್ಕೆ

ಅನರ್ಹರ ಬಳಿ ಬಿಪಿಎಲ್ ಕಾರ್ಡ್ ಇದ್ದರೆ ಕಠಿಣ ಕಾನೂನು ಕ್ರಮ

- ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಎಚ್ಚರಿಕೆ
- ನಿಯಮಾವಳಿ ಮೀರಿ ಬಿಪಿಎಲ್ ಕಾರ್ಡ್ ಪಡೆದವರ ಪತ್ತೆಗೆ ಕಾರ್ಯಾಚರಣೆ



ಮುನಿಯಪ್ಪ

ಬೆಳಗಾವಿ, ಸುವರ್ಣ ವಿಧಾನಸೌಧ, ಡಿ.9(ಕೆಎಂಶಿ)–ಬಡತನದ ರೇಖೆಗಿಂತ ಕೆಳಗಿನ ಕುಟುಂಬಗಳಿಗೆ ನೀಡುವ ಬಿಪಿಎಲ್ ಪಡಿತರ ಚೀಟಿಗಳನ್ನು ಅರ್ಹರಲ್ಲದವರು ಪಡೆದಿದ್ದರೆ, ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸುವುದಾಗಿ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್. ಮುನಿಯಪ್ಪ ವಿಧಾನಪರಿಷತ್‌ನಲ್ಲಿಂದು ಎಚ್ಚರಿಕೆ ನೀಡಿದ್ದಾರೆ.


ತಾವು ಇಲಾಖೆ ಹೊಣೆಗಾರಿಕೆ ವಹಿಸಿಕೊಂಡ ದಿನದಿಂದಲೇ ಅನರ್ಹರ ಪತ್ತೆ ಹಚ್ಚುವ ಕೆಲಸ ಮಾಡುತ್ತಿರುವುದಲ್ಲದೆ, ನ್ಯಾಯಾಲಯದ ಆದೇಶದಂತೆ ಕಾನೂನು ಕ್ರಮ ಕೈಗೊಂಡಿದ್ದೇವೆ ಎಂದರು.

ಪ್ರಶ್ನೋತ್ತರ ಅವಧಿಯಲ್ಲಿ ಟಿ.ಎನ್. ಜವರಾಯಿ ಗೌಡ, ಐವಾನ್ ಡಿಸೋಜ ಮತ್ತಿತರರ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಇದುವರೆಗೂ ಅನರ್ಹರ ಚೀಟಿಗಳನ್ನು ರದ್ದುಪಡಿಸಿದ್ದೇವೆಯೇ ಹೊರತು ಅರ್ಹರ ಒಂದೂ ಚೀಟಿ ರದ್ದು ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು. ಅಕ್ರಮ ಪಡಿತರ ಚೀಟಿ ವಿರುದ್ಧದ ವಿಶೇಷ ಕಾರ್ಯಾಚರಣೆ ಮುಂದುವರೆದಿದೆ, ಅರ್ಹರಲ್ಲದವರು ಚೀಟಿ ಪಡೆದಿದ್ದರೆ, ಸ್ವಯಂಪ್ರೇರಿತವಾಗಿ ಹಿಂತಿರುಗಿಸಿ ಎಂದು ಸರ್ಕಾರ ಸೂಚನೆ ನೀಡಿತ್ತು. ಸರ್ಕಾರಿ ನೌಕರರು, ಆದಾಯ ತೆರಿಗೆ ಪಾವತಿದಾರರು, ನಿಯಮಾವಳಿ ಮೀರಿ ಲಕ್ಷಾಂತರ ಮಂದಿ ಬಿಪಿಎಲ್ ಪಡಿತರ ಚೀಟಿ ಪಡೆದು ಬಡವರ ಹಕ್ಕುಗಳನ್ನು ಕಸಿದುಕೊಳ್ಳುತ್ತಿದ್ದು ಇಂತಹವರನ್ನು ಇನ್ನು ಮುಂದೆ ಬಿಡುವುದಿಲ್ಲ ಎಂದರು. ಜನವರಿ 2021ರಿಂದ ಮೇ 2023ರವರೆಗೆ 3,35,463 ಅನರ್ಹರು ಪಡೆದ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದೆ, ಇವರಿಗೆ 13,51,30,858 ರೂ. ದಂಡ ವಿಧಿಸುವ ಮೂಲಕ ನಷ್ಟ ಭರಿಸಲು ಸರ್ಕಾರ ಕ್ರಮ ವಹಿಸಿದೆ.

ಆಹಾರ ಇಲಾಖೆ ಉಗ್ರಾಣಗಳಿಂದ ಅಕ್ರಮವಾಗಿ ಕಾಳಸಂತೆಯಲ್ಲಿ ಅಕ್ಕಿ ಮಾರಾಟ ತಪ್ಪಿಸಲು ಸರ್ಕಾರ ಕ್ರಮ ವಹಿಸಿದೆ, ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ಪಡಿತರ ಅಕ್ರಮ ಸಾಗಣೆ ಕಂಡುಬಂದಲ್ಲಿ ಕೂಡಲೇ ದಾಳಿ ನಡೆಸಿ, ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಪ್ರಕರಣ ದಾಖಲಿಸಿ, ಅಕ್ರಮ ದಾಸ್ತಾನು ಮುಟ್ಟುಗೋಲು ಹಾಕಿಕೊಂಡು,

6ನೇ ಪುಟಕ್ಕೆ





ಕೊಡಗು, ಚಾಮರಾಜನಗರದಲ್ಲಿ 9 ಕಂಪನಿಗಳಿಗೆ ಗುತ್ತಿಗೆ ನೀಡಿರುವ 5,150 ಎಕರೆ ಅರಣ್ಯ ಭೂಮಿ ವಶಕ್ಕೆ ಕ್ರಮ

ಅರಣ್ಯ ಸಚಿವ ಈಶ್ವರ್ ಖಂಡ್ರೆ ಪುನರುಚ್ಚಾರ



ಈಶ್ವರ್ ಖಂಡ್ರೆ

ಬೆಳಗಾವಿ, ಡಿ.9– ಬ್ರಿಟಿಷರ ಕಾಲದಲ್ಲಿ ಕೊಡಗು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ 9 ಕಂಪನಿಗಳಿಗೆ ಗುತ್ತಿಗೆ ನೀಡಲಾಗಿರುವ ಸುಮಾರು 5,150 ಎಕರೆ ಅರಣ್ಯ ಭೂಮಿಯ ಮರುವಶಕ್ಕೆ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದು ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ವಿಧಾನಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಸುಜಾ ಕುಶಾಲಪ್ಪ ಈ ಕುರಿತು ಪ್ರಶ್ನೆ ಕೇಳಿದ್ದರು. ಇದಕ್ಕೆ ಉತ್ತರ ನೀಡಿದ ಸಚಿವರು, ಕೊಡಗು ಜಿಲ್ಲೆಯಲ್ಲಿ ಮರ್ಕೆರಾ ರಬ್ಬರ್ ಕಂಪನಿ (1074 ಎಕರೆ), ನೀಲಾಂಬುರ್ ರಬ್ಬರ್ ಕಂಪನಿಗೆ (713.03 ಎಕರೆ), ಥಾಮ್ಸನ್ ರಬ್ಬರ್ ಕಂಪನಿ (625 ಎಕರೆ), ಪೋರ್ಟ್ ಲ್ಯಾಂಡ್ ರಬ್ಬರ್ ಕಂಪನಿ (1289.29 ಎಕರೆ), ಟಾಟಾ ಕಾಫಿ ಲಿ. (923.378 ಎಕರೆ), ಗ್ರೈನ್ ಲೋರೆನ್ ಪ್ಲಾಂಟೇಷನ್ (279.748 ಎಕರೆ), ಚಾಮರಾಜನಗರ ಜಿಲ್ಲೆಯ ಎಮರಾಲ್ಡ್ ಹೆವೆನ್ ಎಸ್ಟೇಟ್, ಬೇಡಗುಳಿ (37.25 ಎಕರೆ), ಬಿಳಿಗಿರಿರಂಗನ ಎಸ್ಟೇಟ್, ಬೇಡಗುಳಿ (25 ಎಕರೆ), ನೀಲಗಿರಿ ಪ್ಲಾಂಟೇಷನ್ ಲಿ. ಹೊನ್ನಮೇಟಿ 184 ಎಕರೆ ಸೇರಿ ಒಟ್ಟು 5150 ಎಕರೆ ಜಮೀನನ್ನು ಗುತ್ತಿಗೆ ನೀಡಲಾಗಿದೆ.

ಈ ಕಂಪನಿಗಳು ಹಲವು ದಶಕಗಳಿಂದ ಗುತ್ತಿಗೆ ಹಣವನ್ನೂ ಪಾವತಿಸಿಲ್ಲ. ಇವುಗಳಿಂದ ಇಲಾಖೆಗೆ ಬಡ್ಡಿ ಮತ್ತು ದಂಡ ಸೇರಿ ಒಟ್ಟು 1492.18 ಕೋಟಿ ರೂ. ಬರಬೇಕಿದೆ ಎಂದು

6ನೇ ಪುಟಕ್ಕೆ


ಮೈಸೂರು ಹೊರವಲಯದಲ್ಲೇ ಕಾಡಾನೆಗಳ ಚೆಲ್ಲಾಟ

ಈ ಗಂಡಾನೆಗಳ ಕಾಡಿಗೊಡಿಸಲು ಮುಂದುವರೆದ ಕಾರ್ಯಾಚರಣೆ

ಮೈಸೂರು,ಡಿ.9(ಎಂಟಿವೈ&ಪಿಎಂ)– ಮೈಸೂರು ನಗರದ ಹೊರವಲಯದಲ್ಲಿ ಕಾಡಾನೆಗಳೆರಡು ಪದೇ ಪದೆ ಗಿರಕಿ ಹೊಡೆಯುತ್ತಿದ್ದು, ಕಳೆದ ಒಂದೂವರೆ ತಿಂಗಳಿನಿಂದ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕಾಣಿಸಿಕೊಳ್ಳುವ ಮೂಲಕ ಗ್ರಾಮಸ್ಥರಲ್ಲಿ ಆತಂಕ ಉಂಟು ಮಾಡಿದ್ದರೆ, ಅರಣ್ಯ ಇಲಾಖೆಗೆ ತಲೆನೋವಾಗಿ ಪರಿಣಮಿಸಿವೆ.

ಬೋಗಾದಿ ರಿಂಗ್ ರಸ್ತೆಯ 3ರಿಂದ 4 ಕಿ.ಮೀ. ದೂರದ ಜಟ್ಟಿಹುಂಡಿ–ಮಾಣಿಕ್ಯಪುರ ಗ್ರಾಮಗಳ ಸುತ್ತಮುತ್ತ ಸೋಮವಾರ ಬೆಳಗ್ಗೆ ಈ ಕಾಡಾನೆಗಳು ಕಾಣಿಸಿಕೊಂಡು ಆತಂಕ ಸೃಷ್ಟಿಸಿದ್ದವು. ನಗರದ ಸಮೀಪದಲ್ಲೇ ಬೀಡುಬಿಟ್ಟಿದ್ದ ಕಾಡಾನೆಗಳು ನಗರವನ್ನು ಪ್ರವೇಶಿಸಿದಂತೆ ಅರಣ್ಯ ಇಲಾಖೆ ಸಿಬ್ಬಂದಿ ನಿಗಾ ವಹಿಸಿ, ಸೋಮವಾರ ಸಂಜೆ ನಂತರ ಅವುಗಳನ್ನು ಕಾಡಿಗೆ ಓಡಿಸುವ ಕಾರ್ಯಾಚರಣೆ ಆರಂಭಿಸಿದರು.

ಕಾರ್ಯಾರಣೆ ವೇಳೆ ಯಾವುದೇ ಅಹಿತಕರ ಘಟನೆಗಳು ಸಂಭವಿದಂತೆ ಕಟ್ಟೆಚ್ಚರ ವಹಿಸುವ ನಿಟ್ಟಿನಲ್ಲಿ ಪೊಲೀಸ್ ಮತ್ತು ಅರಣ್ಯ ಇಲಾಖೆ ಸಿಬ್ಬಂದಿ ಬೋಗಾದಿ ಮತ್ತು ಹೆಚ್‌ಡಿ ಕೋಟೆ ರಸ್ತೆಯ ಗ್ರಾಮಗಳಿಗೆ ತೆರಳಿ, ಹೊಲ ಗದ್ದೆಗಳಲ್ಲಿ ಕೆಲಸ ಮಾಡುತ್ತಿದ್ದ ರೈತರಿಗೆ ಸುರಕ್ಷಿತವಾಗಿ ಮನೆಗಳಿಗೆ ತೆರಳುವಂತೆ ಮೈಕ್‌ನಲ್ಲಿ ಎಚ್ಚರಿಕೆ ಸಾರಿದರು. ಬಳಿಕ ಸಂಜೆ ವೇಳೆಗೆ ಬೊಮ್ಮನಹಳ್ಳಿ ಸಮೀಪದ



ಜಟ್ಟಿಹುಂಡಿ ಸುತ್ತಮುತ್ತ ಕಾಡಾನೆಗಳು ಚೆಲ್ಲಾಟವಾಡುತ್ತಿರುವ ದೃಶ್ಯ


ಖಾಸಗಿ ಪ್ಲಾಂಟೇಶನ್‌ನಲ್ಲಿ ಬೀಡುಬಿಟ್ಟಿದ್ದ ಕಾಡಾನೆಗಳನ್ನು ಅರಣ್ಯಕ್ಕೆ ಓಡಿಸುವ ಕಾರ್ಯಾಚರಣೆ ಆರಂಭಿಸಲಾಯಿತು. ಆದರೆ ಚಾಲಕಿ ಕಾಡಾನೆಗಳು ರಾತ್ರಿ 8 ಗಂಟೆಯಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಕಣ್ತಪ್ಪಿಸಿ ಬೀರಿಹುಂಡಿ ಸಮೀಪದ ಹೊಲ ಒಂದಕ್ಕೆ ನುಸುಳಿವೆ. ಆದರೂ ಇಡೀ ರಾತ್ರಿ ಕಾರ್ಯಾಚರಣೆ ಮುಂದುವರೆಸಲಾಗಿದ್ದು, ಆನೆಗಳು ಮೈಸೂರು ನಗರ ಪ್ರವೇಶಿಸದಂತೆ ಅರಣ್ಯ ಸಿಬ್ಬಂದಿ ಗಸ್ತು ಮೂಲಕ ಕಟ್ಟೆಚ್ಚರ ವಹಿಸಿದ್ದಾರೆ.

ಕಾಡಾನೆಗಳ ಜಾಡು: ಈ ಎರಡೂ ಗಂಡಾನೆಗಳಾಗಿದ್ದು, ಕಳೆದ ಒಂದೂವರೆ ತಿಂಗಳಿನಿಂದ ಮೈಸೂರು ತಾಲೂಕಿನ ಜಯಪುರ, ಎಡಹಳ್ಳಿ, ಮಂಡನಹಳ್ಳಿ, ಗುಜ್ಜೆಗೌಡನಪುರ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕಾಣಿಸಿಕೊಂಡು ಜನರಲ್ಲಿ ಆತಂಕ ಉಂಟು ಮಾಡಿವೆ. ಅರಣ್ಯ ಇಲಾಖೆ ಸಿಬ್ಬಂದಿ ಯಾಮಾರಿಸಿ ತಿರುಗಾಟದಲ್ಲಿ

6ನೇ ಪುಟಕ್ಕೆ

ಮೈಸೂರು ಮಿತ್ರ ಮಂಗಳವಾರ 10 ಡಿಸೆಂಬರ್ 2024

ಮೈಸೂರು ವಿವಿ ನಿವೃತ್ತ ಪ್ರಾಧ್ಯಾಪಕ ಪ್ರೊ.ವಿ.ಕೆ.ನಟರಾಜ್ ಇನ್ನಿಲ್ಲ



ಪ್ರೊ.ವಿ.ಕೆ.ನಟರಾಜ್

ಮೈಸೂರು, ಡಿ.9(ಆರ್‌ಕೆ)– ಮೈಸೂರು ವಿಶ್ವವಿದ್ಯಾನಿಲಯದ ಮಾಜಿ ಕುಲಸಚಿವರು, ಮಾನಸಗಂಗೋತ್ರಿಯ ನಿವೃತ್ತ ಪ್ರಾಧ್ಯಾಪಕರೂ ಆದ ಮೈಸೂರಿನ ಜಯಲಕ್ಷ್ಮೀಪುರಂ 4ನೇ ಮೇನ್ ನಿವಾಸಿ ಪ್ರೊ.ವಿ.ಕೆ.ನಟರಾಜ್ (85) ಅವರು ಇಂದು ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಅವರು ಪತ್ನಿ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗ ಮತ್ತು ಸ್ನೇಹಿತರನ್ನು ಅಗಲಿದ್ದಾರೆ. ಮೈಸೂರು ಓಪನ್ ಫೋರಂ ವತಿಯಿಂದ ನಿನ್ನೆ (ಭಾನುವಾರ) ಆಯೋಜಿಸಿದ್ದ 'ಸಾಮಾಜಿಕ ನ್ಯಾಯಕ್ಕಾಗಿ ಜಾತಿ ಸಮೀಕ್ಷೆ ಅಗತ್ಯವಿದೆಯೇ?' ಕಾರ್ಯಕ್ರಮದಲ್ಲಿ ಪ್ರೊ.ನಟರಾಜ್ ಅವರು ಭಾಗವಹಿಸಬೇಕಾಗಿತ್ತು. ಆದರೆ ಅವರು ಅನಾರೋಗ್ಯದಿಂದಾಗಿ ಪಾಲ್ಗೊಳ್ಳಲು ಸಾಧ್ಯವಾಗಿರಲಿಲ್ಲ. ಪ್ರೊ.ನಟರಾಜ್ ಅವರ ಪಾರ್ಥಿವ ಶರೀರವನ್ನು ಅವರ ನಿವಾಸದಲ್ಲಿ ನಾಳೆ (ಮಂಗಳವಾರ) ಬೆಳಗ್ಗೆವರೆಗೆ ಸಾರ್ವಜನಿಕರ ಅಂತಿಮ ದರ್ಶನಕ್ಕಾಗಿ ಇರಿಸಲಾಗುವುದು. ನಂತರ ಬೆಳಗ್ಗೆ 11 ಗಂಟೆಗೆ ಜೆಎಸ್‌ಎಸ್ ಆಸ್ಪತ್ರೆಗೆ ದೇಹದಾನ ಮಾಡಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

1939ರ ಅಕ್ಟೋಬರ್ 6ರಂದು ಜನಿಸಿದ ಪ್ರೊ.ವಿ.ಕೆ.ನಟರಾಜ್, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಅರ್ಥಶಾಸ್ತ್ರ ಅಧ್ಯಯನ ಮಾಡಿ, ಆಕ್ಸ್‌ಫರ್ಡ್ ವಿವಿಯಲ್ಲಿ ಎಂ.ಲಿಟ್ ಮಾಡಿದ್ದರು. ಮೈಸೂರು ವಿಶ್ವವಿದ್ಯಾನಿಲಯದ ಇನ್‌ಸ್ಟಿಟ್ಯೂಟ್ ಆಫ್ ಡೆವಲಪ್‌ಮೆಂಟ್ ಸ್ಟಡೀಸ್‌ನಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದರು. ಅವರು ಯುಕೆಯ ಯಾರ್ಕ್ ವಿಶ್ವವಿದ್ಯಾನಿಲಯದಲ್ಲಿ ರೀಸರ್ಚ್ ಫೆಲೋ ಆಗಿ ಮತ್ತು ಮುಂಬೈನ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಫಾರ್ ಪೇಯಿಂಗ್ ಇನ್ ಇಂಡಸ್ಟ್ರೀಯಲ್‌ನಲ್ಲಿ ಸೀನಿಯರ್ ರೀಸರ್ಚ್ ಆಫೀಸರ್ ಆಗಿ ಸೇವೆ ಸಲ್ಲಿಸಿದ್ದರು. ಜೊತೆಗೆ ಮಾಲ್ ಕಾಮ್ ಅಂಡ್ ಎಲಿಜಬೆತ್ ಆದಿಶೇಷಯ್ಯ ಟ್ರಸ್ಟ್‌ನ ಬೋರ್ಡ್ ಆಫ್ ಟ್ರಸ್ಟೀಸ್ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದರು.

ಯುಕೆ ಸಸ್ಸೆಕ್ಸ್ ವಿಶ್ವವಿದ್ಯಾನಿಲಯ ಸೇರಿದಂತೆ ಹಲವು ವಿಶ್ವವಿದ್ಯಾನಿಲಯಗಳಲ್ಲಿ ಸಂದರ್ಶಕ ಪ್ರಾಧ್ಯಾಪಕರಾಗಿಯೂ ಸೇವೆ ಸಲ್ಲಿಸಿದ್ದ ಅವರು ನಿವೃತ್ತಿ ನಂತರ ದೆಹಲಿಯ ಜೆಎನ್‌ಯು ಸೆಂಟರ್ ಫಾರ್ ಪೊಲಿಟಿಕಲ್ ಸ್ಟಡೀಸ್, ಚೆನ್ನೈನ ಮದ್ರಾಸ್ ಇನ್‌ಸ್ಟಿಟ್ಯೂಟ್ ಆಫ್ ಡೆವಲಪ್‌ಮೆಂಟ್ ಸ್ಟಡೀಸ್‌ನಲ್ಲಿಯೂ ಸೇವೆ ಸಲ್ಲಿಸಿದ್ದರು.

ಮರಣನಿಧಿ ಯೋಜನೆ ಉದ್ಘಾಟನೆ



ಮೈಸೂರು ನಗರ ವಕೀಲರ ವಿವಿಧೋದ್ದೇಶ ಸಹಕಾರ ಸಂಘದ ವತಿಯಿಂದ ಸಂಘದ ಸದಸ್ಯರಿಗೆ ಮರಣನಿಧಿ ಯೋಜನೆ ಜಾರಿ ಮಾಡಿದ್ದು, ಈ ಯೋಜನೆಯನ್ನು ಪ್ರಭಾರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಡಿ.ಪುಟ್ಟಸ್ವಾಮಿ ಉದ್ಘಾಟಿಸಿದರು. ಸೊಸೈಟಿ ಅಧ್ಯಕ್ಷ ಬಿಎಸ್ ಚಂದ್ರಶೇಖರ, ಉಪಾಧ್ಯಕ್ಷ ಚೆನ್ನನಾಯ್ಕ, ನಿರ್ದೇಶಕರಾದ ರಮೇಶ್ ಕೆಎಚ್, ರಘು ಬಿಜಿ, ನಾಗರತ್ನ, ಚಿನ್ನಸ್ವಾಮಿ, ಬಸವರಾಜು, ಮೈಸೂರು ವಕೀಲರ ಸಂಘದ ಕಾರ್ಯದರ್ಶಿ ಎ.ಜಿ.ಸುಧೀರ್ ಇನ್ನಿತರರಿದ್ದರು.

ಯೂಸುಫ್ ಹಮೀದ್ ರಸಾಯನಶಾಸ್ತ್ರ ಶಿಬಿರ



ಮೈಸೂರಿನ ಜೆಎಸ್‌ಎಸ್ ಕಾಲೇಜ್ ಆಫ್ ಫಾರ್ಮಸಿಯಲ್ಲಿ ಏರ್ಪಡಿಸಿದ್ದ ಯೂಸುಫ್ ಹಮೀದ್ ರಸಾಯನಶಾಸ್ತ್ರ ಶಿಬಿರವನ್ನು ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಕುಲಪತಿ ಡಾ.ಹೆಚ್.ಬಸವನಗೌಡಪ್ಪ ಉದ್ಘಾಟಿಸಿದರು.

ಮೈಸೂರು,ಡಿ.9–ಮೈಸೂರಿನ ಜೆಎಸ್‌ಎಸ್ ಫಾರ್ಮಸಿ ಕಾಲೇಜಿನ ಔಷಧೀಯ ರಸಾಯನಶಾಸ್ತ್ರ ವಿಭಾಗವು ಇಂದಿನಿಂದ ಡಿ.11ರವರೆಗೆ ಮೂರು ದಿನಗಳ ಕಾಲ ಯೂಸುಫ್ ಹಮೀದ್ ರಸಾಯನಶಾಸ್ತ್ರ ಶಿಬಿರವನ್ನು ಆಯೋಜಿಸಿದೆ.

ಶಿಬಿರದ ಉದ್ಘಾಟನಾ ಸಮಾರಂಭವು ಮೈಸೂರಿನ ಜೆಎಸ್‌ಎಸ್ ಕಾಲೇಜ್ ಆಫ್ ಫಾರ್ಮಸಿಯ ಶ್ರೀ ರಾಜೇಂದ್ರ ಸಭಾಂಗಣದಲ್ಲಿ ನಡೆಯಿತು. ಕಾರ್ಯಕ್ರಮವನ್ನು ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಕುಲಪತಿ ಡಾ.ಹೆಚ್.ಬಸವನಗೌಡಪ್ಪ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಮಕ್ಕಳಿಗಾಗಿ ರಸಾಯನಶಾಸ್ತ್ರ ಶಿಬಿರವನ್ನು ಆಯೋಜಿಸಿರುವ ಬೋಧಕರು, ಸಹಾಯಕ ಸಿಬ್ಬಂದಿ ಮತ್ತು ಸಂಶೋಧನಾ ವಿದ್ವಾಂಸರ ಪ್ರಯತ್ನಗಳನ್ನು ಶ್ಲಾಘಿಸಿದರು. ಇದು ರಸಾಯನಶಾಸ್ತ್ರದಲ್ಲಿ ಅವರ ಜ್ಞಾನವನ್ನು ಹೆಚ್ಚಿಸುತ್ತದೆ ಮತ್ತು ರಸಾಯನಶಾಸ್ತ್ರ ಕೌಶಲಗಳನ್ನು ಕಲಿಸುತ್ತದೆ. ಇದು ಅವರ ಉನ್ನತ ಅಧ್ಯಯನದ ಭಾಗವಾಗಿ ರಸಾಯನಶಾಸ್ತ್ರವನ್ನು ಆಯ್ಕೆ ಮಾಡಲು ಅವರ ಆಸಕ್ತಿಯನ್ನು ಹೆಚ್ಚಿಸಬಹುದು ಎಂದು ಹೇಳಿದರು.

ಜೆಎಸ್‌ಎಸ್ ಫಾರ್ಮಸಿ ಕಾಲೇಜಿನ ಪ್ರಾಂಶುಪಾಲ ಡಾ.ಟಿ.ಎಂ.ಪ್ರಮೋದ್ ಅಧ್ಯಕ್ಷತೆ ವಹಿಸಿದ್ದರು. ಪ್ರೋಗ್ರಾಂ ಎಕ್ಸಿಕ್ಯೂಟಿವ್ ಮಲಿಸ್ಸಾ ಮೆಂಡೋನ್ಸಾ, ಬೆಂಗಳೂರಿನ ರಾಜಲಕ್ಷ್ಮಿ ಚಿಲ್ಡ್ರನ್ಸ್ ಫೌಂಡೇಶನ್‌ನ ಯೋಜನಾ ನಿರ್ದೇಶಕಿ ಡಾ.ಸರೋಜಾ ಸುರೇಶ್, ಶಿಬಿರ ಸಂಯೋಜಕ ಡಾ.ಬಿ.ಎಂ.ಗುರುಪಾದಯ್ಯ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಸಮಾರೋಪ ಸಮಾರಂಭ ಡಿ.11ರಂದು ಮಧ್ಯಾಹ್ನ 3.30ಕ್ಕೆ ಶ್ರೀ ರಾಜೇಂದ್ರ ಸಭಾಂಗಣದಲ್ಲಿ ನಡೆಯಲಿದೆ

ಮೈಸೂರು ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ ಸುತ್ತಮುತ್ತ ನಿರಾಶ್ರಿತರಿಗೆ ಹೊದಿಕೆ ವಿತರಣೆ



ಮೈಸೂರಿನ ಹಲವೆಡೆ ನಿರಾಶ್ರಿತರಿಗೆ ಹೊದಿಕೆ ವಿತರಿಸಲಾಯಿತು.

ಮೈಸೂರು,ಡಿ.9–ರಸ್ತೆಬದಿ ಮಲಗುವ ನಿರಾಶ್ರಿತರಿಗೆ ಹೊದಿಕೆ ವಿತರಿಸುವ ಕಾರ್ಯವನ್ನು ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್‌ನ ಪದಾಧಿಕಾರಿಗಳು ಹಮ್ಮಿಕೊಂಡಿದ್ದಾರೆ. ರೈಲ್ವೆ ನಿಲ್ದಾಣ, ಬಸ್ ನಿಲ್ದಾಣ ಹಾಗೂ ಸುತ್ತಮುತ್ತ ಮಲಗಿದ್ದ ನಿರಾಶ್ರಿತರಿಗೆ ಹೊದಿಕೆ ವಿತರಿಸಿದರು. ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ರಾಷ್ಟ್ರೀಯ ವಿಶೇಷ ಚೇತನ ಕ್ರೀಡಾಪಟು ಅಲೋಕ್ ಆರ್.ಜೈನ್ ಮಹಾನ್ ಶ್ರೇಯಸ್, ಬೈರತಿ ಲಿಂಗರಾಜು, ಮಂಜುನಾಥ್, ಸಚಿನ್ ನಾಯಕ್ ಈ ಸೇವಾ ಕಾರ್ಯದಲ್ಲಿ ತೊಡಗಿದ್ದರು.

ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಶ್ರೀ ದತ್ತಾತ್ರೇಯ ಜಯಂತಿ

ಮೈಸೂರು,ಡಿ.9–ಮೈಸೂರಿನ ಅವಧೂತ ದತ್ತ ಪೀಠ, ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಡಿ.9ರಿಂದ 18ರವರೆಗೆ ಶ್ರೀ ದತ್ತಾತ್ರೇಯ ಜಯಂತಿ ಪ್ರಯುಕ್ತ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಡಿ.11ರಂದು ಶ್ರೀ ಗೀತಾ ಜಯಂತಿ ಬೆಳಗ್ಗೆ 10 ಗಂಟೆಗೆ ನಡೆಯಲಿದ್ದು, ನಾದ ಮಂಟಪದಲ್ಲಿ ಸಂಪೂರ್ಣ ಭಗವದ್ಗೀತಾ ಪಾರಾಯಣ ನಡೆಯಲಿದೆ. ಡಿ.12 ಗುರುವಾರ ಬೆಳಗ್ಗೆ 7 ಗಂಟೆಯಿಂದ ಅಹೋರಾತ್ರಿ ಅಖಂಡ ಹನುಮಾನ್ ಚಾಲೀಸಾ ಪಾರಾಯಣ.

ಡಿ.13 ಶುಕ್ರವಾರ, ಶ್ರೀ ಹನುಮ ಜಯಂತಿ ಪ್ರಯುಕ್ತ ಬೆಳಗ್ಗೆ 7ಕ್ಕೆ ಕಾರ್ಯ ಸಿದ್ಧಿ ಹನುಮಂತನಿಗೆ ಅಭಿಷೇಕ. 9 ಗಂಟೆಗೆ ಶ್ರೀ ಕಾಲಾಗ್ನಿ ಶಮನ ದತ್ತಾತ್ರೇಯ ಸ್ವಾಮಿಗೆ ಪಂಚಾಮೃತ ಅಭಿಷೇಕ, 10ಕ್ಕೆ ಶ್ರೀ ಚಕ್ರಪೂಜೆ, ಪುಣ್ಯಸ್ಮರಣೆ, ಅನಘ ವ್ರತ. 11ಗಂಟೆಗೆ ಶ್ರೀ ಹನುಮ ಜಯಂತಿ ಪೂಜೆ. ಸಂಜೆ 5ಕ್ಕೆ ಪಲ್ಲಕ್ಕಿ ಉತ್ಸವ. ಸಂಜೆ 7 ಹನುಮಾನ್ ಭಜನೆ.

ಡಿ.14ರಂದು ಶನಿವಾರ ಬೆಳಗ್ಗೆ 9 ಗಂಟೆಗೆ ಶ್ರೀ ಚಕ್ರಪೂಜಾ, ಶ್ರೀ ದತ್ತಾತ್ರೇಯ ಹೋಮದ ಪೂರ್ಣಾಹುತಿ. ಶ್ರೀ ಕಾಲಾಗ್ನಿ ಶಮನ ದತ್ತಾತ್ರೇಯ ಸ್ವಾಮಿಗೆ ಕ್ಷೀರಾಭಿಷೇಕ. ಬೆಳಗ್ಗೆ 10ಕ್ಕೆ ಅಖಿಲ ಭಾರತ ಜ್ಞಾನ ಬೋಧ ಸಭಾ ಸಮ್ಮೇಳನ. ಬೆಳಗ್ಗೆ 11 ಗಂಟೆಗೆ ಅನಘ ವ್ರತ, ನಂತರ ಸಂಜೆ 5ಕ್ಕೆ ರಥೋತ್ಸವ ನಂತರ ಸಾಂಸ್ಕೃತಿಕ ಕಾರ್ಯಕ್ರಮ.



ಡಿ.15 ಭಾನುವಾರ ಬೆಳಗ್ಗೆ 7ಕ್ಕೆ ಪೌರ್ಣಮಿ. ಶ್ರೀ ದತ್ತಾತ್ರೇಯ ಜಯಂತಿ ಪ್ರಯುಕ್ತ ಪವಮಾನ ಹೋಮ ಮತ್ತು ದತ್ತಾತ್ರೇಯ ವಜ್ರ ಮಂತ್ರ ಹೋಮ. ಬೆಳಗ್ಗೆ 9 ಗಂಟೆಗೆ ಶ್ರೀ ಕಾಲಾಗ್ನಿ ಶಮನ ದತ್ತಾತ್ರೇಯ ಸ್ವಾಮಿಗೆ ತೈಲಾಭಿಷೇಕ, ಶ್ರೀ ಚಕ್ರ ಪೂಜೆ ಮತ್ತು ಪೂರ್ಣಾಹುತಿ. ಬೆಳಗ್ಗೆ 10 ಗಂಟೆಗೆ ಸಹಸ್ರ ಕಳಶ ತೈಲಾಭಿಷೇಕ ಶ್ರೀ ದತ್ತಾತ್ರೇಯ ಸ್ವಾಮಿಗೆ ಭಕ್ತರಿಂದ. ಕೊಚ್ಚಿ ಆಶ್ರಮ ಭಜನಾ ತಂಡದಿಂದ ಶ್ರೀ ದತ್ತಾತ್ರೇಯ ಸ್ವಾಮಿ ನಾಮ ಸಂಕೀರ್ತನೆ, ಬೆಳಗ್ಗೆ 11 ಗಂಟೆಗೆ ಅನಘ ವ್ರತ. ಸಂಜೆ 7ಕ್ಕೆ ಸಪ್ತರ್ಷಿ ಸರೋವರದಲ್ಲಿ ಶ್ರೀ ದತ್ತಾತ್ರೇಯ ಸ್ವಾಮಿಗೆ ತೆಪ್ಪೋತ್ಸವ, ರಾತ್ರಿ 8 ಗಂಟೆಗೆ ನಾದ ಮಂಟಪದಲ್ಲಿ ಶ್ರೀ ದತ್ತಾತ್ರೇಯ ಸ್ವಾಮಿಗೆ ಕಾಕಡಾರತಿ.

ಡಿ.16ರಂದು ಸೋಮವಾರ ಶ್ರೀ ರಾಜರಾಜೇಶ್ವರಿ ದೇವಸ್ಥಾನದ ವಾರ್ಷಿಕೋತ್ಸವ ಸಮಾರಂಭ. ಬೆಳಗ್ಗೆ ಮಂತ್ರ ಉಪದೇಶ, ಬೆಳಗ್ಗೆ 8 ಗಂಟೆಗೆ ಚಂಡಿ ಹೋಮ, ಬೆಳಗ್ಗೆ 9 ಗಂಟೆಗೆ ಶ್ರೀ ಚಕ್ರ ಪೂಜೆ, ಸಂಜೆ 4ಕ್ಕೆ ಶ್ರೀ ಲಲಿತಾ ಸಹಸ್ರನಾಮ ಪಾರಾಯಣ. ನಂತರ ಸಂಜೆ 6 ಗಂಟೆಗೆ ಶ್ರೀ ದತ್ತಾತ್ರೇಯ ಅವರ ಕುರಿತು ಪಾಗಡ ಪ್ರಕಾಶ್‌ರಾವ್ ಅವರಿಂದ ಕನ್ನಡದಲ್ಲಿ ಪ್ರವಚನ.

ಡಿ.17 ಮಂಗಳವಾರ ಬೆಳಗ್ಗೆ 8 ಗಂಟೆಗೆ ದೇವಿ ಹೋಮ, ಸಂಜೆ 6 ಗಂಟೆಗೆ ಅಭಿಷೇಕ, ಶ್ರೀಚಕ್ರ ಪೂಜಾ,ಅನ್ನ ಪ್ರಸಾದ. ಸಂಜೆ 6ಕ್ಕೆ ಶ್ರೀ ದತ್ತಾತ್ರೇಯ ಕುರಿತು ವಿದ್ವಾನ್ ಪಾವಗಡ ಪ್ರಕಾಶ್‌ರಾವ್ ಅವರಿಂದ ಕನ್ನಡದಲ್ಲಿ ಪ್ರವಚನ. ಡಿ.18 ಬುಧವಾರ ಸಂಜೆ 6 ಗಂಟೆಗೆ ಶ್ರೀ ದತ್ತಾತ್ರೇಯ ಕುರಿತು ವಿದ್ವಾನ್ ಪಾವಗಡ ಪ್ರಕಾಶ್ ರಾವ್ ಅವರಿಂದ ಕನ್ನಡದಲ್ಲಿ ಪ್ರವಚನ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ಬಾಣಂತಿಯರ ಸಾವಿಗೆ ಸರ್ಕಾರದ ನಿರ್ಲಕ್ಷ್ಯ ಕಾರಣ: ಆರೋಪ



ಮೈಸೂರು,ಡಿ.9–ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರ ಸಾವಿಗೆ ಸರ್ಕಾರದ ನಿರ್ಲಕ್ಷ್ಯ ಕಾರಣ. ಆರೋಗ್ಯ ಸಚಿವರು ಮತ್ತು ಅಧಿಕಾರಿಗಳ ಬೇಜವಾಬ್ದಾರಿಯಿಂದ ಈ ಸಾವು ಸಂಭವಿಸಿವೆ ಎಂದು ಬಿಜೆಪಿ ನಗರ ಉಪಾಧ್ಯಕ್ಷೆ ಹೇಮಾ ನಂದೀಶ್ ಆರೋಪಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಕಾಂಗ್ರೆಸ್ ಸರ್ಕಾರ, ಹೆಚ್ಚಿನ ಕಮಿಷನ್ ಆಸೆಗಾಗಿ ಕಪ್ಪು ಪಟ್ಟಿಯಲ್ಲಿರುವ ಕಂಪನಿಗಳಿಂದ ಔಷಧ ಖರೀದಿಸಿ ಸರ್ಕಾರಿ ಆಸ್ಪತ್ರೆಗಳಿಗೆ ಸರಬರಾಜು ಮಾಡುವ ಮೂಲಕ ಬಾಣಂತಿಯರು, ಹಸುಗೂಸುಗಳು ಹಾಗೂ ಬಡಜನರ ಜೀವದ ಜೊತೆ ಚೆಲ್ಲಾಟವಾಡುತ್ತಿದೆ. ಸಂತ್ರಸ್ತ ಕುಟುಂಬಗಳಿಗೆ ಪರಿಹಾರ ನೀಡಬೇಕು. ಔಷಧ ಖರೀದಿ ಸಂಬಂಧ ತನಿಖೆಯಾಗಬೇಕು. ಪ್ರಕರಣಗಳಲ್ಲಿ ಭಾಗಿಯಾದ ಅಧಿಕಾರಿಗಳನ್ನು ಅಮಾನತು ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಕೆರೆ ಹೂಳೆತ್ತುವ ಕಾಮಗಾರಿಗೆ ಚಾಲನೆ



ಚಾಮುಂಡಿಬೆಟ್ಟ ಗ್ರಾಮಕ್ಕೆ ಸೇರಿದ್ದು, ಬಂಡಿಪಾಳ್ಯ ಬಳಿ ಬೆಟ್ಟಕ್ಕೆ ಹೊಂದಿಕೊಂಡಿರುವ ಸುಮಾರು 12 ಎಕರೆ ವಿಸ್ತೀರ್ಣದ ಬೃಹತ್ ಕೆರೆಯನ್ನು ಖಾಸಗಿ ಸಂಸ್ಥೆ ಹಾಗೂ ಗ್ರಾಪಂ ಸಹ ಯೋಗದೊಂದಿಗೆ ಹೂಳೆತ್ತಿ, ಪುನಶ್ಚೇತನಗೊಳಿಸುವ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಲಾಯಿತು.

ಏಕಲವ್ಯನಗರ ನಿವಾಸಿಗಳ ಕುಂದುಕೊರತೆ ಆಲಿಸಿದ ವಿವಿಧ ಇಲಾಖೆ ಅಧಿಕಾರಿಗಳು, ಜನಪ್ರತಿನಿಧಿಗಳು

ಮೈಸೂರು, ಡಿ.9(ಜಿಎ)–ಮೈಸೂರಿನ ಏಕಲವ್ಯ ನಗರದಲ್ಲಿ ಮೇಟಗಳ್ಳಿ ಠಾಣೆ ವತಿಯಿಂದ ಸೋಮವಾರ ಜನಸಂಪರ್ಕ ಸಭೆ ನಡೆಸಲಾಯಿತು.

ವಿಜಯನಗರ ಉಪವಿಭಾಗದ ಎಸಿಪಿ ಗಜೇಂದ್ರಪ್ರಸಾದ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಮೇಟಗಳ್ಳಿ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಆರ್.ದಿವಾಕರ್, ನಾಗನಹಳ್ಳಿ ಗ್ರಾಮ ಪಂಚಾಯಿತಿ ಪಿಡಿಒ ಭವ್ಯ, ಸ್ಲಂ ಬೋರ್ಡ್ ಇಂಜಿನಿಯರ್ ರಾಯ್, ನಾಗನಹಳ್ಳಿ ಗ್ರಾಮ ಪಂಚಾಯತಿ ಸದಸ್ಯರಾದ ನಾರಾಯಣ್, ರೇವಣ್ಣ, ರಾಮಸ್ವಾಮಿ, ಭಾಗ್ಯಮ್ಮ, ಡಿಎಸ್‌ಎಸ್ ಮುಖಂಡ ನಿಂಗರಾಜ ಮಲ್ಲಾಡಿ ಉಪಸ್ಥಿತರಿದ್ದರು.



ಮೈಸೂರಿನ ಏಕಲವ್ಯನಗರದಲ್ಲಿ ಮೇಟಗಳ್ಳಿ ಠಾಣೆ ವತಿಯಿಂದ ಸೋಮವಾರ ಜನಸಂಪರ್ಕ ಸಭೆ ನಡೆಸಲಾಯಿತು.

ಸಭೆಯಲ್ಲಿ ನಿವಾಸಿಗಳು ಮಾತನಾಡಿ, ಏಕಲವ್ಯನಗರದಲ್ಲಿ ಸುತ್ತ ಕಾಂಪೌಂಡ್ ಇದ್ದು, ಎರಡು ಗೇಟ್‌ಗಳಿವೆ. ಇವುಗಳಿಗೆ ಸಿಸಿ ಕ್ಯಾಮರಾ ಅಳವಡಿಸಬೇಕು, ನಿವಾಸಿಗಳಿಗೆ ಬಸ್ ವ್ಯವಸ್ಥೆ ಕಲ್ಪಿಸಿ ಕೊಡಬೇಕು. ಕೆಲವರು ಮನೆಯಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆ. ಇವರ ಬಗ್ಗೆ ಕ್ರಮ ಕೈಗೊಳ್ಳಬೇಕು. ಕೆಲವು ಮನೆಗಳಿಗೆ ಅನಧಿಕೃತವಾಗಿ ಬೇರೆ ಕಡೆಯಿಂದ ಬಂದು ಜನರು ಸೇರಿಕೊಂಡಿದ್ದಾರೆ ಅವರನ್ನು ತೆರವುಗೊಳಿಸುವುದು ಹಾಗೂ ನೀರಿನ ಸಮಸ್ಯೆ ಸೇರಿದಂತೆ ಸಾಕಷ್ಟು ಸಮಸ್ಯೆಗಳನ್ನು ಬಗೆಹರಿಸುವಂತೆ ಮನವಿ ಮಾಡಿದರು.

ನಂತರ ಪಿಡಿಒ ಭವ್ಯ ಮಾತನಾಡಿ, ಮನೆಗಳ ಸುತ್ತಮುತ್ತ ನೀವೇ ಸ್ವಚ್ಛ ಮಾಡಿಕೊಳ್ಳಬೇಕು. ರಸ್ತೆ ಮತ್ತು ಒಳ ಚರಂಡಿಯನ್ನು ನಾವು ಸ್ವಚ್ಛ ಮಾಡುತ್ತೇವೆ. ಸ್ಲಂ ಬೋರ್ಡ್‌ನವರು ಮನೆಗಳನ್ನು ಹಂಚಿಕೆ ಮಾಡಿದ ನಂತರ ಪಂಚಾಯಿತಿ ವಶಕ್ಕೆ ಪಡೆಯುತ್ತೇವೆ ಎಂದು ತಿಳಿಸಿದರು.

ವಿಜಯನಗರ ಉಪವಿಭಾಗದ ಎಸಿಪಿ ಗಜೇಂದ್ರ ಪ್ರಸಾದ್ ಮಾತನಾಡಿ, ಸರ್ಕಾರದಿಂದ ಮನೆಗಳನ್ನು ಹಂಚಿಕೆ ಮಾಡಿದ್ದಾರೆ. ಮನೆಗಳ ಸುತ್ತಮುತ್ತ ಸ್ವಚ್ಛತೆಯನ್ನು ಮನೆಯವರೇ ಮಾಡಿಕೊಳ್ಳಬೇಕು. ಅಕ್ರಮ ಮದ್ಯ ಮಾರಾಟದ ಬಗ್ಗೆ ಕ್ರಮ ಕೈಗೊಳ್ಳಲಾಗುವುದು. ಸಭೆಯಲ್ಲಿ ಪ್ರಸ್ತಾಪಿಸಿರುವ ಸಮಸ್ಯೆಗಳ ಬಗ್ಗೆ ಬೇರೆ ಬೇರೆ ಇಲಾಖೆಗಳಿಗೆ ತಿಳಿಸಿ ಬಗೆಹರಿಸಿ ಕೊಡುತ್ತೇವೆ. ತಮ್ಮ ಮಕ್ಕಳಿಗೆ ಒಳ್ಳೆಯ ವಿದ್ಯಾಭ್ಯಾಸ ಕೊಡಿಸಿ ಎಂದು ಸಲಹೆ ನೀಡಿದರು.

ಮೇಟಗಳ್ಳಿ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಆರ್.ದಿವಾಕರ್ ಮಾತನಾಡಿ, ಸಾರ್ವಜನಿಕರು ಪೊಲೀಸರಿಗೆ ಸಹಕಾರ ನೀಡಬೇಕು. ಅಕ್ರಮ ಮದ್ಯ ಮಾರಾಟ ಮಾಡುವವರನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದು ತಿಳಿಸಿದರು.

ಜಾನಪದ ನೃತ್ಯ, ಭಗವದ್ಗೀತೆ ಕಂಠಪಾಠ ಸ್ಪರ್ಧೆ

ಮೈಸೂರು, ಡಿ. 9– ಮೈಸೂರು ಜಿಲ್ಲಾ ಬ್ರಾಹ್ಮಣ ಸಂಘದ ಮಹಿಳಾ ಘಟಕವು ವಿಪ್ರ ಮಹಿಳೆಯರು ಹಾಗೂ ಮಕ್ಕಳಿಗಾಗಿ ಸ್ಪರ್ಧೆಗಳನ್ನು ಆಯೋಜಿಸಿದೆ. ಭಾರತದ ಜಾನಪದ ನೃತ್ಯ: ವಯಸ್ಸು 18ರಿಂದ 40 ವರುಷ, 2ನೇ ವಿಭಾಗ 40 ವರುಷ ಮೇಲ್ಪಟ್ಟವರು. ಒಂದು ಗುಂಪಿನಲ್ಲಿ 8ರಿಂದ 12 ಜನ ಇರಬಹುದು.

ಭಗವದ್ಗೀತೆ ಕಂಠಪಾಠ ಸ್ಪರ್ಧೆ: 8ರಿಂದ 12 ವರ್ಷಗಳು, ಅಧ್ಯಾಯ 12 ಅಥವಾ 13, ಎರಡನೇ ವಿಭಾಗ: 13ರಿಂದ 17 ವರ್ಷಗಳು. ಅಧ್ಯಾಯ 6 ಅಥವಾ 7. ಸ್ಪರ್ಧೆಯು ಡಿ.14 ರಂದು ಬೆಳಗ್ಗೆ 9 ಗಂಟೆಗೆ ಶ್ರೀರಾಮಪುರ 2ನೇ ಹಂತ, ದೇವಯ್ಯನ ಹುಂಡಿ ಮುಖ್ಯ ರಸ್ತೆ, ಹುಣಸೇಮರ ಬಸ್ ಸ್ಟಾಪ್ ಬಳಿ ಇರುವ ಸಂಧ್ಯಾ ಸುರಕ್ಷಾ ಟ್ರಸ್ಟ್ ಸಭಾಂಗಣದಲ್ಲಿ ನಡೆಯಲಿದೆ. ಹೆಸರನ್ನು ನೋಂದಾಯಿಸಲು, ವಿವರಗಳಿಗಾಗಿ ಜೆ. ವಿಜಯಲಕ್ಷ್ಮಿ, ಮೊ. 95918–46370, ಚಂಚಲಾಕ್ಷಿ, ಮೊ. 97412–11652, ಪಾರಿಜಾತ ಉಷಾ, ಮೊ. 99453 85610 ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

10.12.2024 ಮಂಗಳವಾರ, ಮಳೆ ನಕ್ಷತ್ರ: ಜ್ಯೇಷ್ಠ, 02.12.2024 ರಿಂದ 15.12.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಮಾರ್ಗಶಿರ ಮಾಸ, ಶುಕ್ಲ ಪಕ್ಷ, ತಿಥಿ: ದಶಮಿ, ನಕ್ಷತ್ರ: ಉಭಾ, ರಾಹುಕಾಲ: ಮಧ್ಯಾಹ್ನ 3 ರಿಂದ 4.30 ರವರೆಗೆ

■ **ಯುವಜನ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯ, ಮೈಸೂರು ಜಿಲ್ಲಾ ನೆಹರು ಯುವ ಕೇಂದ್ರ, ಭಾರತ ಸರ್ಕಾರದ ಗೃಹ ಮಂತ್ರಾಲಯ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ :** ಕಾಶ್ಮೀರಿ ಯುವ ವಿನಿಮಯ ಕಾರ್ಯಕ್ರಮ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಉಪಸ್ಥಿತರು : ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ. ವೆಂಕಟೇಶ್, ಶಾಸಕರಾದ ಎ.ಬಿ. ರಮೇಶ್ ಬಂಡಿಸಿದ್ದೇಗೌಡ, ಸಿ. ಅನಿಲ್‌ಕುಮಾರ್, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷೆ ಡಾ. ಪುಷ್ಪಾ ಅಮರನಾಥ್, ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ, ಅಧ್ಯಕ್ಷತೆ : ಶಾಸಕ ಕೆ. ಹರೀಶ್‌ಗೌಡ, ಮುಖ್ಯ ಅತಿಥಿಗಳು : ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸುನೀಲ್ ಬೋಸ್, ಅತಿಥಿಗಳು : ಶಾಸಕರಾದ ತನ್ವೀರ್ ಸೇಠ್, ಜಿ.ಟಿ. ದೇವೇಗೌಡ, ಹೆಚ್. ವಿಶ್ವನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಡಿ. ರವಿಶಂಕರ್, ಜಿ.ಡಿ. ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ, ಟಿ.ಎಸ್. ಶ್ರೀವತ್ಸ ಡಾ.ಎಸ್. ಯತೀಂದ್ರ, ಕೆ. ವಿವೇಕಾನಂದ, ಸ್ಥಳ: ಕಾವೇರಿ ಸಭಾಂಗಣ, ಕರಾಮುವಿವಿ, ಮುಕ್ತ ಗಂಗೋತ್ರಿ, ಬೆಳಗ್ಗೆ 11ಕ್ಕೆ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಮಧುಮೇಹ ಕಾಯಿಲೆಗೆ ಚಿಕಿತ್ಸಾ ಶಿಬಿರ, ಕುತ್ತಿಗೆ ಹಾಗೂ ಬೆನ್ನು ನೋವಿಗೆ ಅಕ್ಯೂಪಂಕ್ಚರ್ ಮತ್ತು ಯೋಗ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆ 9ರಿಂದ ಸಂಜೆ 4.30ರವರೆಗೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಮಾತೃಮಂಡಲಿ ಬಾಲಕಿಯರ ಪದವಿಪೂರ್ವ ಕಾಲೇಜು :** ವಚನ ಸಾಹಿತ್ಯ–ರಸಪ್ರಶ್ನೆ ಹಾಗೂ ಉಪನ್ಯಾಸ, ಉದ್ಘಾಟನೆ : ಮಾತೃ ಮಂಡಲಿ ವಿದ್ಯಾಸಂಸ್ಥೆ ಅಧ್ಯಕ್ಷೆ ಶ್ರೀಮತಿ ವಿಜಯಲಕ್ಷ್ಮೀ ಅರಸ್, ಪ್ರಾಧ್ಯಾಪಕ ಪ್ರೊ. ಜಿ. ಚಂದ್ರಶೇಖರ ಅವರಿಂದ ಬಸವಣ್ಣ ಮತ್ತು ಕಬೀರ್‌ದಾಸ್‌ರ ತೌಲನಿಕ ಚಿಂತನೆ ಕುರಿತು ಉಪನ್ಯಾಸ, ಬಹುಮಾನ ವಿತರಣೆ : ಶ್ರೀಮತಿ ವಾಣಿ ಪ್ರಸಾದ್, ಶ್ರೀಮತಿ ಹೇಮಾ ಬಾಲಚಂದ್ರನ್, ಮುಖ್ಯ ಅತಿಥಿಗಳು : ಕಾಲೇಜು ಪ್ರಿನ್ಸಿಪಾಲ್ ವಿಶ್ವನಾಥ ಶೆಟ್ಟಿ, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಮ.ಗು. ಸದಾನಂದಯ್ಯ, ಸ್ಥಳ: ಮಾತೃ ಮಂಡಲಿ ವಿದ್ಯಾಸಂಸ್ಥೆ ಸಭಾಂಗಣ, ವಿ.ವಿ. ಮೊಹಲ್ಲಾ, ಬೆಳಗ್ಗೆ 11ಕ್ಕೆ

■ **ಮೈಸೂರು ವಿಶ್ವವಿದ್ಯಾನಿಲಯ, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಸಾರ್ವಜನಿಕ ಆಡಳಿತ ಅಧ್ಯಯನ ವಿಭಾಗ ಮತ್ತು ಮಾನಸ–ಸಿಕ್ರಂ:** ನಮ್ಮ ಹಕ್ಕುಗಳು, ನಮ್ಮ ಭವಿಷ್ಯ ಈಗ ಕುರಿತು ಉಪನ್ಯಾಸ, ಸಂಪನ್ಮೂಲ ವ್ಯಕ್ತಿ: ಮಾನಸ–ಸಿಕ್ರಂ, ಬೆಂಗಳೂರು ಕಾರ್ಯಕಾರಿ ನಿರ್ದೇಶಕರಾದ ಶ್ರೀಮತಿ ಮಾರ್ಗರೇಟ್ ಸಂಪತ್, ಅಧ್ಯಕ್ಷತೆ : ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ.ಕೃಷ್ಣ ಹೊಂಬಳ್, ಉಪಸ್ಥಿತರು: ಮಾನಸ–ಸಿಕ್ರಂ–ಜಿಲ್ಲಾ ಸಂಪನ್ಮೂಲ ಕೇಂದ್ರದ ಸಂಯೋಜಕ ಡಾ.ಎಸ್.ಎಸ್.ದೇವರಾಜು, ಸ್ಥಳ: ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಬೆಳಗ್ಗೆ 11ಕ್ಕೆ.

■ **ಸ್ನೇಹ ಸಿಂಚನ ಟ್ರಸ್ಟ್:** ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅವರಿಗೆ ಅಭಿನಂದನಾ ಸಮಾರಂಭ, ಉದ್ಘಾಟನೆ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ಅಭಿನಂದಿಸುವವರು: ಹಿರಿಯ ಸಮಾಜ ಸೇವಕ ಡಾ.ಕೆ.ರಘುರಾಂ ವಾಜಪೇಯಿ, ಅಭಿನಂದನಾ ನುಡಿ: ಸಂಸ್ಕೃತಿ ಚಿಂತಕರಾದ ಡಾ.ಕೆ.ಲೀಲಾ ಪ್ರಕಾಶ್, ಅಧ್ಯಕ್ಷತೆ: ಜಿಲ್ಲಾ ಕಸಾಪ ಕಾರ್ಯದರ್ಶಿ ಶ್ರೀಮತಿ ಲತಾಮೋಹನ್, ಮುಖ್ಯ ಅತಿಥಿಗಳು: ಸಾಹಿತಿ ಶ್ರೀಮತಿ ಸುಮತಿ ಸುಬ್ರಹ್ಮಣ್ಯ, ಸ್ಥಳ: ನಮನ ಕಲಾ ಮಂಟಪ, ಕೃಷ್ಣಮೂರ್ತಿಪುರಂ, ಬೆಳಗ್ಗೆ 10.30ಕ್ಕೆ.

■ **ರಂಗಾಯಣ, ಸಕ್ಕರಿ ಬಾಲಾಚಾರ್ಯ 'ಶಾಂತಕವಿ' ಟ್ರಸ್ಟ್, ಧಾರವಾಡ :** ಆಧುನಿಕ ಕನ್ನಡ ರಂಗಭೂಮಿ ದಿನಾಚರಣೆ ಅಂಗವಾಗಿ ಶಾಂತಕವಿ ಸಕ್ಕರಿ ಬಾಳಾಚಾರ್ಯರ ಬದುಕು ಬರಹ ಕುರಿತು ವಿಚಾರ ಸಂಕಿರಣ, ವಿಷಯ ಮಂಡನೆ: ಹಿರಿಯ ರಂಗ ಕರ್ಮಿ ಪ್ರೊ.ಹೆಚ್.ಎಸ್.ಉಮೇಶ್, ನಾಟಕಗಳ ಕುರಿತು: ರಂಗ ಶಿಕ್ಷಕ ಉಮೇಶ್ ಸಾಲಿಯಾನ, ಉಪಸ್ಥಿತರು: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ರಂಗಾಯಣ ಉಪನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಅಧ್ಯಕ್ಷತೆ: ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಸ್ಥಳ: ಬಿ.ವಿ.ಕಾರಂತ ರಂಗಚಾವಡಿ, ರಂಗಾಯಣ, ಸಂಜೆ 4ಕ್ಕೆ.

■ **ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್, ತಿಲ್ಲಾನ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ:** ಶ್ರೀಮತಿ ಕೆ. ವನಜಾಕ್ಷಮ್ಮ ಸಂಸ್ಮರಣಾ 29ನೆಯ ನೃತ್ಯ ಆರಾಧನಾ–2024, ಸಂಜೆ 6 ಗಂಟೆಗೆ ನೃತ್ಯ ವಿದುಷಿ ಡಾ. ತುಳಸೀ ರಾಮಚಂದ್ರ ಅವರಿಗೆ ನೂಪುರಶ್ರೀ ಪ್ರಶಸ್ತಿ ಪ್ರದಾನ, ಉಪಸ್ಥಿತರು : ಜೆಎಸ್‌ಎಸ್ ಮಹಾವಿದ್ಯಾಪೀಠ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ, ಸಂಜೆ 7ಕ್ಕೆ ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್ ವಿದ್ಯಾರ್ಥಿನಿಯರಿಂದ ಸಮೂಹ ನೃತ್ಯ ಸಂಭ್ರಮ, ಪ್ರೊ. ಕೆ. ರಾಮಮೂರ್ತಿರಾವ್–ನಟುವಾಂಗ ಮತ್ತು ಹಾಡುಗಾರಿಕೆ, ಎಂ.ಆರ್. ಹನುಮಂತರಾಜು–ಮೃದಂಗ, ಎಚ್.ಎಸ್. ತಾಂಡವಮೂರ್ತಿ–ವಯೋಲಿನ್, ಸ್ಥಳ: ಗಾನಭಾರತಿ ರಮಾಗೋವಿಂದ ಕಲಾವೇದಿಕೆ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಬೆಳವಾಡಿ ಅಶ್ವಥನಾರಾಯಣ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್.ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ : ಶಭಾನ ಮತ್ತು ಕೀರ್ತಿ.ಎಸ್. ಬೈಂದೂರು, ಪರಿಕಲ್ಪನೆ: ಅಬ್ದುಲ್ ರಶೀದ್, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಎಂ.ಆರ್. ಶ್ರೀನಿವಾಸಮೂರ್ತಿಯವರ 'ರಂಗಣ್ಣನ ಕನಸಿನ ದಿನಗಳು' ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ: ಉಮೇಶ್. ಎಸ್.ಎಸ್., 8.30 ಬಾನುಲಿ ಇಂಗ್ಲೀಷ್ ಪಾಠ –ರೇಡಿಯೋ ಸರಣಿ, ಪ್ರಸ್ತುತಿ: ಸದಾನಂದ. ಆರ್., 8.40 ಕರೆಗೊಂದು ಗೀತೆ–ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಮಧುರೈ ಎಂ.ಪಿ.ಎನ್. ಸೇತುರಾಮನ್ ಮತ್ತು ಎಂ.ಪಿ.ಎನ್ ಪೊನ್ನುಸ್ವಾಮಿ–ಯುಗಳ ನಾಗಸ್ವರ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಥೆಯಲ್ಲಿದೆ ಉತ್ತರ, ಪ್ರಸ್ತುತಿ: ಪ್ರಭುಸ್ವಾಮಿ ಮಳಿಮಠ್, ಚೈತ್ರಿಕಾ. ಎಸ್ ಹಾಗೂ ಕಾರ್ತಿಕ್. ಎಂ. ಎಸ್.

ಮಧ್ಯಾಹ್ನ: 12.05 ವನಿತಾ ವಿಹಾರ 'ಹೀಗಿದೆ ನೋಡಿ ನಮ್ ಜೋಡಿ' ಭಾಗವಹಿಸುತ್ತಾರೆ: ವೈದ್ಯ ದಂಪತಿಗಳಾದ ರಮಾ ಹಾಗೂ ನಾಗೇಂದ್ರ ಪ್ರಸಾದ್, ಪ್ರಸ್ತುತಿ: ಅಬ್ದುಲ್ ರಶೀದ್, 12.35 ದೇವರ ನಾಮ–ಅಂಜನಾ. ಡಿ.ಕುಂಬ್ಳೆ, 12.45 ಜಾತ್ರಾ ವಿಶೇಷ–ಮೈಸೂರು ಜಿಲ್ಲೆ ನಂಜನಗೂಡು ಜಾತ್ರೆಯನ್ನು ಪರಿಚಯಿಸುತ್ತಾರೆ. ಜಾನಪದ ವಿದ್ವಾಂಸ ಡಾ.ಕೃಷ್ಣಮೂರ್ತಿ ಹನೂರು ಹಾಗೂ ನೀಲಗಾರ ಗಾಯಕ ಡಾ.ಮೈಸೂರು ಜಿ.ಗುರುರಾಜ್, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20–ಬಾನುಲಿ ಇಂಗ್ಲೀಷ್ ಪಾಠ–ರೇಡಿಯೋ ಸರಣಿ, ಪ್ರಸ್ತುತಿ : ಸದಾನಂದ. ಆರ್., 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಆರ್.ಕೆ.ಪದ್ಮನಾಭ–ವೀಣಾವಾದನ, 4.00 ಕಥಾ ಕಾಲಕ್ಷೇಪ–ಭಕ್ತ ಕುಂಬಾರ, ಪ್ರಸ್ತುತಿ: ವಿದ್ವಾನ್. ಆರ್.ಗುರುರಾಜುಲು ನಾಯ್ಡು, 6.50 ಕೃಷಿರಂಗ: ಕಿಸಾನ್ ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ, ರೇಷ್ಮೆ ಐಸಿರಿ–ರೇಷ್ಮೆ ಕೃಷಿ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಉತ್ತಮ ಗುಣಮಟ್ಟದ ರೇಷ್ಮೆ ಪಡೆಯಲು ರೀಲಿಂಗ್‌ನ ಹೊಸ ತಂತ್ರಜ್ಞಾನಗಳು. ಈ ಕುರಿತು ಮೈಸೂರಿನ ಕೇಂದ್ರ ರೇಷ್ಮೆ ಸಂಶೋಧನೆ ಹಾಗೂ ತರಬೇತಿ ಸಂಸ್ಥೆಯ ವಿಜ್ಞಾನಿ ಡಾ.ಎಂ.ಎನ್.ಚಂದ್ರಶೇಖರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್.ಕೇಶವಮೂರ್ತಿ, 7.45 'ಮೈಸೂರು ಜಂಕ್ಷನ್' ಸಾಪ್ತಾಹಿಕ ಸಂಚಿಕೆ, ಪ್ರಸ್ತುತಿ: ಜಾಂಪಣ್ಣ ಆಶೀಹಾಳ್, 8.00 ಸಂಸತ್ ಸಮೀಕ್ಷಾ, 8.15 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಸುಲ್ತಾನ್ ಖಾನ್–ಸಾರಂಗಿ ವಾದನ, 9.30–ಕರ್ನಾಟಕ ಶಾಸ್ತ್ರೀಯ ಸಂಗೀತ: ಡಾ.ಎಂ. ಬಾಲಮುರಳಿಕೃಷ್ಣ–ಹಾಡುಗಾರಿಕೆ, 10.00 ಸಂಸತ್ತಿನ ಪ್ರಶ್ನೋತ್ತರ ಅವಧಿಯ ಕಲಾಪಗಳ ಧ್ವನಿಮುದ್ರಣ


ಸೀಟ್ ಬೆಲ್ಟ್ ಧರಿಸಿಯೂ ನೋಟಿಸ್ ಪಡೆದ ಕಾರು ಚಾಲಕನ ಪರಿತಾಪ!

ಸಂಚಾರಿ ಪೊಲೀಸರ ಕ್ಯಾಮರಾ ನಿರ್ವಹಣೆಗೆ ಒಂದು ಸಾಕ್ಷ್ಯ ದರ್ಶನ

ಮೈಸೂರು, ಡಿ. 9– ಮೈಸೂರು ನಗರ ಸಂಚಾರ ಪೊಲೀಸರು ಸುಗಮ ಹಾಗೂ ವ್ಯವಸ್ಥಿತ ಸಂಚಾರ ವ್ಯವಸ್ಥೆಗಾಗಿ ಕೈಗೊಂಡಿರುವ ಕ್ರಮಗಳು ಹಲವು ವೇಳೆ ಸಾರ್ವಜನಿಕರಿಗೆ ಗೊಂದಲ ಉಂಟುಮಾಡುವುದರ ಜೊತೆಗೆ ಉಪದ್ರವ ತಂದೊಡ್ಡುತ್ತಿವೆ.

ಅಪಘಾತಗಳನ್ನು ತಡೆಗಟ್ಟಲು ಸಂಚಾರ ನಿಯಮ ಪಾಲಿಸುವುದು ಅವಶ್ಯ. ಇಂತಹ ಸಂಚಾರ ನಿಯಮ ಉಲ್ಲಂಘನೆಯನ್ನು ನಿಯಂತ್ರಿಸಿ, ಅಪಘಾತಗಳ ನಿಯಂತ್ರಿಸುವ ನಿಟ್ಟಿನಲ್ಲಿ ನಗರದ ಪ್ರಮುಖ ರಸ್ತೆ ಹಾಗೂ ವೃತ್ತಗಳಲ್ಲಿ ಅತ್ಯಾಧುನಿಕ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಅವುಗಳನ್ನು ಇಂಟೆಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಂನಡಿ (ಐಟಿಎಂಎಸ್) ನಿರ್ವಹಣೆ ಮಾಡಲಾಗುತ್ತಿದೆ ಎಂದು ಹೇಳುವುದುಂಟು.

ಆದರೆ, ಅತ್ಯಾಧುನಿಕ ಕ್ಯಾಮರಾಗಳು ಸೆರೆ ಹಿಡಿದ ದೃಶ್ಯವನ್ನು ಪರಿಶೀಲಿಸಿ, ಸಂಚಾರ ನಿಯಮ ಉಲ್ಲಂಘಿಸಿದ ವಾಹನ ಸವಾರರಿಗೆ ನೋಟಿಸ್ ರವಾನಿಸುವ ಹೊಣೆ ಹೊತ್ತ ಸಿಬ್ಬಂದಿ ಅಚಾತುರ್ಯ ಅಥವಾ ಲೋಪದಿಂದಾಗಿ ಹಲವು ವೇಳೆ ವಾಹನ ಚಾಲಕರು ಸಮಸ್ಯೆಗೆ ಗುರಿಯಾಗಬೇಕಾಗಿ ಬಂದಿದೆ.



ಸಾಂದರ್ಭಿಕ ಚಿತ್ರ

ಉದಾಹರಣೆಗೆ ಇತ್ತೀಚೆಗೆ ಅತ್ಯಾಧುನಿಕ ಕಾರಿನ ಚಾಲಕರೊಬ್ಬರು ಸೀಟ್ ಬೆಲ್ಟ್ ಧರಿಸಿಯೇ ಕಾರನ್ನು ಚಾಲನೆ ಮಾಡಿದ್ದಾರೆ. ಈ ದೃಶ್ಯವು ವಿವಿ ಪುರಂನ ಮಾತೃಮಂಡಳಿ ವೃತ್ತದಲ್ಲಿರುವ ಕ್ಯಾಮರಾದಲ್ಲಿ ಸೆರೆಯಾಗಿದೆ. ಆದರೆ, ಎರಡೇ ದಿನದಲ್ಲಿ ಆ ಚಾಲಕರ ವಿಳಾಸಕ್ಕೆ ಸಂಚಾರ ವಿಭಾಗದ ಪೊಲೀಸರಿಂದ ನೋಟಿಸ್ ರವಾನಿಸಲ್ಪಟ್ಟಿದೆ. ಅದರಲ್ಲಿ 'ಮಾತೃಮಂಡಳಿ ವೃತ್ತದಲ್ಲಿ ಸೀಟ್ ಬೆಲ್ಟ್ ಧರಿಸದೆ ಕಾರು ಚಾಲನೆ ಮಾಡಿದ ಕಾರಣಕ್ಕೆ 500 ರೂ. ದಂಡ ವಿಧಿಸಲಾಗಿದೆ. ಕೂಡಲೇ ದಂಡ ಪಾವತಿಸಿ ಕಾನೂನು ಕ್ರಮದಿಂದ ಪಾರಾಗಿ' ಎಂದು ಎಚ್ಚರಿಸಲಾಗಿದೆ. ಹೀಗೆ ಪ್ರತ್ಯೇಕ ಸ್ಥಳ ಮತ್ತು ದಿನಾಂಕಗಳಲ್ಲಿ ಸೀಟ್‌ಬೆಲ್ಟ್ ಧರಿಸದೇ ಕಾರು ಚಾಲನೆ ಮಾಡಿ ಸಂಚಾರ ನಿಯಮ ಉಲ್ಲಂಘಿಸಿರುವುದಾಗಿ ಇವರಿಗೆ ಒಟ್ಟು 3 ನೋಟಿಸ್‌ಗಳನ್ನು ಜಾರಿ ಮಾಡಲಾಗಿದೆ.

ನೋಟಿಸ್ ನೋಡಿ ಅಚ್ಚರಿಗೊಂಡ ಚಾಲಕ ತನಗೆ ಬಂದ ನೋಟಿಸ್ ಹಿಡಿದು ಸಂಬಂಧಪಟ್ಟ ವ್ಯಾಪ್ತಿಯ ಸಂಚಾರ ಠಾಣೆಗೆ ಭೇಟಿ ನೀಡಿದಾಗ, ಈ ವಿಚಾರವಾಗಿ ಪೊಲೀಸ್ ಆಯುಕ್ತರ ಕಚೇರಿಯಲ್ಲಿರುವ ನಿರ್ವಹಣಾ ವಿಭಾಗವನ್ನು ಸಂಪರ್ಕಿಸುವಂತೆ ತಿಳಿಹೇಳಲಾಗಿದೆ. ಕೊನೆಗೆ ಅಲ್ಲಿಗೆ ಹೋಗಿ ವಿಚಾರಿಸಲಾಗಿ, ಅಲ್ಲಿ ಅವರಿಗೆ ಅತ್ಯಾಧುನಿಕ ಕ್ಯಾಮರಾ ಸೆರೆ ಹಿಡಿದಿರುವ ದೃಶ್ಯವಿರುವ ಫೋಟೋವನ್ನು ತೋರಿಸಲಾಗಿದೆ ಅರೆ, ಅದರಲ್ಲಿ ಅವರು ಸೀಟ್ ಬೆಲ್ಟ್ ಧರಿಸಿರುವುದು ಸ್ಪಷ್ಟವಾಗಿ ಗೋಚರಿಸಿದೆ. ಅದನ್ನು ನಿರ್ವಹಣಾ ಸಿಬ್ಬಂದಿಗೆ ತೋರಿಸಿದಾಗ, 'ಹೋ..... ಅದು ತಪ್ಪಾಗಿದೆ, ಸರಿಪಡಿಸೋಣ' ಎಂಬ ಉತ್ತರ ಬಂದಿದೆ.

ಸಾಮಾನ್ಯವಾಗಿ ಇತ್ತೀಚಿನ ಐಷಾರಾಮಿ ಕಾರು ಇನ್ನಿತರ ವಾಹನಗಳಲ್ಲಿ ಸೀಟಿನ ಬಣ್ಣಕ್ಕೆ ಹೊಂದಿಕೆಯಾಗುವಂತಹ ಸೀಟ್ ಬೆಲ್ಟ್‌ಗಳನ್ನು ಅಳವಡಿಸಲಾಗಿರುತ್ತದೆ. ಕೆಲವು ಅತ್ಯಾಧುನಿಕ ಕಾರುಗಳಲ್ಲಿ ಚಾಲಕರು ಸೀಟ್ ಬೆಲ್ಟ್ ಧರಿಸದಿದ್ದರೆ ಅವು ಸ್ಟಾರ್ಟ್ ಆಗುವುದೇ ಇಲ್ಲ. ಆದರೆ, ಸಂಚಾರ ನಿರ್ವಹಣೆಯಲ್ಲಿ ತೊಡಗಿರುವ ಪೊಲೀಸರು ಇದರ ಬಗ್ಗೆ ತಿಳುವಳಿಕೆ ಹೊಂದಿಲ್ಲ ಎಂಬ ಸಂಶಯ ಉಂಟಾಗುತ್ತಿದೆ. ಈ ಪೊಲೀಸರ ಕಣ್ಣಲ್ಲಿ ಇನ್ನು ಸಾಮಾನ್ಯ ಕಪ್ಪುಬಣ್ಣದ ಸೀಟ್ ಬೆಲ್ಟ್ ಕಟ್ಟಿದಂತಿದೆ. ಬೇರೆ ಬಣ್ಣದಲ್ಲಿದ್ದ ಸೀಟ್ ಬೆಲ್ಟ್ ಗುರುತಿಸುವ ಗೋಜಿಗೆ ಹೋಗುವುದಿಲ್ಲ ಎಂಬುದು ಇದರಿಂದ ಮನವರಿಕೆ ಆಗುತ್ತದೆ. ಹೀಗಾಗಿ ಇಂತಹ ಪ್ರಮಾದಗಳು ನಡೆಯಲು ಕಾರಣವಾಗುತ್ತಿದೆ.

ಸಂಚಾರ ನಿರ್ವಹಣೆ ಜವಾಬ್ದಾರಿ ಹೊತ್ತಿರುವ ಸಿಬ್ಬಂದಿಯಂತೂ 'ಕ್ಯಾಮರಾ ಸೆರೆ ಹಿಡಿದಿದ್ದರೆ ಸಾಕು ನೋಟಿಸ್ ಕಳುಹಿಸು' ಎಂಬಂತೆ ವರ್ತಿಸುತ್ತಿದ್ದಾರೆ ಎನ್ನಿಸುತ್ತದೆ. ಹೀಗಾಗಿ ಹಿರಿಯ ಅಧಿಕಾರಿಗಳು ತಮ್ಮ ಸಿಬ್ಬಂದಿಗೆ ಅತ್ಯಾಧುನಿಕ ಹಾಗೂ ಇತರ ವಾಹನಗಳ ಬಗ್ಗೆ ತಿಳುವಳಿಕೆ ಪಾಠ ಮಾಡುವ ಮೂಲಕ ಎಚ್ಚರಿಕಾ ಕ್ರಮಗಳನ್ನು ಕೈಗೊಳ್ಳದಿದ್ದಲ್ಲಿ ಅಮಾಯಕರು ಅನಗತ್ಯವಾಗಿ ತೊಂದರೆಗೀಡಾಗುವುದರ ಜೊತೆಗೆ ಪೊಲೀಸರಿಗೆ ಹಿಡಿಶಾಪ ಹಾಕುವ ಪರಿಸ್ಥಿತಿ ಪದೇ ಪದೆ ಉದ್ಭವಿಸುತ್ತಲೇ ಇರುತ್ತದೆ.

ಅನುದಾನ ಕೊಟ್ಟವರ ಕಡೆ ನಾನು: ಕಾಂಗ್ರೆಸ್ ಪರ ಎಸ್‌ಟಿಎಸ್ ಬ್ಯಾಟಿಂಗ್



ಬೆಳಗಾವಿ: ನಮಗೆ ಅನುದಾನ ಕೊಟ್ಟವರ ಕಡೆ ನಾನು ಇರುತ್ತೇನೆ. ನನ್ನ ಮನಸ್ಸು ಕಾಂಗ್ರೆಸ್ ಕಡೆ ಇದೆ ಎಂದು ಬೆಂಗಳೂರಿನ ಯಶವಂತಪುರದ ಬಿಜೆಪಿ ಶಾಸಕ ಎಸ್.ಟಿ. ಸೋಮಶೇಖರ್ ಹೇಳಿದ್ದಾರೆ.

ಪಕ್ಷ ವಿರೋಧಿ ಚಟುವಟಿಕೆ ಮಾಡಿದ ಹಿನ್ನೆಲೆಯಲ್ಲಿ ಬಿಜೆಪಿ ಶೀಘ್ರವೇ ಶಿಸ್ತು ಕ್ರಮ ಕೈಗೊಳ್ಳುತ್ತದೆ ಎಂಬ ಸುದ್ದಿಗೆ ಪ್ರತಿಕ್ರಿಯಿಸಿದ ಅವರು, ನಾವು ಯಾವ್ರದೇ ಪಕ್ಷವಿರೋಧಿ ಚಟುವಟಿಕೆ ಮಾಡಿಲ್ಲ. ಅಧ್ಯಕ್ಷರ ಜೊತೆ ನಾನು ಮಾತನಾಡಿದ್ದೇನೆ. ಯಾರ‍್ಯಾರು ಏನೇನು ಮಾತನಾಡಿದ್ದಾರೆ ಎಲ್ಲರಿಗೂ ಗೊತ್ತಿದೆ. ಅವರ ಮೇಲು ಕ್ರಮ ಆಗಬೇಕು ಎಂದು ಹೇಳಿದರು.

ಈಗ ಕಾಂಗ್ರೆಸ್ ಸರ್ಕಾರದ ಅನುದಾನ ಕೊಡುತ್ತಿದೆ. ಬಿಜೆಪಿ ಶಾಸಕಾಂಗ ಸಭೆಗೆ ನನಗೆ ಇಲ್ಲಿಯವರೆಗೆ ಕರೆ ಬಂದಿಲ್ಲ, ಕರೆ ಬಂದರೆ ಹೋಗುತ್ತೇನೆ ಎಂದರು.

ಕಳೆದ ಬಾರಿ ಕಾಂಗ್ರೆಸ್ ಶಾಸಕಾಂಗ ಸಭೆಗೆ ನಾನು ಹೋಗಿರಲಿಲ್ಲ. ಕಾಂಗ್ರೆಸ್‌ನವರು ಕರೆದ ಭೋಜನ ಕೂಟಕ್ಕೆ ಹೋಗಿದ್ದೆ ಅಷ್ಟೇ. ಈ ಬಾರಿಯೂ ಯಾರು ಊಟಕ್ಕೆ ಕರೆಯುತ್ತಾರೋ ಅಲ್ಲಿಗೆ ಹೋಗುತ್ತೇನೆ. ಅವರು ಕರೆದರೂ ಹೋಗುತ್ತೇನೆ ಇವರು ಊಟಕ್ಕೆ ಕರೆದರೂ ಹೋಗುತ್ತೇನೆ ಎಂದು ಪ್ರತಿಕ್ರಿಯಿಸಿದರು.

ಡಿ. 26, 27 'ಗಾಂಧಿ ಭಾರ' ಕಾರ್ಯಕ್ರಮ

ಬೆಳಗಾವಿ ಜಿಲ್ಲೆಯಲ್ಲಿ ಹಬ್ಬದ ವಾತಾವರಣ



ಬೆಳಗಾವಿ, ಸುವರ್ಣ ವಿಧಾನಸೌಧ, ಡಿ.9(ಕೆಎಂಶಿ)–'ಗಾಂಧಿ ಭಾರತ' ಕಾರ್ಯಕ್ರಮ ಅಂಗವಾಗಿ ಡಿಸೆಂಬರ್ 26 ಹಾಗೂ 27ರಂದು ಬೆಳಗಾವಿ ಜಿಲ್ಲೆಯಾದ್ಯಂತ ಹಬ್ಬದ ವಾತಾವರಣ ಸೃಷ್ಟಿಯಾಗಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿ ಮಹಾತ್ಮಾ ಗಾಂಧಿ ಕಾಂಗ್ರೆಸ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬೆಳಗಾವಿ ಕಾಂಗ್ರೆಸ್ ಅಧಿವೇಶನಕ್ಕೆ ನೂರು ವರ್ಷಗಳಾದ ಸವಿನೆನಪಿಗಾಗಿ ಶತಮಾನೋತ್ಸವ ಸಂಭ್ರಮ ಆಚರಿಸಲಾಗುತ್ತಿದೆ ಎಂದರು.

ಸರ್ಕಾರ ಹಾಗೂ ಕಾಂಗ್ರೆಸ್‌ನಿಂದ 'ಗಾಂಧಿ ಭಾರತ' ಸಂಭ್ರಮವನ್ನು ವರ್ಷಪೂರ್ತಿ ಆಚರಿಸಲಾಗುವುದು, ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮದ ಲಾಂಛನ ಅನಾವರಣ ಮಾಡಿದ್ದಾರೆ, ನೂರು ವರ್ಷದ ಹಿಂದೆ ಮಹಾತ್ಮಾ ಗಾಂಧಿ ಅಲಂಕರಿಸಿದ ಸ್ಥಾನದಲ್ಲಿ ಈಗ ನಮ್ಮ ರಾಜ್ಯದ ಮಲ್ಲಿಕಾರ್ಜುನ ಖರ್ಗೆ ಆಸೀನರಾಗಿದ್ದಾರೆ.

ಕಾರ್ಯಕ್ರಮಕ್ಕೆ ರಾಷ್ಟ್ರ ನಾಯಕರು, ಕಾರ್ಯಕಾರಿ ಸಮಿತಿ ಸದಸ್ಯರು, ಸಂಸದರು ಆಗಮಿಸಲಿದ್ದು, ಕಾಂಗ್ರೆಸ್ ಕಾರ್ಯಕಾರಿಣಿ ಸಭೆ ಹಾಗೂ ಬೃಹತ್ ಸಾರ್ವಜನಿಕ ಸಭೆ ನಡೆಸುವುದಲ್ಲದೆ, ಗಾಂಧೀಜಿ ಸಂಚರಿಸಿದ್ದ ಸ್ಥಳಗಳಿಗೆ ಭೇಟಿ ನೀಡಲಾಗುವುದು.

ಸಭೆಗೆ ಮೂರ‍್ನಾಲ್ಕು ಜಾಗಗಳನ್ನು ಗುರುತಿಸಲಾಗಿದೆ, ನಾಳೆ ಅಥವಾ ನಾಡಿದ್ದು ಪಕ್ಷದ ರಾಷ್ಟ್ರೀಯ ನಾಯಕರು ಕಾರ್ಯಕ್ರಮ ಸ್ಥಳ ಪರಿಶೀಲನೆ ನಡೆಸಲಿದ್ದಾರೆ, ಹೆಚ್.ಕೆ ಪಾಟೀಲ್, ವೀರಪ್ಪ ಮೊಯ್ಲಿ, ಬಿ.ಎಲ್.ಶಂಕರ್ ಒಳಗೊಂಡ ಸಮಿತಿ ಕಾರ್ಯಕ್ರಮಗಳ ರೂಪುರೇಷೆ ಸಿದ್ಧಪಡಿಸಲಿದೆ. ಕಾರ್ಯಕ್ರಮದಲ್ಲಿ ಅಮೆರಿಕದ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಆಗಮಿಸುವ ಸಮಯ ಹಾಗೂ ಭದ್ರತೆ ಬಗ್ಗೆ ಚರ್ಚೆ ನಡೆಯುತ್ತಿದೆ ಎಂದರು.

ಮೀಸಲಾತಿ ಹೋರಾಟ ಹತ್ತಿಕ್ಕಲು ಯತ್ನ: ಪಂಚಮಸಾಲಿ ಶ್ರೀ ಆಕ್ರೋಶ



ಬೆಳಗಾವಿ: ಲಿಂಗಾಯತ ಪಂಚಮಸಾಲಿ ಮೀಸಲಾತಿ ಹೋರಾಟ ಹತ್ತಿಕ್ಕಲು ಸರ್ಕಾರ ಯತ್ನಿಸುತ್ತಿದೆ ಎಂದು ಬೆಳಗಾವಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿರುವ ಕುರಿತು ಜಯಮೃತ್ಯುಂಜಯಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ವಿಧಾನಮಂಡಲದ ಚಳಿಗಾಲದ ಅಧಿವೇಶನ ಸೋಮವಾರ ಆರಂಭವಾಗಿದ್ದು, ಪಂಚಮಸಾಲಿ ಮೀಸಲಾತಿ ಹೋರಾಟಗಾರರು ಮಂಗಳವಾರ ಪಟ್ಟಣದಲ್ಲಿ ಟ್ರ್ಯಾಕ್ಟರ್ ರ‍್ಯಾಲಿಯನ್ನು ಆಯೋಜಿಸಿದ್ದಾರೆ. ಆದರೆ ಜಿಲ್ಲಾಡಳಿತ ನಿಷೇಧಾಜ್ಞೆ ಜಾರಿಗೊಳಿಸಿ ಪಟ್ಟಣದಲ್ಲಿ ಟ್ರ್ಯಾಕ್ಟರ್‌ಗಳ ಪ್ರವೇಶವನ್ನು ನಿರ್ಬಂಧಿಸಿದೆ.

ಕೂಡಲ ಸಂಗಮ ಪಂಚಮಸಾಲಿ ಗುರು ಪೀಠದ ಮಠಾಧೀಶರು 2012ರ ಡಿಸೆಂಬರ್‌ನಿಂದ ಪಂಚಮಸಾಲಿ ಸಮುದಾಯವನ್ನು ಇತರೆ ಹಿಂದುಳಿದ ಜಾತಿಗಳ 2ಎ ವರ್ಗಕ್ಕೆ ಸೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿದ್ದಾರೆ.

ಇಂದು ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಶ್ರೀಗಳು, ಪ್ರಜಾಸತ್ತಾತ್ಮಕ ರೀತಿಯಲ್ಲಿ ಪ್ರತಿಭಟನೆ ನಡೆಸುವಾಗ ಇಂತಹ ನಿರ್ಬಂಧಗಳನ್ನು ವಿಧಿಸಬಾರದು. ನಮ್ಮ ಹೋರಾಟ ಹತ್ತಿಕ್ಕಲು ಪ್ರಯತ್ನಿಸಿದರೆ ಸರ್ಕಾರಕ್ಕೆ ಕೆಟ್ಟ ಹೆಸರು ಬರುತ್ತದೆ. ನಾವು ಹಿಂಸಾತ್ಮಕ ಹೋರಾಟಕ್ಕೆ ಎಂದೂ ಪ್ರಚೋದನೆ ನೀಡಿಲ್ಲ. ಹೋರಾಟ ತಡೆಯುವ ಪ್ರಯತ್ನವನ್ನು ಸರ್ಕಾರ ಮಾಡಬಾರದು ಎಂದು ಸಿಎಂ ಅವರಿಗೆ ಮನವಿ ಮಾಡುತ್ತೇನೆ ಎಂದರು.

ಪಂಚಮಸಾಲಿ ಸಮುದಾಯವು ಪ್ರಸ್ತುತ 3B ವರ್ಗದ ಅಡಿಯಲ್ಲಿದೆ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳು ಮತ್ತು ಉದ್ಯೋಗಗಳಲ್ಲಿ ಶೇಕಡಾ ಐದು ಮೀಸಲಾತಿಯನ್ನು ಪಡೆಯುತ್ತದೆ. ಆದರೆ ಅದನ್ನು 2ಎ ಸೇರಿಸಬೇಕು ಎಂದು ಶ್ರೀಗಳು ಒತ್ತಾಯಿಸುತ್ತಿದ್ದಾರೆ.

ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ನೀಡುವಂತೆ ಆಗ್ರಹಿಸಿ ಕೂಡಲಸಂಗಮ ಶ್ರೀಬಸವ ಜಯಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ನಾಳೆ ಟ್ರ್ಯಾಕ್ಟರ್‌ಗಳ ಮೂಲಕ ಬೆಳಗಾವಿಯ ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕಲಾಗುವುದು ಎಂದು ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಮಹಾಸಭಾ ಜಿಲ್ಲಾಧ್ಯಕ್ಷ ಆರ್.ವಿ. ಅಶೋಕ್ ಗೋಪನಾಳು ತಿಳಿಸಿದ್ದಾರೆ.

ಮುಡಾ ನಿವೇಶನ ಹಂಚಿಕೆ ಹಗರಣ

ಇಡಿ ಪತ್ರ ಮಾಧ್ಯಮ ಸೃಷ್ಟಿ: ಪ್ರಶ್ನೆ ಕೇಳಿದ್ದಕ್ಕೆ ಭೈರತಿ ಸುರೇಶ್ ಗರಂ



ಬೆಳಗಾವಿ: ಮುಡಾ ಅಕ್ರಮದ ಬಗ್ಗೆ ಜಾರಿ ನಿರ್ದೇಶನಾಲಯ ಲೋಕಾಯುಕ್ತಕ್ಕೆ ಬರೆದ ಪತ್ರದ ಬಗ್ಗೆ ಪ್ರಶ್ನೆ ಕೇಳಿದ್ದಕ್ಕೆ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಗರಂ ಆಗಿದ್ದಾರೆ. ಇಡಿ ಪತ್ರದ ಬಳಿಕ ಮಾಧ್ಯಮಗಳ ಕೈಗೆ ಸಿಗದೇ ನಾಪತ್ತೆಯಾಗಿದ್ದ ಭೈರತಿ ಸುರೇಶ್ ಇಂದು ಬೆಳಗಾವಿ ಅಧಿವೇಶನದಲ್ಲಿ ಪ್ರತ್ಯಕ್ಷರಾಗಿದ್ದಾರೆ.

ಇಡಿ ಪತ್ರದ ಬಗ್ಗೆ ಕೇಳಿದ್ದಕ್ಕೆ, ಎಲ್ಲವೂ ಸುಳ್ಳು. ನನ್ನ ವಿರುದ್ಧ ವರದಿ ಕೊಟ್ಟಿಲ್ಲ. ಯಾವ ಅಧಿಕಾರಿ 144 ಫೈಲ್ ತಗೆದುಕೊಂಡು ಹೋಗಿದ್ದಾರೆ. ನಾನು ಅಲ್ಲಿಗೆ ಹೋಗಿದ್ದೆ ಅಂತ ಯಾರು ಹೇಳಿದ್ದಾರೆ. ಮುಡಾ ಅಕ್ರಮದಲ್ಲಿ ಕ್ರಮ ಕೈಗೊಂಡಿದ್ದೇವೆ ಎಂದು ಹೇಳಿ ಕೆಂಡಾಮಂಡಲವಾದರು. ಇದೇ ವೇಳೆ ಯಾರು ಯಾವುದೇ ಪತ್ರ ಬರೆದಿಲ್ಲ. ಅಧಿಕೃತವಾಗಿ ಇಡಿ ಪತ್ರ ಬರೆದಿದ್ಯಾ, ಪತ್ರ ಎಲ್ಲವೂ ಮಾಧ್ಯಮ ಸೃಷ್ಟಿ ಎಂದು ಹೇಳಿ ಮಾಧ್ಯಮಗಳ ಮೇಲೆಯೇ ಗೂಬೆ ಕೂರಿಸಿದರು.

ಚಾಮರಾಜ ಕ್ಷೇತ್ರದ ವಸತಿ ರಹಿತರಿಗೆ 2282 ಮನೆ ಮಂಜೂರು

ಶಾಸಕ ಕೆ. ಹರೀಶ್‌ಗೌಡರಿಗೆ ವಸತಿ ಸಚಿವ ಜಮೀರ್ ಉತ್ತರ

ಬೆಳಗಾವಿ, ಡಿ. 9– ಮೈಸೂರಿನ ಚಾಮರಾಜ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 12,791 ವಸತಿ ರಹಿತರಿರುವುದು ಕಂಡುಬಂದಿದ್ದು, ವಿವಿಧ ಯೋಜನೆಗಳಡಿ ಅವರಿಗೆ ವಸತಿ ಕಲ್ಪಿಸುವ ಕಾರ್ಯವನ್ನು ಸರ್ಕಾರ ಮಾಡುತ್ತಿದೆ. 2016–17ನೇ ಸಾಲಿನಿಂದ ಈವರೆಗೆ ಚಾಮರಾಜ ಕ್ಷೇತ್ರಕ್ಕೆ 2282 ಮನೆಗಳನ್ನು ಮಂಜೂರು ಮಾಡಲಾಗಿದೆ ಎಂದು ವಸತಿ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದ್ದಾರೆ.

ಚಾಮರಾಜ ಕ್ಷೇತ್ರದ ಶಾಸಕ ಕೆ. ಹರೀಶ್‌ಗೌಡರ ಪ್ರಶ್ನೆಗೆ ವಿಧಾನಸಭೆಯಲ್ಲಿ ಉತ್ತರಿಸಿದ ಅವರು, ಮಂಜೂರಾಗಿರುವ 2282 ಮನೆಗಳ ಪೈಕಿ 1473 ಮನೆಗಳು ಪೂರ್ಣಗೊಂಡಿವೆ. 265 ಮನೆಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿವೆ. 179 ಮನೆಗಳು ಪ್ರಾರಂಭವಾಗಬೇಕಾಗಿದ್ದು, ಉಳಿದ 359 ಮನೆಗಳನ್ನು ಕಾರಣಾಂತರಗಳಿಂದ ರದ್ದುಪಡಿಸಲಾಗಿದೆ ಎಂದು ತಿಳಿಸಿದ್ದಾರೆ.



ಜಮೀರ್



ಹರೀಶ್‌ಗೌಡ

ಅರ್ಹ ವಸತಿ ರಹಿತ ಕುಟುಂಬಗಳಿಗಾಗಿ ರಾಜ್ಯ ಸರ್ಕಾರವು ಗ್ರಾಮೀಣ ಪ್ರದೇಶದಲ್ಲಿ ಮುಖ್ಯಮಂತ್ರಿಗಳ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಮುಖ್ಯಮಂತ್ರಿಗಳ ನಗರ ನಿವೇಶನ ಯೋಜನೆಯನ್ನು ಜಾರಿಗೊಳಿಸಿದೆ. ನಿವೇಶನ ರಹಿತರಿಗೆ ನಿವೇಶನ ಹಂಚಲು ಸ್ಥಳೀಯವಾಗಿ ಲಭ್ಯವಿರುವ ಸರ್ಕಾರಿ ಜಮೀನನ್ನು ಮಂಜೂರು ಮಾಡಲಾಗುವುದು. ಒಂದು ವೇಳೆ ಸರ್ಕಾರಿ ಜಮೀನು ಲಭ್ಯವಿಲ್ಲದ ಕಡೆಗಳಲ್ಲಿ ಮಾತ್ರ ಅನುದಾನದ ಲಭ್ಯತೆಗನುಗುಣವಾಗಿ ವಸತಿಗೆ ಸೂಕ್ತ ಖಾಸಗಿ ಜಮೀನು ಖರೀದಿಸಲು ಜಿಲ್ಲಾ ಜಮೀನು ಖರೀದಿ ಸಮಿತಿ ಮೂಲಕ ಕ್ರಮ ವಹಿಸಲಾಗುತ್ತದೆ ಎಂದು ತಿಳಿಸಿದರು.

ಶಕ್ತಿ ಯೋಜನೆಯಿಂದ ಶೇ. 23.17ರಷ್ಟು ಪ್ರಯಾಣಿಕರ ಹೆಚ್ಚಳ: ಶಕ್ತಿ ಯೋಜನೆಯಿಂದಾಗಿ ಶೇ. 23.17ರಷ್ಟು ಪ್ರಯಾಣಿಕರ ಸಂಚಾರ ಹೆಚ್ಚಳವಾಗಿದೆ ಎಂದು ಶಾಸಕ ಕೆ. ಹರೀಶ್‌ಗೌಡ ಪ್ರಶ್ನೆಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಉತ್ತರಿಸಿದ್ದಾರೆ. 2023–24 ಪೂರ್ವದ 4 ವರ್ಷದಲ್ಲಿ ಹೊಸ ಬಸ್‌ಗಳನ್ನು ಖರೀದಿಸಿರಲಿಲ್ಲ. ಹೀಗಾಗಿ ಪ್ರಯಾಣಿಕರಿಗೆ ಬಸ್‌ಗಳನ್ನು ಒದಗಿಸಲು ತೊಂದರೆಯಾಗುತ್ತಿತ್ತು. ಇದೀಗ 4,304 ಬಸ್‌ಗಳನ್ನು ಸಾರಿಗೆ ಸಂಸ್ಥೆಗೆ ಹೊಸದಾಗಿ ಸೇರಿಸಲಾಗಿದೆ. ಜೊತೆಗೆ 1346 ಬಸ್‌ಗಳನ್ನು ಮುಂದಿನ ದಿನಗಳಲ್ಲಿ ಸೇರ್ಪಡೆಗೊಳಿಸಲಾಗುವುದು ಎಂದು ತಿಳಿಸಿದರು.

ಸುವರ್ಣ ವಿಧಾನಸೌಧ: ಸಭಾಧ್ಯಕ್ಷರಿಗೆ 45 ಲಕ್ಷ ವೆಚ್ಚದಲ್ಲಿ ಹೊಸ ಪೀಠ

ಸುವರ್ಣ ವಿಧಾನಸೌಧ (ಬೆಳಗಾವಿ): ಇಲ್ಲಿನ ವಿಧಾನಸಭೆ ಸಭಾಂಗಣದಲ್ಲಿ ಸಭಾಧ್ಯಕ್ಷರು ಆಸೀನರಾಗಲು 45 ಲಕ್ಷದ ವೆಚ್ಚದಲ್ಲಿ ಬೀಟೆ ಮರದ ಹೊಸ ಪೀಠವನ್ನು ಅಳವಡಿಸಲಾಗಿದೆ ವಿಧಾನಮಂಡಲದ ಚಳಿಗಾಲದ ಅಧಿವೇಶನದ ಮೊದಲ ದಿನವಾದ ಸೋಮವಾರ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಹೊಸ ಪೀಠದಲ್ಲಿ ಕುಳಿತು ಕಲಾಪ ನಡೆಸಿದರು.

ಹೊಸ ಪೀಠ ಅಳವಡಿಸಿರುವ ಕುರಿತು ಸದನದಲ್ಲಿ ಪ್ರಕಟಿಸಿದ ಖಾದರ್, ಬೆಂಗಳೂರಿನ ವಿಧಾನಸೌಧದಲ್ಲಿರುವ ವಿಧಾನಸಭೆಯಲ್ಲಿನ ಪೀಠದ ಪ್ರತಿರೂಪದಂತಿರುವ ಹೊಸ ಪೀಠವನ್ನು ಇಲ್ಲಿ ಅಳವಡಿಸಲಾಗಿದೆ. ಪೀಠದಲ್ಲಿ ಕುಳಿತು ನಾನು ಅದನ್ನು ಉದ್ಘಾಟಿಸಿದ್ದೇನೆ ಎಂದರು.

ಕೆಂಗಲ್ ಹನುಮಂತಯ್ಯ ಅವರು ವಿಧಾನಸೌಧ ನಿರ್ಮಾಣದ ಸಂದರ್ಭದಲ್ಲಿ ತಮ್ಮ ಕನಸಿನಂತೆ ವಿಧಾನಸಭೆಯ ಅಧ್ಯಕ್ಷರ ಪೀಠವನ್ನು ರೂಪಿಸಿದ್ದರು. ಶಿವಮೊಗ್ಗ ಜಿಲ್ಲೆಯಿಂದ ಬೀಟೆ ಮರವನ್ನು ತರಿಸಿ, ಅದರಿಂದ ಪೀಠವನ್ನು ರಚಿಸಲಾಗಿತ್ತು. ಅದೇ ಮಾದರಿಯಲ್ಲಿ ಗಂಡಭೇರುಂಡ ಲಾಂಛನ, ಸಿಂಹ ಲಾಂಛನ, ಸೂರ್ಯಕಾಂತಿ ಹೂವಿನ ಚಿತ್ತಾರದ ಮೇಲ್ಭಾಗ, ಮಾವಿನಕಾಯಿಯ ಚಿತ್ರಗಳುಳ್ಳ ಹೊಸ ಪೀಠವನ್ನು ರಚಿಸಲಾಗಿದೆ.

ಸಭಾಧ್ಯಕ್ಷರ ಹುದ್ದೆಗೆ ಸಂವಿಧಾನದಲ್ಲಿ ದೊಡ್ಡ ಗೌರವವಿದೆ. ಅದೇ ರೀತಿ ಪೀಠಕ್ಕೂ ಗೌರವವಿದೆ. ಈ ಕಾರಣಕ್ಕಾಗಿ ಬೆಂಗಳೂರಿನ ವಿಧಾನಸೌಧದ ವಿಧಾನಸಭೆ ಸಭಾಂಗಣದಲ್ಲಿ ಇರುವಂತಹ ಪೀಠ ನಿರ್ಮಿಸಲಾಗಿದೆ ಎಂದು ಖಾದರ್ ವಿಧಾನಸಭೆಗೆ ತಿಳಿಸಿದರು.

ಮನಸ್ಸೆಲ್ಲಾ ಕಾಂಗ್ರೆಸ್ ಕಡೆಗಿದೆ, ಯಾವುದೇ ಕ್ರಮ ಕೈಗೊಂಡರೂ ಸ್ವಾಗತ

ಯಶವಂತಪುರ ಶಾಸಕ ಎಸ್.ಟಿ.ಸೋಮಶೇಖರ್ ಪ್ರತಿಕ್ರಿಯೆ

ಬೆಳಗಾವಿ: ಬಿಜೆಪಿ ಶಾಸಕ ಎಸ್.ಟಿ. ಸೋಮಶೇಖರ್ ಪಕ್ಷ ತೊರೆಯುವ ಕುರಿತು ಸುಳಿವು ನೀಡಿದ್ದು, 'ಮನಸ್ಸೆಲ್ಲಾ ಕಾಂಗ್ರೆಸ್ ಕಡೆಗಿದೆ, ಯಾವುದೇ ಕ್ರಮ ಕೈಗೊಂಡರೂ ಸ್ವಾಗತ' ಎಂದು ಹೇಳಿದ್ದಾರೆ.

ಸೋಮವಾರ ಸುವರ್ಣ ವಿಧಾನ ಸೌಧದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಬೆಂಗಳೂರಿನ ಯಶವಂತಪುರ ಕ್ಷೇತ್ರದ ಬಿಜೆಪಿ ಶಾಸಕ ಎಸ್.ಟಿ. ಸೋಮಶೇಖರ್, ನಾನು ಈಗ ಸುವರ್ಣ ವಿಧಾನಸೌಧದಲ್ಲಿದ್ದೇನೆ. ಆದರೆ, ಇದೀಗ ನನ್ನ ಮನಸ್ಸೆಲ್ಲಾ ಕಾಂಗ್ರೆಸ್ ಪಕ್ಷದ ಕಡೆಗೆ ಇದೆ ಎಂದು ಹೇಳಿದ್ದಾರೆ. ನಾನು ಬಿಜೆಪಿ ಶಾಸಕಾಂಗ ಸಭೆಗೂ ಹೋಗಿದ್ದೆ. ಕಳೆದ ಬಾರಿ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಔತಣಕೂಟದಲ್ಲಿಯೂ ಪಾಲ್ಗೊಂಡಿದ್ದೆ. ಈ ಬಾರಿ ಯಾರು ಕರೆದರೂ ಹೋಗ್ತೇನೆ. ಇಂದು ಬಿಜೆಪಿ ಶಾಸಕಾಂಗ ಪಕ್ಷದ ಸಭೆ ಇದ್ದು, ಕರೆದರೆ ಅಲ್ಲಿಗೂ ಹೋಗುತ್ತೇನೆ. ನಾನು ಇಂದು ನಮ್ಮ ಪಕ್ಷದ ಅಧ್ಯಕ್ಷರ ಜೊತೆ ಮಾತನಾಡಿದ್ದೇನೆ.

ಆದರೆ, ವರಿಷ್ಠರ ಜೊತೆ ಒಂದು ರೀತಿ, ಮಾಧ್ಯಮಗಳೊಂದಿಗೆ ಮತ್ತೊಂದು ರೀತಿಯಲ್ಲಿ ಮಾತನಾಡುತ್ತಾರೆ. ಪಕ್ಷ ವಿರೋಧಿ ಹೇಳಿಕೆಗಳನ್ನು ನೀಡುವವರ ಮೇಲೆ ಯಾವುದೇ ಕ್ರಮ ಇಲ್ಲ. ಮೊದಲು ಅವರ ಮೇಲೆ ಕ್ರಮ ಜರುಗಿಸಲಿ, ಗುಬ್ಬಿ ಮೇಲೆ ಬ್ರಹ್ಮಾಸ್ತ್ರ ಬಿಡುವುದಕ್ಕೆ ಹೋಗಬೇಡಿ. ಪಕ್ಷಕ್ಕೆ ಡ್ಯಾಮೇಜ್ ಮಾಡುವವರನ್ನು ತಡೆಯಲಿ ಎಂದು ಅವರು ಸವಾಲು ಹಾಕಿದರು.

ಯಾವುದೇ ಕ್ರಮ ಕೈಗೊಂಡರೂ ಸ್ವಾಗತ: ನಾನು ಹಾಗೂ ಶಿವರಾಂ ಹೆಬ್ಬಾರ್ ಇಬ್ಬರೂ ಒಂದೊಂದು ಕ್ಷೇತ್ರದ ಶಾಸಕರು. ಇವರು ಗುಬ್ಬಿ ಮೇಲೆ ಬ್ರಹ್ಮಾಸ್ತ್ರ ಬಿಡಲು ಹೊರಟಿದ್ದಾರೆ. ಕೆಲ ಬಿಜೆಪಿ ಮುಖಂಡರು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ರಾತ್ರಿ ವೇಳೆಯಲ್ಲಿ ಭೇಟಿ ಮಾಡುತ್ತಾರೆ. ಆದರೆ, ನಾನು ಹಗಲು ಹೊತ್ತಿನಲ್ಲೇ ಅವರನ್ನು ಭೇಟಿ ಮಾಡಿದ್ದೇನೆ. ಪಕ್ಷದ ರಾಜ್ಯಾಧ್ಯಕ್ಷ ವಿಜಯೇಂದ್ರ ನೇರವಾಗಿ ಹೇಳಲಾಗದೆ ನನ್ನ ಹೆಸರು ಹೇಳುತ್ತಿದ್ದಾರೆ. ಕ್ಷೇತ್ರದ ಕೆಲಸದ ವಿಚಾರದಲ್ಲಿ ಸಿಎಂ ಮತ್ತು ಡಿಸಿಎಂ ಭೇಟಿ ಮಾಡಿದ್ದೀನಿ. ನನ್ನ ವಿರುದ್ಧ ಯಾವುದೇ ಕ್ರಮ ಕೈಗೊಂಡರೂ ಸ್ವಾಗತಿಸುತ್ತೇನೆ ಎಂದು ಹೇಳಿದರು.

ಪಕ್ಷದ ಅಧ್ಯಕ್ಷರಾದ ಬಿ.ವೈ.ವಿಜಯೇಂದ್ರ ಅವರಿಗೆ ಯಾರು ಡ್ಯಾಮೇಜ್ ಮಾಡುತ್ತಿದ್ದಾರೆ ಅನ್ನೋದು ಗೊತ್ತಿದೆ. ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ವಿಪಕ್ಷ ನಾಯಕ ಆರ್.ಅಶೋಕ್ ಅವರಿಗೆ ಡ್ಯಾಮೇಜ್ ಮಾಡಲು ನಾವ್ಯಾರು ಹೋಗಿಲ್ಲ. ಅವರು ಉಚ್ಚಾಟನೆ ಆದ್ರೂ ಮಾಡಲಿ, ನಾನು ಯಾವುದೇ ಆರೋಪಗಳನ್ನು ಮಾಡಲು ಹೋಗಲ್ಲ. ನನ್ನನ್ನು ಪಕ್ಷದಲ್ಲಿ ಉಳಿಸಿಕೊಂಡರೂ ಹೊರಗೆ ಕಳಿಸಿದರೂ ಎಲ್ಲವನ್ನೂ ಸ್ವಾಗತಿಸುತ್ತೇನೆ. ನಾನು ಯಾವತ್ತಾದ್ರೂ ವಿಜಯೇಂದ್ರ ವಿರುದ್ಧ ಒಂದೇ ಒಂದು ಮಾತು ಆಡಿದ್ದೀನಾ? ಎಂದು ಸೋಮಶೇಖರ್ ಪ್ರಶ್ನಿಸಿದ್ದಾರೆ.

ನಾನು ಎಂದಿಗೂ ಪಂಚಮಸಾಲಿ ಮೀಸಲಾತಿ ಪರ: ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್



ಬೆಳಗಾವಿ: ಪಂಚಮಸಾಲಿ ಮೀಸಲಾತಿ ಹೋರಾಟಗಾರರ ಟ್ರ್ಯಾಕ್ಟರ್ ರ‍್ಯಾಲಿಗೆ ಜಿಲ್ಲಾಡಳಿತ ನಿರ್ಬಂಧ ವಿಧಿಸಕೂಡದು. ಇದು ಪ್ರಜಾಪ್ರಭುತ್ವ, ಹೋರಾಟದ ಹಕ್ಕು ಎಲ್ಲರಿಗೂ ಇದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಪ್ರತಿಕ್ರಿಯಿಸಿದರು.

ನಗರದಲ್ಲಿ ಸೋಮವಾರ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದ ಅವರು, ಯಾವುದೇ ರ‍್ಯಾಲಿ, ಹೋರಾಟಗಳಿಗೆ ನಿರ್ಬಂಧ ಹೇರಬಾರದು. ಪಂಚಮಸಾಲಿ ಮೀಸಲಾತಿಗಾಗಿ ನಾನು ಮುಂಚೂಣಿಯಲ್ಲಿ ನಿಂತು ಹೋರಾಟ ಮಾಡಿದ್ದೇನೆ ಎಂದರು.

ಈಗ ಕಬ್ಬು ಸಾಗಣೆ ಹಂಗಾಮು ಆಗಿರುವುದರಿಂದ ಟ್ರ್ಯಾಕ್ಟರ್‌ಗಳು ಹೆಚ್ಚು ಓಡಾಡುತ್ತಿವೆ. ಅಧಿವೇಶನದ ವೇಳೆ ಯಾವುದೇ ಅಪಘಾತ, ದುರ್ಘಟನೆ ಆಗಬಾರದು ಎಂದು ಮುಂಜಾಗ್ರತೆ ದೃಷ್ಟಿಯಿಂದ ಈ ಕ್ರಮ ಕೈಗೊಂಡಿರಬಹುದು ಎಂದು ಹೇಳಿದರು.

ನಾನು ಈಗಾಗಲೇ ಕೂಡಲಸಂಗಮ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಅವರ ಜೊತೆ ಮಾತನಾಡಿದ್ದೇನೆ. ಇಂದು ಸಂಜೆ 4 ಗಂಟೆಗೆ ನಾನು ಸ್ವಾಮೀಜಿ, ಸಿ.ಸಿ.ಪಾಟೀಲ, ಅರವಿಂದ ಬೆಲ್ಲದ ಸೇರಿದಂತೆ ಎಲ್ಲರೂ ಸಭೆ ನಡೆಸುತ್ತಿದ್ದೇವೆ. ಈ ಸಭೆಯಲ್ಲಿ ಒಂದು ನಿರ್ಣಯ ಕೈಗೊಳ್ಳುತ್ತೇವೆ ಎಂದರು.

ಪಂಚಮಸಾಲಿ ಮೀಸಲಾತಿ ಹೋರಾಟಕ್ಕೆ ಸಂಬಂಧಪಟ್ಟಂತೆ ನಾನು ಸ್ವಾಮೀಜಿ ಅವರ ಜೊತೆ ಹಾಗೂ ನಮ್ಮ ಸಮಾಜದ ಇತರ ಪಕ್ಷಗಳ ನಾಯಕರ ಜೊತೆಗೂ ನಿರಂತರ ಸಂಪರ್ಕದಲ್ಲಿದ್ದೇನೆ. ಇಂತಹ ಗುರುಗಳು ಸಿಕ್ಕಿದ್ದು ನಮ್ಮ ಪುಣ್ಯ. ನಾಳೆ ನಡೆಯಲಿರುವ ಸಮಾವೇಶದಲ್ಲಿ ನಾನು ಖಂಡಿತವಾಗಿ ಭಾಗಿಯಾಗುತ್ತೇನೆ ಎಂದು ಸಚಿವೆ ತಿಳಿಸಿದರು.

ನಾನು ಸಚಿವೆ ಆಗಿರುವ ಕಾರಣ ವಿಧಾನಸಭೆ ಕಲಾಪದ ವೇಳೆ ಬಾವಿಗಿಳಿದು ಧರಣಿ ಮಾಡುವುದಕ್ಕೆ ಸಾಧ್ಯವಿಲ್ಲ. ವಿಧಾನಸಭೆಯಲ್ಲಿ ಯಾರಾದರೂ ವಿಷಯ ಪ್ರಸ್ತಾಪಿಸಿದಾಗ ಧ್ವನಿಯಾಗಿ ಇರುವೆ. ನಾನೂ ಹಾಗೂ ಸಹೋದರ ಚನ್ನರಾಜ ಹಟ್ಟಿಹೊಳಿ ಧ್ವನಿಯಾಗಿ ಇರುತ್ತೇವೆ ಎಂದು ಹೇಳಿದರು.

ಬಾಂಗ್ಲಾದೇಶದವರಿಗೂ ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ಕೊಡಲಾಗಿದೆ: ಸಿ.ಟಿ.ರವಿ ಆರೋಪ

ಬೆಂಗಳೂರು: ಬಾಂಗ್ಲಾದೇಶದವರಿಗೂ ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ಕೊಡಲಾಗಿದೆ ಎಂದು ಬಿಜೆಪಿ ಸದಸ್ಯ ಸಿಟಿ ರವಿ ಆರೋಪ ಮಾಡಿದ್ದಾರೆ.

ವಿಧಾನಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ, ಜೆಡಿಎಸ್, ಕಾಂಗ್ರೆಸ್ ಸದಸ್ಯರು ರೇಷನ್ ಕಾರ್ಡ್ ಗೊಂದಲದ ಬಗ್ಗೆ ಪ್ರಶ್ನೆ ಕೇಳಿದರು.

ಜೆಡಿಎಸ್ ಸದಸ್ಯ ಜವರಾಯಿಗೌಡ ಮಾತನಾಡಿ, ರಾಜ್ಯದಲ್ಲಿ 40 ಲಕ್ಷ ಬೋಗಸ್ ಕಾರ್ಡ್ ಇದೆ ಅಂತ ಹೇಳಲಾಗುತ್ತಿದೆ. ಈ ಬೋಗಸ್ ಕಾರ್ಡ್ ಕೊಟ್ಟ ಅಧಿಕಾರಿಗಳ ಮೇಲೆ ಯಾಕೆ ಕ್ರಮ ತೆಗೆದುಕೊಂಡಿಲ್ಲ. ಅವರ ಮೇಲೆ ಕ್ರಮ ತೆಗೆದುಕೊಳ್ಳಬೇಕು ಎಂದರು.

ಕಾಂಗ್ರೆಸ್‌ನ ಐವಾನ್ ಡಿಸೋಜಾ, ಬಿಪಿಎಲ್ ಕಾರ್ಡ್ ರದ್ದು ಮಾಡೋಕೆ ಇರೋ ಮಾನದಂಡ ಸರಿಯಿಲ್ಲ. ಜೀವನೋಪಾಯಕ್ಕಾಗಿ ಸ್ವಂತ ವಾಹನ ಇರೋ ಅಂಶ ಪ್ರಸ್ತಾಪ ಮಾಡಿರೋದು ಸರಿಯಲ್ಲ. ಈ ಮಾನದಂಡ ಸರಿ ಮಾಡಬೇಕು ಎಂದರು. ಈ ವೇಳೆ ಮಧ್ಯ ಪ್ರವೇಶಿಸಿದ ಸಿ.ಟಿ ರವಿ, 5 ಕೋಟಿಗೂ ಹೆಚ್ಚು ಜನ ರೇಷನ್ ಪಡೆಯುತ್ತಿದ್ದಾರೆ. ಅಷ್ಟೊಂದು ಬಡವರು ರಾಜ್ಯದಲ್ಲಿ ಇದ್ದಾರಾ. ಹಾಗಾದರೆ ಕರ್ನಾಟಕ ಸಂವೃದ್ಧಿ ಹೇಗೆ ಆಗುತ್ತದೆ ಕಾಳಸಂತೆಗೆ ಅಕ್ಕಿ ಹೇಗೆ ಬರುತ್ತಿದೆ. ಇದಕ್ಕೆ ನಾವೇ ದಾರಿ ಮಾಡಿಕೊಟ್ಟಂತೆ ಕಾಣುತ್ತಿದೆ. ಇದನ್ನು ನಿಯಂತ್ರಣ ಮಾಡಲು ಸರ್ಕಾರದ ಕ್ರಮ ಏನು ಎಂದು ಪ್ರಶ್ನೆ ಮಾಡಿದರು.



ಬಳಿಕ ಜೆಡಿಎಸ್‌ನ ಶರವಣ ಮಾತನಾಡಿ, ಸರ್ಕಾರ ಯಾರಿಗೆ ಕಾರ್ಡ್ ರದ್ದು ಮಾಡುತ್ತದೆ ಅಂತ ಸ್ಪಷ್ಟಪಡಿಸಬೇಕು. ಯಾವುದು ನಿಯಮ ಅಂತ ಸ್ಪಷ್ಟವಾಗಿ ಹೇಳಿ. ಬೆಂಗಳೂರಿನಲ್ಲಿ ಪಡಿತರ ಅಂಗಡಿಯವರು ಜನರಿಂದ ಒಂದು ಕಾರ್ಡ್‌ಗೆ 20 ರೂ. ವಸೂಲಿ ಮಾಡುತ್ತಿದ್ದಾರೆ. ಇದಕ್ಕೆ ಸರ್ಕಾರದ ಅನುಮತಿ ಇದೆಯಾ. ಬಡವರಿಗೆ ಕೊಟ್ಟ ಅಕ್ಕಿ ಉಳಿದ ಮೇಲೆ ಖಾಸಗಿಯವರಿಗೆ ಮಾರಾಟ ಮಾಡಲಾಗುತ್ತಿದೆ. ಇಂತಹವರ ವಿರುದ್ಧ ಸರ್ಕಾರದ ಕ್ರಮ ಏನು ಎಂದು ಪ್ರಶ್ನೆ ಮಾಡಿದರು.

ಇದಕ್ಕೆ ಉತ್ತರ ನೀಡಿದ ಸಚಿವ ಮುನಿಯಪ್ಪ, ಅರ್ಹರೆ ಇಲ್ಲದ 13 ಲಕ್ಷ ಕಾರ್ಡ್ ಪರಿಷ್ಕರಣೆ ಮಾಡೋಕೆ ಹೋದೆವು. ಇದರಲ್ಲಿ 3,35,463 ಅನರ್ಹರು ಎಂದು ತಿಳಿಯಿತು. ಒಂದು ಕಾರ್ಡ್ ರದ್ದಾದ್ರೆ ಟಿವಿಗೆ ಹೋಗ್ತಾರೆ. ಎಲ್ಲ ಪಕ್ಷದವರು ಸಹಕಾರ ಕೊಟ್ರೆ 3 ತಿಂಗಳಲ್ಲಿ ಎಲ್ಲವೂ ಸರಿ ಮಾಡ್ತೀನಿ. ನಾನು ಸರಿ ಮಾಡಲು ಹೋದಾಗ ಟಿವಿಯಲ್ಲಿ ಸುದ್ದಿ ಆಯ್ತು. ಆ ಮೇಲೆ ನಾನು ಕಾರ್ಡ್ ರದ್ದು ಮಾಡೋದು ಪ್ರಕ್ರಿಯೆ ಬಿಟ್ಟೆ. 20% ಕಾರ್ಡ್ ಅರ್ಹತೆ ಇಲ್ಲದೆ ಇರೋರಿಗೆ ಕಾರ್ಡ್ ಇದೆ. ಇದನ್ನು ಪರಿಷ್ಕರಣೆ ಮಾಡಬೇಕು ಎಂದರು.

ರೇಷನ್ ಕಾರ್ಡ್ ಅಂಗಡಿಯಲ್ಲಿ 20 ರೂ. ತೆಗೆದುಕೊಳ್ಳೋ ಹಾಗೆ ಇಲ್ಲ. ಯಾರಾದ್ರು ದೂರು ಕೊಟ್ರೆ ಅವರ ಮೇಲೆ ಕ್ರಮ ತೆಗೆದುಕೊಳ್ಳುತ್ತೇನೆ ಎಂದರು. ಸಚಿವರ ಮಾತಿಗೆ ಬಿಜೆಪಿ ಸದಸ್ಯ ಸಿಟಿ ರವಿ ವಿರೋಧ ವ್ಯಕ್ತಪಡಿಸಿದರು. ಕೂಲಿ ಮಾಡುವವರ ಕಾರ್ಡ್ ರದ್ದು ಮಾಡಿದರೆ ನಾವು ಟಿವಿಗೆ ಹೋಗ್ತೀವಿ. ಅರ್ಹತೆ ಇಲ್ಲದೇ ಇದ್ದೋರ ಕಾರ್ಡ್ ರದ್ದು ಮಾಡಿ. ಯಾರಿಗೆ ಹೆದರುತ್ತಿದ್ದೀರಾ. ಬಾಂಗ್ಲಾದೇಶದವರಿಗೆಲ್ಲಾ ಇಲ್ಲಿ ಬಿಪಿಎಲ್ ಕಾರ್ಡ್ ಕೊಟ್ಟಿದ್ದಾರೆ. ಅದನ್ನ ರದ್ದು ಮಾಡಿ ಎಂದರು.

ಪಿಎಸ್‌ಐ ನೇಮಕಾತಿಯಲ್ಲಿ ಶೇ.30 ಮೀಸಲಾತಿ ಕಲ್ಪಿಸಲು ಒತ್ತಾಯ

ಪೊಲೀಸ್ ಸಿಬ್ಬಂದಿಯಿಂದ ಸರ್ಕಾರಕ್ಕೆ ಪತ್ರ

ಬೆಂಗಳೂರು: ಪೊಲೀಸ್ ಸಬ್‌ಇನ್‌ಸ್ಪೆಕ್ಟರ್ (ಪಿಎಸ್‌ಐ) ಹುದ್ದೆಗಳ ನೇಮಕಾತಿಯಲ್ಲಿ ಸೇವಾನಿರತ ಅಭ್ಯರ್ಥಿಗಳಿಗೆ ಈಗಿರುವ ಶೇ.10ರಷ್ಟು ಮೀಸಲಾತಿ ಪ್ರಮಾಣವನ್ನು ಶೇ. 30ಕ್ಕೆ ಏರಿಸಬೇಕು ಎಂದು ರಾಜ್ಯದ ವಿವಿಧ ಪೊಲೀಸ್ ಠಾಣೆಗಳ ಸಿಬ್ಬಂದಿ ಮನವಿ ಮಾಡಿದ್ದಾರೆ.

ಈ ಸಂಬಂಧ ಸೇವಾನಿರತ ಪಿಎಸ್‌ಐ ಹುದ್ದೆ ಆಕಾಂಕ್ಷಿಗಳು ಮುಖ್ಯಮಂತ್ರಿ, ಗೃಹ ಸಚಿವರು ಹಾಗೂ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ಪತ್ರ ಬರೆದಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಬೆಳಗಾವಿಯಲ್ಲಿ ಅಧಿವೇಶನ ನಡೆಯುತ್ತಿದ್ದು, ಇದೇ ವೇಳೆ ಮೀಸಲಾತಿ ಪ್ರಮಾಣ ಹೆಚ್ಚಿಸಲು ಕ್ರಮ ಕೈಗೊಳ್ಳಬೇಕು ಎಂದೂ ಕೋರಲಾಗಿದೆ.

ಮಲ್ಲಿಕಾರ್ಜುನ ಖರ್ಗೆ ಅವರು ಗೃಹಸಚಿವರಾಗಿದ್ದ ಅವಧಿಯಲ್ಲಿ ಸೇವಾನಿರತ ಅಭ್ಯರ್ಥಿಗಳಿಗಾಗಿಯೇ ಪ್ರತ್ಯೇಕ ಪಿಎಸ್‌ಐ ನೇಮಕಾತಿ ಅಧಿಸೂಚನೆ ಹೊರಡಿಸಿದ್ದರು. ಅದರಂತೆ 2001–02 ಹಾಗೂ 2002–03ರಲ್ಲಿ 300ಕ್ಕೂ ಹೆಚ್ಚು ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗಿತ್ತು. ಆ ನಂತರ ಇದುವರೆಗೂ ಅಂತಹ ಪ್ರತ್ಯೇಕ ನೇಮಕಾತಿ ಅಧಿಸೂಚನೆ ನಡೆದಿಲ್ಲ ಎಂದು ಪತ್ರದಲ್ಲಿ ಬರೆಯಲಾಗಿದೆ.

ಕರ್ನಾಟಕ ಹೊರತುಪಡಿಸಿ ಬೇರೆ ರಾಜ್ಯಗಳಲ್ಲಿ ಸೇವಾನಿರತ ಅಭ್ಯರ್ಥಿಗಳ ಮೀಸಲಾತಿ ಶೇ. 20ರಿಂದ ಶೇ. 30ರಷ್ಟು ಇದೆ. ಅದನ್ನು ರಾಜ್ಯದಲ್ಲೂ ಜಾರಿ ಮಾಡಿದರೆ ಕಳೆದ ಕೆಲವು ವರ್ಷಗಳಿಂದ ಇಲಾಖೆಯಲ್ಲಿ ಕಾನ್‌ಸ್ಟೇಬಲ್ ಆಗಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಅವಕಾಶ ಲಭಿಸಿದಂತೆ ಆಗಲಿದೆ ಎಂದು ಹೇಳಿದ್ದಾರೆ. ಸೇವಾನಿರತ ವಯಸ್ಸಿನ ಮಿತಿಯನ್ನು 40ರಿಂದ 45 ವರ್ಷಕ್ಕೆ ಹೆಚ್ಚಿಸಬೇಕು. 402 ಪಿಎಸ್‌ಐ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಅದರಲ್ಲಿ ಸೇವಾನಿರತ ಅಭ್ಯರ್ಥಿಗಳಿಗೆ ಕೇವಲ 40 ಹುದ್ದೆಗಳಿವೆ. ಅದನ್ನು 80ಕ್ಕೆ ಹೆಚ್ಚಿಸಬೇಕು ಎಂದೂ ಒತ್ತಾಯಿಸಿದ್ದಾರೆ.

2010ರಲ್ಲಿ ಸೇವಾನಿರತ ಅಭ್ಯರ್ಥಿಗಳಿಗೆ ಶೇ.30ರಷ್ಟು ಹುದ್ದೆಗಳನ್ನು ಮೀಸಲಿಡಲಾಗುವುದೆಂದು ಅಂದಿನ ಗೃಹ ಸಚಿವರು ಭರವಸೆ ನೀಡಿದ್ದರು. ಅದು ಇನ್ನೂ ಕಾರ್ಯರೂಪಕ್ಕೆ ಬಂದಿಲ್ಲ ಎಂದು ಸೇವಾನಿರತ ಪಿಎಸ್‌ಐ ಹುದ್ದೆಗಳ ಆಕಾಂಕ್ಷಿಗಳು ಹೇಳಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಓದುವ ಆಸೆಯಿಂದ ಬೆಳಗ್ಗೆ ಬೇಗ ಎದ್ದೆ...
ಆದರೆ ಆಸೆಯೇ ದುಃಖಕ್ಕೆ ಮೂಲ ಎಂದು ಪುನಃ ಹಾಸಿಗೆಗೆ ಬಿದ್ದೆ.
– ವಿದ್ಯಾರ್ಥಿ

ಮೈಸೂರು ಮಿತ್ರ

ಮಂಗಳವಾರ, 10 ಡಿಸೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಸಮುದ್ರದ ದೃಶ್ಯ ಆನಂದಮಯ, ಆದರೆ ದಡದ ಮೇಲಿಂದ ನೋಡುವವರಿಗೇ ಹೊರತೂ ಮುಳುಗುವವರಿಗಲ್ಲ. –ವಿನೋಬಾ ಬಾವೆ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಎಲ್ಲಾ ಕೆಡುಕಿಗೂ ಮೂಲ ಹೊಟ್ಟೆಕಿಚ್ಚು.

ನಿಮ್ಮ ಪತ್ರಗಳು

ಗ್ಯಾಸ್ ಪೈಪ್‌ಲೈನ್ ಎಂಬ ಪೆಡಂಭೂತ

ಮಾನ್ಯರೆ,

ಪೈಪ್‌ಲೈನ್ ಮೂಲಕ ಮನೆ ಮನೆಗೆ ಅಡುಗೆ ಅನಿಲ ಪೂರೈಸುವ ಯೋಜನೆ ಕಾಮಗಾರಿ ಮರು ಆರಂಭವಾಗಿದೆ. (ಮೈ.ಮಿ.8.12.2024). ಇದು ಬೆಂಕಿಯೊಡನೆ ಚೆಲ್ಲಾಟ ಅಲ್ಲದೇ ಮತ್ತೇನೂ ಅಲ್ಲ. ಯಾಕೆಂದರೆ ಪಾಲಿಕೆಯವರು ಯಾವುದೇ ವೈಜ್ಞಾನಿಕ ಮಾನದಂಡವಿಲ್ಲದೆ ಮಾಡುವ ಕಳಪೆ ಕಾಮಗಾರಿ ಅನ್ನುವುದು ಅನೇಕ ಬಾರಿ ಜಗಜ್ಜಾಹೀರಾಗಿದೆ. ಉದಾಹರಣೆಗೆ ಮೈಸೂರು ನಗರದ ತುಂಬಾ ಹಾಕಿದ್ದ ಅಲಂಕಾರಿಕ ಕಂಬಗಳ ಸ್ಥಿತಿ ಈಗೇನಾಗಿದೆ? ಸರಿಯಾಗಿ ಒಂದು ರೋಡ್ ಹಂಪ್ ಹಾಕಲು ಬಾರದವರು ಅತ್ಯಂತ ನಾಜೂಕಾದ, ಸೂಕ್ಷ್ಮವಾದ ಗ್ಯಾಸ್ ಪೈಪ್‌ಲೈನ್ ಹಾಕುತ್ತಾರಾ? ಗುಣಮಟ್ಟವಿಲ್ಲದ ಕಳಪೆ ಕೆಲಸ, ಬೇಜವಾಬ್ದಾರಿ, ಅಡ್ಡಾದಿಡ್ಡಿ ಇವೆಲ್ಲಾ ನಮ್ಮ ನಗರ ಪಾಲಿಕೆಯವರ ಜನ್ಮ ಸಿದ್ಧ ಹಕ್ಕು. ಈ ಪೈಪ್‌ಲೈನ್ ಹಾಕಬೇಕಾದರೆ ಮನೆಯ ಕಾಂಪೌಂಡ್, ಗೋಡೆ ಇತ್ಯಾದಿ ಒಡೆದು ವಿರೂಪ ಆಗೇ ಆಗುತ್ತದೆ. ಅದರ ನಷ್ಟ ಭರಿಸುವವರು ಯಾರು?

ಗ್ಯಾಸ್ ಸೋರಿಕೆ ಆದರೆ ಮಾಸ್ ಕಿಲ್ಲಿಂಗ್ ಜೊತೆಗೆ ಆಸ್ತಿಪಾಸ್ತಿ ನಷ್ಟ ಆಗುವುದಿಲ್ಲ ಅನ್ನುವುದು ಯಾವ ಗ್ಯಾರಂಟಿ? ಇದನ್ನು ಮಾಡಲು ಚೆನ್ನಾಗಿರುವ ರಸ್ತೆ ಅಗೆಯುತ್ತಾರೆ. ಸರಿಯಾಗಿ ಮುಚ್ಚದೇ ಬಿಡುತ್ತಾರೆ. ಮತ್ತೆ ಅಗೆಯುತ್ತಾರೆ. ಮತ್ತೆ ಮುಚ್ಚುತ್ತಾರೆ. "ಹುಚ್ಚು ಮುಂಡೆ ಮದುವೆಯಲ್ಲಿ ಉಂಡವನೇ ಜಾಣ" ಎಂಬಂತೆ.

ಆಮೇಲೆ ಗೊತ್ತಲ್ಲ ಮಾಮೂಲಿಯಂತೆ ಪೈಪ್‌ಲೈನ್ ತೆರಿಗೆಯ ಬರೆ ಇದ್ದೇ ಇದೆ!! ಇದು ಯಾವುದೋ ಕಂಪನಿಗೆ ಹಣ ಮಾಡಿಕೊಡುವ, ಕಿಕ್‌ಬ್ಯಾಕ್ ಪಡೆಯುವ ದಂಧೆ ಅನ್ನುವುದು ಎಂತಹ ಪೆದ್ದರಿಗೂ ಗೊತ್ತಾಗುತ್ತದೆ. ಸಾರ್ವಜನಿಕರಿಗೆ ನಾನಾ ರೀತಿಯಿಂದ ಕಿರುಕುಳ, ಶೋಷಣೆ, ವಸೂಲಿಗಳು ಮಾತ್ರ ಗ್ಯಾರಂಟಿ.

–ವಿ. ಕೇಶವಮೂರ್ತಿ, ಜ್ಯೋತಿಷ್ಯ ವಿದ್ವಾಂಸ, ಮೈಸೂರು.


ಬಾಡೂಟದೊಂದಿಗೆ ಮದ್ಯವನ್ನೂ ಕೇಳುತ್ತಾರೆ..!?

ಮಾನ್ಯರೆ,

ಇದೇ 20 ರಿಂದ ಮಂಡ್ಯದಲ್ಲಿ ನಡೆಯಲಿರುವ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಪುಸ್ತಕ ಮತ್ತು ವಾಣಿಜ್ಯ ಮಳಿಗೆಗಳನ್ನು ಕಾಯ್ದಿರಿಸಿದವರಿಗೆ ಮಾಂಸಾಹಾರ, ಮದ್ಯ ಹಾಗೂ ತಂಬಾಕು ಮಾರಾಟವನ್ನು ನಿಷೇಧಿಸಿದೆ ಎಂಬ ವಿಚಾರದಲ್ಲಿ ಕೆಲವರು ಬಾಡೂಟ ಏಕಿಲ್ಲ? ಎಂದು ಪ್ರಶ್ನೆ ಮಾಡಿದ್ದಾರೆ. ಇನ್ನೂ ಕೆಲವರು ಬಾಡೂಟ ನೀಡುವಂತೆ ಮಂಡ್ಯ ಜಿಲ್ಲಾಧಿಕಾರಿಗೆ ಮನವಿಯನ್ನೂ ಮಾಡಿದ್ದಾರೆ. ಇದು ಸಮಂಜಸವಲ್ಲ. ಸಮ್ಮೇಳನಕ್ಕೆ ಬರುವವರು ಹಸಿವಿನಿಂದ ಬಳಲದಿರಲಿ ಎಂದು ಊಟದ ವ್ಯವಸ್ಥೆ ಇದೆಯೇ ವಿನಃ ಇದು ಮದುವೆಯ ಬೀಗರೂಟ, ಔತಣಕೂಟವಲ್ಲ. ನಾನು ಗಮನಿಸಿದಂತೆ ಅದ್ಧೂರಿಯಾಗಿ ಮದುವೆ ಮಾಡಿದರೂ, ಮದುವೆಗೆ ಹಾಜರಾಗದವರು ನೂರಾರು ಕಿ.ಮೀ. ದೂರದಿಂದ ಬೀಗರೂಟಕ್ಕೆ ತಪ್ಪದೇ ಹಾಜರಾಗುತ್ತಾರೆ. ಸಾಹಿತ್ಯ ಕೂಡ ಸಾತ್ವಿಕ ಆಹಾರದಂತೆಯೇ. ಉತ್ತಮ ಚರ್ಚೆಗಳಿಗೆ ಸಾಹಿತ್ಯ ಸಮ್ಮೇಳನ ವೇದಿಕೆಯಾಗಬೇಕೇ ಹೊರತು, ಬಾಡೂಟದ ಅಡ್ಡೆಯಾಗುವುದು ಕೆಟ್ಟ ಪರಂಪರೆಗೆ ನಾಂದಿ ಹಾಡಿದಂತೆ. ಯಾವುದೇ ಸಾರ್ವಜನಿಕ ಸಮ್ಮೇಳನಗಳಲ್ಲೂ ಸಸ್ಯಾಹಾರವನ್ನೇ ನೀಡುವುದು ನಡೆದು ಬಂದಿದೆ. ಆದ್ದರಿಂದ ಜಿಲ್ಲಾಧಿಕಾರಿಗಳು, ಜಿಲ್ಲಾ ಮಂತ್ರಿಗಳು ಇದನ್ನು ಗಂಭೀರವಾಗಿ ಪರಿಗಣಿಸಿ ಸಮ್ಮೇಳನಕ್ಕೆ ಯಾವುದೇ ಕಳಂಕವಾಗದಂತೆ ಎಚ್ಚರ ವಹಿಸಲಿ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಹಾಳಾಗುತ್ತಿರುವ ಪಾರಂಪರಿಕ ಕಟ್ಟಡಗಳು




ಮಾನ್ಯರೆ,

ಮೈಸೂರಿನ ಪಾರಂಪರಿಕ ಕಟ್ಟಡಗಳು ಹಾಳಾಗುತ್ತಿವೆ. ಇದೇ ರೀತಿ ಬಿಟ್ಟರೆ ಮೈಸೂರು ಪಾರಂಪರಿಕ ವಿನ್ಯಾಸವನ್ನೇ ಕಳೆದುಕೊಳ್ಳುತ್ತದೆ. ಮೈಸೂರಿನ ಒಂಬತ್ತನೇ ಶ್ರೀ ಚಾಮರಾಜ ಒಡೆಯರ್ ಅವರ ಆಳ್ವಿಕೆಯಲ್ಲಿ ನಿರ್ಮಾಣ ಮಾಡಿದಂತಹ, ಸುಮಾರು 140 ವರ್ಷಗಳ ಇತಿಹಾಸ ಇರುವ ಸುಂದರ ವಿನ್ಯಾಸವನ್ನು ಹೊಂದಿದಂತಹ ಮೈಸೂರಿನ ಪ್ರಸಿದ್ಧ ದೇವರಾಜ ಮಾರುಕಟ್ಟೆ ಮತ್ತು ಲ್ಯಾನ್ಸ್‌ಡೌನ್ ಕಟ್ಟಡಗಳು ಈಗ ಶಿಥಿಲಗೊಂಡಿವೆ. 1884 ರಲ್ಲಿ ನಿರ್ಮಾಣವಾದ ಮೈಸೂರಿನ ದೇವರಾಜ ಮಾರುಕಟ್ಟೆ ಸರ್ಕಾರದ ಬೇಜವಾಬ್ದಾರಿಯಿಂದ ಹಂತ ಹಂತವಾಗಿ ಕುಸಿದು ಬೀಳುತ್ತಿದೆ. 2016 ರಲ್ಲೇ ಮಾರುಕಟ್ಟೆ ಕಮಾನು ಕುಸಿದಿತ್ತು. 2012ರಲ್ಲಿ ಲ್ಯಾನ್ಸ್‌ಡೌನ್ ಬಿಲ್ಡಿಂಗ್‌ನ ಒಂದು ಮಳಿಗೆ ಚಾವಣಿ ಕುಸಿದು 4 ಜನ ಪ್ರಾಣ ಕಳೆದುಕೊಂಡರು. ಹೀಗೆ ಸರ್ಕಾರದ ಬೇಜವಾಬ್ದಾರಿಯಿಂದ ಮೈಸೂರಿನ ಪಾರಂಪರಿಕ ಕಟ್ಟಡಗಳು ಒಂದರ ಹಿಂದೆ ಒಂದು ಹಾಳಾಗುತ್ತಿವೆ. ಆದಷ್ಟು ಬೇಗ ಆ ಕಟ್ಟಡಗಳನ್ನು ಪುನರ್‌ನಿರ್ಮಾಣ ಮಾಡದಿದ್ದರೆ ನಮ್ಮ ಪಾರಂಪರಿಕ ವಿನ್ಯಾಸಗಳನ್ನು ನೋಡುವ ಭಾಗ್ಯವನ್ನೇ ಕಳೆದುಕೊಳ್ಳುತ್ತೇವೆ. ಅಲ್ಲದೆ, ಮೈಸೂರಿನ ಇನ್ನೂ ಕೆಲವು ಪಾರಂಪರಿಕ ಕಟ್ಟಡಗಳಿಗೂ ಇದೇ ಪರಿಸ್ಥಿತಿ ಎದುರಾಗುತ್ತಿದೆ. ಸರ್ಕಾರ ಇನ್ನಾದರೂ ಎಚ್ಚೆತ್ತುಕೊಂಡು ಆದಷ್ಟು ಬೇಗ ಹಾಳಾಗಿರುವ ಕಟ್ಟಡಗಳನ್ನು ಪುನರ್ ನಿರ್ಮಾಣ ಮಾಡಿ ಪಾರಂಪರಿಕತೆಯನ್ನು ಉಳಿಸಿಕೊಳ್ಳಬೇಕೆಂದು ಮನವಿ.

– ಮಹಾಂತೇಶ್ ಬಸಪ್ಪ, ಬಳ್ಳೂರುಹುಂಡಿ ಗ್ರಾಮ,

ಕಾಡಿನಿಂದ ನಾಡಿಗೆ ಬಂದ ಆನೆಗಳು, ಫಸಲು ನಾಶ



ಮಾನ್ಯರೆ,

ಮೈಸೂರಿನ ಕೆಲವು ಪ್ರದೇಶಗಳಲ್ಲಿ ಆನೆಗಳ ಹಿಂಡು ಹೊಲ–ಗದ್ದೆಗಳಿಗೆ ನುಗ್ಗಿ ಫಸಲನ್ನು ನಾಶ ಮಾಡುತ್ತಿವೆ. ಸಾಲ–ಸೋಲ ಮಾಡಿ ಬೆಳೆದ ಫಸಲನ್ನು ನಾಶ ಮಾಡಿರುವುದು ರೈತರನ್ನು ಸಂಕಷ್ಟಕ್ಕೆ ದೂಡಿದೆ. ಅರಣ್ಯ ಅಧಿಕಾರಿಗಳು ಆನೆಗಳನ್ನು ಕಾಡಿಗಟ್ಟಲು ಪ್ರಯತ್ನಪಡುತ್ತಿದ್ದಾರೆ. ಸುತ್ತಮುತ್ತಲ ಗ್ರಾಮದ ಜನರು ಎಚ್ಚರದಿಂದಿರಬೇಕಿದೆ.

–ಕಿಶೋರ್ ಸಿ. ಮೈಸೂರು

ಕಾಯಕವೇ ಕೈಲಾಸಕ್ಕೆ ದಾರಿಯಾಗದಿರಲಿ...!

ಕಾಯಕಯೋಗಿ ಬಸವಣ್ಣನವರು 'ಕಾಯಕವೇ ಕೈಲಾಸ' ಎಂದು ಸಂದೇಶ ನೀಡಿದರೆ ಭಾರತರತ್ನ ಸರ್ ಎಂ.ವಿಶ್ವೇಶ್ವರಯ್ಯನವರು 'ಕುಳಿತು ತುಕ್ಕು ಹಿಡಿಯುವುದಕ್ಕಿಂತ ದುಡಿದು ಸಾಯುವುದೇ ಲೇಸು, ಎಂಬುದಾಗಿ ಕರೆ ಕೊಟ್ಟರು. ಗಾದೆ ಮಾತೊಂದಿದೆ 'ದುಡಿಮೆಯೇ ದುಡ್ಡಿನ ತಾಯಿ'. ಯಾರೂ ಎಲ್ಲಿಯೂ ಹೇಳಿಲ್ಲ ಕುಳಿತು ಮಜಾ ಮಾಡೆಂದು. ಶ್ರಮವಹಿಸಿ ದುಡಿದಾಗಲೇ ಬಾಳು ಬಂಗಾರವಾಗುವುದು. ಪ್ರಜಾಪ್ರಭುತ್ವ ದೇಶದ ಅಭಿವೃದ್ಧಿಯು ಪ್ರಜೆಗಳ ದುಡಿಮೆ ಮೇಲೆಯೇ ನಿಂತಿರುವುದು, ದೇಶದ ಅಭಿವೃದ್ಧಿಗಾಗಿ ದುಡಿಮೆಯ ಮೂಲಕ ಕೈಜೋಡಿಸುವುದು ಪ್ರತಿಯೊಬ್ಬರ ಕರ್ತವ್ಯ. ಮುಖ್ಯವಾಗಿ ಯುವಕರು ಹೆಚ್ಚು ದುಡಿಯಬೇಕು.

ನಿಜ ಮಹಾನ್ ಸಾಧಕರು, ಪುಣ್ಯ ಪುರುಷರು ಆಡುವ ಮಾತುಗಳು ಹಾಗೂ ಗಾದೆಗಳಲ್ಲಿ ಹೇಳಿರುವುದೆಲ್ಲ ಸತ್ಯ ಹಾಗೂ ಸಮಾಜವೂ ಹಾಗೆಯೇ ನಡೆಯುತ್ತಿರುವುದು. ಅವರುಗಳ ಜೇನ್ನುಡಿಯ ಉದ್ದೇಶವು ಸ್ವಹಿತವಾಗಿರುವುದಿಲ್ಲ, ನುಡಿಯ ಒಳಾರ್ಥದಲ್ಲಿ ಅಡಗಿರುವುದು ಸಮಾಜದ ಉದ್ಧಾರವಷ್ಟೆ. ಸೋಮಾರಿ ಆದವನು ತನ್ನ ಜೀವನದಲ್ಲಿ ಎಂದಿಗೂ ಉದ್ಧಾರವಾಗುವುದಿಲ್ಲ ಹಾಗೂ ಅಂಥವರಿಂದ ಸಮಾಜಕ್ಕೆ ಕೊಡುಗೆಗಿಂತ ಕೆಡುಕೇ ಹೆಚ್ಚು. ಇಲ್ಲಿ ಪ್ರಶ್ನೆ ಇರುವುದು ಸಾಧಕರೆಲ್ಲರೂ ಯುವಕರನ್ನು ಸಮಯ ವ್ಯರ್ಥ ಮಾಡದೆ ಶ್ರಮವಹಿಸಿ ದುಡಿಯಿರೆಂದು ಹೇಳಿದರೆ ಹೊರತು ದಿನದಲ್ಲಿ ಇಂತಿಷ್ಟೆ ಗಂಟೆಗಳು ಕೆಲಸ ಮಾಡೆಂದು ಯಾರೂ, ಎಲ್ಲಿಯೂ ಹೇಳಲಿಲ್ಲ.

ಹಿಂದೆ ಈಗಿನಂತೆ ಸಾಫ್ಟ್‌ವೇರ್ ಕಂಪನಿಗಳು ಇರಲಿಲ್ಲ. ಟೆಕ್ಕಿಗಳು ಎಂದರೆ ಯಾರು, ಅದೊಂದು ತಿಳಿಯದ ಪದವಿ. ಅವರುಗಳು ಹುಟ್ಟೇ ಇರಲಿಲ್ಲ. ಕಾರ್ಮಿಕರು ಹಾಗೂ ನೌಕರರೆಂದರೆ ಗೃಹಕೈಗಾರಿಕೆಗಳು, ಕಾರ್ಖಾನೆಗಳು ಮತ್ತು ಸರ್ಕಾರಿ ಕಚೇರಿಗಳಲ್ಲಿ ದುಡಿಯುವವರು ಮಾತ್ರ, ನಿಯಮಾವಳಿಯ ಅನುಸಾರ ದಿನಕ್ಕೆ ಎಂಟು ಗಂಟೆ ದುಡಿಯುವ ಅವಧಿ, ಅದಕ್ಕಿಂತ ಹೆಚ್ಚು ಕೆಲಸ ಮಾಡಿದರೆ ಅದಕ್ಕೆ ಪ್ರತ್ಯೇಕ ಭತ್ಯೆಗಳು ಇರುತ್ತಿದ್ದವು. ನಿಗದಿ ಆಗಿದ್ದ ಸಮಯ ಎಂಟು ಗಂಟೆ ಅದರಾಚೆಗೆ ದುಡಿಯುವ ಕರ್ಮ ಯಾರಿಗೂ ಇರಲಿಲ್ಲ, ಕೌಟುಂಬಿಕ ಹಾಗೂ ಸಾಮಾಜಿಕ ಹಿತದೃಷ್ಟಿಯಿಂದ ಅವಧಿ ಮೀರಿದ ದುಡಿಮೆಯು ಸಮಂಜಸವೂ ಅಲ್ಲ. ಕೆಲವು ತುರ್ತು ಸಂದರ್ಭಗಳಲ್ಲಿ ಮಿತಿಮೀರಿ ಹೆಚ್ಚು ಕೆಲಸ ಮಾಡುತ್ತಿದ್ದರು, ಅದು ಅನಿವಾರ್ಯವಾಗಿತ್ತು.

ಸರ್ಕಾರಿ ನೌಕರಿಯಲ್ಲಿ ದುಡಿಮೆಗೆ ತಕ್ಕ ವೇತನ ಇದ್ದರೂ ಕುಟುಂಬ ನಿರ್ವಹಣೆಗೆ ಸಾಕಾಗುತ್ತಿರಲಿಲ್ಲ. ಇತ್ತೀಚಿನ ದಿನಗಳಲ್ಲಿ ತೆಗೆದುಕೊಳ್ಳುವ ವೇತನ ಪರವಾಗಿಲ್ಲವಾದರೂ ಎಷ್ಟೇ ಉಳಿತಾಯ ಮಾಡಿದರೂ ಸಣ್ಣದೊಂದು ನಿವೇಶನ ಕೊಳ್ಳಲಾಗುವುದಿಲ್ಲ. ಸಾಫ್ಟ್‌ವೇರ್ ಉದ್ಯೋಗಿಗಳಿಗೂ ಇತರೆ ಉದ್ಯೋಗಿಗಳಿಗೂ ಇರುವ ವೇತನದ ತಾರತಮ್ಯ ದೊಡ್ಡದಿದೆ ಆ ಕಾರಣದಿಂದಾಗಿಯೇ ಕೆಲವು ಸರ್ಕಾರಿ ಕೆಲಸಗಾರರು ಉದ್ಯೋಗದ ಜೊತೆಗೆ ಇತರೆ ಲಾಭದಾಯಕ ಕೆಲಸಗಳನ್ನು ಕಚೇರಿ ಆಚೆಗೂ ಮಾಡುವುದುಂಟು. ಅವರುಗಳು ಎಷ್ಟೇ ದುಡಿದರೂ ವಿಶ್ರಾಂತಿ ಇಲ್ಲದೆ ಹೆಚ್ಚು ಸಮಯ ದುಡಿಯುವುದಿಲ್ಲ.



ಇಂದಿನ ತಂತ್ರಜ್ಞಾನ ಆದಾರಿತ ಬದುಕಿನಲ್ಲಿ ಅದ್ಯಾವ ಸಂಪತ್ತಿಗೆ ಕಂಪ್ಯೂಟರ್ ಬಂದು ಎಲ್ಲರೊಳಗೆ ಒಂದಾಯಿತೋ ಅಂದಿನಿಂದ ಯಥೇಚ್ಛವಾಗಿ ಹಣವಿದ್ದರೂ ನೆಮ್ಮದಿ ಉಳಿದಿಲ್ಲ. ಸಾಫ್ಟ್‌ವೇರ್ ಅಭಿವೃದ್ಧಿಯಾದಂತೆ ಎಲ್ಲವೂ ಆ ಮೂಲಕವೇ ವ್ಯವಹಾರಗಳು ಕೆಲವೊಂದು ಹೊರತುಪಡಿಸಿ. ಪ್ರಾರಂಭದಲ್ಲಿ ಮನುಷ್ಯನ ಕೆಲಸವನ್ನು ಇದು ಕಿತ್ತುಕೊಳ್ಳುತ್ತದೆ, ಯಾರಿಗೂ ಕೆಲಸ ಇಲ್ಲದೆ ಜೀವನಕ್ಕೆ ಕಷ್ಟವಾಗುವುದೆಂದು ಅನುಮಾನಿಸಲಾಗಿತ್ತು. ಆದರೆ ಅದು ಸುಳ್ಳಾಯಿತು. ಸದ್ಯ ಕೆಲಸಕ್ಕೆ ಕಾರ್ಮಿಕ ಕೆಲಸಗಾರರು ಸಿಗುತ್ತಿಲ್ಲವಾಗಿದೆ, ವಿದ್ಯಾವಂತರಿಗೆ ಬರವಿಲ್ಲ ಬಿಡಿ.

'ದೇಶದ ಅಭಿವೃದ್ಧಿಗಾಗಿ ಯುವಕರು ವಾರಕ್ಕೆ 70 ಗಂಟೆ ಅಥವಾ ದಿನವೂ 14 ಗಂಟೆ ಕೆಲಸ ಮಾಡಬೇಕು, ನನ್ನ ದುಡಿಮೆಯ ದಿನಗಳಲ್ಲಿ ಬೆಳಿಗ್ಗೆ 6.30 ರಿಂದ ರಾತ್ರಿ 8.30ರವರೆಗೆ ಕೆಲಸ ಮಾಡುತ್ತಿದ್ದೆ, ಪ್ರಧಾನಿಯವರು ವಾರಕ್ಕೆ 100 ಗಂಟೆ ಕೆಲಸ ಮಾಡುತ್ತಾರೆ' ಎಂದು ಇನ್‌ಫೋಸಿಸ್‌ನ ಎನ್.ಆರ್.ನಾರಾಯಣ ಮೂರ್ತಿಯವರು ಯುವ ಜನತೆಗೆ ಸಲಹೆ ನೀಡಿದ್ದಾರೆ.

ಸತತವಾಗಿ ದಿನದಲ್ಲಿ 14 ಗಂಟೆಗಳು ಕುಳಿತಲ್ಲೇ ಕುಳಿತು ಟೆಕ್ಕಿಗಳು ಕೆಲಸ ಮಾಡಿದರೆ ಅವರ ಕಣ್ಣು, ಕಿವಿ, ಬೆನ್ನು, ಸೊಂಟ, ಮೆದುಳು, ಕೈಕಾಲುಗಳು ಏನಾಗಬೇಡ. 14 ಗಂಟೆ ಅಂದರೆ ಮುಂಜಾನೆ 6.30 ರಿಂದ ರಾತ್ರಿ 8.30 ವರೆಗೆ ಕೆಲಸ ಮಾಡಬೇಕಾಗುತ್ತದೆ. ಯಾರಿಗೂ ಕಚೇರಿಗಳ ಸಮೀಪದಲ್ಲೇ ಮನೆಗಳಿರುವುದಿಲ್ಲ, ಬೆಂಗಳೂರಿನಂತಹ ನಗರಗಳಲ್ಲಿ ದೂರದಲ್ಲಿರುವ ಮನೆಗಳಿಂದ ವಾಹನಗಳ ದಟ್ಟಣೆಯ ರಸ್ತೆಗಳ ಮೂಲಕ ಬಂದು ಹೋಗುವುದಕ್ಕೆ ಆಗುವ ಸಮಯ ಗಣನೆಗೆ ತೆಗೆದುಕೊಂಡರೆ ಸಂಸಾರಕ್ಕೆಂದು ಉಳಿಯುವ ಗಂಟೆಗಳೆಷ್ಟು, ಮನೆಗೆ ಬರುವ ಬದಲು ಕಚೇರಿಯಲ್ಲೇ ಉಳಿಯುವುದು ಒಳಿತು, ಇಂಥವರಿಗೆ ಮಡದಿ ಮಕ್ಕಳೇಕೆ?, ಮಡದಿಯೂ ಸಹ ಸಾಫ್ಟ್‌ವೇರ್ ಇಂಜಿನಿಯರ್, ಅವಳೂ ಸಹ ಬೇರೊಂದು ಕಂಪನಿಯಲ್ಲಿ ಕೆಲಸ ಮಾಡುತ್ತಿರುತ್ತಾಳೆ. ಕಂಪ್ಯೂಟರ್ ಮುಂದೆ 14 ಗಂಟೆಗಳು ಕುಳಿತು ಇವರಿಬ್ಬರ ತಲೆಗಳು ಕೆಟ್ಟು ಗೊಬ್ಬರವಾಗಿರುತ್ತದೆ ಮುಂದೆ ಮನೆಯೊಳಗೆ ನೆಮ್ಮದಿಯಾಗಿ ಇರುವುದಾದರೂ ಹೇಗೆ?.

> "ದೇಶದ ಅಭಿವೃದ್ಧಿಗಾಗಿ ಯುವಕರು ವಾರಕ್ಕೆ 70 ಗಂಟೆ ಅಥವಾ ದಿನವೂ 14 ಗಂಟೆ ಕೆಲಸ ಮಾಡಬೇಕು, ನನ್ನ ದುಡಿಮೆಯ ದಿನಗಳಲ್ಲಿ ಬೆಳಿಗ್ಗೆ 6.30 ರಿಂದ ರಾತ್ರಿ 8.30ರವರೆಗೆ ಕೆಲಸ ಮಾಡುತ್ತಿದ್ದೆ, ಪ್ರಧಾನಿಯವರು ವಾರಕ್ಕೆ 100 ಗಂಟೆ ಕೆಲಸ ಮಾಡುತ್ತಾರೆ' ಎಂದು ಇನ್‌ಫೋಸಿಸ್‌ನ ಎನ್.ಆರ್. ನಾರಾಯಣಮೂರ್ತಿಯವರು ಯುವ ಜನತೆಗೆ ಸಲಹೆ ನೀಡಿದ್ದಾರೆ.

ಇದು ಜಾರಿಯಾದರೆ ಪ್ರತೀ ಸಾಫ್ಟ್‌ವೇರ್ ಕಚೇರಿಗಳ ಬಳಿ ಟೆಕ್ಕಿಗಳಿಗಾಗಿಯೇ ಒಂದು ಆಸ್ಪತ್ರೆ ತೆರೆಯಬೇಕಾಗುತ್ತದೆ, 14 ಗಂಟೆಗಳ ಕೆಲಸದ ಪರಿಣಾಮವಾಗಿ ಉಂಟಾಗುವ ಮಾನಸಿಕ ಒತ್ತಡದ ರೋಗಿಗಳ ಹೆಚ್ಚಳದಿಂದ ನಿಮಾನ್ಸ್ ಆಸ್ಪತ್ರೆಯು ಸಹ ಒತ್ತಡಕ್ಕೆ ಒಳಗಾಗಬಹುದು..

ಸನ್ಮಾನ್ಯ ಪ್ರಧಾನಿಗಳು ಅಥವಾ ಎನ್.ಆರ್.ನಾರಾಯಣಮೂರ್ತಿಯವರು ವಾರಕ್ಕೆ 100 ಗಂಟೆಗಳು ಕೆಲಸ ಮಾಡುವುದಕ್ಕೆ ಸಮರ್ಥರಿರಬಹುದು. ಆದರೆ, ಅನುಷ್ಠಾನಕ್ಕೆ ಸಾದುವೆ ಹಾಗೂ ಸಾಧ್ಯವೇ?. ವರದಿ ಹೇಳುತ್ತದೆ. ಯುವಕರಲ್ಲಿ ಸಂತಾನಕ್ಕೆ ಅಗತ್ಯವಿರುವ ಫಲವತ್ತತೆಯು ಕಡಿಮೆ ಆಗುತ್ತಿದೆ. 2050ರ ಹೊತ್ತಿಗೆ ಜನಸಂಖ್ಯೆಯಲ್ಲಿ ಗಣನೀಯವಾಗಿ ಕುಂಠಿತವಾಗುವುದೆಂದು, ಇನ್ನು ಇದೂ ಸೇರಿದರೆ ಭವಿಷ್ಯದಲ್ಲಿ ಜನಸಂಖ್ಯೆ ಕಡಿಮೆ ಆಗುವುದರ ಜೊತೆಗೆ ಇಡೀ ಮಾನವ ಜನಾಂಗವೇ ಅನಾರೋಗ್ಯ ಪೀಡಿತರಾಗಬಹುದು. ಈಗಲೇ ಟೆಕ್ಕಿಗಳ ಜೀವನದಲ್ಲಿ ಸಾಮರಸ್ಯ ಎನ್ನುವುದು ಹಾಳಾಗಿದೆ, ಸಂಬಳ ಕೋಟಿಯಲ್ಲಿ ಎಣಿಸುತ್ತಾರೆ. ಹಿಂದಿನಂತೆ ಕ್ಯಾಶ್ ಸಿಸ್ಟಮ್ ಇಂದಿದ್ದರೆ ವೇತನದ ದಿನ ಗೋಣಿ ಚೀಲ ತಂದು ತುಂಬಿಕೊಂಡು ಹೋಗಬೇಕಾಗುತ್ತಿತ್ತು

ಒಬ್ಬರಿಗೇ 14 ಗಂಟೆ ಕೆಲಸ ಕೊಡುವ ಬದಲು ವಿಭಜಿಸಿ 8 ಗಂಟೆ ಮೀರದ ರೀತಿ ನೋಡಿಕೊಂಡರೆ ಸ್ನಾತಕೋತ್ತರ ಪದವಿ ಪಡೆದು ಉದ್ಯೋಗವಿಲ್ಲದೆ ಇರುವ ನಿರುದ್ಯೋಗಿಗಳಿಗೂ ಕೆಲಸ ಕೊಡಬಹುದಲ್ಲ. ತಿನ್ನುತ್ತಿರುವವರಿಗೇ ಎಷ್ಟು ತಿನ್ನಿಸುತ್ತೀರಿ?, ಸಾಫ್ಟ್‌ವೇರ್ ಸಾಮ್ರಾಜ್ಯದ ದಿಗ್ಗಜರೇ ನಿಮಗೇನಾದರೂ ತಿಳಿದಿದೆಯೇ ಸಮಾಜವು ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂಬುದು. ಸೃಜನಶೀಲತೆ, ಆವಿಷ್ಕಾರ, ಅಭಿವೃದ್ಧಿ, ತಂತ್ರಜ್ಞಾನ ಎಂದೆಲ್ಲಾ ಹೇಳುತ್ತಾ ದೊಡ್ಡ ಕಂದಕವನ್ನು ಸೃಷ್ಟಿಸಿದ್ದೀರಿ. ನೀವು ಕೊಡುವ ಕೋಟಿಕೋಟಿ ಸಂಬಳವನ್ನು ಬಿಡುವು ಇಲ್ಲದ ಕಾರಣ ತಿನ್ನಲಾಗದೆ, ಮಜಾ ಮಾಡಲಾಗದೆ ಭೂಮಿಯನ್ನು ಕೊಂಡುಕೊಳ್ಳುವ ಮೂಲಕ ಹಣವನ್ನು ಹೂಡಿಕೆ ಮಾಡುತ್ತಿದ್ದಾರೆ. ತತ್ಪರಿಣಾಮ ಜನಸಾಮಾನ್ಯರು ಅಡಿ ಜಾಗವನ್ನೂ ಕೊಳ್ಳಲಾಗುತ್ತಿಲ್ಲ.

ದಿಢೀರ್ ಅಭಿವೃದ್ಧಿ ಆಗಬೇಕು, ನಮ್ಮ ದೇಶ ವಿಶ್ವಕ್ಕೇ ನಂಬರ್ ಒನ್ ಆಗಬೇಕೆಂಬ ಬಯಕೆ. ಈ ಕಾರಣದಿಂದಲೇ ಅಲ್ಲವೆ ನಮ್ಮ ದೇಶದ ರಾಜದಾನಿ ದೆಹಲಿಯು ವಾಯುಮಾಲಿನ್ಯದಿಂದ ಬಸವಳಿದು ಏದುಸಿರು ಬಿಡುತ್ತಿರುವುದು.


14 ಗಂಟೆ ಕೆಲಸದ ಬದಲು 24 ಗಂಟೆಯೂ ಮಾಡುವಂತಾಗಲಿ ಇನ್ನೂ ಬೇಗ ನಮ್ಮ ದೇಶವನ್ನು ಮುಂದೆ ತೆಗೆದುಕೊಂಡು ಹೋಗಬಹುದಲ್ಲ!. ಭ್ರಮೆಯಿಂದ ಹೊರಬನ್ನಿ ಅತೀ ವೇಗ ಒಳ್ಳೆಯದಲ್ಲ. ನಿಧಾನವೇ ಪ್ರಧಾನ, ವೇಗದಲ್ಲಿ ಸೆಕೆಂಡ್ ಯಾಮಾರಿದರೆ ಆಗುವ ಅನಾಹುತವೂ ನಿಮಗೆ ತಿಳಿದಿದೆ ಅಂಥದ್ದರಲ್ಲಿ ಯುವಕರಿಗೆ 14 ಗಂಟೆಗಳ ಹೊರೆ ಏತಕ್ಕೆ?.

ಬಸವಣ್ಣನವರು ಕೊಟ್ಟ ಸಂದೇಶವು 'ಕಾಯಕವೇ ಕೈಲಾಸ'ವಾಗಿಯೇ ಇರಲಿ. ಅದಕ್ಕಿಂತ ಮುಂದೆ ಹೋಗುವುದು ಬೇಡ. ಸಾಧಕರ ಅಭಿಪ್ರಾಯವನ್ನು ಪರಿಗಣಿಸಿ ಹೊಸ ನಿಯಮವನ್ನು ಹೇರುವ ಮೂಲಕ 'ಕಾಯಕವೇ ಕೈಲಾಸಕ್ಕೆ ದಾರಿ' ಆಗುವಂತೆ ಮಾಡದಿರಿ, ಪ್ಲೀಸ್ ನಮ್ಮ ಯುವಪೀಳಿಗೆಯು ತಮ್ಮ ಜೀವಿತಾವಧಿಯಲ್ಲಿ ಮದುವೆ, ಸಂಸಾರ, ಮಕ್ಕಳು ಇತ್ಯಾದಿಗಳನ್ನು ನೋಡಲಿ ಬಿಡಿ!.



ಮಿರ್ಲೆ ಚಂದ್ರಶೇಖರ
ಮೊ: 9916129654

ಶಿಲ್ಪಿ ಅರುಣ್ ಯೋಗಿರಾಜ್‌ಗೆ ಅಭಿನಂದನೆ...



ಮೈಸೂರಿನ ಕುವೆಂಪುನಗರದಲ್ಲಿರುವ ಸ್ಪಂದನ ಸಂಸ್ಥೆ ವತಿಯಿಂದ ಏರ್ಪಡಿಸಿದ್ದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಶಿಲ್ಪಿ ಅರುಣ್ ಯೋಗಿರಾಜ್ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು. ಅಲ್ಲದೆ, ಸ್ಪಂದನ ವತಿಯಿಂದ ಇತ್ತೀಚೆಗೆ ನಾಲ್ಕು ಫಲಾನುಭವಿಗಳಿಗೆ ಗಾಲಿ ಕುರ್ಚಿಗಳನ್ನು ವಿತರಿಸಲಾಯಿತು. ಈ ವೇಳೆ ಸಂಸ್ಥೆಯ ಎಂ.ಜಯಶಂಕರ್ ಇನ್ನಿತರರಿದ್ದರು.

ದರ್ಶನ್ ಧ್ರುವನಾರಾಯಣ್‌ಗೆ ಸಚಿವ ಸ್ಥಾನ ಕಲ್ಪಿಸಲು ಆಗ್ರಹ

ಮೈಸೂರು,ಡಿ.9(ಎಂಟಿವೈ)– ನಂಜನಗೂಡು ಮೀಸಲು ವಿಧಾನಸಭಾ ಕ್ಷೇತ್ರದ ಶಾಸಕ ದರ್ಶನ್ ಧ್ರುವನಾರಾಯಣ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ದಲಿತ ಮುಖಂಡರು ಒತ್ತಾಯಿಸಿದ್ದಾರೆ.



ದರ್ಶನ್

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮುಖಂಡ ವಿ.ಸಿ. ಶ್ರೀನಿವಾಸ ಮೂರ್ತಿ ಮಾತನಾಡಿ, ಶಾಸಕ ದರ್ಶನ್ ಧ್ರುವನಾರಾಯಣ್ ಅವರು ಪಕ್ಷ ಸಂಘಟನೆಯಲ್ಲಿ ಹೆಚ್ಚು ಕೆಲಸ ಮಾಡುತ್ತಿದ್ದಾರೆ. ಇವರ ತಂದೆ ದಿ. ಧ್ರುವನಾರಾಯಣ್ ಅವರ ಹಾದಿಯಲ್ಲೇ ಸಾಗುತ್ತಿದ್ದಾರೆ.

ದಿನದಲ್ಲಿ 14 ಗಂಟೆ ಕ್ಷೇತ್ರದ ಅಭಿವೃದ್ಧಿಗಾಗಿ ಶ್ರಮಿಸುತ್ತಿದ್ದಾರೆ. ಹೀಗಾಗಿ ಇವರ ಸೇವೆ ರಾಜ್ಯಕ್ಕೆ ವಿಸ್ತರಿಸುವಂತಾಗಲು ಇವರಿಗೆ ಸಚಿವ ಸ್ಥಾನ ನೀಡಬೇಕೆಂದು ಕೆಪಿಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಸೋನಿಯಾಗಾಂಧಿ, ರಾಹುಲ್ ಗಾಂಧಿ ಹಾಗೂ ಇನ್ನಿತರರಿಗೆ ಮನವಿ ಮಾಡುವುದಾಗಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ವಿ.ಆರ್. ವಿಜಯಕುಮಾರ್, ಮಂಜುನಾಥ್, ಹುಚ್ಚಯ್ಯ, ಪುಟ್ಟಬುದ್ಧಿ, ಜಗದೀಶ್ ಇದ್ದರು.

ಮಹಾರಾಷ್ಟ್ರ ವಿಧಾನಸಭೆಯಲ್ಲಿ ವಿಶ್ವಾಸಮತ ಸಾಬೀತು ಮಾಡಿದ ಫಡ್ನವಿಸ್

ಮುಂಬೈ: ದೇವೇಂದ್ರ ಫಡ್ನವಿಸ್ ನೇತೃತ್ವದ ಮಹಾಯುತಿ ಸರ್ಕಾರ ಸೋಮವಾರ ಮಹಾರಾಷ್ಟ್ರ ವಿಧಾನಸಭೆಯಲ್ಲಿ ವಿಶ್ವಾಸಮತ ಸಾಬೀತು ಮಾಡಿದೆ.

ಇಂದು ವಿಧಾನಸಭೆಯಲ್ಲಿ ಶಿವಸೇನಾ ಶಾಸಕ ಉದಯ್ ಸಾಮಂತ್ ಮತ್ತು ಇತರರು ಮಂಡಿಸಿದ ವಿಶ್ವಾಸಮತ ಯಾಚನೆಯನ್ನು ಧ್ವನಿ ಮತದಿಂದ ಅಂಗೀಕರಿಸಲಾಯಿತು. ವಿಶ್ವಾಸಮತ ಯಾಚನೆಗೆ ಸದನ ಅನುಮೋದನೆ ನೀಡಿದೆ ಎಂದು ಸ್ಪೀಕರ್ ರಾಹುಲ್ ನಾರ್ವೇಕರ್ ಘೋಷಿಸಿದರು. 288 ಸದಸ್ಯ ಬಲದ ರಾಜ್ಯ ವಿಧಾನ ಸಭೆಯಲ್ಲಿ ಬಿಜೆಪಿ–ಶಿವಸೇನೆ–ಎನ್‌ಸಿಪಿ 'ಮಹಾಯುತಿ' ಒಕ್ಕೂಟವು 230 ಸ್ಥಾನಗಳ ಹೊಂದಿದೆ. ಮಹಾರಾಷ್ಟ್ರ ವಿಧಾನ ಸಭೆಯಲ್ಲಿ ಬಹುಮತ 144 ಶಾಸಕರ ಬೆಂಬಲದ ಅಗತ್ಯ ಇದೆ. "ವಿಶ್ವಾಸಮತ ಬಹುಮತದೊಂದಿಗೆ ಅಂಗೀಕಾರವಾಗಿದೆ.



ವಿಧಾನಸಭೆ ಈಗ ಮುಂದೂಡಲ್ಪಡುತ್ತದೆ ಮತ್ತು ಮಹಾರಾಷ್ಟ್ರ ರಾಜ್ಯಪಾಲರ ಭಾಷಣದ ನಂತರ ಪುನರಾರಂಭವಾಗಲಿದೆ ಎಂದರು. ಫಡ್ನವಿಸ್ ಡಿ.5ರಂದು 3ನೇ ಬಾರಿಗೆ ಮಹಾರಾಷ್ಟ್ರ ಸಿಎಂ ಆಗಿ ಪ್ರಮಾಣ ವಚನ ಸ್ವೀಕರಿಸಿದ್ದರು. ಮುಂಬೈನಲ್ಲಿ ಪ್ರಧಾನಿ ಮೋದಿ ಭಾಗವಹಿಸಿದ್ದ ಅದ್ಧೂರಿ ಸಮಾರಂಭದಲ್ಲಿ ಏಕನಾಥ್ ಶಿಂಧೆ ಮತ್ತು ಅಜಿತ್ ಪವಾರ್ ಅವರು ಉಪಮುಖ್ಯಮಂತ್ರಿಗಳಾಗಿ ಪ್ರಮಾಣ ವಚನ ಸ್ವೀಕರಿಸಿದ್ದರು.

ವಿದ್ಯಾರ್ಥಿನಿಲಯಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಮೈಸೂರು,ಡಿ.9– 2024–25ನೇ ಸಾಲಿನ ಸಮಾಜ ಕಲ್ಯಾಣ ಇಲಾಖೆ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾತಿ ಪಡೆಯಲು ಬಯಸುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು https://swdhmis.karnataka.gov.in/#/registration ಮೂಲಕ ಡಿ.31ರೊಳಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ನಂತರ ಆನ್‌ಲೈನ್ ಅರ್ಜಿ ಪ್ರತಿಯೊಂದಿಗೆ ದೃಢೀಕೃತ ದಾಖಲೆಗಳನ್ನು ಆಯ್ಕೆ ಮಾಡಿರುವ ವಿದ್ಯಾರ್ಥಿನಿಲಯಗಳ ಮೇಲ್ವಿಚಾರಕರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821–2520910 ಅನ್ನು ಸಂಪರ್ಕಿಸಬಹುದು.

ಬಂಡುಕೋರರ ವಶವಾದ ಸಿರಿಯಾ: ಬಿಕ್ಕಟ್ಟಿಗೆ ಶಾಂತಿಯುತ ಪರಿಹಾರ ಕಂಡುಕೊಳ್ಳಿ

ಭಾರತ ಸಲಹೆ!

ನವದೆಹಲಿ: ಆಂತರಿಕ ಸಂಘರ್ಷದಿಂದ ನಲುಗುತ್ತಿರುವ ಸಿರಿಯಾ ಇಸ್ಲಾಮಿಸ್ಟ್ ಬಂಡುಕೋರರ ವಶವಾದ ಅಧಿಕಾರವನ್ನು ವಶಪಡಿಸಿಕೊಂಡ ನಂತರ ಅಲ್ಲಿನ ಬಿಕ್ಕಟ್ಟಿಗೆ ಶಾಂತಿಯುತ ಪರಿಹಾರದ ಮಹತ್ವವನ್ನು ಭಾರತ ಒತ್ತಿ ಹೇಳಿದೆ. ಈ ನಿರ್ಣಾಯಕ ಘಟ್ಟದಲ್ಲಿ ಸಿರಿಯಾದ ಏಕತೆ, ಸಾರ್ವಭೌಮತೆ ಮತ್ತು ಪ್ರಾದೇಶಿಕ ಸಮಗ್ರತೆಗೆ ಆದ್ಯತೆ ನೀಡುವ ಎಲ್ಲಾ ಪಕ್ಷಗಳ ಅಗತ್ಯ ಕುರಿತು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿದೆ.

ಸದ್ಯ ನಡೆಯುತ್ತಿರುವ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಸಿರಿಯಾದಲ್ಲಿ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದ್ದೇವೆ. ಈ ಪ್ರದೇಶದಲ್ಲಿನ ತ್ವರಿತಗತಿಯ ಸನ್ನಿವೇಶದ ಬಗ್ಗೆ ಭಾರತ ಕಳವಳ ಹೊಂದಿದೆ. ಸಿರಿಯಾದ ರಾಜಕೀಯ ಶಾಂತಿಯುತ, ಅಂತರ್ಗತ ಹಾಗೂ ಸಿರಿಯನ್ ಸಮಾಜದ ಎಲ್ಲಾ ವರ್ಗಗಳ ಆಕಾಂಕ್ಷೆಗಳು ಮತ್ತು ಹಿತಾಸಕ್ತಿಗಳನ್ನು ಗೌರವಿಸಬೇಕು ಎಂದು ಹೇಳಿಕೆಯಲ್ಲಿ ಸಲಹೆ ನೀಡಿದೆ.



ಹಮಾಸ್‌ನ ಕ್ಲಾಕ್ ಟವರ್ ಬಳಿ ಸಂಭ್ರಮಾಚರಣೆ ನಡೆಸುತ್ತಿರುವ ಬಂಡುಕೋರರು

ಡಮಾಸ್ಕಸ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಜಾಗರೂಕವಾಗಿದೆ. ಸಿರಿಯಾದಲ್ಲಿರುವ ಭಾರತೀಯರ ಸುರಕ್ಷತೆ ಮತ್ತು ಭದ್ರತೆಗಾಗಿ ಅಲ್ಲಿನ ಭಾರತೀಯ ಸಮುದಾಯದೊಂದಿಗೆ ನಿಕಟ ಸಂಪರ್ಕದಲ್ಲಿರುವುದಾಗಿ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಭರವಸೆ ನೀಡಿದೆ.

ಸಿರಿಯನ್ ಬಂಡುಕೋರರು ಭಾನುವಾರ ಡಮಾಸ್ಕಸ್‌ಗೆ ಲಗ್ಗೆ ಹಾಕುವುದರೊಂದಿಗೆ ಅಧ್ಯಕ್ಷ ಬಶರ್ ಅಲ್–ಅಸ್ಸಾದ್ ಎರಡು ದಶಕಗಳ ಆಡಳಿತವನ್ನು ಕೊನೆಗೊಳಿಸಿ ಪಲಾಯನವಾದರು. ಅಸ್ಸಾದ್ ಮತ್ತು ಅವರ ಕುಟುಂಬಕ್ಕೆ ರಷ್ಯಾ ಆಶ್ರಯ ನೀಡಿದೆ ಎಂದು ಕ್ರೆಮ್ಲಿನ್ ಮೂಲಗಳು ಖಚಿತಪಡಿಸಿವೆ.

ಬಂಡುಕೋರರು ಡಮಾಸ್ಕಸ್ ಪ್ರವೇಶಿಸಿದ್ದು, ರಾಜಧಾನಿಯ ಉತ್ತರದಲ್ಲಿರುವ ಕುಖ್ಯಾತ ತಾಣವಾದ ಸೈದ್ನಾಯಾ ಮಿಲಿಟರಿ ಸೆರೆಮನೆಯ ನಿಯಂತ್ರಣವನ್ನು ತೆಗೆದುಕೊಂಡಿದ್ದಾರೆ. ಬಶರ್ ಅಲ್–ಅಸ್ಸಾದ್ ಆಳ್ವಿಕೆಯಿಂದ ನಗರವನ್ನು ವಿಮೋಚನೆಗೊಳಿಸಲಿದ್ದು, ವಿಶ್ವದ ಇತರೆಡೆ ಇರುವ ಸಿರಿಯಾನ್ನರು ವಾಪಸ್ ಆಗುವಂತೆ ಟೆಲಿಗ್ರಾಮ್‌ನಲ್ಲಿ ಅವರು ಘೋಷಿಸಿದ್ದಾರೆ.

ಡಿ.6ರಂದು ಭಾರತ ಸರ್ಕಾರವು ಭದ್ರತಾ ಪರಿಸ್ಥಿತಿಯಿಂದಾಗಿ ಸಿರಿಯಾದಲ್ಲಿರುವ ಭಾರತೀಯರು ಸ್ವದೇಶಕ್ಕೆ ವಾಪಾಸ್ಸಾಗುವಂತೆ ಕರೆ ನೀಡಿತ್ತು. ತುರ್ತು ಸಹಾಯವಾಣಿ ಮತ್ತು ಇಮೇಲ್ ID hoc.damascus@mea.gov.in) ಬಳಸಿಕೊಂಡು ಡಮಾಸ್ಕಸ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಸಂಪರ್ಕಿಸುವಂತೆ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಸಿರಿಯಾದಲ್ಲಿರುವ ಭಾರತೀಯ ನಾಗರಿಕರಿಗೆ ಶಿಫಾರಸು ಮಾಡಿದೆ. ಸಿರಿಯಾದಿಂದ ಬೇಗನೆ ಹೊರಡುವವರಿಗೆ ವಿಮಾನ ಲಭ್ಯವಿದ್ದು, ಇತರರು ಜಾಗ್ರತೆ ವಹಿಸುವಂತೆ, ಸುರಕ್ಷತೆಗೆ ಆದ್ಯತೆ ನೀಡುವಂತೆ ಸೂಚಿಸಿದೆ.

ಡಿವೈಡರ್‌ಗೆ ಕಾರು ಡಿಕ್ಕಿ: ಪರೀಕ್ಷೆಗೆ ತೆರಳುತ್ತಿದ್ದ 5 ವಿದ್ಯಾರ್ಥಿಗಳು ಸೇರಿ 7 ಮಂದಿ ಸಾವು

ಗುಜರಾತ್: ಕಾರೊಂದು ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಐವರು ವಿದ್ಯಾರ್ಥಿಗಳು ಸೇರಿ 7 ಮಂದಿ ಸಾವನ್ನಪ್ಪಿರುವ ಘಟನೆ ಗುಜರಾತಿನ ಜುನಾಗಢದಲ್ಲಿ ನಡೆದಿದೆ. ಕಾರು ಡಿವೈಡರ್‌ಗೆ ಡಿಕ್ಕಿ ಹೊಡೆದು ಮತ್ತೊಂದು ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮ ಐವರು ಕಾಲೇಜು ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ. ವೇಗವಾಗಿ ಬಂದ ವಿದ್ಯಾರ್ಥಿಗಳ ಕಾರು ಡಿವೈಡರ್‌ಗೆ ಡಿಕ್ಕಿ ಹೊಡೆದು ರಸ್ತೆಯ ಇನ್ನೊಂದು ಬದಿಗೆ ಪಲ್ಟಿಯಾಗಿದೆ ಮತ್ತು ವೇಗವಾಗಿ ಬಂದ ಎರಡನೇ ಕಾರಿಗೆ ಡಿಕ್ಕಿ ಹೊಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಏಳು ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಐವರು ವಿದ್ಯಾರ್ಥಿಗಳು ಒಂದು ಕಾರಿನಲ್ಲಿ ಪರೀಕ್ಷೆಗಾಗಿ ಕಾಲೇಜಿಗೆ ತೆರಳುತ್ತಿದ್ದರೆ, ಇನ್ನಿಬ್ಬರು ಮೃತರು ಮತ್ತೊಂದು ಕಾರಿನಲ್ಲಿದ್ದರು. ಅಪಘಾತದ ಪರಿಣಾಮ ಎರಡೂ ಕಾರುಗಳು ಗುರುತು ಹಿಡಿಯಲಾಗದಷ್ಟು ಜಖಂಗೊಂಡಿವೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581/1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ

ತುಂಡು ಜಾಗಕ್ಕೆ ಮುಡಾದಿಂದ ಅರ್ಜಿ ಆಹ್ವಾನ



ಮೈಸೂರು, ಡಿ.9(ಆರ್‌ಕೆ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ರಚಿಸಲಾದ ವಸತಿ ಬಡಾವಣೆಗಳಲ್ಲಿ ತುಂಡು ಭೂಮಿ ಇಲ್ಲವೇ ಉಳಿದಿರುವ ಭೂಮಿಗಾಗಿ (ಬಿಟ್ ಆಫ್ ಲ್ಯಾಂಡ್) ಸಾರ್ವಜನಿಕರಿಂದ ಮುಡಾ ಅರ್ಜಿ ಆಹ್ವಾನಿಸಿದೆ. ಈ ಕುರಿತು ಪ್ರಾಧಿಕಾರದ ಕಾರ್ಯದರ್ಶಿ ಬಿ.ಕೆ.ಪ್ರಸನ್ನ ಕುಮಾರ್, ಸಾರ್ವಜನಿಕ ಪ್ರಕಟಣೆ ಹೊರಡಿಸಿದ್ದು, ತುಂಡು ಭೂಮಿ ವಿಲೇವಾರಿ ಮಾಡುವ ಸಂಬಂಧ ಸರ್ಕಾರವು 2024ರ ನವೆಂಬರ್ 22ರಂದು ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಅದರಂತೆ ಪ್ರಾಧಿಕಾರದಿಂದ ರಚನೆಯಾಗಿರುವ ಬಡಾವಣೆಗಳಲ್ಲಿ ಮಂಜೂರಾತಿ ಪಡೆದಿರುವ ಸಾರ್ವಜನಿಕರ ನಿವೇಶನ ಅಥವಾ ಮನೆಗಳಿಗೆ ಹೊಂದಿಕೊಂಡಂತೆ ತುಂಡು ಜಾಗ ಲಭ್ಯವಿದ್ದಲ್ಲಿ ಮಂಜೂರು ಮಾಡುವ ಸಂಬಂಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ 15 ದಿನಗಳೊಳಗಾಗಿ ಅರ್ಜಿ ಸಲ್ಲಿಸುವಂತೆ ತಿಳಿಸಿದ್ದಾರೆ. ನಂತರ ಈ ಸಂಬಂಧ ಸರ್ಕಾರದ ನಿರ್ದೇಶನದಂತೆ ನಿಯಮಾನುಸಾರ ಅರ್ಜಿಗಳನ್ನು ಪರಿಶೀಲಿಸಿ, ತುಂಡು ಜಾಗ ಮಂಜೂರು ಮಾಡಲು ಕ್ರಮವಹಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಸುಬ್ರಹ್ಮಣ್ಯಸ್ವಾಮಿ ಪೂಜಾ ಮಹೋತ್ಸವ



ಮೈಸೂರಿನ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ವಿವಿಧೆಡೆಗಳಲ್ಲಿ ನಡೆದ ಷಷ್ಠಿ ಸುಬ್ರಹ್ಮಣ್ಯಸ್ವಾಮಿ ಪೂಜಾ ಮಹೋತ್ಸವ ಮತ್ತು ಅನ್ನದಾನ ಕಾರ್ಯಕ್ರಮಗಳಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಭಾಗವಹಿಸಿದ್ದರು. ಮುಖಂಡರಾದ ವಿಶ್ವನಾಥ್, ಚೇತನ್, ಪ್ರಶಾಂತ್, ಗುಣಶೇಖರ್, ಜಗದೀಶ್, ಪ್ರಶಾಂತ್‌ಗೌಡ ಮತ್ತಿತರರಿದ್ದರು.

ರೈತರ ಸಮಸ್ಯೆಗಳಿಗೆ ಉತ್ತರ ನೀಡಲು ಸರ್ಕಾರ ಸಿದ್ಧ, ಪ್ರತಿಪಕ್ಷಗಳು ಸುಗಮ ಕಲಾಪಕ್ಕೆ ಅವಕಾಶ ಕೊಡಬೇಕು

ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಆಹ್ವಾನ



ಬೆಳಗಾವಿ, ಡಿ.9– ಸರ್ಕಾರ ಸಮಗ್ರ ಕರ್ನಾಟಕದ ರೈತರ ಅಭಿವೃದ್ಧಿಗೆ ಬದ್ಧವಾಗಿದೆ. ನೀರಾವರಿ, ಅತಿವೃಷ್ಟಿ, ಅನಾವೃಷ್ಟಿ ಸೇರಿದಂತೆ ರೈತರ ಸಮಸ್ಯೆಗಳ ಬಗ್ಗೆ ಚರ್ಚೆ ಮಾಡಲು ಬದ್ಧವಾಗಿದೆ. ವಿರೋಧ ಪಕ್ಷಗಳು ಸುಗಮ ಕಲಾಪ ನಡೆಸಲು ಅವಕಾಶ ಮಾಡಿಕೊಡಬೇಕು. ಯಾವುದೇ ರಾಜಕೀಯ ಮಾಡದೆ ಕಲಾಪದಲ್ಲಿ ಭಾಗವಹಿಸಿ, ಸರ್ಕಾರದಿಂದ ಉತ್ತರವನ್ನು ಪಡೆಯಬೇಕು. ಅದು ಬಿಟ್ಟು ಕಲಾಪದ ಸಮಯವನ್ನು ವ್ಯರ್ಥ ಮಾಡಬಾರದು ಎಂದು ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮನವಿ ಮಾಡಿದರು.

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿರೋಧ ಪಕ್ಷಗಳು ಮೌಲ್ಯಯುತ ಚರ್ಚೆಗೆ ಅವಕಾಶ ಮಾಡಿಕೊಡಬೇಕು. ಸರ್ಕಾರ ಎಲ್ಲದಕ್ಕೂ ಉತ್ತರ ನೀಡಲು ಸಿದ್ಧವಿದೆ ಎಂದು ಹೇಳಿದರು.

ಬಳ್ಳಾರಿ ಆಸ್ಪತ್ರೆಯಲ್ಲಿ ಬಾಣಂತಿಯರ ಸಾವಿನ ಬಗ್ಗೆ ಪ್ರತಿಪಕ್ಷಗಳು ಆಕ್ರೋಶ ವ್ಯಕ್ತಪಡಿಸುತ್ತಿರುವುದರ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಸರ್ಕಾರ ಈಗಾಗಲೇ ಇದಕ್ಕೆ ಸಮಿತಿ ರಚನೆ ಮಾಡಿ 5 ದಿನದಲ್ಲಿ ವರದಿ ಕೊಡುವಂತೆ ಆದೇಶ ಹೊರಡಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಹ ಈ ನಿಟ್ಟಿನಲ್ಲಿ ಸೂಚಿಸಿದ್ದಾರೆ. ಯಾವುದೇ ವಿಷಯಕ್ಕೆ ಸಂಬಂಧಪಟ್ಟಿದ್ದಾದರೂ ನಮ್ಮ ಸರ್ಕಾರದ ಪ್ರತಿನಿಧಿಗಳು ಸದನದಲ್ಲಿ ಉತ್ತರ ನೀಡಲು ಸಿದ್ಧರಿದ್ದಾರೆ. ಹೀಗಾಗಿ ಪ್ರತಿಪಕ್ಷದವರು ಸದನ ನಡೆಯಲು ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ವಿಶೇಷ ಸಾಮಾಜಿಕ ಬದ್ಧತೆ ಕಾರ್ಯಕ್ರಮ



ಇತ್ತೀಚೆಗೆ ನಡೆದ ವಿವಾಹ ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ವ್ಯಾಪ್ತಿಯ ಪಿರಿಯಾಪಟ್ಟಣ ತಾಲೂಕಿನ ಕಂಪಲಾಪುರ ಪ್ರೌಢಶಾಲೆ, ನಂಜನಗೂಡಿನ ಬಿದರಗೂಡು ಪ್ರಾಥಮಿಕ ಶಾಲೆ, ಮೈಸೂರು ತಾಲೂಕಿನ ಕಮರವಳ್ಳಿ, ಚಿಕ್ಕನಹಳ್ಳಿ ಪ್ರಾಥಮಿಕ ಶಾಲೆಯಲ್ಲಿ ಬಿಸಿಯೂಟ ತಯಾರಿಗೆ ಅನುಕೂಲವಾಗಲೆಂದು ಮಿಕ್ಸರ್‌ಗಳು ಹಾಗೂ ಮೈಸೂರು ತಾಲೂಕಿನ ಕೋಟೆಹುಂಡಿ ಮತ್ತು ಗುಮ್ಮಚನಹಳ್ಳಿ ಸರ್ಕಾರಿ ಶಾಲೆಗೆ ಗ್ರೀನ್ ಬೋರ್ಡ್‌ಗಳನ್ನು ಶಾಲೆಯ ಶಿಕ್ಷಕರಿಗೆ ನೀಡುವುದರ ಮೂಲಕ ವಿಶೇಷ ಸಾಮಾಜಿಕ ಬದ್ಧತೆಯ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

38ನೇ ದಕ್ಷಿಣ–ಪೂರ್ವ ವಲಯ ಯುವ ಜನೋತ್ಸವಕ್ಕೆ ಆಯ್ಕೆ



ವಿವಿಧ ಸ್ಪರ್ಧಾ ವಿಜೇತರಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಮೈಸೂರು,ಡಿ.9–ಮೈಸೂರು ವಿಶ್ವವಿದ್ಯಾನಿಲಯ ಮಾನಸಗಂಗೋತ್ರಿಯಲ್ಲಿ ನಡೆದ ವಿಶ್ವವಿದ್ಯಾನಿಲಯ ಮಟ್ಟದ ಅಂತರ ಕಾಲೇಜು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಜಿಎಸ್‌ಎಸ್‌ಎಸ್ ಸಿಂಹ ಸುಬ್ಬಮಹಾಲಕ್ಷ್ಮಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು 38ನೇ ದಕ್ಷಿಣ–ಪೂರ್ವ ವಲಯ ಯುವ ಜನೋತ್ಸವಕ್ಕೆ ಆಯ್ಕೆಯಾಗಿದ್ದಾರೆ.

ಬಾಲಕಾರ್ಮಿಕ ಮಕ್ಕಳನ್ನು ಕುರಿತಾದ ಪ್ರಹಸನ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಹಾಗೂ ಮೊಬೈಲ್‌ನಿಂದ ಆಗುವ ದುಷ್ಪರಿಣಾಮಗಳ ಕುರಿತಾದ ಮೂಕಾಭಿನಯ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಬೆಂಗಳೂರಿನಲ್ಲಿ ನಡೆಯುವ 38ನೇ ದಕ್ಷಿಣ ಪೂರ್ವ ವಲಯ ಯುವ ಜನೋತ್ಸವಕ್ಕೆ ಆಯ್ಕೆಯಾಗಿದ್ದಾರೆ.

ನಾಟಕದ ರಚನೆ, ನಿರ್ದೇಶನವನ್ನು ಎನ್.ಅಂಕರಾಜು ಮಾಡಿದ್ದು, ಮೈಸೂರು ವಿವಿ ಹಣಕಾಸು ಅಧಿಕಾರಿ ಎನ್.ನಾಗರಾಜು, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶಕರಾದ ಗುರುಸಿದ್ದಯ್ಯ, ರಾಮಚಂದ್ರ, ಡಾ.ಸುಷ್ಮಾ ಪ್ರಮಾಣ ಪತ್ರ ವಿತರಿಸಿದರು. ಕಾಲೇಜಿನ ಪ್ರಾಂಶುಪಾಲ ಡಾ.ರಾಕೇಶ್ ಮತ್ತಿತರರು ಈ ವೇಳೆ ಉಪಸ್ಥಿತರಿದ್ದರು.

ಡಿ.15ರಂದು ಮೈಸೂರು ಲಿಟರರಿ ಅಸೋಸಿಯೇಷನ್ ಸರ್ವ ಸದಸ್ಯರ ಸಭೆ

ಮೈಸೂರು, ಡಿ.9– ಮೈಸೂರು ಲಿಟರರಿ ಅಸೋಸಿಯೇಷನ್‌ನ 2023–24ನೇ ಸಾಲಿನ 8ನೇ ಸರ್ವ ಸದಸ್ಯರ ಮಹಾಸಭೆಯು ಡಿ.15ರಂದು ಬೆಳಗ್ಗೆ 11 ಗಂಟೆಗೆ ಸರಸ್ವತಿಪುರಂ, ಕಾಮಾಕ್ಷಿ ಆಸ್ಪತ್ರೆ ರಸ್ತೆಯಲ್ಲಿರುವ ರೋಟರಿ ಮೈಸೂರು ವೆಸ್ಟ್ ಸಭಾಂಗಣದಲ್ಲಿ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಮೊ.9980656631 ಸಂಪರ್ಕಿಸಬಹುದು.

ಸಂಚಾರ ನಿಯಮ ಉಲ್ಲಂಘಿಸುವವರಿಗೆ ದಂಡಾಸ್ತ್ರ ತಪ್ಪಿದ್ದಲ್ಲ!

● ಪೊಲೀಸರು ನಿಮ್ಮ ಮನೆಗೂ ಬರಬಹುದು ● ಮೈಸೂರು ನಗರದಲ್ಲಿ 240 ಕೋಟಿ ದಂಡ ಬಾಕಿ ಇದೆ



ಸಂಚಾರ ನಿಯಮ ಉಲ್ಲಂಘಿಸಿದ ಸವಾರರಿಗೆ ಪೊಲೀಸರು ದಂಡ ವಿಧಿಸುತ್ತಿರುವುದು.

ವರ್ಷ	ಪ್ರಕರಣ ದಾಖಲು	ದಂಡ ವಸೂಲಿ
2022	10,30,771	6,52,70,500 ರೂ.
2023	11,68,888	17,35,39,550 ರೂ.
2024	21,23,374	5,20,98,800 ರೂ.
ಬಾಕಿ ಇರುವ ದಂಡ: 239,80,55,300 ರೂ.		

ಮೈಸೂರು, ಡಿ.9(ಆರ್‌ಕೆ)– ಸಂಚಾರ ನಿಯಮ ಉಲ್ಲಂಘಿಸಿದ ನೋಟಿಸ್ ಬಂದಿದ್ದಲ್ಲಿ, ಅದಕ್ಕೆ ಸಂಬಂಧಿಸಿದ ದಂಡವನ್ನೂ ಪಾವತಿಸದಿದ್ದಲ್ಲಿ ಸಂಚಾರ ಪೊಲೀಸರು ಖಂಡಿತ ನಿಮ್ಮ ಮನೆಗೆ ಬಂದೇ ಬರಬಹುದು ಎಚ್ಚರ!

ವಾಹನ ಸಂಚಾರ ನಿಯಮ ಉಲ್ಲಂಘಿಸುವವರ ವಿರುದ್ಧ ಸಮರ ಸಾರಿರುವ ಮೈಸೂರು ನಗರ ಸಂಚಾರ ಪೊಲೀಸರು ಬಾಕಿ ಉಳಿದಿರುವ 239 ಕೋಟಿ 80 ಲಕ್ಷ 55 ಸಾವಿರ 300 ರೂ. ವಸೂಲಿ ಮಾಡಲು ಮುಂದಾಗಿದ್ದಾರೆ. ಈ ಕುರಿತಂತೆ ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಮಾಹಿತಿ ನೀಡಿದ್ದು, ಈ ಕಾರ್ಯಾಚರಣೆ ಬಾಕಿ ಉಳಿದಿರುವ ದಂಡ ವಸೂಲಿ ಆಗುವವರೆಗೂ ಮುಂದುವರೆಯಲಿದೆ ಎಂದು ಹೇಳಿದ್ದಾರೆ.

ಹಲವು ವರ್ಷಗಳಿಂದ ಮೈಸೂರು ನಗರದಲ್ಲಿ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳ ದಂಡದ ಮೊತ್ತ 239 ಕೋಟಿ ರೂ.ಗಳಾಗಿದೆ. ಆರಂಭದಲ್ಲಿ ಅತೀ ಹೆಚ್ಚು ದಂಡ ಬಾಕಿ ಉಳಿಸಿಕೊಂಡಿರುವವರ ಮನೆಗಳಿಗೆ ಆಯಾ ವ್ಯಾಪ್ತಿಯ ಪೊಲೀಸರನ್ನು ಕಳುಹಿಸಿ ವಸೂಲಾತಿಗೆ ಕ್ರಮ ವಹಿಸಲಾಗುವುದು. ಅದೇ ರೀತಿ ಮೈಸೂರಿನ ನಗರಾದ್ಯಂತ ಪ್ರಮುಖ ಸರ್ಕಲ್‌ಗಳು ಮತ್ತು ರಸ್ತೆಗಳಲ್ಲಿ ಸಂಚಾರ ನಿಯಮ ಉಲ್ಲಂಘಿಸುವವರ ವಿರುದ್ಧ ಪ್ರಕರಣ ದಾಖಲಿಸಲಾಗುತ್ತಿದೆ. ಅಲ್ಲಿಯೇ ಬಾಕಿಯನ್ನೂ ವಸೂಲಿ ಮಾಡಲಾಗುತ್ತಿದೆ. ಹಾಗೆಯೇ ಭಾರಿ ಪ್ರಮಾಣದ ಬಾಕಿ ಇರುವವರ ಮನೆಗಳಿಗೆ ತೆರಳಿ ದಂಡ ವಸೂಲಾತಿಗೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಮೈಸೂರು ನಗರದಲ್ಲಿ ಶಿಸ್ತು ಬದ್ಧ ಹಾಗೂ ಸುರಕ್ಷಾ ಸಂಚಾರ ವ್ಯವಸ್ಥೆ ಜಾರಿಗೊಳಿಸುವ ಮೂಲಕ ಅಪಘಾತಗಳ ನಿಯಂತ್ರಿಸಿ, ಸಾವು–ನೋವು ತಡೆಯಬೇಕೆಂಬ ಉದ್ದೇಶದಿಂದ ಮೈಸೂರು ನಗರಾದ್ಯಂತ ತಪಾಸಣಾ ಕಾರ್ಯಾಚರಣೆಯನ್ನು ತ್ವರಿತಗೊಳಿಸಿದ್ದು, ಸಾರ್ವಜನಿಕರು ಹಾಗೂ ವಾಹನ ಬಳಕೆದಾರರು ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ತಮ್ಮ ಮತ್ತು ಇತರರ ಅಮೂಲ್ಯ ಪ್ರಾಣ ರಕ್ಷಣೆಗೆ ಸಹಕರಿಸಬೇಕು. ಪ್ರಕರಣ ದಾಖಲಿಸಿ ದಂಡ ವಸೂಲಿ ಮಾಡುವುದೇ ನಮ್ಮ ಪ್ರಮುಖ ಉದ್ದೇಶವಲ್ಲ ಎಂದು ಹೇಳಿದ್ದಾರೆ.

ಶೇ.50 ರಿಯಾಯಿತಿ: 2022ನೇ ಸಾಲಿನಲ್ಲಿ 10,30,771 ಸಂಚಾರ ನಿಯಮ ಉಲ್ಲಂಘನೆ ಪ್ರಕರಣ ದಾಖಲಾಗಿದ್ದು, 6,52,70,500 ರೂ. ದಂಡ ವಸೂಲಿ ಮಾಡಲಾಗಿತ್ತು. 2023ರಲ್ಲಿ 11,68,888 ಪ್ರಕರಣ ದಾಖಲಾಗಿದ್ದು, 17,35,39,550 ರೂ. ದಂಡ ವಸೂಲಿ ಮಾಡಲಾಗಿತ್ತು. ರಾಜ್ಯ ಸರ್ಕಾರ ಶೇ.50ರ ರಿಯಾಯಿತಿಗೆ ಅವಕಾಶ ನೀಡಿದ ಹಿನ್ನೆಲೆಯಲ್ಲಿ ಕಳೆದ ವರ್ಷ ಬಾಕಿ ದಂಡ ವಸೂಲಿ ಪ್ರಮಾಣ ಹೆಚ್ಚಾಗಿದ್ದನ್ನು ಇಲ್ಲಿ ಸ್ಮರಿಸಬಹುದು.

2024ರ ನವೆಂಬರ್ 30ರವರೆಗೆ 21,23,374 ಪ್ರಕರಣಗಳನ್ನು ದಾಖಲಿಸಿ 5,20,98,800 ರೂ. ದಂಡ ವಸೂಲಿ ಮಾಡಲಾಗಿದೆ.

ಹೆಲ್ಮೆಟ್‌ರಹಿತ ಚಾಲನೆ ಸಾಮಾನ್ಯವಾಗಿದೆ: ಮೈಸೂರು ನಗರಾದ್ಯಂತ ಹೆಲ್ಮೆಟ್ ಧರಿಸದೆ ದ್ವಿಚಕ್ರ ವಾಹನ ಚಾಲನೆ ಮಾಡುವುದು ಸಾಮಾನ್ಯವಾಗಿದ್ದು, 2022ರಲ್ಲಿ 5,08,540, 2023ರಲ್ಲಿ 6,48,285 ಹಾಗೂ 2024ರಲ್ಲಿ 8,86,699 ಮಂದಿ ವಿರುದ್ಧ ಹೆಲ್ಮೆಟ್ ಧರಿಸದೆ ವಾಹನ ಚಾಲನೆ ಮಾಡಿದ್ದಕ್ಕಾಗಿ ಪ್ರಕರಣ ದಾಖಲಿಸಲಾಗಿದೆ. ಸೀಟ್ ಬೆಲ್ಟ್ ಧರಿಸದೆ ಕಾರು ಚಾಲನೆ ಮಾಡುವವರ ಸಂಖ್ಯೆಯೂ ಹೆಚ್ಚಾಗಿದ್ದು, 2022ರಲ್ಲಿ 4,219, 2023ರಲ್ಲಿ 6,786 ಮಂದಿ ಕಾರು ಚಾಲಕರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

ಮೈಸೂರು ನಗರಾದ್ಯಂತ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ (ಎಐ) ಹಾಗೂ ಆಟೋಮೋಟಿಕ್ ನಂಬರ್ ಪ್ಲೇಟ್ ರೆಕಗ್ನಿಷನ್ (ಎಎನ್‌ಪಿಆರ್) ಕ್ಯಾಮರಾಗಳನ್ನು ಅಳವಡಿಸಿರುವುದರಿಂದ ಹೆಚ್ಚು ಹೆಚ್ಚು ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ದಾಖಲಾಗಿವೆ. ಮೈಸೂರು ನಗರದಾದ್ಯಂತ 2022ರಲ್ಲಿ 2,90,971, 2023ರಲ್ಲಿ 3,65,657, 2024ರ ನವೆಂಬರ್ 30ರವರೆಗೆ 3,99,770 ಪ್ರಕರಣಗಳು ದಾಖಲಾಗಿವೆ.

413 ಕ್ಯಾಮರಾಗಳು: ಮೈಸೂರು ನಗರದ ಪ್ರಮುಖ ರಸ್ತೆ ಜಂಕ್ಷನ್, ಸರ್ಕಲ್ ಹಾಗೂ ರಿಂಗ್ ರಸ್ತೆಯಲ್ಲಿ ಒಟ್ಟು 413 ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, ಆ ಪೈಕಿ 55 ಎಐ, 58 ಸಿಸಿಟಿವಿ, 50 ಎಎನ್‌ಪಿಆರ್ ಹಾಗೂ 250 ಸರ್ವೇಲೆನ್ಸ್ ಕ್ಯಾಮರಾಗಳು ಸಂಚಾರ ನಿಯಮ ಉಲ್ಲಂಘನೆ ಹಾಗೂ ಕಾನೂನು ಮತ್ತು ಸುವ್ಯವಸ್ಥೆ ಸಂಬಂಧ ಕೆಲಸ ಮಾಡುತ್ತಿವೆ.

ಜೆಎಸ್‌ಎಸ್ ಮಹಾ ವಿದ್ಯಾಪೀಠ ವಸತಿ ನಿಲಯದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ



ಮೈಸೂರಿನ ಜೆಎಸ್‌ಎಸ್ ವಿದ್ಯಾಪೀಠದ ಸಮುಚ್ಚಯ ವಸತಿ ನಿಲಯದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಮೈಸೂರು,ಡಿ.9–ಮೈಸೂರಿನ ಜೆಎಸ್‌ಎಸ್ ವಿದ್ಯಾಪೀಠದ ಸಮುಚ್ಚಯ ವಸತಿನಿಲಯದಲ್ಲಿ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ವತಿಯಿಂದ ಶ್ರೀ ಪತಂಜಲಿ ಗುರುಗಳ ಭಾವಚಿತ್ರ ಮತ್ತು ತಾಯಿ ಭುವನೇಶ್ವರಿ ದೇವಿಗೆ ಪುಷ್ಪಾರ್ಚನೆ ಮಾಡುವುದರ ಮೂಲಕ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಈ ವೇಳೆ ಸಮಿತಿ ಸಂಚಾಲಕ ಜೆ.ಸಿ.ಗಿರೀಶ್, ವಸತಿ ನಿಲಯದ ನಿಲಯಪಾಲಕರಾದ ಕು.ಯಶೋಧ ಮತ್ತು ಕು.ಚಂದನ ಉಪಸ್ಥಿತರಿದ್ದರು. ಶ್ರೀ ಪತಂಜಲಿ ಯೋಗ ಸಮಿತಿ ಯೋಗದವರ ಮಕ್ಕಳಿಂದ ಕನ್ನಡದ ಬಗ್ಗೆ ನಮ್ಮ ರಚನೆ ಕಾರ್ಯಕ್ರಮವನ್ನು ನಡೆಸಲಾಯಿತು. ಜೀವಿತ ಅವರಿಂದ ಭರತನಾಟ್ಯ, ಅಮೃತರಿಂದ ಏಕಪಾತ್ರ ಅಭಿನಯ, ವಸತಿನಿಲಯದ ವಿದ್ಯಾರ್ಥಿಗಳು ಕನ್ನಡದ ಹಾಡುಗಳನ್ನು ಹಾಡುವುದರ ಜೊತೆಗೆ ನೃತ್ಯ ಮಾಡಿದರು.

ನಾಳೆ ಲೋಕಾಯುಕ್ತರಿಂದ ದೂರು ಸ್ವೀಕಾರ

ಮೈಸೂರು,ಡಿ.9– ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗದ ಅಧಿಕಾರಿಗಳಿಂದ ಡಿ.11ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ನಂಜನಗೂಡು ತಾಲೂಕಿನ ತಾಲೂಕು ಪಂಚಾಯತ್ ಕಚೇರಿ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಸಾರ್ವಜನಿಕರು ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಹಾಗೂ ಕರ್ತವ್ಯ ಲೋಪವೆಸಗುವ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಭ್ರಷ್ಟ ಸರ್ಕಾರಿ ಅಧಿಕಾರಿಗಳು, ಸಾರ್ವಜನಿಕ, ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಅಗತ್ಯ ದಾಖಲಾತಿಗಳೊಡನೆ ದೂರು ನೀಡಿ ಕಾನೂನು ಕ್ರಮ ತೆಗೆದುಕೊಳ್ಳಲು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದು ಎಂದು ಕರ್ನಾಟಕ ಲೋಕಾಯುಕ್ತದ ಪೊಲೀಸ್ ಅಧೀಕ್ಷಕರಾದ ಉದೇಶ ಟಿ.ಜೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೇಣುಕಾಸ್ವಾಮಿ ಕೊಲೆ ಪ್ರಕರಣ

ನಟ ದರ್ಶನ್ ಮಧ್ಯಂತರ ಜಾಮೀನು ಅವಧಿ ವಿಸ್ತರಣೆ

ಬೆಂಗಳೂರು: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಎ2 ಆರೋಪಿಯಾಗಿರುವ ನಟ ದರ್ಶನ್ ತೂಗುದೀಪ ಅವರ ಮಧ್ಯಂತರ ಜಾಮೀನು ಅವಧಿಯನ್ನು ಹೈಕೋರ್ಟ್ ಸೋಮವಾರ ವಿಸ್ತರಣೆ ಮಾಡಿದೆ. ಬೆನ್ನು ನೋವಿನಿಂದ ಬಳಲುತ್ತಿರುವ ನಟ ದರ್ಶನ್ ಅವರು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮುಂದಿನ ದಿನಾಂಕದವರೆಗೂ ಮಧ್ಯಂತರ ಜಾಮೀನು ವಿಸ್ತರಣೆ ಮಾಡಿ ಹೈಕೋರ್ಟ್ ಆದೇಶ ನೀಡಿದೆ.

ಇಂದು ಹೈಕೋರ್ಟ್‌ನಲ್ಲಿ ನಟ ದರ್ಶನ್ ಅವರ ಜಾಮೀನು ಅರ್ಜಿ ವಿಚಾರಣೆ ನಡೆಯಿತು. ದರ್ಶನ್ ಪರ ವಕೀಲ ಸಿವಿ ನಾಗೇಶ್ ವಾದ ಮಂಡಿಸಿದ್ದು, ಎಸ್ ಪಿಪಿ ಪ್ರಸನ್ನಕುಮಾರ್ ಪ್ರತಿವಾದ ಮಂಡಿಸಿದರು. ಸುದೀರ್ಘ ವಾದ, ಪ್ರತಿವಾದ ಆಲಿಸಿದ ನ್ಯಾಯಮೂರ್ತಿಗಳು ದಿನಾಂಕ ಘೋಷಿಸದೆ ತೀರ್ಪು ಕಾಯ್ದಿರಿಸಿದ್ದಾರೆ. ಜೊತೆಗೆ ಆದೇಶ ಬರುವವರೆಗೂ ನಟ ದರ್ಶನ್ ವೈದ್ಯಕೀಯ ಜಾಮೀನು ಅವಧಿ ವಿಸ್ತರಿಸಿದ್ದಾರೆ. ಡಿಸೆಂಬರ್ 11ಕ್ಕೆ ನಟ ದರ್ಶನ್ ಅವರ ಶಸ್ತ್ರಚಿಕಿತ್ಸೆಗೆ ದಿನಾಂಕ ನಿಗದಿ ಆಗಿದೆ. ಈ ಬಗ್ಗೆ ನ್ಯಾಯಾಲಯಕ್ಕೆ ಮಾಹಿತಿ ನೀಡಲಾಗಿದೆ. ಆದ್ದರಿಂದ ಅವರ ಜಾಮೀನು ಅವಧಿಯನ್ನು ವಿಸ್ತರಣೆ ಮಾಡಲಾಗಿದೆ. ರೆಗ್ಯುಲರ್ ಬೇಲ್ ವಿಚಾರಣೆಯ ವಾದ–ಪ್ರತಿವಾದ ಮುಗಿದಿದೆ. ಆದೇಶವನ್ನು ಹೈಕೋರ್ಟ್ ಕಾಯ್ದಿರಿಸಿದೆ. ಆದೇಶ ಬರುವ ತನಕ ದರ್ಶನ್ ಅವರ ಮಧ್ಯಂತರ ಜಾಮೀನು ಅವಧಿ ಮುಂದುವರಿಯಲಿದೆ.

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಅವಧಿ ವಿಸ್ತರಣೆ

ಮೈಸೂರು,ಡಿ.9– ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮೆಟ್ರಿಕ್ ನಂತರದ ಪಿಯುಸಿ ಮತ್ತು ಸಮಾನಂತರ (PUC & Equivalent Courses) ಮತ್ತು ಸಾಮಾನ್ಯ ಪದವಿ ಕೋರ್ಸ್‌ಗಳಲ್ಲಿ (Integrated Degree Courses) ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2024–25ನೇ ಸಾಲಿಗೆ ಮೆಟ್ರಿಕ್ ನಂತರದ 'ವಿದ್ಯಾರ್ಥಿವೇತನ', 'ಶುಲ್ಕ ಮರುಪಾವತಿ' ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಡಿಸೆಂಬರ್ 20 ರವರೆಗೆ ವಿಸ್ತರಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು https://ssp.postmatric. karnataka.gov.in/ ವೆಬ್‌ಸೈಟ್ ಮೂಲಕ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ವೆಬ್‌ಸೈಟ್ ಅಥವಾ ಸಹಾಯವಾಣಿ ಸಂ:8050770005, ಇ–ಮೇಲ್ ವಿಳಾಸ bcwdhelpline@gmail.com ಅಥವಾ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ದೂ.ಸಂ: 1902, ಇಮೇಲ್ ವಿಳಾಸ postmatrichelp@karnataka.gov.in ಅನ್ನು ಸಂಪರ್ಕಿಸ ಬಹುದು ಎಂದು ತಿ.ನರಸೀಪುರ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಡಿ.9–ನಿರ್ವಹಣೆ ಕಾಮಗಾರಿ ನಿಮಿತ್ತ ಡಿ.11ರಂದು ಬೆಳಗ್ಗೆ 10 ರಿಂದ ಸಂಜೆ 6 ರವರೆಗೆ ಹೆಚ್.ಡಿ.ಕೋಟೆ ತಾಲೂಕಿನ ಹೆಚ್.ಡಿ.ಕೋಟೆ ಟೌನ್, ಮೇಟಿಕುಪ್ಪೆ, ಜಕ್ಕೊಡನಹಳ್ಳಿ, ಭೀಮನಹಳ್ಳಿ, ಹಿರೇಹಳ್ಳಿ, ಅಣ್ಣೂರು, ಪಡುವಕೋಟೆ, ಸವ್ವೆ, ನಾಗನಹಳ್ಳಿ ಮತ್ತು ಚಿಕ್ಕಕೆರೆಯೂರು ಪಂಚಾಯಿತಿ ವ್ಯಾಪ್ತಿ ಮತ್ತು ಸುತ್ತಮುತ್ತಲಿನ ಗ್ರಾಮಗಳು ಹಾಗೂ ಹ್ಯಾಂಡ್‌ಪೋಸ್ಟ್, ಹೈರಿಗೆ, ಹೆಬ್ಬಲಗುಪ್ಪೆ ಮತ್ತು ನೂರಲಕುಪ್ಪೆ ಪಂಚಾಯಿತಿ ವ್ಯಾಪ್ತಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ನಿಲುಗಡೆಯಾಗಲಿದೆ.

ಅಮಿತ್ ಶಾ ಭೇಟಿ ಮಾಡಿದ ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ

ಚನ್ನಪಟ್ಟಣ ಫಲಿತಾಂಶ ಕುರಿತಾಗಿ ಮಾಹಿತಿ ವಿನಿಮಯ



ಯುವ ಜೆಡಿಎಸ್ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನವದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ, ಅಭಿನಂದಿಸಿದರು.

ನವದೆಹಲಿ, ಡಿ.9– ಯುವ ಜೆಡಿಎಸ್ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸೋಮವಾರ ನವದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ನವದೆಹಲಿಯಲ್ಲಿ ಮಾಧ್ಯಮಗೋಷ್ಠಿ ನಡೆಸಿದ ಅವರು, ಅತ್ಯಂತ ಗೌರವಪೂರ್ವಕವಾಗಿ ಅಮಿತ್ ಶಾ ಅವರನ್ನು ಸಂಸತ್ ಭವನದ ಅವರ ಕಚೇರಿಯಲ್ಲಿ ಭೇಟಿ ಮಾಡಲಾಯಿತು. ಚನ್ನಪಟ್ಟಣ ಫಲಿತಾಂಶ ಕುರಿತಾದ ಮಾಹಿತಿಯನ್ನು ಅವರೊಂದಿಗೆ ಹಂಚಿಕೊಂಡೆ. ಅವರು ಕೂಡ ನನಗೆ ಧೈರ್ಯ ತುಂಬಿ ಉತ್ತಮವಾಗಿ ಕೆಲಸ ಮಾಡುವಂತೆ ಹುರಿದುಂಬಿಸಿದರು ಎಂದರು.

ಅಲ್ಲದೆ, ಮುಂಬರುವ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆ ಬಗ್ಗೆ ಅವರಲ್ಲಿ ಚರ್ಚೆ ನಡೆಸಲಾಯಿತು. ತಳಮಟ್ಟದಿಂದ ಎನ್‌ಡಿಎ ಮೈತ್ರಿಕೂಟವನ್ನು ಬಲಪಡಿಸುವ ನಿಟ್ಟಿನಲ್ಲಿ ಅಮಿತ್ ಶಾ ಅವರು ನನಗೆ ಮಾರ್ಗದರ್ಶನ ಮಾಡಿದರು ಎಂದು ನಿಖಿಲ್ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಇದಕ್ಕೂ ಮುನ್ನ ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್, ರಾಜ್ಯ ಬಿಜೆಪಿ ಉಸ್ತುವಾರಿಗಳಾದ ಡಾ.ರಾಧಾಮೋಹನ್ ದಾಸ್ ಅಗರ್ವಾಲ್ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದೆ. ಎಲ್ಲಾ ನಾಯಕರು ಸಂಘಟನೆಗೆ ಹೆಚ್ಚು ಒತ್ತು ಕೊಡಬೇಕು ಎಂದು ಸಲಹೆ ಮಾಡಿದರು. ಕರ್ನಾಟಕ ಸರ್ಕಾರ ಜನಪರ ಆಡಳಿತ ನೀಡುತ್ತಿಲ್ಲ. ಜನರು ಸಾಕಷ್ಟು ತೊಂದರೆಯಲ್ಲಿ ಇದ್ದಾರೆ. ಹೀಗಾಗಿ ಸರ್ಕಾರದ ವಿರುದ್ಧ ಸಂಘಟಿತ ಹೋರಾಟ ನಡೆಸುವಂತೆಯೂ ನಾಯಕರು ಸೂಚನೆ ನೀಡಿದ್ದಾರೆ ಎಂದು ಹೇಳಿದರು.

ದೇವೇಗೌಡರ ಬಗ್ಗೆ ಸಿ.ಪಿ.ಯೋಗೇಶ್ವರ್ ಕೀಳುಮಟ್ಟದ ಟೀಕೆ ಮಾಡಿರುವ ಬಗ್ಗೆ ತಿರುಗೇಟು ನೀಡಿದ ಅವರು, 60 ವರ್ಷ ಜನಪರವಾಗಿ ಕೆಲಸ ಮಾಡಿರುವ ದೇವೇಗೌಡರ ಬಗ್ಗೆ ಇಂತಹ ಟೀಕೆ ಮಾಡುವುದು ಸರಿಯಲ್ಲ. ಅವರು ಶಾಸಕ ಸ್ಥಾನಕ್ಕೆ ಶೋಭೆ ತರುವ ಮಾತು ಆಡಬೇಕು ಎಂದರು. ನಾನು ಸೋಲನ್ನು ತಲೆಬಾಗಿ ಸ್ವೀಕರಿಸಿದ್ದೇನೆ. ದೇವೇಗೌಡರು ನೆಲ, ಜಲದ ವಿಚಾರದಲ್ಲಿ ನಿರಂತರ ಹೋರಾಟ ನಡೆಸಿದ್ದಾರೆ. ಈಗಲೂ ಯುವ ಸಂಸದರು ನಾಚುವಂತೆ ಶಿಸ್ತುಬದ್ಧವಾಗಿ ಕಲಾಪದಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಜನರ ಸಲುವಾಗಿ ಅವರು ರಾಜಕೀಯದಲ್ಲಿ ಮುಂದುವರಿದಿದ್ದಾರೆ, ಮುಂದೆಯೂ ಮುಂದುವರೆಯುತ್ತಾರೆ ಎಂದರು.

ಹಾಸನದಲ್ಲಿ ಕಾಂಗ್ರೆಸ್ ನಾಯಕರು ಜನರ ತೆರಿಗೆ ಹಣದಲ್ಲಿ ಸಮಾವೇಶ ಮಾಡಿಕೊಂಡು ದೇವೇಗೌಡರ ಕುಟುಂಬವನ್ನು ನಿಂದಿಸಿದರು. ಅವರಿಗೆ ಸಮಾವೇಶ ಮಾಡಿ ತಿರುಗೇಟು ಕೊಡಬೇಕು ಎಂದು ನಾನಾದರೂ ಭಾವಿಸುವುದಿಲ್ಲ ಎಂದು ಮಾರ್ಮಿಕವಾಗಿ ನುಡಿದರು.

ಮಂಡ್ಯದಲ್ಲಿ ಅದ್ಧೂರಿಯಾಗಿ ಕುಮಾರಸ್ವಾಮಿ ಅವರ ಜನ್ಮದಿನ ಆಚರಿಸಬೇಕು ಎಂದು ನಮ್ಮ ನಾಯಕರು ನಿರ್ಧಾರ ಮಾಡಿದ್ದರು. ಆದರೆ, ಮಂಡ್ಯದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ, ವಿಧಾನಸಭೆ ಮತ್ತು ಸಂಸತ್ ಅಧಿವೇಶನ ನಡೆಯುತ್ತಿದೆ. ಹಾಗೆಯೇ ಕೇಂದ್ರ ಸಚಿವರಿಗೂ ಸಾಕಷ್ಟು ಪೂರ್ವನಿಗದಿತ ಕಾರ್ಯಕ್ರಮಗಳು ಇವೆ. ಈ ಹಿನ್ನೆಲೆಯಲ್ಲಿ ಸ್ವತಃ ಕಾರ್ಯಕ್ರಮ ಬೇಡವೆಂದು ಸ್ವತಃ ಕುಮಾರಸ್ವಾಮಿ ಅವರೇ ಸೂಚಿಸಿದ್ದಾರೆ ಎಂದು ನಿಖಿಲ್ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ತಂಬಾಕು ಖರೀದಿ ಪ್ರಕ್ರಿಯೆ ಆರಂಭ

ಫಲ ನೀಡಿದ ನಿಖಿಲ್ ಕುಮಾರಸ್ವಾಮಿ ದೆಹಲಿ ಭೇಟಿ

ನವದೆಹಲಿ: ಮೈಸೂರು ಭಾಗದ ತಂಬಾಕು ಬೆಳೆಗಾರರ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದ್ದು, ಅದರಂತೆ ತಂಬಾಕು ಖರೀದಿ ಪ್ರಕ್ರಿಯೆ ಶುರುವಾಗಿದೆ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು.

ದೆಹಲಿಯಲ್ಲಿ ನಿಖಿಲ್ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಗ್ಗೆ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವ ಪಿಯೂಷ್ ಗೋಯಲ್ ಅವರಿಗೆ ಮನವಿ ಸಲ್ಲಿಸಲಾಗಿತ್ತು. ಕೇಂದ್ರ ಸಚಿವ ಕುಮಾರಸ್ವಾಮಿ ಕೂಡ ನಮ್ಮ ನಿಯೋಗದಲ್ಲಿ ಇದ್ದು, ಗೋಯಲ್ ಅವರಿಗೆ ಸಮಸ್ಯೆಯನ್ನು ಮನವರಿಕೆ ಮಾಡಿಕೊಟ್ಟರು. ಈ ಹಿನ್ನೆಲೆಯಲ್ಲಿ ರೈತರಿಗೆ ಅನುಕೂಲ ಆಗುತ್ತಿದೆ ಎಂದು ತಿಳಿಸಿದರು.

ಮೈಸೂರು ಜಿಲ್ಲೆಯ ಹುಣಸೂರು, ಹೆಚ್.ಡಿ.ಕೋಟೆ, ಪಿರಿಯಾಪಟ್ಟಣ ಹಾಗೂ ಕೆ.ಆರ್.ನಗರ ಪ್ರದೇಶಗಳಲ್ಲಿ ರೈತರು ತಂಬಾಕು ಬೆಳೆಯುತ್ತಿದ್ದು, ಬೆಲೆ ಕುಸಿತದಿಂದ ಕಂಗೆಟ್ಟಿದ್ದಾರೆ. ರೈತರ ನೆರವಿಗೆ ಬರಬೇಕು ಎಂದು ಕೇಂದ್ರ ಸರ್ಕಾರದ ಗಮನ ಸೆಳೆಯಲಾಯಿತು ಎಂದ ಅವರು, ಕಳೆದ ಒಂದು ವಾರದಿಂದ ನಾನು ದೆಹಲಿಯಲ್ಲಿ ಇದ್ದೇನೆ. ಇಲ್ಲೇನು ನಾನು ಸುಮ್ಮನಿಲ್ಲ. ತಂಬಾಕು ಬೆಳೆಗಾರರಿಗೆ ಸರಿಯಾದ ಬೆಲೆ ಸಿಗುತ್ತಿಲ್ಲ. ಪ್ರಕೃತಿಯ ವಿಕೋಪದಿಂದ ಒಳ್ಳೆಯ ಬೆಳೆ ಬಂದಿಲ್ಲ. ಗುಣಮಟ್ಟದ ತಂಬಾಕಿಗೆ ಕಂಪನಿಗಳು ಉತ್ತಮ ದರ ನೀಡುತ್ತಿವೆ. ಹೀಗಾಗಿ ಕೇಂದ್ರ ಸಚಿವರಾದ ಪಿಯೂಶ್ ಗೋಯಲ್ ಅವರನ್ನು ಭೇಟಿ ಮಾಡಿ ತಂಬಾಕು ಬೆಳೆಗಾರರ ನೆರವಿಗೆ ಬರುವಂತೆ ಮನವಿ ಮಾಡಲಾಗಿದೆ ಎಂದರು. ಬ್ರೆಜಿಲ್ ಸೇರಿದಂತೆ ಲ್ಯಾಟಿನ್ ಅಮೆರಿಕದ ದೇಶಗಳಲ್ಲಿ ಜನವರಿ ತಿಂಗಳ ವೇಳೆಗೆ ತಂಬಾಕು ಕಟಾವಿಗೆ ಬರಲಿದೆ. ಡಿಸೆಂಬರ್ ಒಳಗಾಗಿ ನಮ್ಮ ರೈತರ ತಂಬಾಕು ಮಾರಾಟ ಆಗಬೇಕಿದೆ. ಇದಕ್ಕೆ ಸಚಿವ ಪಿಯೂಷ್ ಗೋಯಲ್ ಹಾಗೂ ವಾಣಿಜ್ಯ ಇಲಾಖೆಯ ಉನ್ನತ ಅಧಿಕಾರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ

ಸಮ್ಮೇಳನಕ್ಕೆ ಆಗಮಿಸುವವರಿಗೆ ಆರೋಗ್ಯ ಸೇವೆ

ಹತ್ತು ಬೆಡ್‌ಗಳ ತಾತ್ಕಾಲಿಕ ಆಸ್ಪತ್ರೆ, ಜಿಲ್ಲಾಸ್ಪತ್ರೆಯಲ್ಲಿ 20 ಬೆಡ್ ಮೀಸಲು

ಮಂಡ್ಯ,ಡಿ.9– ಮಂಡ್ಯದಲ್ಲಿ ಇದೇ ತಿಂಗಳ 20,21 ಮತ್ತು 22ರಂದು ಜರುಗಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಲಿರುವ ಗಣ್ಯರು, ಸಾಹಿತ್ಯಾಸಕ್ತರು ಹಾಗೂ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆರೋಗ್ಯ ಮತ್ತು ವೈದ್ಯಕೀಯ ನೆರವು ಸಮಿತಿ ಹಲವು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವ ಮೂಲಕ ಆರೋಗ್ಯ ಸೇವೆ ನೀಡಲು ಮುಂದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮೋಹನ್ ತಿಳಿಸಿದ್ದಾರೆ.

ದಿನದ 24 ಗಂಟೆ ಕಾರ್ಯ ನಿರ್ವಹಿಸಲು ವೈದ್ಯರು ಮತ್ತು ಆರೋಗ್ಯ ಇಲಾಖೆ ಸಿಬ್ಬಂದಿಗಳ ತಂಡ ರಚನೆ ಮಾಡಲಾಗಿದೆ. ಹೆಲ್ತ್‌ಡೆಸ್ಕ್ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ. ಸದರಿ ತಾತ್ಕಾಲಿಕ ಆಸ್ಪತ್ರೆಯಲ್ಲಿ 10 ಬೆಡ್‌ಗಳ ವ್ಯವಸ್ಥೆ ಮಾಡಲಾಗಿದ್ದು ಫಾರ್ಮಸಿ ಮತ್ತು ಲ್ಯಾಬ್ ಘಟಕ ಕೂಡ ಇಲ್ಲಿ ಕಾರ್ಯನಿರ್ವಹಿಸಲಿದೆ ಇಸಿಜಿ ಮಿಷಿನ್, ಆಕ್ಸಿಜನ್ ಕನ್ಸನ್‌ಟ್ರೇಟರ್ ಒಳಗೊಂಡಂತೆ ತೀವ್ರ ನಿಗಾ ಘಟಕಕ್ಕೆ ಅವಶ್ಯವಿರುವ ಕನಿಷ್ಠ ಉಪಕರಣಗಳ ವ್ಯವಸ್ಥೆ ಕೂಡ ಮಾಡಲಾಗುತ್ತಿದೆ. ತುರ್ತು ಸೇವೆಗಾಗಿ ಆಂಬ್ಯುಲೆನ್ಸ್ ಸಿದ್ಧಗೊಳಿಸಲಾಗಿದೆ ಎಂದು ಹೇಳಿದ್ದಾರೆ.

ತಜ್ಞರ ತಪಾಸಣೆಗಾಗಿ ತಾತ್ಕಾಲಿಕ ಆಸ್ಪತ್ರೆ ಒಳಗಡೆ 2 ಟೇಬಲ್ ಮತ್ತು ಚೇರ್‌ಗಳ ವ್ಯವಸ್ಥೆ ಮಾಡಲಾಗುವುದು. ಕನ್ನಡ ಸಾಹಿತ್ಯ ಸಮ್ಮೇಳನದ ಲೋಗೋ ಒಳಗೊಂಡ ಒಪಿಡಿ ಸ್ಲಿಪ್ ವಿತರಣೆಗೆ ಒಪಿಡಿ ರಿಜಿಸ್ಟ್ರೇಷನ್ ಕೌಂಟರ್ ವ್ಯವಸ್ಥೆ ಮಾಡಲಾಗುವುದು. ಫಾರ್ಮಸಿ ಘಟಕದಲ್ಲಿ ಅತ್ಯವಶ್ಯಕ ಔಷಧಗಳ ವಿತರಣೆ ಮತ್ತು ಲ್ಯಾಬ್ ಘಟಕದಲ್ಲಿ ತುರ್ತು ಚಿಕಿತ್ಸಾ ಪರೀಕ್ಷೆ ಮಾಡಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ನಾಲ್ಕು ವ್ಹೀಲ್‌ಚೇರ್ ಹಾಗೂ 5 ಸ್ಟ್ರೆಚರ್‌ಗಳ ವ್ಯವಸ್ಥೆ ಇರಲಿದೆ ಎಂದು ತಿಳಿಸಿದ್ದಾರೆ.

ಬೆಳಗ್ಗೆ, ಮಧ್ಯಾಹ್ನ ಮತ್ತು ರಾತ್ರಿ ಪಾಳಿಯಲ್ಲಿ ಪ್ರತ್ಯೇಕ ತಂಡಗಳಲ್ಲಿ ವೈದ್ಯ ಸಿಬ್ಬಂದಿ ಕಾರ್ಯನಿರ್ವಹಿಸಲಿದ್ದಾರೆ. ಮುಂಜಾಗ್ರತ ಕ್ರಮವಾಗಿ ಜಿಲ್ಲಾಸ್ಪತ್ರೆಯಲ್ಲಿ 20 ಬೆಡ್‌ಗಳ ಸುಸಜ್ಜಿತ ವಾರ್ಡ್ ಅನ್ನು ಮೀಸಲಿರಿಸಲಾಗಿದೆ. ಪ್ರಧಾನ ವೇದಿಕೆ, ಸಮಾನಂತರ ವೇದಿಕೆ ಹಾಗೂ ವಸ್ತುಪ್ರದರ್ಶನ ಮಳಿಗೆ, ಆಹಾರ ಕೌಂಟರ್ ಸೇರಿದಂತೆ ಹಲವೆಡೆ ವೈದ್ಯ ಸಿಬ್ಬಂದಿಗಳನ್ನು ನಿಯೋಜಿಸಲು ಆರೋಗ್ಯ ಇಲಾಖೆ ಅಧಿಕಾರಿಗಳು ನಿರ್ಧರಿಸಿದ್ದಾರೆ. ಒಟ್ಟಾರೆ ಸಾಹಿತ್ಯ ಸಮ್ಮೇಳನದಲ್ಲಿ ಆರೋಗ್ಯದ ಹಿತದೃಷ್ಟಿಯಿಂದ ಜಿಲ್ಲಾ ಆರೋಗ್ಯ ಇಲಾಖೆ ಹಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ ಎಂದಿದ್ದಾರೆ.

ಶಾಲಾ ಮಕ್ಕಳ ರಸಪ್ರಶ್ನೆ ಸ್ಪರ್ಧಾ ಪರೀಕ್ಷೆಗೆ ಜಿಲ್ಲಾಧಿಕಾರಿ ಚಾಲನೆ


ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಪ್ರಚಾರ ಸಮಿತಿ ವತಿಯಿಂದ ಶಾಲಾ ಮಕ್ಕಳಿಗೆ ಏರ್ಪಡಿಸಿರುವ ರಸಪ್ರಶ್ನೆ ಸ್ಪರ್ಧಾ ಪರೀಕ್ಷೆಗೆ ಜಿಲ್ಲಾಧಿಕಾರಿ ಡಾ.ಕುಮಾರ ಚಾಲನೆ ನೀಡಿದರು.

ಮಂಡ್ಯ,ಡಿ.9– 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಪ್ರಚಾರ ಸಮಿತಿ ವತಿಯಿಂದ ಜಿಲ್ಲೆಯ ಪ್ರೌಢ ಶಾಲಾ ಮಕ್ಕಳಿಗೆ ಕನ್ನಡ ನಾಡು, ನುಡಿ, ಸಂಸ್ಕೃತಿ, ಸಾಹಿತ್ಯ ಮತ್ತು ವಿಶೇಷವಾಗಿ ಮಂಡ್ಯ ಜಿಲ್ಲಾ ಸಾಹಿತ್ಯ ಇತಿಹಾಸ ವೈಶಿಷ್ಟ್ಯಗಳ ಕುರಿತು ಹಮ್ಮಿಕೊಳ್ಳಲಾಗಿರುವ ರಸ ಪ್ರಶ್ನೆ ಸ್ಪರ್ಧಾ ಪರೀಕ್ಷೆಗೆ ಪ್ರಶ್ನೆಪತ್ರಿಕೆಯನ್ನು ಬಿಡುಗಡೆ ಮಾಡುವ ಮೂಲಕ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಇಂದು ನಗರದ ಕಾರ್ಮೆಲ್ ಕಾನ್ವೆಂಟ್ ಶಾಲೆಯಲ್ಲಿ ಚಾಲನೆ ನೀಡಿದರು.

ಸಮ್ಮೇಳನದ ಅಂಗವಾಗಿ ಮಕ್ಕಳಲ್ಲಿ ಸಾಮಾನ್ಯ ಜ್ಞಾನದ ಜೊತೆಗೆ ಕನ್ನಡ ನಾಡು ನುಡಿಯ ಬಗ್ಗೆ ಎಷ್ಟು ಜ್ಞಾನವನ್ನು ಹೊಂದಿದ್ದಾರೆ ಎಂಬುದನ್ನು ತಿಳಿಯಲು ರಸ ಪ್ರಶ್ನೆ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಗಯೂ ಕೂಡ ಪಠ್ಯ ವಿಷಯದ ಜೊತೆಗೆ ಸಾಮಾನ್ಯ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕು ಎಂದರು.

ಮಂಡ್ಯದಲ್ಲಿ ನಡೆಯುತ್ತಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಐತಿಹಾಸಿಕ ದಾಖಲೆಯಾಗಬೇಕು. ಜಿಲ್ಲೆಯಲ್ಲಿ 522 ಪ್ರೌಢಶಾಲೆಗಳಿದ್ದು, ಎಲ್ಲಾ ಶಾಲೆಯಿಂದ ಸುಮಾರು 68,865 ಮಕ್ಕಳಿದ್ದು ಎಲ್ಲಾ ಮಕ್ಕಳು ಈ ಪರೀಕ್ಷೆಯಲ್ಲಿ ಭಾಗವಹಿಸುತ್ತಿದ್ದಾರೆ ಎಂದರು.

ಪ್ರಶ್ನೆ ಪತ್ರಿಕೆಯಲ್ಲಿ 87 ಪ್ರಶ್ನೆಗಳಿದ್ದು, ಪರೀಕ್ಷೆಯಲ್ಲಿ ಭಾಗವಹಿಸುವ ಎಲ್ಲಾ ಮಕ್ಕಳ ಕುಟುಂಬಗಳಿಗೂ ಆಹ್ವಾನವನ್ನು ನೀಡಲಾಗಿದೆ ಮಕ್ಕಳಿಗೆ ನಾಡು ನುಡಿಯ ಬಗ್ಗೆ ಅರಿವು ಮತ್ತು ಜಾಗೃತಿ ಮೂಡಿಸುವುದರ ಜೊತೆಗೆ ಜಿಲ್ಲೆಯ ಸುಮಾರು 68,000 ಕುಟುಂಬಗಳಿಗೆ ಸಮ್ಮೇಳನದ ಆಹ್ವಾನವು ತಲುಪುತ್ತದೆ ಎಂದರು.

ಪರೀಕ್ಷೆಗೆ ಮೊದಲು ಶಾಲಾ ಹಂತದಲ್ಲಿ ಜಿಲ್ಲೆಯಾದ್ಯಂತ ಏಕಕಾಲಕ್ಕೆ ನಡೆಯಲಿದ್ದು, ನಂತರ ಪ್ರತಿ ಶಾಲೆಯಿಂದ ವಿಜೇತ ಒಬ್ಬ ವಿದ್ಯಾರ್ಥಿಯನ್ನು ಆಯ್ಕೆ ಮಾಡಿ ತಾಲೂಕು ಹಂತದಲ್ಲಿ ಸ್ಪರ್ಧೆ ನಡೆಸಲಾಗುವುದು. ತಾಲೂಕು ಹಂತದಲ್ಲಿ ಆಯ್ಕೆಗೊಂಡ ಮಕ್ಕಳಿಗೆ ಬಹುಮಾನ, ಪ್ರಮಾಣ ಪತ್ರ ವಿತರಿಸಲಾಗುತ್ತದೆ. ತಾಲೂಕು ಹಂತದಲ್ಲಿ ಪ್ರತಿ ತಾಲೂಕಿನಿಂದ ಮೂರು ಮಕ್ಕಳನ್ನು ಆಯ್ಕೆ ಮಾಡಿ ಜಿಲ್ಲಾ ಹಂತದಲ್ಲಿ ಪರೀಕ್ಷೆ ನಡೆಸಲಾಗುತ್ತದೆ. ಜಿಲ್ಲಾ ಹಂತದಲ್ಲಿ ಆಯ್ಕೆಗೊಂಡ ಮೂರು ಮಕ್ಕಳಿಗೆ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಮುಖ್ಯ ವೇದಿಕೆಯಲ್ಲಿ ಬಹುಮಾನ, ಪ್ರಮಾಣ ಪತ್ರ ವಿತರಿಸಲಾಗುತ್ತದೆ ಎಂದು ತಿಳಿಸಿದರು.

ಕಸಾಪ ಜಿಲ್ಲಾ ಸಂಚಾಲಕಿ ಮೀರಾ ಶಿವಲಿಂಗಯ್ಯ ಮಾತನಾಡಿ, ಕನ್ನಡ ನೆಲ, ಜಲ, ಹೆಣ್ಣು ಭ್ರೂಣ ಹತ್ಯೆಗಳು ಹಾಗೂ ಮುಂತಾದ ಸಮಸ್ಯೆ ಬಗ್ಗೆ ತಜ್ಞರ ವಿಚಾರಗೋಷ್ಠಿ ನಡೆಸುವುದು ಹಾಗೂ ಅದೆಲ್ಲದರ ಬಗ್ಗೆ ಅರಿವು ಮೂಡಿಸುವುದು ಸಾಹಿತ್ಯ ಸಮ್ಮೇಳನದ ಆಶಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾರ್ಮೆಲ್ ಕಾನ್ವೆಂಟ್‌ನ ಸುಪೀರಿಯರ್ ಸಿಸ್ಟರ್ ಗ್ಲಾಡಿಸ್ ಕಾಸ್ಟಲಿನೋ, ಮುಖ್ಯೋಪಾಧ್ಯಾಯರಾದ ಸಿಸ್ಟರ್ ಮೇರಿ ಪೌಲಿನ್, ಬಿಇಒ ಮಹದೇವು, ಕನ್ನಡ ಸಾಹಿತ್ಯ ಪರಿಷತ್‌ನ ಮಾಜಿ ಅಧ್ಯಕ್ಷ ಹಾಗೂ ಪ್ರಶ್ನೆ ಪತ್ರಿಕೆ ತಯಾರಕ ಮಹೇಶ್, ರೆಡ್‌ಕ್ರಾಸ್ ಸಂಸ್ಥೆಯ ಜಂಟಿ ಕಾರ್ಯದರ್ಶಿ ರಂಗಸ್ವಾಮಿ, ಪದಾಧಿಕಾರಿಗಳು ಡಾ.ಹುಸ್ಕೂರು ಕೃಷ್ಣೇಗೌಡ, ಚಂದ್ರಲಿಂಗು, ಈವೆಂಟ್ಸ್ ಅಧ್ಯಕ್ಷ ಸ್ಬುನಹಳ್ಳಿ ಶಶಿಧರ, ಪ್ರಚಾರ ಸಮಿತಿಯ ಸದಸ್ಯರಾದ ಕಬ್ಬನಹಳ್ಳಿ ಶಂಭು, ಎಂ.ಮಂಚಶೆಟ್ಟಿ ಅವರು ಉಪಸ್ಥಿತರಿದ್ದರು.

ಸಾಲ ಮರುಪಾವತಿಸದ ಕೇಂಬ್ರಿಡ್ಜ್ ಶಾಲೆಗೆ ಬ್ಯಾಂಕಿನಿಂದ ಬೀಗ

ಕಂಗಾಲಾದ ವಿದ್ಯಾರ್ಥಿಗಳ ಪೋಷಕರಿಂದ ಪ್ರತಿಭಟನೆ


ಕಿರಂಗೂರಿನ ಕೇಂಬ್ರಿಡ್ಜ್ ಶಾಲೆಯ ಮುಂದೆ ಪೋಷಕರು ಪ್ರತಿಭಟನೆ ನಡೆಸಿದರು.

ಶ್ರೀರಂಗಪಟ್ಟಣ, ಡಿ.9–ಖಾಸಗಿ ಬ್ಯಾಂಕ್‌ನಿಂದ ಪಡೆದಿದ್ದ ಸಾಲ ಮರುಪಾವತಿಸದ ಹಿನ್ನೆಲೆಯಲ್ಲಿ ಕಳೆದ 10 ದಿನಗಳಿಂದ ಬೀಗ ಜಡಿದಿದ್ದ ತಾಲೂಕಿನ ಕಿರಂಗೂರು ಬಳಿಯ ಕೇಂಬ್ರಿಡ್ಜ್ ಶಾಲೆ ಎದುರು ಮಕ್ಕಳ ಪೋಷಕರು ಶಾಲೆ ಆರಂಭಿಸಿ ಎಂದು ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

ಶಾಲೆ ಎದುರು ಜಮಾಯಿಸಿದ ಪೋಷಕರು ಹಾಗೂ ಸ್ಥಳೀಯ ನಿವಾಸಿಗಳು ಶಾಲೆಯ ಆಡಳಿತ ಮಂಡಳಿ ಹಾಗೂ ಶಿಕ್ಷಣ ಇಲಾಖೆ ವಿರುದ್ಧ ಘೋಷಣೆಗಳ ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿನ ವಿವಿಧ ಗ್ರಾಮಗಳಿಂದ ಮಕ್ಕಳನ್ನು ಕೇಂಬ್ರಿಡ್ಜ್ ಶಾಲೆಗೆ ಸೇರಿಸಲಾಗಿದ್ದು, ಸುಮಾರು 800ಕ್ಕೂ ಹೆಚ್ಚು ಮಕ್ಕಳಿರುವ ಶಾಲೆಗೆ ಏಕಾಏಕಿ ಬೀಗ ಜಡಿದಿರುವುದರಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿದೆ. ಇದ್ದಕ್ಕಿದ್ದಂತೆ ಶಾಲೆಯನ್ನು ಮುಚ್ಚಿದ್ದು, ಶಾಲಾ ಆಡಳಿತವು ಒಂದೆರಡು ದಿನಗಳಲ್ಲಿ ಶಾಲೆ ತೆರೆಯುವುದಾಗಿ ಮೂರು ದಿನಗಳಿಗೊಮ್ಮೆ ಮೆಸೇಜ್ ಮಾಡುತ್ತಿದ್ದಾರೆ ವಿನಃ ಶಾಲೆ ಆರಂಭಗೊಂಡಿಲ್ಲ ಎಂದು ದೂರಿದರು.

ಮಕ್ಕಳ ವಿದ್ಯಾಭ್ಯಾಸಕ್ಕೆಂದು ಸಾಲಸೋಲ ಮಾಡಿ ಶಾಲೆಗೆ ಲಕ್ಷಾಂತರ ರೂ. ಶುಲ್ಕ ಕಟ್ಟಲಾಗಿದೆ. ಮಕ್ಕಳಿಗೆ ವಿದ್ಯಾಭ್ಯಾಸವಿಲ್ಲದೆ, ಈಗ ರಜೆ ಮೇಲೆ ರಜಾ ಘೋಷಣೆ ಮಾಡಿದರೆ ಮಕ್ಕಳ ಗತಿ ಏನು ಎಂದು ಪೋಷಕರು ಆತಂಕ ವ್ಯಕ್ತಪಡಿಸಿದರು.

ಕಳೆದ 10 ದಿನಗಳಿಂದ ಶಾಲೆಗೆ ಬೀಗ ಜಡಿದಿರುವ ಬಗ್ಗೆ ಪೋಷಕರು ಹಾಗೂ ಸ್ಥಳೀಯರು ಪ್ರತಿಭಟನೆ ನಡೆಸಿ, ಸಂಬಂಧಪಟ್ಟ ಇಲಾಖೆ ಗಮನಕ್ಕೆ ತರಲಾಗಿದೆ ಆದರೂ ಸಹ ಯಾವೊಬ್ಬ ಅಧಿಕಾರಿಗಳು ಆಗಮಿಸಿ ವಿದ್ಯಾರ್ಥಿಗಳ ಸಮಸ್ಯೆ ಬಗೆಹರಿಸಲು ಮುಂದಾಗಿಲ್ಲ ಎಂದು ಅಧಿಕಾರಿಗಳ ವಿರುದ್ಧ ಕಿಡಿಕಾರಿದರು.

ಈ ವೇಳೆ ದರಸಗುಪ್ಪೆ ಗ್ರಾಪಂ ಅಧ್ಯಕ್ಷ ಮುರುಳಿ, ರುಕ್ಮಾಂಗದ, ಮಂಜುನಾಥ, ಶಿವಣ್ಣ, ಗಿರೀಶ್, ಶಂಕರ್‌ಬಾಬು ಸೇರಿದಂತೆ ಹಲವಾರು ಶಾಲಾ ಮಕ್ಕಳ ಪೋಷಕರು ಹಾಜರಿದ್ದರು.

ಸ್ವಾಮಿನಾಥನ್ ವರದಿ ಜಾರಿಗೊಳಿಸಿ ರೈತರ ಬದುಕನ್ನು ಗಟ್ಟಿಗೊಳಿಸಿ

ಸರ್ಕಾರಕ್ಕೆ ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಆಗ್ರಹ


ಆನೆಗೊಳ ಗ್ರಾಪಂ ವ್ಯಾಪ್ತಿಯ ರೈತಸಂಘದ ನೂತನ ಘಟಕವನ್ನು ಶಾಸಕ ದರ್ಶನ್ ಪುಟ್ಟಣ್ಣಯ್ಯ ಉದ್ಘಾಟಿಸಿದರು.

ಕೆ.ಆರ್.ಪೇಟೆ,ಡಿ.9– ರಾಜ್ಯದ ರೈತರ ಬದುಕನ್ನು ಗಟ್ಟಿಗೊಳಿಸುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ನ್ಯಾಯಮೂರ್ತಿ ಸ್ವಾಮಿನಾಥನ್ ವರದಿಯನ್ನು ಜಾರಿಗೆ ತರುವಂತೆ ರೈತ ಮುಖಂಡ ಹಾಗೂ ಮೇಲುಕೋಟೆ ಕ್ಷೇತ್ರದ ಶಾಸಕ ದರ್ಶನ್ ಪುಟ್ಟಣ್ಣಯ್ಯ ಆಗ್ರಹಿಸಿದರು.

ಕೆಆರ್.ಪೇಟೆ ತಾಲೂಕಿನ ಆನೆಗೊಳ ಗ್ರಾಮದಲ್ಲಿ ಗ್ರಾಪಂ ವ್ಯಾಪ್ತಿಯ ರೈತ ಸಂಘದ ಗ್ರಾಮ ಘಟಕಗಳನ್ನು ಉದ್ಘಾಟಿಸಿ ಮಾತನಾಡಿದರು.

ಸ್ವಾಮಿನಾಥ್ ಆಯೋಗದ ವರದಿ ಜಾರಿಗಾಗಿ ರಾಜ್ಯ ಮಟ್ಟದಲ್ಲಿ ದೊಡ್ಡ ಹೋರಾಟ ಆಗಬೇಕಾಗಿದೆ. ಯುವಕರೇ ಸಂಘಟಿತರಾಗಿ ಹೋರಾಟ ಮಾಡಬೇಕು. ಯುವಕರು ರಾಜಕೀಯ ಬಿಟ್ಟು ರೈತ ಸಂಘ ಸೇರಬೇಕು. ಹೋರಾಟದ ಮೂಲಕ ತಮ್ಮ ಹಕ್ಕುಗಳನ್ನು ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಆನೆಗೊಳ ಗ್ರಾಪಂ ವ್ಯಾಪ್ತಿಯ ಆನೆಗೊಳ, ಚಿಕ್ಕತಾರಳ್ಳಿ, ದೊಡ್ಡತಾರಹಳ್ಳಿ, ಅಂಚೆಬೀರನಹಳ್ಳಿ ಮುಂತಾದ ಗ್ರಾಮಗಳ 92 ಜನರನ್ನು ಹಸಿರು ಟವಲ್ ಹಾಕಿ ರೈತ ಹೋರಾಟದ ದೀಕ್ಷೆ ನೀಡುವ ಮೂಲಕ ರೈತ ಸಂಘಕ್ಕೆ ದರ್ಶನ್ ಪುಟ್ಟಣ್ಣಯ್ಯ ಬರಮಾಡಿಕೊಂಡರು.

ರಾಜ್ಯ ರೈತಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಮಾತನಾಡಿ, ಸರ್ಕಾರದಿಂದ ಕಾರ್ಪೋರೇಟ್ ಸಂಸ್ಥೆಗಳ 4 ಲಕ್ಷ ಕೋಟಿ ಸಾಲಮನ್ನಾ ಮಾಡಲಾಗಿದೆ. ಆದರೆ ರೈತರ ಸಾಲಮನ್ನಾ ಮಾಡಲು ನಮ್ಮ ಸರ್ಕಾರಗಳಿಗೆ ಮನಸ್ಸಿಲ್ಲ. ರೈತರು ಒಗ್ಗಟ್ಟಾದರೆ ಪಾರ್ಲಿಮೆಂಟ್, ವಿದಾನಸೌಧ ರೈತರ ಆಳ್ವಿಕೆಗೆ ಬರುತ್ತದೆ. ರೈತರೇ ದೇಶದ ಪ್ರಭುವಾದರೆ ನಮಗೆ ಬೇಕಾದ ರೈತ ನೀತಿಗಳನ್ನು ರೂಪಿಸಿ ರೈತರೇ ದೇಶದ ನಿಜವಾದ ಯಜಮಾನರಾಗಬಹುದು ಎಂದರು.

ಶಿಕ್ಷಣ ಇಲಾಖೆಯ ನಿವೃತ್ತ ಮುಖ್ಯೋಪಾಧ್ಯಾಯ ಆನೆಗೊಳ ರಾಮೇಗೌಡ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ರೈತಸಂಘದ ಅಧ್ಯಕ್ಷ ಎ.ಎಲ್.ಕೆಂಪೂಗೌಡ, ಮಾಜಿ ಅಧ್ಯಕ್ಷ ಎಂ.ವಿ.ರಾಜೇಗೌಡ, ಜಿಲ್ಲಾ ಉಪಾಧ್ಯಕ್ಷ ಮರುವನಹಳ್ಳಿ ಶಂಕರ್, ತಾಲೂಕು ರೈತಸಂಘದ ಅಧ್ಯಕ್ಷ ಕಾರಿಗನಹಳ್ಳಿ ಪುಟ್ಟೇಗೌಡ, ರೈತ ಮುಖಂಡರಾದ ಕೆ.ಆರ್.ಜಯರಾಮ್, ಎಲ್.ಬಿ.ಜಗದೀಶ್, ನಂದಿನಿ ಜಯರಾಂ, ಬೂಕನಕೆರೆ ನಾಗರಾಜು, ಚೌಡೇನಹಳ್ಳಿ ಲತಾ, ಎ.ಆರ್.ಪುಟ್ಟರಾಜು, ಎನ್.ರಂಗಪ್ಪ, ಜಗದೀಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಒಂದನೇ ಪುಟದಿಂದ

ಕಲಾಪ ನುಂಗಿದ ವಕ್ಫ್

ಎರಡೂ ವಿಷಯಗಳಿಗೆ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ವಾಕ್ ಸಮರ ಜೋರಾಗಿ, ಯಾರು ಏನು ಹೇಳುತ್ತಿದ್ದಾರೆ ಎಂಬುದೇ ಕೇಳದಾಯಿತು.

ಗದ್ದಲದ ನಡುವೆಯೇ ಸರ್ಕಾರ ಪಂಚಮಸಾಲಿ ಸಮಾಜದ ಹೋರಾಟ ಹತ್ತಿಕ್ಕಲು ಪ್ರಯತ್ನಿಸುತ್ತಿದೆ ಎಂದು ಪ್ರತಿಪಕ್ಷ ಸದಸ್ಯರ ಒಂದು ಗುಂಪು ಆಕ್ರೋಶ ವ್ಯಕ್ತಪಡಿಸಿ, ಧರಣಿಗೆ ಮುಂದಾಯಿತು.

ಪ್ರಜಾಪ್ರಭುತ್ವ ವ್ಯವಸ್ಥೆಗಳನ್ನು ಕೇಳಲು ಜನರಿಗೆ ಹಕ್ಕುಗಳಿಲ್ಲವೆ ಎಂದ ಅಶೋಕ್ ಹಾಗೂ ಯತ್ನಾಳ್, ಜಿಲ್ಲಾಧಿಕಾರಿಗಳು ತಮ್ಮ ಮನಬಂದಂತೆ ಅಧಿಕಾರ ನಡೆಸುತ್ತಿದ್ದಾರೆ.

ಪಂಚಮಸಾಲಿ ಸಮುದಾಯದ ಹೋರಾಟ ಇಂದು–ನಿನ್ನೆಯದಲ್ಲ, ತಮ್ಮ ಹಕ್ಕಿಗಾಗಿ ಬಸವ ಮೃತ್ಯುಂಜಯ ಸ್ವಾಮೀಜಿಗಳ ನಾಯಕತ್ವದಲ್ಲಿ ನಿರಂತರ ಹೋರಾಟ ನಡೆದಿದೆ. ಅವರು, ಸಮುದಾಯದ ಹಕ್ಕಿಗಾಗಿ ಸರ್ಕಾರದ ಗಮನ ಸೆಳೆಯಲು ಶಾಂತಿಯುತ ಧರಣಿ ಮತ್ತು ಹೋರಾಟ ನಡೆಸುವ ಅವಕಾಶವನ್ನೂ ಸರ್ಕಾರ ನೀಡಿಲ್ಲ. ಅಧಿವೇಶನ ನಡೆಯುವ ವೇಳೆ ಹೋರಾಟಗಾರರು, ಸರ್ಕಾರದ ಗಮನ ಸೆಳೆಯಲು ಧರಣಿ ನಡೆಸುತ್ತಾರೆ, ಇದಕ್ಕೆ ಗಮನಹರಿಸುವ ಬದಲು ಜಿಲ್ಲಾಡಳಿತ ಪೋಲಿಸರ ಮೂಲಕ ದಬ್ಬಾಳಿಕೆ ನಡೆಸಿ, ನಮ್ಮ ಹಕ್ಕು ಕಸಿಯಲು ಹೊರಟಿದೆ ಎಂದು ಆಕ್ರೋಶ ವ್ಯಕ್ತಪಡಿಸಿ, ಸದನದಲ್ಲಿ ಧರಣಿ ಕುಳಿತರು.

ಈ ಸಂದರ್ಭದಲ್ಲಿ ಆಡಳಿತ ಹಾಗೂ ಪ್ರತಿಪಕ್ಷ ಬಿಜೆಪಿ ಸದಸ್ಯರ ನಡುವೆ ಏರಿದ ದನಿಯಲ್ಲಿ ಮಾತಿನ ಚಕಮಕಿ ನಡೆದು ಸದನ ಗದ್ದಲದಲ್ಲಿ ಮುಳುಗಿದಾಗ ಕಲಾಪವನ್ನು ಮುಂದೂಡಲಾಯಿತು.

ಎಕರೆ ಅರಣ್ಯ ಭೂಮಿ ವಶಕ್ಕೆ ಕ್ರಮ

ತಿಳಿಸಿದರು. ತಮಗೆ 999 ವರ್ಷಗಳಿಗೆ ಲೀಸ್ ನೀಡಲಾಗಿತ್ತು ಎಂದು ಕಂಪನಿಗಳು ವಾದಿಸುತ್ತಿದ್ದವು. 2012ರಲ್ಲಿ ಸರ್ಕಾರ ಗೆಜೆಟ್ ಅಧಿಸೂಚನೆ ಹೊರಡಿಸಿ ಈ ಗುತ್ತಿಗೆ ಅವಧಿಯನ್ನು 99 ವರ್ಷಕ್ಕೆ ತಗ್ಗಿಸಿದ್ದು, ಅವಧಿ ಮುಗಿದ ಗುತ್ತಿಗೆ ಅರಣ್ಯ ಭೂಮಿಯ ಮರು ವಶಕ್ಕೆ ನೋಟಿಸ್ ನೀಡಿತ್ತು. ಆ ಕಂಪನಿಗಳು ನ್ಯಾಯಾಲಯದ ಮೆಟ್ಟಿಲೇರಿ ತಡೆಯಾಜ್ಞೆ ತಂದಿದ್ದು, ಪ್ರಸ್ತುತ ಪ್ರಕರಣ ಉಚ್ಚ ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿದೆ. ಇದೇ ಡಿ.12ರಂದು ವಿಚಾರಣೆಗೆ ಬರಲಿದೆ ಎಂದು ಮಾಹಿತಿ ನೀಡಿದರು. ತಾವು ಸಚಿವರಾದ ಬಳಿಕ ಗುತ್ತಿಗೆ ಅರಣ್ಯ ಭೂಮಿಯ ಮರು ವಶಕ್ಕೆ ಪಡೆಯಲು 5 ಜನ ಸದಸ್ಯರ ಕಾರ್ಯಪಡೆಯನ್ನು ರಚಿಸಲಾಗಿದೆ. ಈ ಪಡೆಯು ಅಡ್ವೋಕೇಟ್ ಜನರಲ್ ಅವರೊಂದಿಗೆ ಸಮಾಲೋಚಿಸಿ, ದಾಖಲೆ ಗಳನ್ನು ಒಗ್ಗೂಡಿಸಿ ಭೂಮಿ ಮರಳಿ ಪಡೆಯಲು ಪ್ರಯತ್ನ ಮಾಡುತ್ತಿದೆ. ವಿವಿಧ ಉದ್ದೇಶಗಳಿಗೆ ಅರಣ್ಯ ಭೂಮಿಯನ್ನು ಗುತ್ತಿಗೆ ನೀಡಿರುವ ಪ್ರಕರಣಗಳ ಪರಿ ಶೀಲನೆ, ಗೇಣಿ ವಸೂಲಾತಿ, ಅರಣ್ಯ ಪ್ರದೇಶವನ್ನು ಇಲಾಖೆಗೆ ಹಿಂಪಡೆಯುವ ಬಗ್ಗೆ ಕಾರ್ಯಪಡೆ ಅಧ್ಯಕ್ಷರು ಮತ್ತು ಸದಸ್ಯರು ಹಲವು ಸಭೆ ನಡೆಸಿ, ಆದ್ಯತೆಯ ಆಧಾರದಲ್ಲಿ ಪ್ರಕರಣದ ವಿಚಾರಣೆ ನ್ಯಾಯಾಲಯದಲ್ಲಿ ನಡೆಯಲು ಶ್ರಮಿಸುತ್ತಿದ್ದಾರೆ ಎಂದರು.

ಕಾಡಾನೆಗಳ ಚೆಲ್ಲಾಟ

ನಿರತವಾಗಿರುವ ಈ ಕಾಡಾನೆಗಳು, ಮರಳಿ ಕಾಡಿಗೆ ಹೋಗಲು ಹಿಂದೇಟು ಹಾಕುತ್ತಿವೆ. ಈ ಹಿಂದೆ ಜಯಪುರ ಹೋಬಳಿಯಿಂದ ಹುಣಸೂರು ಮುಖ್ಯ ರಸ್ತೆಯನ್ನು ದಾಟಿ ಕೆಆರ್‌ಎಸ್ ಹಿನ್ನೀರು ತಲುಪಿದ್ದವು. ಮತ್ತೆ ಹಿನ್ನೀರಿನಲ್ಲಿ ಈಜಿ ಹುಣಸೂರು, ಕೆ.ಆರ್.ನಗರ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಸಂಚರಿಸಿ ಮಂಡ್ಯ ಜಿಲ್ಲೆಯನ್ನು ಪ್ರವೇಶಿಸಿದ್ದವು. ವಾರದ ಹಿಂದೆಯಷ್ಟೇ ಮಂಡ್ಯ ಜಿಲ್ಲೆಯಿಂದ ಮತ್ತೆ ಮೈಸೂರು ಜಿಲ್ಲೆಯ ಕೆ.ಆರ್.ನಗರಕ್ಕೆ ಮರಳಿದ್ದವು. ನಿನ್ನೆ (ಭಾನುವಾರ) ಸಾಗರಕಟ್ಟೆ ಬಳಿ ಕೆಆರ್‌ಎಸ್ ಹಿನ್ನೀರಿನಲ್ಲಿ ಈಜಿಕೊಂಡು ಜಟ್ಟಿಹುಂಡಿಗೆ ಲಗ್ಗೆಯಿಟ್ಟಿದ್ದವು. ಈ ಕಾಡಾನೆಗಳನ್ನು ಚಿಕ್ಕನಹಳ್ಳಿ ಅರಣ್ಯ ಪ್ರದೇಶಕ್ಕೆ ಓಡಿಸಲು ನಿರ್ಧರಿಸಲಾಗಿದ್ದು, ಅರಣ್ಯ ಇಲಾಖೆ ಸಿಬ್ಬಂದಿ, ಅವುಗಳ ಚಲನವಲನದ ಮೇಲೆ ನಿಗಾ ಇರಿಸಿ ಆಯಾಯ ಗ್ರಾಮಸ್ಥರಲ್ಲಿ ಎಚ್ಚರಿಕೆಯ ಸಂದೇಶ ರವಾನಿಸುತ್ತಿದ್ದಾರೆ. ಜೊತೆಗೆ ಕಾರ್ಯಾಚರಣೆ ಮುಂದುವರೆಸಿದ್ದಾರೆ.

ಭಾರೀ ಬೆಳೆ ನಷ್ಟ: ಒಂದೂವರೆ ತಿಂಗಳಿನಿಂದ ವಿವಿಧೆಡೆ ಸುತ್ತುತ್ತಿರುವ ಈ ಕಾಡಾನೆಗಳು ದಾರಿಯುದ್ದಕ್ಕೂ ಅಪಾರ ಪ್ರಮಾಣದ ಬೆಳೆ ನಾಶ ಮಾಡಿವೆ. ಅವುಗಳು ಬೆಳೆ ತಿಂದಿರು ವುದಕ್ಕಿಂತಲೂ ಓಡಾಡಿದ್ದರಿಂದಲೇ ಹೆಚ್ಚಿನ ಬೆಳೆ ನಾಶವಾಗಿವೆ. ಇವುಗಳ ಆರ್ಭಟಕ್ಕೆ ರೈತರು ಕಂಗಾಲಾಗಿದ್ದಾರೆ. ಹುಣಸೂರು ಆನೆ ಕಾರ್ಯಪಡೆ, ಮೈಸೂರು ಪ್ರಾದೇಶಿಕ ಅರಣ್ಯ ವಿಭಾಗ ಹಾಗೂ ಚಿರತೆ ಕಾರ್ಯಪಡೆ ಸಿಬ್ಬಂದಿ, ಪೋಲಿಸ್ ಇಲಾಖೆಯ ಸಹಕಾರದೊಂದಿಗೆ ಕಾರ್ಯಾಚರಣೆ ಮುಂದುವರೆಸಿದ್ದು, ನೂರಾರು ಮಂದಿ ಕಾರ್ಯಾಚರಣೆಯಲ್ಲಿ ನಿರತರಾಗಿದ್ದಾರೆ.

ಪ್ರೌಢಶಾಲೆ ಸಹ ಶಿಕ್ಷಕರಿಗೆ ಬಡ್ತಿ ನೀಡುವ ಪ್ರಕ್ರಿಯೆ ಫೆಬ್ರವರಿಯಲ್ಲಿ ಪೂರ್ಣ

ಬೆಳಗಾವಿ, ಸುವರ್ಣ ವಿಧಾನಸೌಧ, ಡಿ.9(ಕೆಎಂಶಿ)–ಪ್ರೌಢಶಾಲಾ ಸಹ ಶಿಕ್ಷಕರಿಗೆ ಬಡ್ತಿ ನೀಡುವ ಪ್ರಕ್ರಿಯೆ ಬರುವ 2025ರ ಫೆಬ್ರವರಿ ಅಂತ್ಯದೊಳಗೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗು ವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್.ಮಧು ಬಂಗಾರಪ್ಪ ಭರವಸೆ ನೀಡಿದ್ದಾರೆ.


ಮಧು ಬಂಗಾರಪ್ಪ

ವಿಧಾನಪರಿಷತ್‌ನಲ್ಲಿ ಎಸ್.ವಿ. ಸಂಕನೂರ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಈಗಾಗಲೇ 2013ರವರೆಗೆ ಪದೋನ್ನತಿ ಪ್ರಕ್ರಿಯೆಗೆ ರಾಜ್ಯಮಟ್ಟದಲ್ಲಿ ಒಂದೇ ಜೇಷ್ಠತಾ ಪಟ್ಟಿ ತಯಾರಿಸುವ ಕುರಿತು ಶಾಲಾ ಶಿಕ್ಷಣ ಇಲಾಖೆ ಆಯುಕ್ತರು ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಿದ್ದಾರೆ. ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು 1957ರ 7ಎ ನಿಯಮದನ್ವಯ ಪರಿಶೀಲಿಸಿ ಅಗತ್ಯ ಕ್ರಮವಹಿಸಲು ಶಾಲಾ ಶಿಕ್ಷಣ ಇಲಾಖೆ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿದ್ದು, ತ್ವರಿತವಾಗಿ ನಿಯಮಾನುಸಾರ ನಡೆಸಲು ಕ್ರಮ ವಹಿಸಲಾಗುವುದು ಎಂದರು.

ಕಠಿಣ ಕಾನೂನು ಕ್ರಮ

ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ, ಮುಟ್ಟುಗೋಲು ದಾಸ್ತಾನು ವಿಲೇವಾರಿ ಮೊತ್ತವನ್ನು ಸರ್ಕಾರಕ್ಕೆ ಜಮೆ ಮಾಡಲಾಗುತ್ತಿದೆ. 2024–25ರಲ್ಲಿ 213 ಎಫ್.ಐ.ಆರ್ ದಾಖಲಿಸಿ ಒಟ್ಟು 2,68,07,872 ರೂ. ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡು, 238 ಆರೋಪಿಗಳನ್ನು ಬಂಧಿಸಲಾಗಿದೆ. ಬಡತನ ರೇಖೆಗಿಂತ ಮೇಲೆ ಬಂದಿರುವವರ ಬಿಪಿಎಲ್ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮ ವಹಿಸಲಾಗುತ್ತಿದೆ. ಆಹಾರ ಇಲಾಖೆ ಸರ್ವರ್ ಹಳೆಯ ದಾಗಿದ್ದು, ಎನ್‌ಐಸಿಯಿಂದ ಕೆಎಸ್‌ಡಿಸಿಗೆ ಆಹಾರ ತಂತ್ರಾಂಶ ಮೈಗ್ರೇಶನ್ ಕಾರ್ಯ ಅಂತಿಮ ಹಂತದಲ್ಲಿದ್ದು, ಕಾರ್ಯ ಪೂರ್ಣಗೊಂಡ ನಂತರ ಆದ್ಯತಾ ಪಡಿತರ ಚೀಟಿ ನೀಡುವ ಹಾಗೂ ಪಡಿತರ ತಿದ್ದುಪಡಿ ಕಾರ್ಯ ನಿರಂತರವಾಗಿ ನಡೆಯಲಿದೆ ಎಂದರು.

ಪಂಚಮಸಾಲಿ ಸಮುದಾಯಕ್ಕೆ 2ಎ ಪ್ರವರ್ಗ ಮೀಸಲಾತಿ

ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಿದ ಅಫಿಡವಿಟ್; ಕೋರ್ಟ್ ಆದೇಶ ಸದನದಲ್ಲಿ ಮಂಡನೆ


ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಳಗಾವಿ, ಸುವರ್ಣ ವಿಧಾನಸೌಧ, ಡಿ.9(ಕೆಎಂಶಿ)–ಪಂಚಮಸಾಲಿ ಸಮುದಾಯಕ್ಕೆ 2ಎ ಪ್ರವರ್ಗ ಮೀಸಲಾತಿ ವಿಚಾರವಾಗಿ ಹಿಂದಿನ ಸರ್ಕಾರ ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಿದ ಅಫಿಡವಿಟ್ ಹಾಗೂ ನ್ಯಾಯಾಲಯದ ಆದೇಶವನ್ನು ಸದನದ ಮುಂದೆ ಮಂಡಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ. ಪ್ರತಿಪಕ್ಷ ಸದಸ್ಯರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಪಂಚಮಸಾಲಿಗಳನ್ನು 2ಎ ಪ್ರವರ್ಗಕ್ಕೆ ಸೇರಿಸಲು ಬಹಳ ದಿನಗಳಿಂದ ಹೋರಾಟ ನಡೆಸಲಾಗುತ್ತಿದೆ, ನಾನು ಮುಖ್ಯಮಂತ್ರಿಯಾದ ಮೇಲೆ ಬಸವ ಜಯಮೃತ್ಯುಂಜಯ ಸ್ವಾಮೀಜಿ ಸೇರಿದಂತೆ ಪಂಚಮಸಾಲಿ ಮುಖಂಡರೊಂದಿಗೆ ಎರಡು ಬಾರಿ ಸಭೆ ನಡೆಸಿದ್ದೇನೆ, ಪಂಚಮಸಾಲಿಗಳು ಮೀಸಲಾತಿ ಕೇಳಲು ನಾನು ಅಡ್ಡಿಯಾಗಿಲ್ಲ ಎಂದರು. ರಾಜ್ಯದಲ್ಲಿ ಹಿಂದುಳಿದ ವರ್ಗಗಳನ್ನು ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–3ಎ ಹಾಗೂ ಪ್ರವರ್ಗ–3ಬಿ ಎಂಬುದಾಗಿ ವಿಂಗಡಸಲಾಗಿದೆ, ವೀರಶೈವ–ಲಿಂಗಾಯಿತ ಹಾಗೂ ಪಂಚಮಸಾಲಿ ಸಮುದಾಯಗಳು 3ಬಿ ಅಡಿ ಮೀಸಲಾತಿ ಪಡೆಯುತ್ತಿವೆ.

ಪಂಚಮಸಾಲಿಗಳನ್ನು 2ಎ ಪ್ರವರ್ಗಕ್ಕೆ ಸೇರಿಸಲು ರಾಜ್ಯದ ಶಾಶ್ವತ ಹಿಂದುಳಿದ ವರ್ಗಗಳ ಆಯೋಗದ ವರದಿ ಪಡೆಯುವುದು ಅವಶ್ಯಕವಾಗಿದೆ, ಈ ಹಿನ್ನೆಲೆಯಲ್ಲಿ ಆಯೋಗದ ಮುಂದೆ ಮೀಸಲಾತಿ ವಿಚಾರ ಮಂಡಿಸುವಂತೆ ಪಂಚಮಸಾಲಿ ಹೋರಾಟಗಾರರಿಗೆ ಸೂಚಿಸಲಾಗಿದೆ. ಬಸವರಾಜ ಬೊಮ್ಮಾಯಿ ಸರ್ಕಾರದಲ್ಲಿ ಪಂಚಮಸಾಲಿಗಳನ್ನು 2ಎ ಪ್ರವರ್ಗಕ್ಕೆ ಸೇರಿಸಲಿಲ್ಲ, ಬದಲಿಗೆ, ಅಲ್ಪಸಂಖ್ಯಾತ ಮುಸ್ಲಿಂರಿಗೆ ನೀಡಿದ್ದ ಶೇ.4ರಷ್ಟು ಮೀಸಲಾತಿ ರದ್ದುಪಡಿಸಿ, 3ಎ ಹಾಗೂ 3ಬಿ ಪ್ರವರ್ಗಕ್ಕೆ ತಲಾ ಶೇ.2ರಂತೆ ಮೀಸಲಾತಿ ಹಂಚಿಕೆ ಮಾಡಿತ್ತು. ಇದನ್ನು ಆಕ್ಷೇಪಿಸಿ ಮುಸ್ಲಿಮರು ಸರ್ವೋಚ್ಚ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಿದ್ದರು, ಪ್ರಕರಣದ ವಿಚಾರಣೆ ವೇಳೆ ಹಿಂದಿನ ಬಿಜೆಪಿ ಸರ್ಕಾರ ಮುಸ್ಲಿಮರ ಮೀಸಲಾತಿ ರದ್ದುಪಡಿಸುವುದಿಲ್ಲ, ಯಥಾಸ್ಥಿತಿ ಮುಂದುವರಿಸಿಕೊಂಡು ಹೋಗುವುದಾಗಿ ಪ್ರಮಾಣಪತ್ರ ಸಲ್ಲಿಸಿದೆ.

ಇದರ ಆಧಾರದ ಮೇಲೆ ಸರ್ವೋಚ್ಚ ನ್ಯಾಯಾಲಯ ಆದೇಶ ಹೊರಡಿಸಿದ್ದು, ಆದೇಶ ಬದಲಾಯಿಸಲು ಯಾರಿಂದಲೂ ಸಾಧ್ಯವಿಲ್ಲ. ಇದರ ಪ್ರತಿಯನ್ನು ನಾಳೆಯೇ ಸದನದ ಮುಂದೆ ಮಂಡಿಸುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಅರವಿಂದ ಬೆಲ್ಲದ್, ನಾಳೆ, ಮಂಗಳವಾರ ಪಂಚಮಸಾಲಿ 2ಎ ಮೀಸಲಾತಿ ಹೋರಾಟ ನಡೆಯಲಿದೆ, ಆದ್ದರಿಂದ ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಬುಧವಾರ ಸದನದ ಮುಂದೆ ಮಂಡಿಸುವಂತೆ ಸಭಾಧ್ಯಕ್ಷರ ಮೂಲಕ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.

ಶ್ರೀನಗರ–ಬಾರಾಮುಲ್ಲಾ ಹೆದ್ದಾರಿಯಲ್ಲಿ IED ಪತ್ತೆ; ತಪ್ಪಿದ ದುರಂತ

ಶ್ರೀನಗರ: ಜಮ್ಮು–ಕಾಶ್ಮೀರದ ಶ್ರೀನಗರ–ಬಾರಾಮುಲ್ಲಾ ಹೆದ್ದಾರಿಯಲ್ಲಿ ಪ್ರಬಲವಾದ ಸುಧಾರಿತ ಸ್ಫೋಟಕ ಸಾಧನ (ಐಇಡಿ) ಸಕಾಲಿಕ ಪತ್ತೆಯೊಂದಿಗೆ ದೊಡ್ಡ ದುರಂತವನ್ನು ತಪ್ಪಿಸಲಾಗಿದೆ. ಬಾರಾಮುಲ್ಲಾ ಜಿಲ್ಲೆಯ ಪಟ್ಟನ್ ಪ್ರದೇಶದ ಪಲ್ಹಲ್ಲಾನ್ ಎಂಬಲ್ಲಿ ಹೆದ್ದಾರಿ ರಸ್ತೆಯ ಪಕ್ಕದಲ್ಲಿ ಪೊಲೀಸರು ಹಾಗೂ ಭದ್ರತಾ ಪಡೆಗಳು ಗಸ್ತು ತಿರುಗುತ್ತಿದ್ದಾಗ ಅನುಮಾನಾಸ್ಪದ ವಸ್ತುವೊಂದನ್ನು ಗುರುತಿಸಿದ್ದಾರೆ. ಪರಿಶೀಲನೆ ನಡೆಸಿದಾಗ ಶಂಕಾಸ್ಪದ ವಸ್ತು ಸುಧಾರಿತ ಸ್ಫೋಟಕ ಸಾಧನ (ಐಇಡಿ) ಎಂಬುದ ದೃಢವಾಗಿದೆ. ಇದೀಗ ಸ್ಥಳಕ್ಕೆ ಬಾಂಬ್ ನಿಷ್ಕ್ರಿಯ ದಳ ದೌಡಾಯಿಸಿದ್ದು, ಪ್ರತ್ಯೇಕ ಸ್ಥಳಕ್ಕೆ ಕೊಂಡೊಯ್ದಿದ್ದಾರೆ. ಬಾಂಬ್ ನಿಷ್ಕ್ರಿಯ ದಳವು ನಿಯಂತ್ರಿತ ಸ್ಫೋಟದಲ್ಲಿ ವಸ್ತುವನ್ನು ನಾಶಪಡಿಸಿದೆ, ಯಾವುದೇ ಹಾನಿ ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಡಿ. 13ರಂದು ಸುವರ್ಣಸೌಧ ಮುತ್ತಿಗೆ: ಕೋಡಿಹಳ್ಳಿ ಚಂದ್ರಶೇಖರ್

ದಾವಣಗೆರೆ: ರೈತರ ಬಗೆಗೆ ರಾಜ್ಯ ಸರ್ಕಾರ ತಳೆದಿರುವ ನಿರ್ಲಕ್ಷ್ಯ ಧೋರಣೆಯನ್ನು ವಿರೋಧಿಸಿ ಬೆಳಗಾವಿಯ ಸುವರ್ಣ ಸೌಧ ಮುತ್ತಿಗೆ ಚಳವಳಿಯನ್ನು ಡಿ.13 ರಂದು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ತಿಳಿಸಿದರು.

ವಿಧಾನಸಭಾ ಚುನಾವಣೆಗೂ ಮುನ್ನ ಕೃಷಿಗೆ ಸಂಬಂಧಿಸಿದಂತೆ ಪ್ರಣಾಳಿಕೆಯಲ್ಲಿ ಮಾಡಿದ್ದ ಘೋಷಣೆಗಳನ್ನು ಕಾಂಗ್ರೆಸ್ ಮರೆತಿದೆ. ರೈತಪರ ಸರ್ಕಾರ ಎಂಬ ಹೇಳಿಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಾಯಿಮಾತಿಗೆ ಸೀಮಿತವಾಗಿದೆ ಎಂದು ಸೋಮವಾರ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು.

ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಅನುಷ್ಠಾನಗೊಂಡ ಕೃಷಿ ಸಂಬಂಧಿ ಕಾನೂನುಗಳನ್ನು ಸಿದ್ದರಾಮಯ್ಯ ಟೀಕಿಸಿದ್ದರು. ಅಧಿಕಾರ ಹಿಡಿದು ಒಂದೂವರೆ ವರ್ಷ ಕಳೆದರೂ ಭೂ ಸುಧಾರಣಾ ಕಾಯ್ದೆಯ ತಿದ್ದುಪಡಿಯ ಬಗ್ಗೆ ಈವರೆಗೆ ಯಾವುದೇ ತೀರ್ಮಾನ ಕೈಗೊಂಡಿಲ್ಲ. ಬಗರ್‌ಹುಕುಂ ರೈತರಿಗೆ ಸಾಗುವಳಿ ಚೀಟಿ ನೀಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಕ್ಫ್ ಮಂಡಳಿಯ ಆಸ್ತಿಯ ನೆಪದಲ್ಲಿ ರಾಜ್ಯದ ಹಲವು ರೈತರಿಗೆ ನೋಟಿಸ್ ನೀಡಲಾಗಿದೆ. ರೈತರ ಪರವಾಗಿ ಪಹಣಿ ತಿದ್ದುಪಡಿ ಪ್ರಕ್ರಿಯೆ ಮಂದಗತಿಯಲ್ಲಿ ನಡೆಯುತ್ತಿದೆ. ಸರ್ಕಾರದ ಈ ಕ್ರಮದಿಂದ ರೈತರು ಆತಂಕಗೊಂಡಿದ್ದಾರೆ. ಅರಣ್ಯ ಇಲಾಖೆ ಸಣ್ಣ ರೈತರಿಗೆ ಕಿರುಕುಳ ನೀಡುತ್ತಿದೆ ಎಂದು ಅಸಮಾಧಾನ ಹೊರಹಾಕಿದರು.

ಇಂದು, ನಾಳೆ ಮೈಸೂರಲ್ಲಿ ಫ್ಯಾಷನವ್ಯಾ ವಸ್ತು ಪ್ರದರ್ಶನ



ಮೈಸೂರು,ಡಿ.9(ಪಿಎಂ)– ಹಲವು ಪುರಸ್ಕಾರಗಳಿಗೆ ಭಾಜನವಾಗಿರುವ ಫ್ಯಾಷನಿಸ್ಟಾ ಗ್ರೂಪ್ ಆಫ್ ಎಕ್ಸಿಬಿಷನ್ಸ್ ವತಿಯಿಂದ ಡಿ.10 ಮತ್ತು 11ರಂದು ಮೈಸೂರಿನ ಹೋಟೆಲ್ ಸದರನ್ ಸ್ಟಾರ್‌ನಲ್ಲಿ ಆರನೇ ಆವೃತ್ತಿಯ ಫ್ಯಾಷನವ್ಯಾ ವಸ್ತು ಪ್ರದರ್ಶನ ಆಯೋಜಿಸಲಾಗಿದೆ.

ಎರಡು ದಿನಗಳ ಕಾಲ ಬೆಳಗ್ಗೆ 11ರಿಂದ ರಾತ್ರಿ 9ರವರೆಗೆ ಗ್ರಾಹಕರು ಭೇಟಿ ನೀಡ ಬಹುದು. ಗ್ರಾಹಕರ ಎಲ್ಲಾ ಫ್ಯಾಷನ್ ಅಗತ್ಯತೆ ಇಲ್ಲಿ ಲಭ್ಯವಾಗಲಿವೆ. 2008ರಲ್ಲಿ ಪ್ರಾರಂಭವಾದಾಗಿನಿಂದಲೂ ಫ್ಯಾಷನಿಸ್ಟಾ, ಗ್ರಾಹಕರ ಅಗತ್ಯತೆಗಳನ್ನು ಪೂರೈಸುವಲ್ಲಿ ಮುಂಚೂಣಿಯಲಿದೆ. ದೇಶಾದ್ಯಂತ ಸಾಕಷ್ಟು ವಿನ್ಯಾಸಕಾರ ರನ್ನು ಆಹ್ವಾನಿಸುತ್ತಿದೆ.

ಮೈಸೂರಿನಂತಹ ನಗರಗಳಲ್ಲಿ ಫ್ಯಾಷನ್ ಕೊರತೆ ನೀಗಿಸುವ ನಿಟ್ಟಿನಲ್ಲಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ. ಉಡುಪು, ಆಭರಣ, ಪರಿಕರ, ಸೌಂದರ್ಯ ಉತ್ಪನ್ನ, ಸುಗಂದ ದ್ರವ್ಯ, ಗೃಹಾಲಂಕಾರ ಸಾಮಗ್ರಿ, ಉಡುಗೊರೆಗಳು ಸೇರಿದಂತೆ ಮೊದಲಾದವು ದೊರೆಯಲಿವೆ.

ದಿಯಾ ಫೌಂಡೇಷನ್‌ನ ಸಂಸ್ಥಾಪಕಿ ಸಮ್ರತಾ ಶೆಣೈ ವಸ್ತು ಪ್ರದರ್ಶನಕ್ಕೆ ಚಾಲನೆ ನೀಡಲಿದ್ದಾರೆ. ಸೈಲೆಂಟ್ ಶೋರ್ಸ್ ರೆಸಾರ್ಟ್ ಮತ್ತು ಸ್ಪಾದ ವ್ಯವಸ್ಥಾಪಕ ನಿರ್ದೇಶಕರಾದ ಜುನೂ ಅಹ್ಲುವಾಲಿಯಾ, ಎ.ಶಂಕರ ಚೆಟ್ಟಿ ಮತ್ತು ಸನ್ಸ್‌ನ ನಿರ್ದೇಶಕಿ ಪಲ್ಲವಿ ಆದರ್ಶ್ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ಕ್ರೈಂ ಬಾಕ್ಸ್

ಸಾಲಗಾರರ ಕಿರುಕುಳ: ವರುಣ ನಾಲೆಗೆ ಹಾರಿ ಕೆಎಸ್‌ಆರ್‌ಟಿಸಿ ಬಸ್ ಕಂಡಕ್ಟರ್ ಆತ್ಮಹತ್ಯೆ



ಮೈಸೂರು, ಡಿ.9(ಆರ್‌ಕೆ)– ಸಾಲದ ಹಣ ವಾಪಸ್ ಕೊಡುವಂತೆ ಸಹೋದ್ಯೋಗಿ ಒತ್ತಾಯಿಸುತ್ತಿದ್ದರಿಂದ ಬೇಸತ್ತು ಮನೆ ತೊರೆದಿದ್ದ ಕೆಎಸ್‌ಆರ್‌ಟಿಸಿ ಬಸ್ ಕಂಡಕ್ಟರ್ ಮೃತದೇಹ 10 ದಿನಗಳ ನಂತರ ವರುಣ ನಾಲೆಯಲ್ಲಿ ಪತ್ತೆಯಾಗಿದೆ.

ಕೆಎಸ್‌ಆರ್‌ಟಿಸಿ ಮೈಸೂರು ನಗರ ಘಟಕದ ಬಸ್ ಕಂಡಕ್ಟರ್ ಶ್ರೀಕಾಂತ ಯಲ್ಲಪ್ಪ (38) ಶವ ಭಾನುವಾರ ಬೆಳಗ್ಗೆ ಉದಯಗಿರಿ ಪೊಲೀಸ್ ಠಾಣಾ ವ್ಯಾಪ್ತಿಯ ವರುಣ ನಾಲೆಯಲ್ಲಿ ಪತ್ತೆಯಾಗಿದ್ದು, ಸಹೋದ್ಯೋಗಿ ಗುರುರಾಜ ಉಪಾಸ ಹಾಗೂ ಆತನ ಸ್ನೇಹಿತ ಸುಭಾಷ್, ಸಾಲದ ಹಣಕ್ಕೆ ಪೀಡಿಸುತ್ತಿದ್ದರು ಎನ್ನಲಾಗಿದ್ದು, ಅದರಿಂದ ಮನನೊಂದು 10 ದಿನಗಳ ಹಿಂದೆ ಯಲ್ಲಪ್ಪ ಮನೆ ತೊರೆದಿದ್ದರು.

ಈ ಸಂಬಂಧ ಮೊದಲು ಮೈಸೂರು ದಕ್ಷಿಣ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿದ್ದರಾದರೂ, ಇದು ಉದಯಗಿರಿ ಠಾಣಾ ವ್ಯಾಪ್ತಿಗೆ ಬರುತ್ತಿದ್ದರಿಂದ ಅವರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಶ್ರೀಕಾಂತ್ ಯಲ್ಲಪ್ಪ ಅವರು ತಮ್ಮ ಮಗನ ಚಿಕಿತ್ಸೆಗಾಗಿ ಸಹೋದ್ಯೋಗಿ ಗುರುರಾಜ ಉಪಾಸ ಬಳಿ 3 ಲಕ್ಷ ರೂ. ಸಾಲ ಪಡೆದಿದ್ದು, ಆ ಹಣವನ್ನು ವಾಪಸ್ ನೀಡುವಂತೆ ಹಾಗಾಗ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ ಎನ್ನಲಾಗಿದೆ. ಅದರಿಂದ ಮನನೊಂದು ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆಂದು ಕುಟುಂಬದವರು ದೂರು ನೀಡಿದ್ದಾರೆ.


ಯಲ್ಲಪ್ಪ ಅವರ ಸಂಬಂಧಿಕರೊಬ್ಬರು ಮಧ್ಯ ಪ್ರವೇಶಿಸಿ, 2 ಲಕ್ಷ ರೂ.ಗಳನ್ನು ಕೊಟ್ಟು ಉಳಿದ ಹಣಕ್ಕೆ ಕಾಲಾವಕಾಶ ಕೇಳಿದ್ದರೂ ಹೆಚ್ಚುವರಿಯಾಗಿ ಬಡ್ಡಿ ಸೇರಿಸಿ 5 ಲಕ್ಷ ರೂ.ಗಳಿಗೆ ಒತ್ತಾಯ ಇಟ್ಟಿದ್ದರು ಎಂದು ಮನೆಯಿಂದ ಹೊರಡುವ ಮುಂಚೆ ಬರೆದಿಟ್ಟಿರುವ ತಮ್ಮ ಡೆತ್‌ನೋಟ್‌ನಲ್ಲಿ ತಿಳಿಸಿದ್ದಾರೆಂದು ದೂರಿನಲ್ಲಿ ಹೇಳಲಾಗಿದೆ. ಪ್ರಕರಣ ದಾಖಲಿಸಿಕೊಂಡಿರುವ ಉದಯಗಿರಿ ಠಾಣೆ ಪೊಲೀಸರು ತನಿಖೆ ಕೈಗೊಂಡಿದ್ದು, ಆರೋಪಿಗಳನ್ನು ವಿಚಾರಣೆ ನಡೆಸುತ್ತಿದ್ದಾರೆ.

ಮದುವೆಯಾಗುವಂತೆ ಯುವತಿಯನ್ನು ಪೀಡಿಸುತ್ತಿದ್ದವನ ವಿರುದ್ಧ ದೂರು ದಾಖಲು

ಮೈಸೂರು, ಡಿ.9(ಆರ್‌ಕೆ)– ತನ್ನನ್ನು ಮದುವೆಯಾಗುವಂತೆ ಯುವತಿಯನ್ನು ಪೀಡಿಸುತ್ತಿದ್ದ ಯುವಕನ ವಿರುದ್ಧ ಮೈಸೂರಿನ ಮೇಟಗಳ್ಳಿ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಮೈಸೂರಿನ ಇನ್‌ಫೋಸಿಸ್ ಟೆಕ್ನಾಲಜೀಸ್‌ನ ಟೆಕ್ನಿಕಲ್ ಸಪೋರ್ಟ್ ಸ್ಪೆಷಲಿಸ್ಟ್ ಆಗಿ ಕೆಲಸ ಮಾಡುತ್ತಿರುವ ಬೆಂಗಳೂರು ಮೂಲದ ಇಂದು ನೀಡಿದ ದೂರಿನನ್ವಯ ಬೆಂಗಳೂರಿನ ಕೆಂಗೇರಿ ಸುಂಕಲ್‌ಪಾಳ್ಯ ನಿವಾಸಿ ಮಧುನಂದನ್ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಇಂದು ಮತ್ತು ಮಧುನಂದನ್ ಅವರ ಮದುವೆಗೆ ಜೂನ್ ತಿಂಗಳು ಮಾತುಕತೆ ನಡೆದು, ತದನಂತರ ಕಾರಣಾಂತರಗಳಿಂದ ಅದು ಮುರಿದುಬಿದ್ದಿತ್ತು ಆದರೂ ಇಂದುವನ್ನು ಮದುವೆಯಾಗಲು ಮಧುನಂದನ್ ಹಠಕ್ಕೆ ಬಿದ್ದು, ಕಳೆದ 4 ದಿನಗಳ ಹಿಂದೆ ಮೈಸೂರಿನ ಕುಂಬಾರಕೊಪ್ಪಲು ಸುಭಾಷ್‌ನಗರದಲ್ಲಿರುವ ಇಂದು ಮನೆಗೆ ತಮ್ಮ ಮನೆಯವರೊಡಗೂಡಿ ತೆರಳಿ ರಂಪಾಟ ಮಾಡಿ, ತನ್ನ ಮೇಲೆ ಹಲ್ಲೆ ನಡೆಸಿ, ಬೆದರಿಕೆ ಹಾಕಿದ್ದ ಬಗ್ಗೆ ಇಂದು ಪೊಲೀಸರಿಗೆ ದೂರು ನೀಡಿದ್ದರು. ಅದರನ್ವಯ ಮೇಟಗಳ್ಳಿ ಠಾಣೆ ಪೊಲೀಸ್ ಇನ್‌ಸ್ಪೆಕ್ಟರ್ ದಿವಾಕರ್ ಪ್ರಕರಣ ದಾಖಲಿಸಿಕೊಂಡು, ತನಿಖೆ ನಡೆಸುತ್ತಿದ್ದಾರೆ.

ಅಭಿನಂದನೆ...



ಮೈಸೂರು ಜಿಲ್ಲಾ ಸರ್ಕಾರಿ ನೌಕರರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಡಾ.ಸಿ.ಬಿ.ಅರುಣ್‌ಕುಮಾರ್ ಅವರನ್ನು ಸ್ಪಂದನ ಸಾಂಸ್ಕೃತಿಕ ಪರಿಷತ್ತಿನ ಅಧ್ಯಕ್ಷ ಟಿ.ಸತೀಶ್ ಜವರೇಗೌಡ ಸನ್ಮಾನಿಸಿದರು. ಈ ಸಂದರ್ಭದಲ್ಲಿ ರಂಗಕರ್ಮಿ ಚಂದ್ರ ಮಂಡ್ಯ, ಸಾಹಿತಿ ಚಂದ್ರಶೇಖರ ಮಾದರಹಳ್ಳಿ, ಶಿಕ್ಷಕರ ಸಂಘದ ಮುಖಂಡರಾದ ನಾಗಸುಂದರ್, ಉಪನ್ಯಾಸಕ ರಮೇಶ್ ಉಪಸ್ಥಿತರಿದ್ದರು.

ನವದೆಹಲಿಯ ಹಲವು ಶಾಲೆಗಳಿಗೆ ಬಾಂಬ್ ಬೆದರಿಕೆ: ವಿದ್ಯಾರ್ಥಿಗಳ ಸ್ಥಳಾಂತರ



ನವದೆಹಲಿ: ರಾಜಧಾನಿ ನವದೆಹಲಿಯ ಹಲವು ಖಾಸಗಿ ಶಾಲೆಗಳಿಗೆ ಸೋಮವಾರ ಬೆಳಗ್ಗೆ ಬಾಂಬ್ ಬೆದರಿಕೆ ಬಂದಿದ್ದು, ಅಧಿಕಾರಿಗಳು ತ್ವರಿತ ಮುನ್ನೆಚ್ಚರಿಕಾ ಕ್ರಮ ಕೈಗೊಂಡಿದ್ದಾರೆ.

ದೆಹಲಿ ಪೊಲೀಸರ ಪ್ರಕಾರ, 40ಕ್ಕೂ ಹೆಚ್ಚು ಶಾಲೆಗಳಿಗೆ ಬೆದರಿಕೆ ಬಂದಿವೆ. ಇಮೇಲ್ ಮೂಲಕ ಬೆದರಿಕೆಗಳನ್ನು ಕಳುಹಿಸಲಾಗಿದೆ. ಇನ್ನು ಮುಂದೆ ಬೆದರಿಕೆ ಬರಬಾರದು ಎಂದಾದರೆ 30 ಸಾವಿರ ಡಾಲರ್ ಹಣ ನೀಡಬೇಕು. ಇಲ್ಲದಿದ್ದರೆ ಶಾಲಾ ಕಟ್ಟಡಗಳ ಒಳಗೆ ಹಾಕಲಾದ ಸ್ಫೋಟಕಗಳನ್ನು ಸ್ಫೋಟಿಸುವುದಾಗಿ ಭೀತಿ ಹುಟ್ಟಿಸಲಾಗಿದೆ.

ಕಳುಹಿಸಲಾಗಿರುವ ಬೆದರಿಕೆ ಮೇಲ್‌ನಲ್ಲಿ, ನಾನು ಶಾಲೆಗಳ ಕಟ್ಟಡಗಳ ಒಳಗೆ ಅನೇಕ ಬಾಂಬ್‌ಗಳನ್ನು ಇಟ್ಟಿದ್ದೇನೆ. ಬಾಂಬ್‌ಗಳು ಚಿಕ್ಕದಾಗಿದ್ದು ಅಡಗಿಸಿ ಇಡಲಾಗಿದೆ. ಇದರಿಂದ ಕಟ್ಟಡಕ್ಕೆ ಹೆಚ್ಚಿನ ಹಾನಿಯಾಗುವುದಿಲ್ಲ, ಆದರೆ ಬಾಂಬ್‌ಗಳನ್ನು ಸ್ಫೋಟಿಸುವಾಗ ಅನೇಕರು ಗಾಯಗೊಳ್ಳಬಹುದು. ನನಗೆ 30 ಸಾವಿರ ಡಾಲರ್ ಹಣ ಬರದಿದ್ದರೆ ಸ್ಫೋಟಿಸುತ್ತೇನೆ ಎಂದು ಬೆದರಿಕೆ ಹಾಕಲಾಗಿದೆ. ಈ ಇಮೇಲ್ ನಿನ್ನೆ (ಡಿ.8) ರಾತ್ರಿ 11:38ರ ಸುಮಾರಿಗೆ ಬಂದಿದೆ. ದೆಹಲಿ ಪೊಲೀಸರು, ಬಾಂಬ್ ನಿಷ್ಕ್ರಿಯ ದಳಗಳು, ಇತರ ತುರ್ತು ಸೇವೆಗಳ ಸಹಯೋಗದೊಂದಿಗೆ ತಕ್ಷಣದ ತನಿಖೆಗಳು ಮತ್ತು ಶೋಧ ಪ್ರಾರಂಭಿಸಿ, ಕೆಲವು ಶಾಲೆಗಳಲ್ಲಿ ಮಕ್ಕಳನ್ನು ಸ್ಥಳಾಂತರಿಸಲಾಗಿದೆ. ಪರಿಶೀಲನೆ ನಂತರ ಯಾವುದೇ ಸ್ಫೋಟಕ ಪತ್ತೆ ಆಗಿಲ್ಲ.

ವಕ್ಫ್ ವಿವಾದ: ಲೋಕಾಯುಕ್ತ ವರದಿ ಬಗ್ಗೆ ಜೆಪಿಸಿ ಅಧ್ಯಕ್ಷರಿಗೆ ಬಿಜೆಪಿ ಸಂಸದ ಲೆಹರ್ ಸಿಂಗ್ ಪತ್ರ



ಲೆಹರ್ ಸಿಂಗ್

ನವದೆಹಲಿ: ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ 2016ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಲೋಕಾಯುಕ್ತ ವರದಿಯನ್ನು ಹತ್ತಿಕ್ಕಿರುವ ಕುರಿತು ಜಂಟಿ ಸಂಸದೀಯ ಸಮಿತಿ(ಜೆಪಿಸಿ) ಅಧ್ಯಕ್ಷ ಜಗದಾಂಬಿಕಾ ಪಾಲ್ ಅವರಿಗೆ ಭಾರತೀಯ ಜನತಾ ಪಕ್ಷದ(ಬಿಜೆಪಿ) ಸಂಸದ ಲೆಹರ್ ಸಿಂಗ್ ಸಿರೋಯಾ ಅವರು ಸೋಮವಾರ ಪತ್ರ ಬರೆದಿದ್ದಾರೆ.

ವಕ್ಫ್ ಆಸ್ತಿಗಳ ಒತ್ತುವರಿ ಕುರಿತ ಉಪ ಲೋಕಾಯುಕ್ತ ನ್ಯಾಯಮೂರ್ತಿ ಎನ್.ಆನಂದ್ ಅವರ ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಏಕೆ ಮರೆ ಮಾಚುತ್ತಿದ್ದಾರೆ ಎಂದು ಡಿಸೆಂಬರ್ 9ರಂದು ಬರೆದ ಪತ್ರದಲ್ಲಿ ಸಿರೋಯಾ ಪ್ರಶ್ನಿಸಿದ್ದಾರೆ. ಮಾಜಿ ಕರ್ನಾಟಕ ಉಪ ಲೋಕಾಯುಕ್ತ, ನ್ಯಾಯಮೂರ್ತಿ ಎನ್.ಆನಂದ್ ಅವರು ತಯಾರಿಸಿದ ಮತ್ತು ಮಾರ್ಚ್ 2016ರಲ್ಲಿ ಕರ್ನಾಟಕ ಸರ್ಕಾರಕ್ಕೆ ಸಲ್ಲಿಸಿದ ತನಿಖಾ ವರದಿ ಬಗ್ಗೆ ನಿಮ್ಮ ಗಮನಕ್ಕೆ ತರಲಾಗುತ್ತಿದೆ. ಕರ್ನಾಟಕದಲ್ಲಿ ದಶಕಗಳಿಂದ ವಕ್ಫ್ ಆಸ್ತಿಗಳನ್ನು ರಕ್ಷಿಸಲು ಕಾನೂನುಬದ್ಧವಾಗಿ ಅಧಿಕಾರ ಹೊಂದಿರುವವರು ಕಾನೂನುಬಾಹಿರವಾಗಿ ಒತ್ತುವರಿ ಮಾಡಿಕೊಂಡಿದ್ದಾರೆ. ಬೇಲಿಯೇ ಎದ್ದು ಹೊಲ ಮೇಯ್ದದಂತಾಗಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಇದಲ್ಲದೆ, ಕಾಂಗ್ರೆಸ್ ಸರ್ಕಾರವು ಏಕೆ ಗಾಬರಿಗೊಂಡು ತಮ್ಮದೇ ಆದ ತನಿಖೆಯ ಆದೇಶವನ್ನು ಹಿಂಪಡೆದಿದೆ ಮತ್ತು ಮುಖ್ಯಮಂತ್ರಿ ಯಾರನ್ನು ರಕ್ಷಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಲೆಹರ್‌ಸಿಂಗ್ ಸಿರೋಯಾ ಅವರು ಪ್ರಶ್ನಿಸಿದ್ದಾರೆ.

ಸರ್ಕಾರವು ಗಾಬರಿಗೊಂಡು ತನ್ನ ಸ್ವಂತ ತನಿಖಾ ಆದೇಶವನ್ನು ಏಕೆ ಹಿಂತೆಗೆದುಕೊಂಡಿತು 2016 ರಲ್ಲಿ ಸಿದ್ದರಾಮಯ್ಯ ಸರ್ಕಾರ ಯಾರನ್ನು ರಕ್ಷಿಸಲು ಪ್ರಯತ್ನಿಸಿತ್ತು. ವಕ್ಫ್ ಆಸ್ತಿಗಳ ಅತಿಕ್ರಮಣ ಮತ್ತು ಅಲ್ಪಸಂಖ್ಯಾತರ ಕಾರಣದ ಬಗ್ಗೆ ಸರ್ಕಾರಕ್ಕೆ ನಿಜವಾಗಿಯೂ ಕಾಳಜಿ ಇದ್ದರೆ, ಈ ತನಿಖಾ ಆಯೋಗವನ್ನು ಏಕೆ ವಿಸರ್ಜಿಸಿತು. ರಾತ್ರೋರಾತ್ರಿ ವರದಿ ಬಂದರೆ ಕಾಂಗ್ರೆಸ್‌ನ ಕೆಲವು ದೊಡ್ಡ ಹೆಸರುಗಳು, ಸಿದ್ದರಾಮಯ್ಯ ಅವರ ಸ್ನೇಹಿತರು, ಪಕ್ಷ ಮತ್ತು ಸರ್ಕಾರದ ಮಿತ್ರರು ಇದ್ದಾರೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ವಕ್ಫ್ ಶಾಸನದ ಭವಿಷ್ಯಕ್ಕೆ ಸಂಬಂಧಿಸಿದಂತೆ ಸೂಕ್ತ ನಿರ್ಧಾರಗಳು ಮತ್ತು ತೀರ್ಮಾನಗಳಿಗೆ ಬರುವಂತೆ ಸಿರೋಯಾ ಸಮಿತಿಗೆ ಮನವಿ ಮಾಡಿದ್ದಾರೆ.

ಸಂಜಯ್ ಮಲ್ಹೋತ್ರಾ ಆರ್‌ಬಿಐ ಮುಖ್ಯಸ್ಥ



ನವದೆಹಲಿ: ಭಾರತೀಯ ರಿಸರ್ವ್ ಬ್ಯಾಂಕ್‌ನ ನೂತನ ಮುಖ್ಯಸ್ಥರಾಗಿ ಸಂಜಯ್ ಮಲ್ಹೋತ್ರಾ ಅವರನ್ನು ನೇಮಕ ಮಾಡಿ ಕೇಂದ್ರ ಸರ್ಕಾರ ಆದೇಶ ಹೊರಡಿಸಿದ್ದು, ಆ ಮೂಲಕ ಮತ್ತೆ ಆರ್‌ಬಿಐ ನೇತೃತ್ವ ವಹಿಸಿಕೊಳ್ಳುವ ಹಾಲಿ ಮುಖ್ಯಸ್ಥ ಶಕ್ತಿಕಾಂತ್ ದಾಸ್ ಅವರಿಗೆ ತೀವ್ರ ಹಿನ್ನಡೆಯಾಗಿದೆ.

ಕೇಂದ್ರ ಸರ್ಕಾರವು ಕಂದಾಯ ಕಾರ್ಯದರ್ಶಿ ಸಂಜಯ್ ಮಲ್ಹೋತ್ರಾ ಅವರನ್ನು ಮುಂದಿನ ರಿಸರ್ವ್ ಬ್ಯಾಂಕ್ ಗವರ್ನರ್ ಆಗಿ ನೇಮಿಸಿದೆ. ಮಲ್ಹೋತ್ರಾ, 1990ರ ಬ್ಯಾಚ್ ರಾಜಸ್ಥಾನ ಕೇಡರ್ IAS ಅಧಿಕಾರಿಯಾಗಿದ್ದು, ಹಾಲಿ ಮುಖ್ಯಸ್ಥ ಶಕ್ತಿಕಾಂತ ದಾಸ್ ಅವರ ಅಧಿಕಾರಾವಧಿಯು ಮಂಗಳವಾರ (ಡಿಸೆಂಬರ್ 10, 2024) ಕೊನೆಗೊಳ್ಳಲಿದೆ. ಹೀಗಾಗಿ ಮಲ್ಹೋತ್ರಾ ಅವರನ್ನು 26ನೇ ಆರ್‌ಬಿಐ ಗವರ್ನರ್ ಆಗಿ ಆಯ್ಕೆ ಮಾಡಲಾಗಿದೆ. ಆರ್‌ಬಿಐ ನೂತನ ಗವರ್ನರ್ ಆಗಿ ಸಂಜಯ್ ಮಲ್ಹೋತ್ರಾ ಅವರನ್ನು ನೇಮಕ ಮಾಡಿ ಕೇಂದ್ರ ಸರಕಾರ ಡಿ.9 ರಂದು ಸೋಮವಾರ ಆದೇಶ ಹೊರಡಿಸಿದೆ.

ಸಾಮಾಜಿಕ ನ್ಯಾಯದಡಿ ಇಂದು ಉಡುಪಿಯಿಂದ ಬೆಳಗಾವಿಗೆ ಎಸ್‌ಡಿಪಿಐ ವತಿಯಿಂದ 'ಚಲೋ ಬೆಳಗಾಂ ಅಂಬೇಡ್ಕರ್ ಜಾಥಾ'



ಮೈಸೂರು,ಡಿ.9(ಎಂಟಿವೈ)–ಸಾಮಾಜಿಕ ನ್ಯಾಯದ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಡಿ.10 ರಂದು ಉಡುಪಿಯಿಂದ ಬೆಳಗಾವಿಯ ಸುವರ್ಣ ಸೌಧಕ್ಕೆ 'ಚಲೋ ಬೆಳಗಾಂ ಅಂಬೇಡ್ಕರ್ ಜಾಥಾ' ಹಮ್ಮಿಕೊಳ್ಳಲಾಗಿದೆ ಎಂದು ಎಸ್‌ಡಿಪಿಐ ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿವಿಧ ವಿಷಯಗಳ ಬಗ್ಗೆ ಸರ್ಕಾರದ ಗಮನ ಸೆಳೆಯುವುದರೊಂದಿಗೆ ಸಾಮಾಜಿಕ ನ್ಯಾಯದ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಜಾಥ ನಡೆಸಲಾಗುತ್ತಿದೆ. ಉಡುಪಿಯಿಂದ ಹೊರಡುವ ವಾಹನ ಜಾಥಾ ದಕ್ಷಿಣ ಕನ್ನಡ, ಚಿಕ್ಕಮಗಳೂರು, ಶಿವಮೊಗ್ಗ, ದಾವಣಗೆರೆ, ಹಾವೇರಿ, ಕೊಪ್ಪಳ, ಬಾಗಲಕೋಟೆ, ಹುಬ್ಬಳ್ಳಿ, ಧಾರವಾಡ ಜಿಲ್ಲೆಗಳ ಮೂಲಕ ಸಾಗಿ ಡಿಸೆಂಬರ್ 16ರಂದು ಬೆಳಗಾವಿಯ ಸುವರ್ಣ ವಿಧಾನಸೌಧ ತಲುಪಲಿದೆ. ಈ ಜಾಥಾದಲ್ಲಿ ಐದು ಸಾವಿರ ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ದಲಿತರು, ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳ ಜ್ವಲಂತ ಸಮಸ್ಯೆಗೆ ಶಾಶ್ವತ ಪರಿಹಾರ ನೀಡುತ್ತಿಲ್ಲ. ಕೇವಲ ನೆಪಮಾತ್ರಕ್ಕೆ ಹೇಳಿಕೆ ನೀಡಿ ಕಣ್ಣೊರೆಸುವ ತಂತ್ರ ಅನುಸರಿಸುತ್ತಿದೆ. ಹೀಗಾಗಿ ಈ ಅಂಬೇಡ್ಕರ್ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಅಬ್ದುಲ್ ಮಜೀದ್ ಹೇಳಿದರು.

ಪರಿಶಿಷ್ಟರಿಗೆ ಒಳ ಮೀಸಲಾತಿ ಜಾರಿಗೊಳಿಸಬೇಕು. ಮುಸ್ಲಿಮರಿಗೆ 2ಬಿ ಮೀಸಲಾತಿ ಮರುಸ್ಥಾಪಿಸಿ, ಅದನ್ನು ಶೇ.8ಕ್ಕೆ ಹೆಚ್ಚಿಸಬೇಕು. ಕಾಂತರಾಜ್ ವರದಿಯನ್ನು ಸಾರ್ವಜನಿಕಗೊಳಿಸಿ, ಅನುಷ್ಠಾನಗೊಳಿಸಬೇಕು. ವಕ್ಫ್ ಆಸ್ತಿ ರಕ್ಷಿಸಬೇಕು. ಬಿಜೆಪಿ ಸರ್ಕಾರ ಸಂವಿಧಾನಬಾಹಿರವಾಗಿ ಜಾರಿಗೆ ತರಲು ಹೊರಟಿರುವ ವಕ್ಫ್ ತಿದ್ದುಪಡಿ ವಿಧೇಯಕವನ್ನು ಜಾರಿಗೊಳಿಸದಂತೆ ಸದನದಲ್ಲಿ ನಿರ್ಣಯ ಅಂಗೀಕರಿಸಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಎಸ್‌ಡಿಪಿಐ ಪದಾಧಿಕಾರಿಗಳಾದ ರಫತ್‌ಖಾನ್, ದೇವನೂರು ಪುಟ್ಟನಂಜಯ್ಯ, ಎಸ್.ಸ್ವಾಮಿ ಇದ್ದರು.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು,ಡಿ.9–ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಡಿ.12ರಂದು ಬೆಳಗ್ಗೆ 10ರಿಂದ ರಾತ್ರಿ 8 ರವರೆಗೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821-4259259 ಸಂಪರ್ಕಿಸಬಹುದು.

ದೇವರಾಜ ಅರಸು ಕಾಲೋನಿಯಲ್ಲಿ ಕೋಟಿ ರೂ. ವೆಚ್ಚದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣ



ದೇವರಾಜ ಅರಸು ಕಾಲೋನಿಯಲ್ಲಿ(ವಿಶ್ವೇಶ್ವರನಗರ) ಡಾ.ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣಕ್ಕೆ ಶಾಸಕ ಟಿ.ಎಸ್.ಶ್ರೀವತ್ಸ ಶಂಕುಸ್ಥಾಪನೆ ನೆರವೇರಿಸಿದರು.

ಮೈಸೂರು, ಡಿ. 9– ಕೃಷ್ಣರಾಜ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ದೇವರಾಜ ಅರಸು ಕಾಲೋನಿಯಲ್ಲಿ(ವಿಶ್ವೇಶ್ವರನಗರ) ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣಕ್ಕೆ ಶಾಸಕ ಟಿ.ಎಸ್.ಶ್ರೀವತ್ಸ ಶಂಕುಸ್ಥಾಪನೆ ನೆರವೇರಿಸಿದರು.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮಂಜೂರಾಗಿರುವ 1 ಕೋಟಿ ರೂ.ವೆಚ್ಚದ ಕಾಮಗಾರಿಯನ್ನು ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮ (ಕೆಆರ್‌ಐಡಿಎಲ್) ವಹಿಸಿಕೊಂಡಿದೆ. ಬಳಿಕ ಮಾತನಾಡಿದ ಅವರು, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣಕ್ಕೆ ಒಂದು ಕೋಟಿ ರೂಪಾಯಿ ಮಂಜೂರಾಗಿದ್ದು, ಇದನ್ನು ಕೆಆರ್‌ಐಡಿಎಲ್ ವತಿಯಿಂದ ನಿರ್ಮಾಣ ಮಾಡಲಾಗುತ್ತದೆ. ಕಾಮಗಾರಿಯು ಗುಣಮಟ್ಟದಿಂದ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗೆ ವಹಿಸಲಾಗಿದೆ ಎಂದರು.

ದೇವರಾಜ ಅರಸು ಕಾಲೋನಿಯಲ್ಲಿ ದಲಿತರು, ಪೌರಕಾರ್ಮಿಕ ಸಮುದಾಯದ ಜನರು ಹೆಚ್ಚಾಗಿ ವಾಸಮಾಡುತ್ತಿದ್ದಾರೆ. ಶುಭ ಸಮಾರಂಭಗಳನ್ನು ಏರ್ಪಡಿಸಲು ಸಮುದಾಯ ಭವನದ ಅಗತ್ಯವಿದೆ ಎನ್ನುವ ಮನವಿಯನ್ನು ಪರಿಗಣಿಸಿ ನಿರ್ಮಾಣ ಮಾಡಲಾಗುತ್ತಿದೆ. ಕಟ್ಟಡ ನಿರ್ಮಾಣಗೊಂಡ ಬಳಿಕ ಸಾರ್ವಜನಿಕರು ಬಳಸಬೇಕು ಎಂದು ಸಲಹೆ ನೀಡಿದರು.

ಕೆಆರ್‌ಐಡಿಎಲ್ ಸಹಾಯಕ ಕಾರ್ಯಪಾಲಕ ಅಭಿಯಂತರ ಅರ್ಚನ, ಸಹಾಯಕ ಅಭಿಯಂತರ ವಿವೇಕ್, ಪಾಲಿಕೆ ಮಾಜಿ ಸದಸ್ಯೆ ಶಾಂತಮ್ಮ ವಡಿವೇಲು, ಕೆಆರ್ ಕ್ಷೇತ್ರದ ಬಿಜೆಪಿ ಪ್ರಧಾನ ಕಾರ್ಯದರ್ಶಿ ಜಯರಾಮು, ಆದಿದ್ರಾವಿಡ ಮಹಾಸಭಾದ ಮುಖಂಡರಾದ ಎನ್.ಮಾರ, ಶ್ರೀನಿವಾಸ್, ವಿಜಯ, ಮಂಜಯ್ಯ, ಮಹದೇವು, ನಾಗರಾಜು, ಯೋಗಾನಂದ, ಪಳನಿಸ್ವಾಮಿ ಮತ್ತಿತರ ಮುಖಂಡರು ಹಾಜರಿದ್ದರು.

ಸಾರ್ವಜನಿಕ ಕುಂದುಕೊರತೆ ನಿರ್ವಹಣೆ ಕುರಿತು ತರಬೇತಿ



ಸಾರ್ವಜನಿಕ ಕುಂದುಕೊರತೆ ನಿರ್ವಹಣೆ ಕುರಿತು ನೂತನ ಇಂಜಿನಿಯರ್‌ಗಳಿಗೆ ತರಬೇತಿ ನೀಡಲಾಯಿತು.

ಮೈಸೂರು: ಮೈಸೂರಿನ ರಾಜ್ಯ ನೀರಾವರಿ ಇಲಾಖೆಯ ಶಿಬ್ಬಂದಿ ತರಬೇತಿ ಸಂಸ್ಥೆಯಲ್ಲಿ ನಡೆದ ಹೊಸದಾಗಿ ಸೇರ್ಪಡೆಗೊಂಡ ಇಂಜಿನಿಯರ್ ತಂಡಕ್ಕೆ ಸಾರ್ವಜನಿಕ ಕುಂದುಕೊರತೆ ನಿರ್ವಹಣೆ ಮತ್ತು ಭಾಷಣ ಕೌಶಲಗಳ ವಿಶೇಷ ತರಬೇತಿ ಕಾರ್ಯಕ್ರಮವನ್ನು ಡಿ.ಆರ್.ಡಿ.ಓ ಸಂಸ್ಥೆಯ ಮಾಜಿ ಪ್ರಧಾನ ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಾಷ್ಟ್ರೀಯ ತರಬೇತುದಾರರಾದ ಡಾ.ಕೆ.ಜಯಪ್ರಕಾಶ್‌ರಾವ್ ನಡೆಸಿಕೊಟ್ಟರು.

ಸಮಸ್ಯೆಗಳನ್ನು ಸಮಾಧಾನದಿಂದ ಆಲಿಸುವ ಹಾಗೂ ಸಂಯಮದಿಂದ ನಿರ್ವಹಣೆ ಮಾಡುವ ಕೌಶಲಗಳ ವಿಧಾನಗಳ ಕುರಿತು ಅಧಿಕಾರಿಗಳು ಮನವರಿಕೆ ಮಾಡಿಕೊಂಡು ತಮ್ಮ ಸೇವಾವಧಿಯಲ್ಲಿ ಗ್ರಾಹಕರ ಕಷ್ಟಗಳಿಗೆ ಸ್ಪಂದಿಸುವಂತೆ ಡಾ.ರಾವ್ ಸಲಹೆ ನೀಡಿದರು. ಸಂಸ್ಥೆಯ ಉಪ ಪ್ರಾಂಶುಪಾಲ ಹೇಮಚಂದ್ರ ಹಾಜರಿದ್ದ ಕಾರ್ಯಕ್ರಮದಲ್ಲಿ ಶ್ರೀಮತಿ ವರಲಕ್ಷ್ಮಿ ಸ್ವಾಗತಿಸಿದರು. ಕನ್ನಡದ ಲೇಖಕ ಡಾ.ರಾವ್ ನಗರದಲ್ಲಿನ ಹಲವು ಪ್ರತಿಷ್ಠಿತ ತರಬೇತಿ ಸಂಸ್ಥೆಗಳಾದ ರಾಜ್ಯ ಪೊಲೀಸ್ ಅಕಾಡೆಮಿ, ವಿವಿಧ ಇಂಜಿನಿಯರಿಂಗ್ ಕಾಲೇಜ್‌ಗಳ ಗೌರವ ಉಪನ್ಯಾಸಕರಾಗಿದ್ದು, ಈ ವರ್ಷದ ಮೈಸೂರು ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

ಅಧಿವೇಶನದ ಮೊದಲ ದಿನವೇ ಬಿಜೆಪಿ ಶಾಸಕರಲ್ಲಿ ಸಮನ್ವಯ ಕೊರತೆ ಬಯಲು

ಬೆಳಗಾವಿ,ಡಿ.9–ವಿಧಾನಸಭೆ ಕಲಾಪದ ಮೊದಲ ದಿನವೇ ಬಿಜೆಪಿ ನಾಯಕರ ನಡುವಿನ ಸಮನ್ವಯತೆ ಕೊರತೆ ಬಯಲಾಗಿದೆ. ಸಂತಾಪ ಸೂಚನೆ ಬಳಿಕ ವಕ್ಫ್ ಪ್ರಕರಣ ಕುರಿತು ವಿಪಕ್ಷ ನಾಯಕ ಆರ್.ಅಶೋಕ್ ನಿಲುವಳಿ ಸೂಚನೆಗೆ ಅವಕಾಶ ಕೋರಲು ಮುಂದಾದರು.

ಈ ಸಂದರ್ಭದಲ್ಲಿ ಸಚಿವರು ಆಕ್ಷೇಪಿಸಿದ ಕಾರಣ ಸದನದಲ್ಲಿ ಗದ್ದಲವುಂಟಾಯಿತು. ಈ ಗದ್ದಲದ ಮಧ್ಯೆಯೇ ಪಂಚಮಸಾಲಿ ಹೋರಾಟಕ್ಕೆ ಸರ್ಕಾರದ ತಡೆ ಬಗ್ಗೆ ಚರ್ಚೆಗೆ ಏಕಾಏಕಿ ಯತ್ನಾಳ್ ಎದ್ದು ನಿಂತು ಒತ್ತಾಯಿಸಿದರು. ಇದರಿಂದ ಆರ್.ಅಶೋಕ್‌ಗೆ ಗೊಂದಲವುಂಟಾಯಿತು. ಈ ಸಂದರ್ಭದಲ್ಲಿ ಯತ್ನಾಳ್ ಜತೆ ಕೈಜೋಡಿಸಿದ ಪಂಚಮಸಾಲಿ ಸಮುದಾಯದ ಬಿಜೆಪಿ ಸದಸ್ಯರು ಸದನದ ಬಾವಿಗಿಳಿದು ಸರ್ಕಾರ ಪ್ರತಿಭಟನೆಗೆ ಅವಕಾಶ ಕೊಡಬೇಕೆಂದು ಆಗ್ರಹಿಸಿ, ಧರಣಿಗೆ ಮುಂದಾದರು.

ಈ ವೇಳೆ ಬಿಜೆಪಿ ಕಾಲೆಳೆದ ಕಾಂಗ್ರೆಸ್ ಸದಸ್ಯರು, ಬಿಜೆಪಿಯಲ್ಲಿ ಒಗ್ಗಟ್ಟಿಲ್ಲ ಎಂದು ಟಾಂಗ್ ಕೊಟ್ಟರು. ಕೊನೆಗೆ ಎಚ್ಚೆತ್ತ ಅಶೋಕ್, ಪಂಚಮಸಾಲಿ ಮೀಸಲಾತಿ ಹೋರಾಟಕ್ಕೆ ತಡೆ ವಿಚಾರಕ್ಕೆ ಡೈವರ್ಟ್ ಆಗುವ ಮೂಲಕ ಡ್ಯಾಮೇಜ್ ಕಂಟ್ರೋಲ್‌ಗೆ ಪ್ರಯತ್ನಿಸಿದರು. ಇನ್ನು ವಿಧಾನಸಭೆ ಕಲಾಪದಲ್ಲಿ ಒಟ್ಟಿಗೆ ಭಾಗವಹಿಸಿದರೂ ವಿಜಯೇಂದ್ರ ಮತ್ತು ಯತ್ನಾಳ್ ಮುಖಾಮುಖಿ ಆಗಲಿಲ್ಲ. ಪರಸ್ಪರ ಮಾತೂ ಆಡಲಿಲ್ಲ, ನೋಡಲೂ ಇಲ್ಲ. ಅವರಲ್ಲಿ ಇವರಿಲ್ಲಿ ಅನ್ನುವಂತಾಗಿತ್ತು. ಇದೇ ಸಂದರ್ಭದಲ್ಲಿ ತಮ್ಮ ವಿರುದ್ಧ ಶಿಸ್ತು ಕ್ರಮಕ್ಕೆ ಕೋರ್ ಕಮಿಟಿ ಶಿಫಾರಸು ಮಾಡಿದ ಬಗ್ಗೆ ಶಾಸಕ ಎಸ್.ಟಿ.ಸೋಮಶೇಖರ್, ವಿಜಯೇಂದ್ರ ಜತೆ ಕೆಲ ಕ್ಷಣ ಮಾತನಾಡಿ ಬೇಸರ ವ್ಯಕ್ತಪಡಿಸಿದರು.

ಎನ್‌ಐಇ ಕಾಲೇಜಲ್ಲಿ ನಾಳೆಯಿಂದ ಐದು ದಿನ ಸ್ಮಾರ್ಟ್ ಇಂಡಿಯಾ ಹಾಕಥಾನ್

ಮೈಸೂರು,ಡಿ.9(ಎಂಟಿವೈ)– ಮೈಸೂರಿನ ಎನ್‌ಐಇ ಕಾಲೇಜಿನಲ್ಲಿ ಡಿ.11ರಿಂದ 15ರವರೆಗೆ ಪ್ರತಿಷ್ಠಿತ ಸ್ಮಾರ್ಟ್ ಇಂಡಿಯಾ ಹಾಕಥಾನ್ ಆಯೋಜಿಸಲಾಗಿದೆ ಎಂದು ಕಾಲೇಜಿನ ಪ್ರಾಚಾರ್ಯರಾದ ಡಾ.ರೋಹಿಣಿ ನಾಗಪದ್ಮ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿಯ ಹಾಕಥಾನ್‌ನಲ್ಲಿ ದೇಶದ ವಿವಿಧ ಭಾಗಗಳಿಂದ 168 ವಿದ್ಯಾರ್ಥಿಗಳ 28 ತಂಡಗಳು ಪಾಲ್ಗೊಳ್ಳಲಿವೆ. ಶಿಕ್ಷಣ ಸಚಿವಾಲಯದ ಇನ್ನೋವೇಷನ್ ಸೆಲ್, ಇಂಡೋ ಟಿಬೆಟಿಯನ್ ಬಾರ್ಡರ್ ಪೊಲೀಸ್ ಸಂಸ್ಥೆಗಳು ಉಲ್ಲೇಖಿಸಿದ ಬಾಹ್ಯಾಕಾಶ ತಂತ್ರಜ್ಞಾನ, ಸ್ಮಾರ್ಟ್ ಆಟೋಮೇಷನ್, ಅತ್ಯಾಧುನಿಕ ರೋಬೋಟಿಕ್ಸ್, ಡ್ರೋನ್‌ಗಳ ಸವಾಲುಗಳಿಗೆ ಈ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವವರು ಮಾದರಿ ಸಿದ್ಧಪಡಿಸಲಿದ್ದಾರೆ. ಡಿ.15ಕ್ಕೆ ಇವುಗಳ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ರಾಷ್ಟ್ರ ಮಟ್ಟದಲ್ಲಿ ವಿವಿಧ ಹಂತಗಳಲ್ಲಿ ನಡೆದ ಸ್ಪರ್ಧೆಗಳಲ್ಲಿ ಪಾಲ್ಗೊಂಡ ಸುಮಾರು 5 ಲಕ್ಷ ಮಂದಿಯಲ್ಲಿ ಆಯ್ಕೆಯಾದ 168 ಮಂದಿ ಈ ಹಾಕಥಾನ್‌ನಲ್ಲಿ ಪಾಲ್ಗೊಳ್ಳುತ್ತಿದ್ದು, ಇವರೆಲ್ಲರೂ ಪ್ರತಿಭಾನ್ವಿತರಾಗಿದ್ದಾರೆ. ಹೀಗಾಗಿ ಇದು ಪ್ರತಿಷ್ಠಿತ ಸ್ಪರ್ಧೆಯಾಗಿದೆ. ಇವರು ಸಿದ್ಧಪಡಿಸುವ ಮಾದರಿಗೆ ಅಗತ್ಯವಾದ ಎಲ್ಲ ಸಾಧನ, ಸಲಕರಣೆ ತಮ್ಮ ಕಾಲೇಜು ಒದಗಿಸುವ ಸಾಮರ್ಥ್ಯ ಹೊಂದಿರುವುದರಿಂದಾಗಿ ಎರಡನೇ ಬಾರಿಗೆ ಕಾಲೇಜನ್ನು ಆಯ್ಕೆ ಮಾಡಲಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಡಾ.ವಿ.ವಿಕ್ರಮ್ ಆತ್ರೇಯ, ಎನ್.ಎಸ್.ಶ್ರೀಕಾಂತ್, ಡಾ.ವಿ. ಲಕ್ಷ್ಮೀ ರಂಗನಾಥ್, ಡಾ.ಅಭಿಷೇಕ್ ಎ. ಪಾಠಕ್, ಹರ್ಷಿತ್ ದಿವಾಕರ್ ಇದ್ದರು.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು, ಡಿ.9– ಮೈಸೂರಿನ ಸುಯೋಗ್ ಆಸ್ಪತ್ರೆ ವತಿಯಿಂದ ಡಿ.14 ರವರೆಗೆ ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿದೆ. ಮಾಹಿತಿಗೆ 0821-2566966, 9986399862 ಸಂಪರ್ಕಿಸಬಹುದು.

ದೇಶ - ವಿದೇಶ

ಬಾಂಗ್ಲಾ–ಭಾರತ ವಿದೇಶಾಂಗ ಕಾರ್ಯದರ್ಶಿಗಳ ಮಹತ್ವದ ಮಾತುಕತೆ



ಢಾಕಾ: ಅಲ್ಪಸಂಖ್ಯಾತ ಹಿಂದೂಗಳ ಮೇಲಿನ ಪುನರಾವರ್ತಿತ ದಾಳಿಗಳ ಮಧ್ಯೆ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ಬಾಂಗ್ಲಾ ದೇಶದ ವಿದೇಶಾಂಗ ಕಾರ್ಯದರ್ಶಿ ಮೊಹಮ್ಮದ್ ಜಾಶಿಮ್ ಉದ್ದೀನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ಬಾಂಗ್ಲಾದೇಶದ ಹಿಂದೂ ಸನ್ಯಾಸಿ ಚಿನ್ಮೋಯ್ ಕೃಷ್ಣದಾಸ್ ಅವರ ಇತ್ತೀಚಿನ ಬಂಧನವು ಉಭಯ ದೇಶಗಳಲ್ಲಿ ಪ್ರತಿಭಟನೆಗೆ ಕಾರಣವಾಗಿದ್ದು, ಬಾಂಗ್ಲಾದೇಶದಲ್ಲಿ ಹಲವು ಹಿಂದೂಗಳ ವಿರುದ್ಧ ದಾಳಿಯನ್ನು ಪ್ರಚೋದಿಸಿದೆ. ಹಿಂದೂಗಳ ಮೇಲಿನ ದಾಳಿಯನ್ನು ಭಾರತ ಖಂಡಿಸಿದ್ದು, ಮೊಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರ ಇದರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದೆ. ಮಿಸ್ರಿ ಭಾರತೀಯ ವಾಯು ಪಡೆಯ ಜೆಟ್‌ನಲ್ಲಿ ಢಾಕಾ ತಲುಪಿದರು ಮತ್ತು ಬಾಂಗ್ಲಾದೇಶದ ವಿದೇಶಾಂಗ ಸಚಿವಾಲಯದ ಹಿರಿಯ ಅಧಿಕಾರಿ ಅವರನ್ನು ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು. ಈ ವೇಳೆ ಭಾರತೀಯ ಹೈಕಮಿಷನರ್ ಪ್ರಣಯ್ ವರ್ಮಾ ವಿಮಾನ ನಿಲ್ದಾಣದಲ್ಲಿ ಉಪಸ್ಥಿತರಿದ್ದರು.

ರೈತರ ಪ್ರತಿಭಟನೆ: ರಸ್ತೆ ತೆರವಿಗೆ ಕೋರಿದ್ದ ಅರ್ಜಿ ವಜಾಗೊಳಿಸಿದ ಸುಪ್ರೀಂಕೋರ್ಟ್



ನವದೆಹಲಿ: ಪಂಜಾಬ್‌ನಲ್ಲಿ ರೈತರು ಪ್ರತಿಭಟನೆ ನಡೆಸುತ್ತಿರುವ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿನ ದಿಗ್ಬಂಧನಗಳನ್ನು ತಕ್ಷಣವೇ ತೆರವುಗೊಳಿಸಲು ಕೇಂದ್ರ ಮತ್ತು ಇತರ ಅಧಿಕಾರಿಗಳಿಗೆ ನಿರ್ದೇಶನಗಳನ್ನು ಕೋರಿ ಸಲ್ಲಿಸಲಾದ ಅರ್ಜಿಯನ್ನು ಸುಪ್ರೀಂಕೋರ್ಟ್ ಸೋಮವಾರ ವಜಾಗೊಳಿಸಿದೆ. ಈ ವಿಷಯ ಈಗಾಗಲೇ ನ್ಯಾಯಾಲಯದ ಮುಂದೆ ವಿಚಾರಣೆಗೆ ಬಾಕಿಯಿದ್ದು, ಈ ಕುರಿತ ಪುನರಾವರ್ತಿತ ಅರ್ಜಿಗಳನ್ನು ಪರಿಗಣಿಸಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಮನಮೋಹನ್ ಅವರನ್ನೊಳಗೊಂಡ ನ್ಯಾಯಪೀಠ ಹೇಳಿತು.

ಈ ಸಮಸ್ಯೆಯನ್ನು ಪರಿಶೀಲಿಸುತ್ತಿದ್ದೇವೆ. ನೀವು ಮಾತ್ರ ಸಮಾಜದ ಆತ್ಮಸಾಕ್ಷಿಯ ಪಾಲಕರು ಅಲ್ಲ. ಪುನರಾವರ್ತಿತ ಅರ್ಜಿಗಳನ್ನು ಸಲ್ಲಿಸಬೇಡಿ. ಕೆಲವರು ಪ್ರಚಾರದ ಹಿತಾಸಕ್ತಿಗಾಗಿ ಅರ್ಜಿ ಸಲ್ಲಿಸುತ್ತಿದ್ದರೆ, ಮತ್ತೆ ಕೆಲವರು ಸುಖಾಸುಮ್ಮನೆ ನ್ಯಾಯಾಲಯದೊಂದಿಗೆ ಆಟಕ್ಕಾಗಿ ಇಂತಹ ಅರ್ಜಿ ಸಲ್ಲಿಸುತ್ತಿದ್ದಾರೆ. ಈ ಕುರಿತ ಪುನರಾವರ್ತಿತ ಅರ್ಜಿಗಳನ್ನು ಪರಿಗಣಿಸಲು ಸಾಧ್ಯವಿಲ್ಲ ಎಂದು ಪಂಜಾಬಿನ ಸಾಮಾಜಿಕ ಕಾರ್ಯಕರ್ತ ಎಂದು ಹೇಳಿಕೊಂಡ ಅರ್ಜಿದಾರ ಗೌರವ್ ಲೂತ್ರಾ ಅವರಿಗೆ ತಿಳಿಸಿದೆ.

ಬಿಕಿನಿ ಧರಿಸಿದ್ದಕ್ಕೆ ಪಾಕ್ ಮಾಡೆಲ್‌ಗೆ ಜೀವ ಬೆದರಿಕೆ



ಇಸ್ಲಾಮಾಬಾದ್: ಪಾಕಿಸ್ತಾನದ ಮಾಡೆಲ್ ರೋಮಾ ಮೈಕೆಲ್ ಅಕ್ಟೋಬರ್‌ನಲ್ಲಿ ನಡೆದ ಮಿಸ್ ಗ್ರ್ಯಾಂಡ್ ಇಂಟರ್‌ನ್ಯಾಷನಲ್ 2024 ಸ್ಪರ್ಧೆಯಲ್ಲಿ ಬಿಕಿನಿಯಲ್ಲಿ ಕಾಣಿಸಿಕೊಂಡಿದ್ದರು. ಅಂತಹ ಬಟ್ಟೆಗಳನ್ನು ಧರಿಸುವುದನ್ನು ಪಾಕಿಸ್ತಾನದಲ್ಲಿ ಕಾನೂನುಬಾಹಿರವೆಂದು ಪರಿಗಣಿಸಲಾಗಿದ್ದು ಪಾಕ್‌ನಿಂದ ನೇರ ಬೆದರಿಕೆಗಳು ಬರುತ್ತಿವೆ. ತನಗೆ ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ರೂಪದರ್ಶಿ ರೋಮಾ ಮೈಕೆಲ್ ಹೇಳಿದ್ದಾರೆ. ಜಗತ್ತು ತುಂಬಾ ಮುಂದುವರೆದಿದೆ, ಆದರೆ ನೀವು ಪಾಕಿಸ್ತಾನಿಗಳು ಬಹಳ ಹಿಂದೆಯೇ ಹೋಗಿದ್ದೀರಿ ಎಂದಿರುವ ಅವರು, ಇನ್ನು ಮುಂದೆ ನನಗೆ ಪಾಕಿಸ್ತಾನದಲ್ಲಿ ಜೀವನ ಕಷ್ಟಕರವಾಗಬಹುದು. ಏಕೆಂದರೆ ಪಾಕಿಸ್ತಾನಿ ನಾಟಕದ (ಮಾಲಿಕಾ) ಆಡಿಷನ್‌ಗಳನ್ನು ವಿಭಿನ್ನವಾಗಿ ಮಾಡಲಾಗುತ್ತದೆ. ಪಾಕಿಸ್ತಾನದಲ್ಲಿ ನಟಿಯರು ಇಂತಹ ಬಟ್ಟೆ ಧರಿಸುವಂತಿಲ್ಲ. ಆದರೆ ನಾನು ಅದನ್ನೆಲ್ಲ ಮೀರಿ ನಡೆದುಕೊಂಡೆ. ಹೀಗಾಗಿ ನನ್ನ ವಿರುದ್ಧ ಅಪಪ್ರಚಾರ ಮಾಡಿದವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಇದು ನನ್ನ ಬೇಡಿಕೆಯಾಗಿದೆ ಎಂದು ರೋಮಾ ಮೈಕೆಲ್ ಹೇಳಿದ್ದಾರೆ. ಅಲ್ಲದೆ, ಭಾರತಕ್ಕೆ ಬರಲು ಸಾಕಷ್ಟು ಆಫರ್‌ಗಳಿವೆ. ನನಗೆ ಭಾರತಕ್ಕೆ ಹೋಗಬೇಕೆಂಬ ಆಸೆಯಿದೆ ಎಂದಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಕಚ್ಚಾ ಬಾಂಬ್ ಸ್ಫೋಟ; ಮೂವರ ಸಾವು



ಕೋಲ್ಕತ್ತಾ: ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿ ಕಚ್ಚಾ ಬಾಂಬ್ ಸ್ಫೋಟದಲ್ಲಿ ಕನಿಷ್ಠ ಮೂವರು ಸಾವನ್ನಪ್ಪಿರುವ ಘಟನೆ ಭಾನುವಾರ ತಡರಾತ್ರಿ ನಡೆದಿದೆ. ಸಾಗರಪಾರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಖೊಯೆರ್ತಲಾ ಗ್ರಾಮದಲ್ಲಿ ಘಟನೆ ನಡೆದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಮೃತರನ್ನು ಸಕಿರುಲ್ ಸರ್ಕಾರ್ (32), ಮಾಮುನ್ ಮೊಲ್ಲಾಹ್ (30) ಮತ್ತು ಮುಸ್ತಾಕಿನ್ ಶೇಖ್ (28) ಎಂದು ಗುರುತಿಸಲಾಗಿದ್ದು, ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ. ಕಚ್ಚಾ ಬಾಂಬ್ ತಯಾರಿಸುತ್ತಿದ್ದಾಗ ಮಾಮುನ್ ಮನೆಯಲ್ಲಿ ಸ್ಫೋಟ ಸಂಭವಿಸಿದೆ. ಸ್ಫೋಟದಲ್ಲಿ ಮನೆಯ ಚಾವಣಿ ಹಾರಿಹೋಗಿದೆ. ಈ ಬಗ್ಗೆ ತನಿಖೆ ನಡೆಸುತ್ತಿದ್ದೇವೆ ಎಂದು ಹೇಳಿದ್ದಾರೆ. ಘಟನೆ ವೇಳೆ ಗಾಯಗೊಂಡಿದ್ದ ಸಕಿರುಲ್ ಸರ್ಕಾರ್ ಮತ್ತು ಮಾಮುನ್ ಮೊಲ್ಲಾಹ್ ಅವರನ್ನು ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ಕರೆದೊಯ್ಯಲು ಯತ್ನಿಸಲಾಗಿತ್ತು. ಆದರೆ, ಇಬ್ಬರೂ ದಾರಿ ಮಧ್ಯೆಯೇ ಮೃತಪಟ್ಟಿದ್ದರು ಎಂದು ಮಾಹಿತಿ ನೀಡಿದ್ದಾರೆ. ಘಟನೆ ಬೆನ್ನಲ್ಲೇ ಸ್ಥಳಕ್ಕೆ ಬಾಂಬ್ ನಿಷ್ಕ್ರಿಯ ದಳ ದೌಡಾಯಿಸಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ.

ಸಿರಿಯಾ ಅಂತರ್ಯುದ್ಧ : ಇಸ್ರೇಲ್‌ಗೆ ಲಾಭ!

ಡಮಾಸ್ಕಸ್: ಸಿರಿಯಾದಲ್ಲಿ 13 ವರ್ಷಗಳ ಕಾಲ ನಡೆದ ಭೀಕರ ಅಂತರ್ಯುದ್ಧದಲ್ಲಿ ಅದೆಷ್ಟೋ ಜೀವಗಳು ಬಲಿಯಾಗಿವೆ. ಭಾರಿ ಪ್ರಮಾಣದಲ್ಲಿ ಆಸ್ತಿಪಾಸ್ತಿಗಳು ನಾಶವಾಗಿದೆ. ಈಗ ಸಿರಿಯಾದ ಬಂಡಾಯ ಗುಂಪು ರಾಜಧಾನಿ ಡಮಾಸ್ಕಸ್ ಅನ್ನು ವಶಪಡಿಸಿಕೊಳ್ಳುವ ಮೂಲಕ ಇಡೀ ದೇಶವನ್ನೇ ತನ್ನ ತೆಕ್ಕೆಗೆ ತೆಗೆದುಕೊಂಡಿದೆ. ಎಚ್‌ಟಿಎಸ್ ಬಂಡುಕೋರರ ದಾಳಿಗೆ ಹೆದರಿ ಸಿರಿಯಾ ಅಧ್ಯಕ್ಷ ಬಷರ್ ಅಲ್–ಅಸ್ಸಾದ್ ದೇಶದಿಂದಲೇ ಪರಾರಿಯಾದ ಬೆನ್ನಲ್ಲೇ ಇಸ್ರೇಲ್, ಸಿರಿಯಾ ನೆಲಕ್ಕೆ ಕಾಲಿಟ್ಟಿದ್ದು, ಯುಎಸ್ ಏರ್ ಫೋರ್ಸ್ ಬಾಂಬರ್‌ಗಳು ಇಸ್ರೇಲ್‌ನೊಂದಿಗೆ ಸಿರಿಯಾದ ಮಿಲಿಟರಿ ನೆಲೆಗಳು ಮತ್ತು ರಾಸಾಯನಿಕ ಶಸ್ತ್ರಾಸ್ತ್ರಗಳ ಕಾರ್ಖಾನೆಗಳ ಮೇಲೆ ಪ್ರಬಲವಾದ ವಾಯುದಾಳಿಗಳನ್ನು ನಡೆಸಿ ಅವುಗಳನ್ನು ನಾಶಪಡಿಸಿದ್ದಾರೆ.

ಸಿರಿಯನ್ ಶಸ್ತ್ರಾಸ್ತ್ರಗಳು ಬಂಡುಕೋರರ ಕೈಗೆ ಸಿಗಬಹುದೆಂದು ಅಮೆರಿಕ ಮತ್ತು ಇಸ್ರೇಲ್ ಎರಡೂ ಹೆದರಿದ್ದವು. ಇದರ ಬೆನ್ನಲ್ಲೇ ಇಸ್ರೇಲ್ ಸೇನೆಯು ಭೂಮಾರ್ಗವಾಗಿ ಸಿರಿಯಾ ಗಡಿಯನ್ನು ಪ್ರವೇಶಿಸಿದ್ದು, ಗೋಲನ್ ಹೈಟ್ಸ್ ಬಳಿಯ ಸಿರಿಯಾ ಗಡಿಯನ್ನು ದಾಟಿ 10 ಕಿ.ಮೀ ವ್ಯಾಪ್ತಿಯಲ್ಲಿರುವ ಭೂಮಿಯನ್ನು ಇಸ್ರೇಲ್ ಸೇನೆ ವಶಪಡಿಸಿಕೊಂಡು ಬಫರ್ ಝೋನ್ ಆಗಿ ಪರಿವರ್ತಿಸಿದೆ. ಈ ಸಂಬಂಧ ಪ್ರತಿಕ್ರಿಯೆ ನೀಡಿರುವ ಇಸ್ರೇಲ್ ತನ್ನ ದೇಶದ ನಾಗರಿಕರ ಸುರಕ್ಷತೆಯ ದೃಷ್ಟಿಯಿಂದ ಈ ಕ್ರಮ ಅನಿವಾರ್ಯವಾಗಿದೆ ಎಂದು ಹೇಳಿದೆ.

ಹಳೇ ಕೂಡಿಗೆ ಅಂಗನವಾಡಿಯಲ್ಲಿ ಊಟ ಬಡಿಸುವಾಗ

ಬಿಸಿ ಸಾಂಬಾರ್ ಬಿದ್ದು ಮಗುವಿಗೆ ಗಾಯ



ಅಂಗನವಾಡಿ ಬಾಲಕಿ ತೊಡೆಯಲ್ಲಿ ಸುಟ್ಟ ಗಾಯಗಳಾಗಿರುವುದು.

ಮಡಿಕೇರಿ/ಕುಶಾಲನಗರ, ಡಿ.9–ಅಂಗನವಾಡಿಯಲ್ಲಿ ಊಟ ಬಡಿಸುವಾಗ ಬಿಸಿ ಸಾಂಬಾರ್ ಬಿದ್ದು ಮಗುವಿನ ತೊಡೆ ಸುಟ್ಟ ಗಾಯಗಳಾಗಿರುವ ಘಟನೆ ಹಳೇ ಕೂಡಿಗೆ ಗ್ರಾಮದಲ್ಲಿ ಸೋಮವಾರ ನಡೆದಿದೆ.

ಕೂಡಿಗೆ ಕೊಪ್ಪಲು ಗ್ರಾಮದ ರವೀಶ ಹಾಗೂ ವನಿತಾ ದಂಪತಿ ಪುತ್ರಿ ತೇಜಸ್ವಿನಿ ಗಾಯಗೊಂಡ ಬಾಲಕಿ. ಕೂಡಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳೇ ಕೂಡಿಗೆ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಎಂದಿನಂತೆ ಮಧ್ಯಾಹ್ನ ಸಹಾಯಕಿ ಅನ್ನಕ್ಕೆ ಸಾಂಬಾರ್ ಬಡಿಸುತ್ತಿದ್ದರು. ಈ ವೇಳೆ ಕೈ ಜಾರಿ ಬಿಸಿ ಸಂಬಾರ್ ಮಗುವಿನ ತೊಡೆ ಮೇಲೆ ಬಿದ್ದಿದೆ. ಪರಿಣಾಮ ತೊಡೆಯ ಅನೇಕ ಕಡೆಗಳಲ್ಲಿ ಸುಟ್ಟ ಗಾಯಗಳಾಗಿವೆ. ತಕ್ಷಣ ಅಂಗನವಾಡಿ ಸಿಬ್ಬಂದಿ ಬಾಲಕಿಯನ್ನು ಕೂಡಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದರು.

ಸೋಮವಾರಪೇಟೆ ತಾಲೂಕು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಶ್ರೀದೇವಿ, ಮೇಲ್ವಿಚಾರಕಿ ಸಾವಿತ್ರಮ್ಮ ಹಾಗೂ ರಂಜಿತಾ ಭೇಟಿ ನೀಡಿ, ಸ್ಥಳ ಪರಿಶೀಲಿಸಿ ಬಾಲಕಿಗೆ ಸೂಕ್ತ ಚಿಕಿತ್ಸೆ ಕೊಡಿಸಲಾಗುವುದು. ಜೊತೆಗೆ ನಿರ್ಲಕ್ಷ್ಯ ವಹಿಸಿದ ಅಂಗವಾಡಿ ಕಾರ್ಯಕರ್ತೆ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಇದೇ ವೇಳೆ ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾ ನಿರ್ದೇಶಕ ಬಿ.ಡಿ.ಅಣ್ಣಯ್ಯ ಸ್ಥಳಕ್ಕೆ ಭೇಟಿ ನೀಡಿ, ಅಂಗನವಾಡಿ ಕಾರ್ಯಕರ್ತೆ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಇಲಾಖೆ ಅಧಿಕಾರಿಗಳು ಕೊಡಗು ಜಿಲ್ಲೆಯ ಎಲ್ಲಾ ಅಂಗನವಾಡಿಗಳಿಗೆ ಭೇಟಿ ನೀಡಿ, ಅಲ್ಲಿನ ಸಮಸ್ಯೆಗಳನ್ನು ಆಲಿಸಬೇಕು ಎಂದು ಆಗ್ರಹಿಸಿದರು.

ತನ್ನ ಪತಿಯ ಎರಡನೇ ಪತ್ನಿಯನ್ನು ಕೊಲೆ ಮಾಡಿದ

ಮೊದಲ ಪತ್ನಿಗೆ ಜೀವಾವಧಿ ಶಿಕ್ಷೆ

ಮಡಿಕೇರಿ: ಸಾಂಸಾರಿಕ ಕಲಹದಲ್ಲಿ ಮೊದಲ ಪತ್ನಿ, ತನ್ನ ಪತಿಯ ಎರಡನೇ ಪತ್ನಿಯನ್ನು ಚಾಕುವಿನಿಂದ ಇರಿದು, ಕತ್ತಿಯಿಂದ ಕಡಿದು ಕೊಲೆ ಮಾಡಿರುವ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಮಡಿಕೇರಿ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಮಹಿಳಾ ಆರೋಪಿಗೆ ಜೀವಾವಧಿ ಶಿಕ್ಷೆ ಮತ್ತು 10 ಸಾವಿರ ರೂ. ದಂಡ ವಿಧಿಸಿ ಆದೇಶಿಸಿದೆ.

ಸಿದ್ದಾಪುರ ಅರೆಕಾಡು ಗ್ರಾಮದ ಬಳಂಜಿಗೆರೆ ಎಸ್ಟೇಟ್ ಒಂದರ ಲೈನ್ ಮನೆಯಲ್ಲಿ ವಾಸವಿದ್ದ ದಯಾನಂದ ಅವರ ಮೊದಲ ಪತ್ನಿ ಆಶಿಕಾ ಶಿಕ್ಷೆಗೆ ಗುರಿಯಾದ ಮಹಿಳೆ.

ಘಟನೆ: ಸಿದ್ದಾಪುರ ಅರೆಕಾಡು ಗ್ರಾಮದ ಕಾನನ್‌ಕಾಡು ಎಸ್ಟೇಟ್ ಲೈನ್ ಮನೆಯಲ್ಲಿ ವಾಸವಿದ್ದ ಆಶಿಕಾ, ದಯಾನಂದ ಅವರ ಮೊದಲ ಪತ್ನಿಯಾಗಿದ್ದು, ಅರೆಕಾಡು ಬಳಂಜಿಗೆರೆ ಲೈನ್ ಮನೆಯಲ್ಲಿ ವಾಸವಿದ್ದ ಒಶಿಕಾದೇವಿ ಎರಡನೇ ಪತ್ನಿಯಾಗಿದ್ದರು.

ಆದರೆ, ಸಾಂಸಾರಿಕ ವಿಚಾರವಾಗಿ ಈ ಇಬ್ಬರು ಮಹಿಳೆಯರ ನಡುವೆ ಕಲಹ ನಡೆಯುತ್ತಿತ್ತು. 2020ರ ಜ.4ರ ಸಂಜೆ 5.30ರಲ್ಲಿ ಆಶಿಕಾ ಚಾಕುವಿನಿಂದ ಒಶಿಕಾದೇವಿಯ ಶರೀರದ ಭಾಗಗಳಿಗೆ ಇರಿದು, ನಂತರ ಕತ್ತಿಯಿಂದ ಕಡಿದು ಕೊಲೆ ಮಾಡಿದ್ದಳು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಮಡಿಕೇರಿ ಗ್ರಾಮಾಂತರ ಪೊಲೀಸ್ ಠಾಣೆ ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ ತನಿಖೆ ನಡೆಸಿ, ನ್ಯಾಯಾಲಯಕ್ಕೆ ದೋಷಾರೋಪಣಾ ವರದಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಆಶಿಕಾ ಕೊಲೆ ಮಾಡಿರುವುದು ಸಾಬೀತಾಗಿದೆ ಎಂದು ತೀರ್ಪು ನೀಡಿ, ಈಕೆಗೆ ಜೀವಾವಧಿ ಶಿಕ್ಷೆ ಮತ್ತು 10 ಸಾವಿರ ರೂ. ದಂಡ ವಿಧಿಸಿದೆ. ಸರ್ಕಾರದ ಪರವಾಗಿ ಅಭಿಯೋಜಕಿ ಕೆ.ಜಿ.ಅಶ್ವಿನಿ ವಾದ ಮಂಡಿಸಿದರು.

ಎಸ್.ಆರ್. ಸ್ಟೆಲಾ ನಿಧನ



ಸುಂಟಿಕೊಪ್ಪ, ಡಿ.9– ಇಲ್ಲಿನ ಸಂತ ಅಂತೋಣಿ ಶಾಲೆ ನಿವೃತ್ತ ಶಿಕ್ಷಕಿ ಎಸ್.ಆರ್.ಸ್ಟೆಲಾ ಎಸ್.ಸಿ.ಫೆರ್ನಾಂಡಿಸ್ ಸಿಸ್ಟರ್ (ಮೆರ್ಲಿನ್ 89) ಸೋಮವಾರ ಮುಂಜಾನೆ ನಿಧನರಾಗಿದರು. ಮಂಗಳವಾರ ಮೈಸೂರಿನಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.

ಈಗಾಗಲೇ ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರ, ಶಾಲೆ-ಕಾಲೇಜುಗಳಿಗೆ

ಜಂತುಹುಳು ನಿವಾರಣಾ ಮಾತ್ರೆ ಸರಬರಾಜು

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಮಧುಸೂದನ್ ಮಾಹಿತಿ



ಮಡಿಕೇರಿ ಸಂತ ಜೋಸೆಫರ ವಿದ್ಯಾಸಂಸ್ಥೆಯಲ್ಲಿ ನಡೆದ ಜಂತುಹುಳು ನಿವಾರಣಾ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಆಲ್‌ಬೆಂಡಜೋಲ್–400 ಎಂಜಿ ಮಾತ್ರೆ ನೀಡಲಾಯಿತು.

ಮಡಿಕೇರಿ, ಡಿ.9–ಜಂತುಹುಳು ನಿವಾರಣಾ ಆಲ್‌ಬೆಂಡಜೋಲ್–400 ಎಂಜಿ ಮಾತ್ರೆಗಳನ್ನು ಈಗಾಗಲೇ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮೂಲಕ ಜಿಲ್ಲೆಯ ಎಲ್ಲಾ ಅಂಗನವಾಡಿ ಕೇಂದ್ರ ಹಾಗೂ ಶಾಲೆ-ಕಾಲೇಜುಗಳಿಗೆ ಸರಬರಾಜು ಮಾಡಲಾಗಿದೆ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಮಧುಸೂದನ್ ತಿಳಿಸಿದರು.

ನಗರದ ಸಂತ ಜೋಸೆಫರ ವಿದ್ಯಾಸಂಸ್ಥೆಯಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಶಾಲಾ ಶಿಕ್ಷಣ, ಪದವಿಪೂರ್ವ ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ನಡೆದ ಜಂತುಹುಳು ನಿವಾರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಾರ್ಯಕ್ರಮ ಅನುಷ್ಠಾನಗೊಳಿಸಲು ಎಲ್ಲಾ ಶಾಲೆ-ಕಾಲೇಜು ನೋಡಲ್ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಸಹಾಯಕಿಯರು ಹಾಗೂ ಆಶಾ ಕಾರ್ಯಕರ್ತೆಯರನ್ನು ನಿಯೋಜಿಸಲಾಗಿದೆ ಎಂದರು.

ರಾಷ್ಟ್ರದಾದ್ಯಂತ ಜಂತು ಹುಳು ನಿವಾರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, 19 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಆಲ್‌ಬೆಂಡಜೋಲ್–400 ಎಂಜಿ ಮಾತ್ರೆ ನೀಡಲಾಗುವುದು. ಕಾರ್ಯಕ್ರಮದಲ್ಲಿ 1–5 ವರ್ಷದೊಳಗಿನ ಮಕ್ಕಳಿಗೆ ಅಂಗನವಾಡಿಗಳಲ್ಲಿ, 6–19 ವರ್ಷದ ಮಕ್ಕಳಿಗೆ ಎಲ್ಲಾ ಸರ್ಕಾರಿ, ಅನುದಾನಿತ, ಖಾಸಗಿ ಶಾಲೆ-ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ನೀಡಲಾಗುವುದು ಎಂದು ಮಾಹಿತಿ ನೀಡಿದರು.

ಆಶಾ ಕಾರ್ಯಕರ್ತೆಯರು 6–19 ವರ್ಷದೊಳಗಿನ ಶಾಲೆಯಿಂದ ಹೊರಗುಳಿದ ಮಕ್ಕಳ ಪಟ್ಟಿ ತಯಾರಿಸಿ ಅವರಿಗೆ ಅಂಗನವಾಡಿಗಳಲ್ಲಿ ಮಾತ್ರೆ ನೀಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ 1–2 ವರ್ಷದ ಮಕ್ಕಳಿಗೆ ಅರ್ಧ ಆಲ್‌ಬೆಂಡಜೋಲ್ ಮಾತ್ರೆ ಹಾಗೂ 2–19 ವರ್ಷದ ಮಕ್ಕಳಿಗೆ ಒಂದು ಮಾತ್ರೆ ನೀಡಲಾಗುವುದು ಎಂದು ತಿಳಿಸಿದರು.

ಕೊಡಗು ಜಿಲ್ಲೆಯಲ್ಲಿ 1–19 ವರ್ಷದೊಳಗಿನ 1,33,794 ಮಕ್ಕಳಿದ್ದು, ಇದರಲ್ಲಿ ಅಂಗನವಾಡಿ 31,558 ಮಕ್ಕಳು, ಅಂಗನವಾಡಿಯಿಂದ ಹೊರಗುಳಿದ 1661 ಮಕ್ಕಳು, ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಯ 75,369 ಮಕ್ಕಳು ಹಾಗೂ ಪದವಿಪೂರ್ವ 10,059 ಮಕ್ಕಳು, ಡಿಗ್ರಿ ಕಾಲೇಜು 8330, ಐಟಿಐ ಮತ್ತು ತಾಂತ್ರಿಕ ಸಂಸ್ಥೆಗಳಲ್ಲಿ 1746 ಮಕ್ಕಳು ಹಾಗೂ ಶಾಲೆಯಿಂದ ಹೊರಗುಳಿದ 5071 ಮಕ್ಕಳು ಇದ್ದಾರೆ ಎಂದು ಹೇಳಿದರು.

ಮಕ್ಕಳಿಗೆ ಆಲ್‌ಬೆಂಡಜೋಲ್–400 ಎಂಜಿ ಮಾತ್ರೆ ನೀಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸಿ.ರಂಗಧಾಮಪ್ಪ, ಸರ್ಕಾರ ಹಾಗೂ ಆರೋಗ್ಯ ಇಲಾಖೆ ಜಂತುಹುಳು ನಿವಾರಣಾ ಸೇರಿದಂತೆ ಮಕ್ಕಳ ಶ್ರೇಯೋಭಿವೃದ್ಧಿಗಾಗಿ ಹಲವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

> ಜಂತುಹುಳು ನಿವಾರಣಾ ಮಾತ್ರೆಯನ್ನು 19 ವರ್ಷದೊಳಗಿನ ಮಕ್ಕಳು ಪಡೆದುಕೊಳ್ಳಬೇಕು. ಇದರಿಂದ ಹೊಟ್ಟೆನೋವು ಕಡಿಮೆಯಾಗಿ ಜೀರ್ಣಶಕ್ತಿ ಹೆಚ್ಚಾಗುತ್ತದೆ. ಹಾಗೆಯೇ ರಕ್ತಹೀನತೆ ತಡೆಯಬಹುದು.
> –ಮಂಜುಳಾ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕಿ

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ನಟರಾಜ್, ಕ್ಷೇತ್ರ ಶಿಕ್ಷಣಾಧಿಕಾರಿ ದೊಡ್ಡೇಗೌಡ, ಜಿಲ್ಲಾ ಶಿಕ್ಷಣಾಧಿಕಾರಿ ಸೌಮ್ಯ ಪೊನ್ನಪ್ಪ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಗಾಯತ್ರಿ, ಇಸಿಓ ಜಾನೆಟ್, ಕೃಷ್ಣಪ್ರಸಾದ್, ಬಿಆರ್‌ಸಿ ಗುರುರಾಜ್, ಸಂತ ಜೋಸೆಫರ ವಿದ್ಯಾಸಂಸ್ಥೆ ಮುಖ್ಯ ಶಿಕ್ಷಕಿ ಸಿಸ್ಟರ್ ರೋಜಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಾಂತಿ, ಜಿಲ್ಲಾ ಶುಶ್ರೂಷಣಾಧಿಕಾರಿ ಭವಾನಿ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ದೇವರಾಜು ಮತ್ತು ಆರೋಗ್ಯ, ಶಿಕ್ಷಣ ಇಲಾಖೆ ಅಧಿಕಾರಿ, ಸಿಬ್ಬಂದಿ ಇತರರು ಇದ್ದರು.

ವೈದ್ಯಕೀಯ ವಿದ್ಯಾರ್ಥಿಗಳು ವೃತ್ತಿ ಜ್ಞಾನ ಹೆಚ್ಚಿಸಿಕೊಳ್ಳಿ



ವಿರಾಜಪೇಟೆ ದಂತ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ನಡೆದ ಪದವಿ ದಿನಾಚರಣೆಯಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರ ಹಾಗೂ ಪದಕ ವಿತರಿಸಲಾಯಿತು.

ವಿರಾಜಪೇಟೆ, ಡಿ.9–ದಂತ ವೈದ್ಯಕೀಯ ಪದವಿ ಪಡೆದ ವಿದ್ಯಾರ್ಥಿಗಳು ಮುಂದೆ ಸ್ವಯಂ ಕಲಿಕೆ ವೃತ್ತಿಯಲ್ಲಿ ನಿರಂತರವಾಗಿ ವೈದ್ಯಕೀಯ ಜ್ಞಾನ ಹೆಚ್ಚಿಸಿಕೊಳ್ಳಬೇಕು ಎಂದು ಕೋಲ್‌ಗೇಟ್ ಪಾಮೋಲಿವ್ ಆಡಳಿತ ಮಂಡಳಿ ಮಾಜಿ ಅಧ್ಯಕ್ಷ ಹಾಗೂ ಸಫಾಯರ್ ಫುಡ್ ಇಂಡಿಯಾ ಮ್ಯಾನೇಜಿಂಗ್ ಡೈರೆಕ್ಟರ್ ವಿನೋದ್ ನಂಬಿಯಾರ್ ಹೇಳಿದರು.

ಪಟ್ಟಣ ಬಳಿಯ ದಂತ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ನಡೆದ ಪದವಿ ದಿನಾಚರಣೆ ಹಾಗೂ ವೈದ್ಯಕೀಯ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ವೈದ್ಯಕೀಯ ವೃತ್ತಿಯಲ್ಲಿ ಡಿಜಿಟಲ್ ವ್ಯವಸ್ಥೆ ಹಾಗೂ ಕೃತಕ ಬುದ್ಧಿ ಅಳವಡಿಸಿಕೊಳ್ಳಬೇಕಿದೆ. ಇದರಿಂದ ವೈದ್ಯಕೀಯ ಜ್ಞಾನ ಹೆಚ್ಚಿಸುವಲ್ಲಿ ಸಹಕಾರಿಯಾಗಲಿದೆ ಎಂದರು.

ಭಾರತೀಯ ದಂತ ವೈದ್ಯಕೀಯ ಅಸೋಸಿಯೇಷನ್‌ನ ಡಾ.ರೀನಾ ರಂಜಿತ್ ಕುಮಾರ್ ಮಾತನಾಡಿ, ದಂತ ಶಿಕ್ಷಣ ವಿದ್ಯಾಸಂಸ್ಥೆ ಅನೇಕ ಉತ್ತಮ ವೈದ್ಯರನ್ನು ವೈದ್ಯಕೀಯ ಕ್ಷೇತ್ರಕ್ಕೆ ನೀಡುತ್ತಿದೆ. ಜನರ ದಂತ ಆರೋಗ್ಯ ಕಾಪಾಡಲು ಸದಾ ತಜ್ಞ ವೈದ್ಯರ ಆಗತ್ಯವಿದೆ. ವಿರಾಜಪೇಟೆ ದಂತ ವೈದ್ಯಕೀಯ ಮಹಾವಿದ್ಯಾಲಯದಲ್ಲಿ 21ನೇ ಪದವಿ ದಿನಾಚರಣೆ ನಡೆಯುತ್ತಿರುವುದು ಉತ್ತಮ ವಿಚಾರ ಕಾಲ ಕಾಲಕ್ಕೆ ತಂತ್ರಜ್ಞಾನದ ಆವಿಷ್ಕಾರ ಅಳವಡಿಸಿಕೊಂಡು ವೃತ್ತಿ ಪರಿಣಿತಿ ಹೆಚ್ಚಿಸಿಕೊಳ್ಳುವಂತಾಗಬೇಕು ಎಂದು ಸಲಹೆ ನೀಡಿದರು.

ದಂತ ವೈದ್ಯಕೀಯ ಮಹಾವಿದ್ಯಾಲಯದ ಡೀನ್ ಡಾ.ಸುನೀಲ್ ಮುದ್ದಯ್ಯ ಮಾತನಾಡಿ, ವಿರಾಜಪೇಟೆ ದಂತ ವೈದ್ಯಕೀಯ ಮಹಾವಿದ್ಯಾಲಯ ವಿಶ್ವದ ದಂತ ವೈದ್ಯಕೀಯ ಕಾಲೇಜುಗಳ ಪೈಕಿ 15ನೇ ಸ್ಥಾನದಲ್ಲಿದೆ. ಜೊತೆ ಆನ್‌ಲೈನ್ ಮೂಲಕ ಸಂವಾದ, ಸಂಶೋಧನೆಗಳನ್ನು ಹೆಚ್ಚು ನಡೆಸಿ, ವಿದ್ಯಾರ್ಥಿಗಳಿಗೆ ಆಧುನಿಕ ದಂತ ವೈದ್ಯಕೀಯ ಪರಿಚಯಿಸಲಾಗುತ್ತಿದೆ ಎಂದರು.

ಕಾಲೇಜಿನ ಪ್ರಾಂಶುಪಾಲ ಪ್ರೊ.ಡಾ.ಕೆ.ಸಿ. ಪೊನ್ನಪ್ಪ ಪದವಿ ಮತ್ತು ಸ್ನಾತಕೋತರ ಪದವಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಇದೇ ವೇಳೆ ಚಿನ್ನದ ಪದಕ ಪಡೆದ ಕಂಜಿತಂಡ ಎಂ.ಕುಶಾಲಪ್ಪ ಕಂಜಿತಂಡ ಪೊನ್ನಮ್ಮ, ಪ್ರತಿಭಾವಂತ ವಿದ್ಯಾರ್ಥಿಗಳಾದ ಡಾ.ಲಿತಿಯ ಸಕ್ರೇಯ, ಡಾ.ಕವನ ಅವರಿಗೆ ಪದಕ ನೀಡಲಾಯಿತು. ಉಪಪ್ರಾಂಶುಪಾಲ ಡಾ.ಜಿತೇಶ್ ಜೈನ್, ದಂತ ವೈದ್ಯಕೀಯ ವಿಭಾಗದ ಪ್ರಮುಖರಾದ ಡಾ.ಶ್ಯಾಮಲ, ಡಾ.ಶಶಿಧರ್, ಡಾ.ಕವಿತಾ ಇತರರು ಉಪಸ್ಥಿತರಿದ್ದರು.

ಕಾಡಾನೆಗಳ ದಾಳಿಯಿಂದ ತೋಟಗಾರಿಕೆ ಬೆಳೆ ನಾಶ

ಕುಶಾಲನಗರ, ಡಿ.9–ಸಮೀಪದ ಹೆಬ್ಬಾಲೆ ಗ್ರಾಪಂ ವ್ಯಾಪ್ತಿಯ ಕಾವೇರಿ ನದಿ ದಂಡೆಯ ಹುಲುಸೆ, ಹೆಬ್ಬಾಲೆ, ರಾಂಪುರ ಗ್ರಾಮದ ರೈತರ ತೋಟಗಳಿಗೆ ಕಾಡಾನೆಗಳು ನುಗ್ಗಿ ದಾಳಿ ನಡೆಸಿ, ಅಪಾರ ಪ್ರಮಾಣದ ಫಸಲು ಪಡಿಸಿವೆ.



ಹೆಬ್ಬಾಲೆ ಗ್ರಾಪಂ ವ್ಯಾಪ್ತಿ ಕಾಡಾನೆ ದಾಳಿಗೆ ಅಡಕೆ ಗಿಡ ಮುರಿದಿರುವುದು.

ಭಾನುವಾರ ರಾತ್ರಿ ತಾಲೂಕಿನ ಜೇನುಕಲ್ಲು, ಹೆಬ್ಬಾಲೆ ಮೀಸಲು ಅರಣ್ಯ ಪ್ರದೇಶದಿಂದ ಬಂದ ಕಾಡಾನೆಗಳ ಹಿಂಡು ರೈತರಾದ ಕಪನಪ್ಪ, ಶಿವನಂಜಯ್ಯ, ಕಪನಯ್ಯ ಹಾಗೂ ಶ್ರೀನಿವಾಸ್ ಅವರ ತೋಟಗಳಿಗೆ ನುಗ್ಗಿ ದಾಳಿ ನಡೆಸಿವೆ. ಇದರಿಂದ ಹತ್ತಾರು ಎಕರೆಯಲ್ಲಿ ಬೆಳೆದಿರುವ ಅಡಕೆ, ತೆಂಗು, ಭತ್ತದ ಫಸಲು ನಾಶವಾಗಿವೆ. ಅಪಾರ ಪ್ರಮಾಣದ ನಷ್ಟ ಉಂಟಾಗಿರುವ ರೈತರಿಗೆ ಅರಣ್ಯಾಧಿಕಾರಿಗಳು ಭೇಟಿ ನೀಡಿ, ಪರಿಶೀಲಿಸಿ ಸೂಕ್ತ ಪರಿಹಾರ ನೀಡಬೇಕು ಎಂದು ಈ ಭಾಗದ ಜನರು ಒತ್ತಾಯಿಸಿದ್ದಾರೆ.

ಆರೋಗ್ಯ ಸಮಸ್ಯೆ ಪರಿಹಾರಕ್ಕೆ ಕರಾರು ಒಪ್ಪಂದ

ಚಾ.ನಗರದಲ್ಲಿ ಸಚಿವರಾದ ಮಹದೇವಪ್ಪ, ವೆಂಕಟೇಶ್ ಸಮ್ಮುಖದಲ್ಲಿ ಫೆಲೋಶಿಪ್ ಕಾರ್ಯಕ್ರಮಕ್ಕೆ ಚಾಲನೆ



ಚಾಮರಾಜನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್ ಸಮ್ಮುಖದಲ್ಲಿ ಫೆಲೋಶಿಪ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಚಾಮರಾಜನಗರ, ಡಿ.9–ಜಿಲ್ಲೆಯಲ್ಲಿ ಸ್ಥಳೀಯ ಆರೋಗ್ಯ ಸವಾಲುಗಳನ್ನು ಎದುರಿಸಲು ಹಾಗೂ ಸಮಸ್ಯೆಗಳ ಪರಿಹಾರಕ್ಕಾಗಿ ಫೆಲೋಶಿಪ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಜಿಲ್ಲೆಯ ಶಾಸಕರು ಹಾಗೂ ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಸ್ಥಳೀಯ ಆರೋಗ್ಯ ಸವಾಲುಗಳನ್ನು ಗುರುತಿಸಲು ಮತ್ತು ಪರಿಹಾರ ಸೂಚಿಸಲು 3 ವರ್ಷ, ಸಾರ್ವಜನಿಕ ಆರೋಗ್ಯ ಮತ್ತು ಸಾಮಾಜಿಕ ಕಾರ್ಯ ಹಿನ್ನೆಲೆ ಹೊಂದಿರುವ ಇಬ್ಬರು ಫೆಲೋಗಳನ್ನು ಜಿಲ್ಲಾ ಆಡಳಿತದ ಅಡಿಯಲ್ಲಿ ನಿಯೋಜಿಸಲಾಗುವುದು. ಬ್ಲಾಕ್‌ಚೈನ್ ಫಾರ್ ಇಂಪ್ಯಾಕ್ಟ್(ಬಿಎಫ್‌ಐ)ನಿಂದ ಧನ ಸಹಾಯ ಪಡೆದ ಪಾರ್ಟ್ನರಿಂಗ್ ಹೋಪ್ ಇಂಟು ಆಕ್ಷನ್ (ಪಿಎಚ್‌ಐಎ) ಫೌಂಡೇಷನ್‌ನಿಂದ ಕಾರ್ಯಗತಗೊಳಿಸಲ್ಪಡುವ ಇಂಡಿಯಾ ಹೆಲ್ತ್ ಅಂಡ್ ಕ್ಲೈಮೇಟ್ ರೆಸಿಲಿಯನ್ಸ್ ಫೆಲೋಶಿಪ್ (ಐಎಚ್‌ಸಿಆರ್‌ಎಫ್) ಕಾರ್ಯಕ್ರಮಕ್ಕಾಗಿ ಜಿಲ್ಲಾಡಳಿತ ಮತ್ತು ಪಿಎಚ್‌ಐಎ ಫೌಂಡೇಷನ್‌ನಿಂದ ತಿಳಿವಳಿಕೆ ಕರಾರು ಒಪ್ಪಂದ ವಿನಿಮಯ ಮಾಡಿಕೊಳ್ಳಲಾಯಿತು.

ಜಿಲ್ಲಾಡಳಿತ ಪಿಎಚ್‌ಐಎ ಅನುಷ್ಠಾನಗೊಳಿಸುವ ಐಎಚ್‌ಸಿಆರ್‌ಎಫ್ ನಡುವೆ ತಿಳಿವಳಿಕೆ ಕರಾರು ಒಪ್ಪಂದ ವಿನಿಮಯ ಮಾಡಿಕೊಂಡು ಕಾರ್ಯಕ್ರಮ ಪ್ರಾರಂಭಿಸಲಾಯಿತು. ಇದು ಸ್ಥಳೀಯ ಆರೋಗ್ಯ ಅಧಿಕಾರಿಗಳು, ಸಿಬ್ಬಂದಿ, ಆರೋಗ್ಯ ಕಾರ್ಯಕರ್ತರು ಹಾಗೂ ಸಮುದಾಯದ ಮುಖಂಡರೊಂದಿಗೆ ನಿಕಟವಾದ ಸಹಯೋಗದೊಂದಿಗೆ ಜಿಲ್ಲೆ ಆರೋಗ್ಯದ ಸಮಗ್ರ ವಿಶ್ಲೇಷಣೆ ನಡೆಸಲಾಗುವುದು. ಈ ಸಹಯೋಗದ ಪ್ರಕ್ರಿಯೆ ಮೂಲಕ ಆರೋಗ್ಯ ಸಮಸ್ಯೆಗಳನ್ನು ಗುರುತಿಸಿ, ನಂತರ ಜಿಲ್ಲೆಯ ಅಗತ್ಯತೆ ಮತ್ತು ಸಾಮರ್ಥ್ಯಗಳೊಂದಿಗೆ ಅನುಕೂಲವಾಗುಂತಹ ಸಾಂದರ್ಭಿಕ ನಾವೀನ್ಯತೆ ಪರಿಹಾರ ಗುರುತಿಸಿ ಮೂರು ವರ್ಷಗಳ ಅವಧಿಯಲ್ಲಿ ಸರಿಸುಮಾರು 1.5 ಕೋಟಿ ರೂ. ಮೀಸಲಾದ ನಿಧಿಯೊಂದಿಗೆ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುವುದು.

ಕಾರ್ಯಕ್ರಮದಲ್ಲಿ ಶಾಸಕರಾದ ಸಿ.ಪುಟ್ಟರಂಗಶೆಟ್ಟಿ ಎ.ಆರ್.ಕೃಷ್ಣಮೂರ್ತಿ, ಹೆಚ್.ಎಸ್.ಗಣೇಶ್ ಪ್ರಸಾದ್, ಕಾಡಾ ಅಧ್ಯಕ್ಷ ಮರಿಸ್ವಾಮಿ, ಜಿಪಂ ಸಿಇಓ ಮೋನಾ ರೋತ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ರಾಜ್ಯ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್ ಹಾಗೂ ಮತ್ತಿತರರು ಹಾಜರಿದ್ದರು.

ಫೆಲೋಶಿಪ್ ಅನುಷ್ಠಾನ ಹೆಮ್ಮೆಯ ಸಂಗತಿ

ಸಾರ್ವಜನಿಕ ಆರೋಗ್ಯ ಸವಾಲುಗಳನ್ನು ಎದುರಿಸಲು ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಸೇವಾ ಸಂಸ್ಥೆ ವಿನೂತನ ಕಾರ್ಯಕ್ರಮವಾದ ಇಂಡಿಯಾ ಹೆಲ್ತ್ ಅಂಡ್ ಕ್ಲೈಮೇಟ್ ರೆಸಿಲಿಯನ್ಸ್ ಫೆಲೋಶಿಪ್ ಅನ್ನು ಅನುಷ್ಠಾನಗೊಳಿಸುತ್ತಿರುವುದು ಹೆಮ್ಮೆಯ ಸಂಗತಿ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಮೆಚ್ಚುಗೆ ವ್ಯಕ್ತಪಡಿಸಿದರು.

ಜಿಲ್ಲೆಯ ಸಾರ್ವಜನಿಕರು ಈ ಅವಕಾಶವನ್ನು ಬಳಸಿಕೊಳ್ಳಬೇಕು. ಆರೋಗ್ಯವನ್ನು ಉತ್ತಮವಾಗಿ ಸುಧಾರಿಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಶಿಲ್ಪನಾಗ್ ಮಾತನಾಡಿ, ಜಿಲ್ಲಾಡಳಿತ ಐಹೆಚ್‌ಸಿಆರ್‌ಎಫ್ ಜೊತೆ ಪಾಲುದಾರಿಕೆ ವಿನಿಮಯ ಮಾಡಿಕೊಂಡಿದೆ. ಈ ಸಹಯೋಗ ಜಿಲ್ಲೆಯ ಎಲ್ಲರಿಗೂ ಉತ್ತಮ ಆರೋಗ್ಯ ಸೇವೆ ಒದಗಿಸುವ ಬದ್ಧತೆಗೆ ಸಾಕ್ಷಿಯಾಗಿದೆ. ಈ ಉಪಕ್ರಮ ಪ್ರಸ್ತುತ ಭವಿಷ್ಯದ ಸವಾಲುಗಳಿಗೆ ಸ್ಪಂದಿಸುವ ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಸಹ ರಚಿಸಲು ಸಮುದಾಯಕ್ಕೆ ಸಹಕಾರ ನೀಡುತ್ತದೆ ಎಂದರು.

ಕಾರ್ಯಕ್ರಮದ ನಿರ್ದೇಶಕ ಡಾ.ವರ್ಣ ಶ್ರೀರಾಮನ್ ಐಎಚ್‌ಸಿಆರ್‌ಎಫ್ ಪಾಲುದಾರಿಕೆ ಪ್ರಕಟಿಸಿ ಮಾತನಾಡಿ, ಜಿಲ್ಲಾಡಳಿತ ಸಹಯೋಗದೊಂದಿಗೆ ಆರೋಗ್ಯ ವ್ಯವಸ್ಥೆ ಬಲಪಡಿಸಲು ನಾವು ತುಂಬಾ ಉತ್ಸುಕರಾಗಿದ್ದೇವೆ. ಮಾನವ–ಕೇಂದ್ರಿತ ವಿನ್ಯಾಸ ವಿಧಾನದ ಮೂಲಕ ನಮ್ಮ ಫೆಲೋಗಳ ಪರಿಣತಿ ಮತ್ತು ಸ್ಥಳೀಯ ಬದ್ಧತೆಯೊಂದಿಗೆ ಸೇರಿ ಜಿಲ್ಲೆಯ ವಿಶಿಷ್ಟ ಅಗತ್ಯಗಳಿಗೆ ಅನುಗುಣವಾಗಿ ಸಮರ್ಥನೀಯ ಮತ್ತು ಪರಿಣಾಮಕಾರಿ ಪರಿಹಾರ ಅಭಿವೃದ್ಧಿಪಡಿಸುತ್ತೇವೆ ಎಂದು ತಿಳಿಸಿದರು.

ಅಧಿವೇಶನದಲ್ಲಿ ರೈತರ ಸಮಸ್ಯೆ ಚರ್ಚಿಸುವಂತೆ ಒತ್ತಾಯಿಸಿ ಪ್ರತಿಭಟನೆ



ಸಂಯುಕ್ತ ಕಿಸಾನ್ ಮೋರ್ಚಾ, ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ವತಿಯಿಂದ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಅವರಿಗೆ ಮನವಿ ಸಲ್ಲಿಸಲಾಯಿತು.

ಚಾಮರಾಜನಗರ, ಡಿ.9–ಸಂಸತ್ ಅಧಿವೇಶನದಲ್ಲಿ ಸಂಸದ ಸುನೀಲ್ ಬೋಸ್ ರೈತರ ಸಮಸ್ಯೆ ಕುರಿತು ಚರ್ಚಿಸಬೇಕು ಎಂದು ಒತ್ತಾಯಿಸಿ ಸಂಯುಕ್ತ ಕಿಸಾನ್ ಮೋರ್ಚಾ(ಎಸ್‌ಪಿ), ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ವತಿಯಿಂದ ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಜಿಲ್ಲಾಡಳಿತ ಭವನದ ಮುಖ್ಯ ದ್ವಾರದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆ ಹೊರಟು ಜಿಲ್ಲಾಡಳಿತ ಭವನದ ಎದುರು ಕೆಲಕಾಲ ಪ್ರತಿಭಟನೆ ನಡೆಸಿ, ಅಪರ ಜಿಲ್ಲಾಧಿಕಾರಿ ಗೀತಾಹುಡೇದ ಅವರಿಗೆ ಮನವಿ ಸಲ್ಲಿಸಿದರು.

ರೈತರ ಒಳಿತಿಗಾಗಿ ಹೋರಾಟ ನಡೆಸುತ್ತಿರುವ ದೆಹಲಿ ರೈತ ಹೋರಾಟದ ಮುಖಂಡ ಜಗಜಿತ್ ಸಿಂಗ್ ದಲ್ಲೆವಾಲ ಉಪವಾಸ ಸತ್ಯಾಗ್ರಹ 14ನೇ ದಿನಕ್ಕೆ ಮುಂದುವರೆದಿದೆ. ಅವರ ಆರೋಗ್ಯ ಸ್ಥಿತಿ ಹದಗೆಟ್ಟಿದೆ ಪಂಜಾಬ್, ಹರಿಯಾಣ ಭಾಗದಲ್ಲಿ ನಿರಂತರವಾಗಿ ಚಳುವಳಿ ನಡೆಸುತ್ತಿರುವ ರೈತರು ಎರಡು ದಿನಗಳ ಹಿಂದೆ ದೆಹಲಿಗೆ ಕಾಲ್ನಡಿಗೆ ಮೂಲಕ ಹೋಗುತ್ತಿದ್ದಾಗ ಪೊಲೀಸರು ತಡೆದು ಆಶ್ರುವಾಯು ಸಿಡಿಸಿ ಜಲ ಫಿರಂಗಿ ಪ್ರಯೋಗ ಮಾಡಿದ್ದಾರೆ. ಇದರಿಂದ ಹಲವು ರೈತರು ಆಸ್ಪತ್ರೆ ಸೇರಿದ್ದಾರೆ. ಇಂತಹ ದಬ್ಬಾಳಿಕೆ ಪೊಲೀಸ್ ದೌರ್ಜನ್ಯವನ್ನು ನಾವು ಖಂಡಿಸುತ್ತೇವೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಇಂತಹ ಪರಿಸ್ಥಿತಿಯಲ್ಲಿ ಸಂಸತ್ ಅಧಿವೇಶನ ನಡೆಯುತ್ತಿದ್ದರೂ ಯಾವುದೇ ಸಂಸದರು ರೈತರ ಧ್ವನಿ ಎತ್ತುತ್ತಿಲ್ಲ. ಕೇಂದ್ರ ಸರ್ಕಾರ ಗಂಭೀರವಾಗಿ ಪ್ರತಿಕ್ರಿಯೆ ನೀಡದೆ ಮಾತುಕತೆಗೂ ಆಹ್ವಾನಿಸದೆ ನಿರ್ಲಕ್ಷ್ಯತನ ತೋರುತ್ತಿದೆ. ಕೂಡಲೇ ಸರ್ಕಾರ ರೈತರ ಹಿತ ಕಾಪಾಡಬೇಕು. ದೇಶದ ರೈತರ ಸಮಸ್ಯೆಯನ್ನು ಬಗೆಹರಿಸಬೇಕು. ಕೇಂದ್ರ ಸರ್ಕಾರ ಚಳುವಳಿ ನಿರತ ಮುಖಂಡರ ಜೊತೆ ಮಾತುಕತೆ ನಡೆಸಿ, ಸಮಸ್ಯೆ ಬಗೆಹರಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಪ್ರಕಾಶ್, ರೈತ ಸಂಘಟನೆಗಳ ಒಕ್ಕೂಟದ ಜಿಲ್ಲಾ ಕಾರ್ಯಾಧ್ಯಕ್ಷ ಉಡಿಗಾಲ ರೇವಣ್ಣ, ಪ್ರಧಾನ ಕಾರ್ಯದರ್ಶಿ ಹೆಚ್.ಮೂಕಹಳ್ಳಿ ಮಹದೇವಸ್ವಾಮಿ, ಉಪಾಧ್ಯಕ್ಷ ಮೂಡಲಪುರ ಪಟೇಲ್ ಶಿವಮೂರ್ತಿ, ತಾಲೂಕು ಅಧ್ಯಕ್ಷ ನಂಜೇದೇವನಪುರ ಸತೀಶ್, ಪ್ರಧಾನ ಕಾರ್ಯದರ್ಶಿ ಸುಂದ್ರಪ್ಪ, ಹೆಗ್ಗೋಠಾರ ಶಿವಸ್ವಾಮಿ, ಉಡಿಗಾಲ ಗುರು, ಮಾದೇಶ್, ಹಿಂಡವಾಡಿ ಮಾದೇಶ್, ಹಿರಿಯೂರು ಮಹೇಶ್, ರಾಜು, ರಘು, ಮೂಕಹಳ್ಳಿ ಮಹೇಶ್, ಕೊಣ್ಣೂರ ನಾಗೇಂದ್ರ ಇತರರು ಭಾಗವಹಿಸಿದ್ದರು.

ಕಮ್ಮಾರ ಜನಾಂಗ ಮುಖ್ಯವಾಹಿನಿಗೆ ಬರಬೇಕು



ಚಾಮರಾಜನಗರದ ಖಾಸಗಿ ಕಲ್ಯಾಣ ಮಂಟಪದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಮ್ಮಾರ–ಗೆಜ್ಜಗಾರ ಜನಪ್ರತಿನಿಧಿಗಳು ಹಾಗೂ ಸರ್ಕಾರಿ ನೌಕರರನ್ನು ಸನ್ಮಾನಿಸಲಾಯಿತು.

ಚಾಮರಾಜನಗರ, ಡಿ.9–ಕಮ್ಮಾರ–ಗೆಜ್ಜಗಾರ ಜನಾಂಗದವರು ಒಗ್ಗೂಡುವ ಮೂಲಕ ಮುಖ್ಯವಾಹಿನಿಗೆ ಬರಬೇಕು ಎಂದು ವಿರಕ್ತ ಮಠದ ಶ್ರೀಚೆನ್ನಬಸವಸ್ವಾಮೀಜಿ ಸಲಹೆ ನೀಡಿದರು.

ನಗರದ ಖಾಸಗಿ ಕಲ್ಯಾಣ ಮಂಟಪದಲ್ಲಿ ಕಮ್ಮಾರ–ಗೆಜ್ಜಗಾರ ಸಮುದಾಯ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಆಯೋಜಿಸಿದ್ದ ಜಿಲ್ಲೆಯ ಸಮುದಾಯ ಚುನಾಯಿತ ಪ್ರತಿನಿಧಿಗಳು ಹಾಗೂ ಸರ್ಕಾರಿ ನೌಕರರ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಕಮ್ಮಾರ ಜನಾಂಗ ಆರ್ಥಿಕ, ರಾಜಕೀಯವಾಗಿ ಮುಂದೆ ಬರಬೇಕು. ಸಮುದಾಯದವರೆಲ್ಲರೂ ಒಗ್ಗಟ್ಟಾಗುವ ಮೂಲಕ ತಮ್ಮ ಮಕ್ಕಳ ಉನ್ನತ ಶಿಕ್ಷಣಕ್ಕೆ ಒತ್ತು ನೀಡಿದಾಗ ಮಾತ್ರ ಸರ್ಕಾರದ ಸವಲತ್ತುಗಳನ್ನು ಪಡೆದುಕೊಳ್ಳಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಹಿರಿಯ ವಕೀಲ ಎಲ್.ವಿರೂಪಾಕ್ಷ ಮಾತನಾಡಿ, ಕಮ್ಮಾರ ಜನಾಂಗವನ್ನು ಪ್ರಾಂತ್ಯ, ಭಾಷೆಗಳಲ್ಲಿ ಹಲವು ಉಪನಾಮಗಳಲ್ಲಿ ಕರೆಯಲಾಗುತ್ತಿದೆ. ಈ ಸಮುದಾಯದ ಬಗ್ಗೆ ಬಸವಣ್ಣನವರ ಕಾಲದಿಂದಲೂ ಉಲ್ಲೇಖವಿದ್ದು, ಹಾಗಾಗಿ ಜಿಲ್ಲೆಯಲ್ಲಿ ಉಪನಾಮಗಳನ್ನು ಬಳಸದೆ ಕಮ್ಮಾರ ಎಂದೇ ಗುರುತಿಸಿಕೊಂಡರೆ ಎಲ್ಲಾ ಸೌಲಭ್ಯ ದೊರೆಯುತ್ತವೆ ಎಂದು ಹೇಳಿದರು.

ಇದೇ ವೇಳೆ ಜಿಲ್ಲೆಯ ಹಲವು ಗ್ರಾಮಗಳಿಂದ ಆಗಮಿಸಿದ್ದ ಸಮುದಾಯದ ಮುಖಂಡರೆಲ್ಲರೂ ಚರ್ಚೆ ನಡೆಸಿ, ಕುಲ ಅಧ್ಯಯನ ತಂಡ ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಎಲ್ಲರೂ ಒಗ್ಗಟ್ಟಾಗಿ ಜನಾಂಗದ ಉಪನಾಮಗಳನ್ನು ಹೇಳದೆ ಕಮ್ಮಾರ ಎಂದು ಮಾಹಿತಿ ನೀಡಲು ನಿರ್ಣಯ ಕೈಗೊಳ್ಳಲಾಯಿತು. ನಂತರ ಸಮುದಾಯದ ಜನಪ್ರತಿನಿಧಿಗಳು ಹಾಗೂ ಸರ್ಕಾರಿ ನೌಕರರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷ ಸುರೇಶ್, ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ಸಿಆರ್‌ಎಂ ಆರ್ಕೆಡ್ ಮಾಲೀಕ ಮಹದೇವಯ್ಯ, ಸಮುದಾಯ ಯಜಮಾನರು, ಮುಖಂಡರು ಹಾಜರಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಚಾಮರಾಜನಗರ: ನಿರ್ವಹಣೆ ಕಾಮಗಾರಿ ನಿಮಿತ್ತ ಡಿ.11 ರಂದು ಬೆಳಗ್ಗೆ 10 ರಿಂದ ಸಂಜೆ 6 ಗಂಟೆವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಉಮ್ಮತ್ತೂರು, ಬಾಗಳಿ, ಲಿಂಗಣಾಪುರ, ಜನ್ನೂರು, ಜನ್ನೂರು ಹೊಸೂರು, ಹಳ್ಳಿಕೆರೆಹುಂಡಿ, ಗಣಗನೂರು, ಗಣಗನೂರುಪುರ, ನವಿಲೂರು, ಆಲ್ದೂರು, ಬಿಎಂಕೆ ಹುಂಡಿ, ಗೊದ್ದಲಹುಂಡಿ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ಲೋಕಾಯುಕ್ತ ಅಧಿಕಾರಿಗಳಿಂದ ದೂರು ಸ್ವೀಕಾರ

ಗುಂಡ್ಲುಪೇಟೆ, ಡಿ.9–ಲೋಕಾಯುಕ್ತ ಅಧಿಕಾರಿಗಳು ಡಿ.11ರಂದು ಪಟ್ಟಣಕ್ಕೆ ಭೇಟಿ ನೀಡಿ, ಸಾರ್ವಜನಿಕರಿಂದ ದೂರು ಅರ್ಜಿ ಸ್ವೀಕರಿಸಿ ವಿಚಾರಣೆ ನಡೆಸಲಿದ್ದಾರೆ.

ಲೋಕಾಯುಕ್ತ ಅಧಿಕಾರಿಗಳು ಪಟ್ಟಣದ ಪ್ರವಾಸಿಮಂದಿರ (ಐಬಿ)ದಲ್ಲಿ ಅಂದು ಬೆಳಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆವರೆಗೆ ಸಾರ್ವಜನಿಕರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆಯಡಿ ದೂರುಗಳನ್ನು ಸ್ವೀಕರಿಸಿ ವಿಚಾರಣೆ ನಡೆಸಲಿದ್ದಾರೆ.

ಸರ್ಕಾರಿ ಕಚೇರಿಗಳ ಕೆಲಸದಲ್ಲಿ ಅನಗತ್ಯ ವಿಳಂಬ, ಇನ್ನಿತರ ತೊಂದರೆ ನೀಡುತ್ತಿರುವ ಅಧಿಕಾರಿ, ನೌಕರರ ವಿರುದ್ಧ ಸಾರ್ವಜನಿಕರು ಮಾಹಿತಿ, ದೂರುಗಳನ್ನು ನಿಗದಿತ ನಮೂನೆ–1 ಮತ್ತು 2ರಲ್ಲಿ ನೀಡಬಹುದು ಎಂದು ಲೋಕಾಯುಕ್ತ ಪೊಲೀಸ್ ಉಪ ನಿರೀಕ್ಷಕರು ತಿಳಿಸಿದ್ದಾರೆ.

ಇಂದು ಚಾ.ನಗರ ವಿವಿಯಲ್ಲಿ ವಿಚಾರ ಸಂಕಿರಣ



ಚಾಮರಾಜನಗರ, ಡಿ.9–ಚಾಮರಾಜನಗರ, ಹಾವೇರಿ ಹಾಗೂ ಕೊಡಗು ವಿಶ್ವವಿದ್ಯಾನಿಲಯ ಸಹಯೋಗದಲ್ಲಿ 'ಬಸವಣ್ಣನವರು ಕರ್ನಾಟಕದ ಸಾಂಸ್ಕೃತಿಕ ನಾಯಕರು' ಕುರಿತು ವಿಚಾರ ಸಂಕಿರಣವನ್ನು ಡಿ.10 ರಂದು ಬೆಳಗ್ಗೆ 11 ಗಂಟೆಗೆ ಚಾಮರಾಜನಗರ ವಿಶ್ವವಿದ್ಯಾನಿಲಯದ ನಿಜಗುಣ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಹಾವೇರಿ ವಿಶ್ವವಿದ್ಯಾನಿಲಯ ಕುಲಪತಿ ಪ್ರೊ.ಸುರೇಶ ಹೆಚ್.ಜಂಗಮಶೆಟ್ಟಿ ವಿಚಾರ ಸಂಕಿರಣ ಉದ್ಘಾಟಿಸಲಿದ್ದು, ಚಾಮರಾಜನಗರ ವಿವಿ ಕುಲಪತಿ ಪ್ರೊ.ಎಂ.ಆರ್.ಗಂಗಾಧರ್ ಅಧ್ಯಕ್ಷತೆ ವಹಿಸಲಿದ್ದಾರೆ. ಕೊಡಗು ವಿವಿ ಕುಲಪತಿ ಪ್ರೊ. ಅಶೋಕ ಸಂಗಪ್ಪ ಆಲೂರ, ಮೂಡಲಪಾಯ ಯಕ್ಷಗಾನ ಭಾಗವತರು, ಶರಣ ಸಾಹಿತ್ಯ ಚಿಂತಕ ಎಚ್.ಸಿ. ಶಿವಬುದ್ಧಿ ಹಲ್ಲರೆ ಮುಖ್ಯ ಭಾಷಣ ಮಾಡಲಿದ್ದಾರೆ.

ಚಾಮರಾಜನಗರ ವಿವಿ ಕುಲಸಚಿವ ಪ್ರೊ.ಜಿ.ವಿ.ವೆಂಕಟರಮಣ, ಪಿಎಂಇಬಿ ನಿರ್ದೇಶಕ ಡಾ.ವಿ.ಜಿ.ಸಿದ್ದರಾಜು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕಾಂಗ್ರೆಸ್ ಸರ್ಕಾರದ್ದು 17 ತಿಂಗಳಿಗೆ 17 ಅವಾಂತರ

●ಎಲ್ಲಾ ಇಲಾಖೆಗಳ ಮೇಲೆ ನಿಯಂತ್ರಣ ಕಳೆದುಕೊಂಡಿರುವ ಮುಖ್ಯಮಂತ್ರಿ ●ವಿಪಕ್ಷ ನಾಯಕ ಆರ್. ಅಶೋಕ್ ವಾಗ್ದಾಳಿ

ಬೆಳಗಾವಿ, ಸುವರ್ಣ ವಿಧಾನಸೌಧ, ಡಿ.9(ಕೆಎಂಶಿ)–ರಾಜ್ಯ ಕಾಂಗ್ರೆಸ್ ಸರ್ಕಾರ ಆಡಳಿತದ 17 ತಿಂಗಳಲ್ಲಿ 17 ಅವಾಂತರ ಮಾಡಿಕೊಂಡಿದ್ದು, ಇಡೀ ಆಡಳಿತ ಯಂತ್ರ ನಿದ್ದೆಗೆ ಜಾರಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಟೀಕಿಸಿದ್ದಾರೆ.



ಚಳಿಗಾಲದ ವಿಧಾನಮಂಡಲ ಅಧಿವೇಶನಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಬಾರಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾದ ವೇಳೆ ನೀಡಿದ ಆಡಳಿತ ಈ ಬಾರಿ ಕಾಣುತ್ತಿಲ್ಲ. ಅವರು ಮುಡಾ ಕೇಸ್‌ನಲ್ಲಿ ನರಳುತ್ತಿದ್ದರೆ, ಸರ್ಕಾರ ನಿದ್ದೆ ಮಾಡುತ್ತಿದೆ ಎಂದರು.

ಬೆಳಗಾವಿಯೊಂದರಲ್ಲೇ 325 ಮಕ್ಕಳು ಮೃತಪಟ್ಟಿದ್ದಾರೆ. ಯಾವ ಇಲಾಖೆ ಮೇಲೂ ಮುಖ್ಯಮಂತ್ರಿ ಹಿಡಿತ ಇಲ್ಲವಾಗಿದೆ. ಬಾಣಂತಿಯರು, ಮಕ್ಕಳು ಸಾಯುತ್ತಿದ್ದರೂ ಸರ್ಕಾರ ನಿದ್ದೆಗೆ ಜಾರಿದೆ, ನಿಯಂತ್ರಣ ಇಲ್ಲದೆ ಎಲ್ಲ ಇಲಾಖೆಗಳಲ್ಲಿ ಅನಾಹುತವಾಗುತ್ತಿದೆ. ಸಚಿವರು ಹಣ ಮಾಡುವುದರಲ್ಲಿ ನಿರತರಾಗಿದ್ದಾರೆ. ಜಿಲ್ಲಾ ಪ್ರವಾಸ ಮಾಡುತ್ತಿಲ್ಲ.

ಸಚಿವರು ಹಣ ಮಾಡಲು ಗುರುವಾರ ಮಾತ್ರ ವಿಧಾನಸೌಧಕ್ಕೆ ಆಗಮಿಸುತ್ತಿದ್ದು, ಇದು ಗುರುವಾರದ ಸರ್ಕಾರವಾಗಿದೆ. ಆಡಳಿತ ಚುಕ್ಕಾಣಿ ಹಿಡಿದಾಗ ಧರ್ಮದರ್ಶನ, ಜನಸಂಪರ್ಕ ಕಾರ್ಯಕ್ರಮಗಳನ್ನು ಮಾಡುವುದಾಗಿ ಹೇಳಿದ್ದ ಸರ್ಕಾರ ಮಾತು ಮರೆತು ಹಣ ಮಾಡುವುದರಲ್ಲಿ ನಿರತವಾಗಿದೆ ಎಂದು ಆರೋಪಿಸಿದರು.

ಅಭಿವೃದ್ಧಿಗೆ ಏನು ಕಾರ್ಯಕ್ರಮ ನೀಡಿದೆ, ಉತ್ತರ ಕರ್ನಾಟಕವನ್ನು ಚಿನ್ನದ ನಾಡು ಮಾಡುತ್ತೇವೆ ಎಂದವರು ಎಲ್ಲಿ ಹೋದರು ಎಂದು ಪ್ರಶ್ನಿಸಿದರು.

ನಾಳೆ 'ಎಸ್‌ಎಂಇ ಕನೆಕ್ಟ್' ಶೀರ್ಷಿಕೆಯಡಿ ಸಣ್ಣ–ಮಧ್ಯಮ ಉದ್ಯಮ ಕುರಿತ ವಿಚಾರ ಸಂಕಿರಣ

ಮೈಸೂರು,ಡಿ.9(ಪಿಎಂ)– ಫೆಡರೇಷನ್ ಆಫ್ ಇಂಡಿಯನ್ ಚೇಂಬರ್ಸ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿ (ಎಫ್‌ಐಸಿಸಿಐ)–ಕರ್ನಾಟಕ ಸ್ಟೇಟ್ ಕೌನ್ಸಿಲ್ ವತಿಯಿಂದ ಕರ್ನಾಟಕ ಸರ್ಕಾರ ಮತ್ತು ಇನ್ವೆಸ್ಟ್ ಕರ್ನಾಟಕ ಫೋರಮ್ ಸಹಯೋಗದಲ್ಲಿ ಡಿ.11ರಂದು ಬೆಳಗ್ಗೆ 10ರಿಂದ ಮಧ್ಯಾಹ್ನ 1.30ರವರೆಗೆ 'ಎಸ್‌ಎಂಇ ಕನೆಕ್ಟ್' ಶೀರ್ಷಿಕೆಯಡಿ ಸಣ್ಣ–ಮಧ್ಯಮ ಉದ್ಯಮ ಕುರಿತಂತೆ ವಿಚಾರ ಸಂಕಿರಣ ಆಯೋಜಿಸಲಾಗಿದೆ.

ಮೈಸೂರಿನ ಹೋಟೆಲ್ ಸದರನ್ ಸ್ಟಾರ್‌ನಲ್ಲಿ ವಿಚಾರ ಸಂಕಿರಣ ನಡೆಯಲಿದೆ. ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಗಾರಿಕೋದ್ಯಮಿಗಳಿಗೆ ಈ ವಿಚಾರ ಸಂಕಿರಣವು ವ್ಯವಹಾರದ ವಿಕಾಸದ ಕುರಿತು ಸಮಗ್ರ ಒಳನೋಟ ನೀಡಲಿದೆ. ನೋಂದಣಿಗಾಗಿ https://meet.ficci.in/invitee-form.asp?evid=11112459882428. ಲಿಂಕ್ ಬಳಸಬಹುದು. ಹೆಚ್ಚಿನ ವಿವರಗಳಿಗಾಗಿ ಅಶ್ವಿನಿ ಶ್ರೀರಂಗರಾಜ್ ಅವರನ್ನು ಮೊ.ಸಂ.93425–09003 ಮೂಲಕ ಸಂಪರ್ಕಿಸಬಹುದು. ಅಥವಾ ಮೈಸೂರು ಚೇಂಬರ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿ (ಎಂಸಿಸಿಐ) ಕಚೇರಿಯ ದೂ.ಸಂ. 0821–4250246 ಅನ್ನು ಸಹ ಸಂಪರ್ಕಿಸಬಹುದು.

ಬೆಳಗಾವಿ ಕೇಂದ್ರಾಡಳಿತ ಪ್ರದೇಶ ಎಂದು ಘೋಷಿಸಿ: ಆದಿತ್ಯ ಠಾಕ್ರೆ ಆಗ್ರಹ

ಮುಂಬೈ: ಬೆಳಗಾವಿಯ ಸುವರ್ಣ ಸೌಧದಲ್ಲಿ ಸೋಮವಾರದಿಂದ ಚಳಿಗಾಲದ ಅಧಿವೇಶನ ಆರಂಭವಾಗಿದ್ದು, ಇದೇ ಸಂದರ್ಭದಲ್ಲೇ ಮಹಾರಾಷ್ಟ್ರ ಮಾಜಿ ಮುಖ್ಯಮಂತ್ರಿ ಉದ್ಧವ್ ಠಾಕ್ರೆ ಅವರ ಪುತ್ರ ಆದಿತ್ಯ ಠಾಕ್ರೆ ಉದ್ಧಟತನದ ಹೇಳಿಕೆ ನೀಡಿದ್ದಾರೆ.



ಗಡಿ ವಿವಾದ ಇತ್ಯರ್ಥ ಆಗುವವರೆಗೂ ಬೆಳಗಾವಿಯನ್ನು ಕೇಂದ್ರಾಡಳಿತ ಪ್ರದೇಶವನ್ನಾಗಿ ಘೋಷಿಸಬೇಕು ಎಂದು ವೊರ್ಲಿ ಕ್ಷೇತ್ರದ ಶಾಸಕ ಆದಿತ್ಯ ಠಾಕ್ರೆ ಅವರು ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

ಬೆಳಗಾವಿಯಲ್ಲಿ ವಾರ್ಷಿಕ ಸಮಾವೇಶ ನಡೆಸಲು ಮಹಾರಾಷ್ಟ್ರ ಏಕೀಕರಣ ಸಮಿತಿ(ಎಂಇಎಸ್)ಗೆ ಕರ್ನಾಟಕ ಸರ್ಕಾರ ಅನುಮತಿ ನಿರಾಕರಿಸಿದ ಹಿನ್ನೆಲೆಯಲ್ಲಿ ಇಂದು ವಿಧಾನ ಭವನದ ಆವರಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಆದಿತ್ಯ ಠಾಕ್ರೆ, ಮಹಾರಾಷ್ಟ್ರದಲ್ಲಿ ಹೊಸ ಸರ್ಕಾರ ರಚನೆಯಿಂದಾಗಿ ಸಂಭ್ರಮಾಚರಣೆ ನಡೆಯುತ್ತಿದೆ. ಮತ್ತೊಂದೆಡೆ, ಬೆಳಗಾವಿಯ ಪರಿಸ್ಥಿತಿಯನ್ನು ನೋಡಿ. ನೆರೆಯ ಈ ಪ್ರದೇಶದಲ್ಲಿ ಮರಾಠಿ ಭಾಷಿಕರ ಹಕ್ಕುಗಳನ್ನು ಕಸಿದುಕೊಳ್ಳಲಾಗುತ್ತಿದೆ ಎಂದರು.

ಬೆಳಗಾವಿ ವಿವಾದವನ್ನು ಬಗೆಹರಿಸಲು ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು ಮತ್ತು ಗಡಿ ವಿವಾದ ಇತ್ಯರ್ಥವಾಗೋವರೆಗು ಬೆಳಗಾವಿಯನ್ನು ಕೇಂದ್ರಾಡಳಿತ ಪ್ರದೇಶವನ್ನಾಗಿ ಘೋಷಿಸಬೇಕು ಎಂದು ಆಗ್ರಹಿಸಿದರು.

ಯಾರೇ ಪುಂಡಾಟ ಮಾಡಿದರೂ ಸುಮ್ಮನಿರಲ್ಲ: ಸಿ.ಎಂ



ಬೆಳಗಾವಿ, ಡಿ.9– ಬೆಳಗಾವಿಯನ್ನು ಕೇಂದ್ರಾಡಳಿತ ಪ್ರದೇಶವಾಗಿ ಘೋಷಿಸಬೇಕು ಎಂಬ ಹೇಳಿಕೆ ಅತ್ಯಂತ ಬಾಲಿಶ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆದಿತ್ಯ ಠಾಕ್ರೆ ನೀಡಿದ ಹೇಳಿಕೆಗೆ ತಿರುಗೇಟು ನೀಡಿದರು. ನಮಗೆ ಮಹಾಜನ್ ವರದಿಯೇ ಅಂತಿಮ. ಮಹಾಜನ್ ವರದಿಯನ್ನು ಒಪ್ಪಿಕೊಂಡ ಮೇಲೆ ಮುಗಿಯಿತು. ಯಾರಾದರೂ ಬೆಳಗಾವಿಯನ್ನು ಕೇಂದ್ರಾಡಳಿತ ಪ್ರದೇಶ ಮಾಡಲು ಸಾಧ್ಯವೇ? ಎಂದು ಪ್ರಶ್ನಿಸಿದ ಸಿಎಂ ಈ ಕಾರಣಕ್ಕೇ ಇದೊಂದು ಬಾಲಿಶ ಹೇಳಿಕೆ ಎಂದರು. ಈ ವಿಚಾರವಾಗಿ ಯಾರೇ ಪುಂಡಾಟಿಕೆ ಮಾಡಿದರೂ ಸುಮ್ಮನಿರಲ್ಲ ಎಂದರು.

ಕಾನೂನು ಪದವೀಧರರಿಗೆ ಅಪರ ಜಿಲ್ಲಾಧಿಕಾರಿ ಕಿವಿಮಾತು



ಪಜಾ ಕಾನೂನು ಪದವೀಧರರ ಸಂದರ್ಶನ ವೇಳೆ ಎಡಿಸಿ ಡಾ.ಪಿ.ಶಿವರಾಜು ಮಾತನಾಡಿದರು

ಮೈಸೂರು, ಡಿ.9(ಎಂಕೆ)– ಸರ್ಕಾರದ ಸವಲತ್ತುಗಳನ್ನು ಸಮರ್ಪಕವಾಗಿ ಬಳಸಿಕೊಂಡು ಸಮಾಜಮುಖಿಯಾಗಿ ಕರ್ತವ್ಯ ನಿರ್ವಹಿಸುವಂತೆ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಸಲಹೆ ನೀಡಿದರು.

ತಮ್ಮ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿಯ ಕಾನೂನು ಪದವೀಧರರ ಸಂದರ್ಶನ ವೇಳೆ ಮಾತನಾಡಿದ ಅವರು, ರಾಜ್ಯ ಸರ್ಕಾರ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ವಿದ್ಯಾಭ್ಯಾಸಕ್ಕಾಗಿ ಇರುವ ಹಲವು ಸವಲತ್ತುಗಳಲ್ಲಿ ಪರಿಶಿಷ್ಟ ಜಾತಿಯ ಕಾನೂನು ಪದವೀಧರರಿಗೂ ಮಾಸಿಕ ವೇತನ ನೀಡುವ ಸೌಲಭ್ಯವಿದೆ ಎಂದರು.

ಸರ್ಕಾರದ ಸವಲತ್ತುಗಳನ್ನು ಪಡೆದುಕೊಂಡರೆ ಸಾಲದು ಸಮಾಜಮುಖಿಯಾಗಿ ಕರ್ತವ್ಯ ನಿರ್ವಹಿಸಿ, ಸಮಾಜಕ್ಕೆ ತಮ್ಮಿಂದ ಸಾಧ್ಯವಾದ ಕೊಡುಗೆಯನ್ನು ನೀಡಬೇಕು. ವಿದ್ಯಾಭ್ಯಾಸದ ಕಡೆಗೆ ಹೆಚ್ಚಿನ ಗಮನಹರಿಸಿ, ಪದವಿ ಪಡೆದು ಮತ್ತೊಬ್ಬರಿಗೆ ಮಾದರಿಯಾಗಿ ಜೀವನ ನಡೆಸಬೇಕು ಎಂದು ಪರಿಶಿಷ್ಟ ಜಾತಿ ಕಾನೂನು ಪದವಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಂಗೇಗೌಡ ಉಪಸ್ಥಿತರಿದ್ದರು.

ಎನ್.ರಂಗಸ್ವಾಮಪ್ಪ ನಿಧನ




ಕಿಕ್ಕೇರಿ, ಡಿ.9– ಇಲ್ಲಿನ ಕೆಪಿಎಸ್ ಕಾಲೇಜು ರಸ್ತೆ ಬಡಾವಣೆಯ ಹಿರಿಯ ನಾಗರೀಕ ಎನ್.ರಂಗಸ್ವಾಮಪ್ಪ(85) ಸೋಮವಾರ ಮೃತರಾದರು. ಮೃತರ ಕುಟುಂಬದವರು ಬಿಜಿಎಸ್ ಆಸ್ಪತ್ರೆಗೆ ಮೃತರ ನೇತ್ರವನ್ನು ದಾನ ಮಾಡಿ ಸಾವಿನಲ್ಲಿಯೂ ಮಾನವೀಯತೆ ಮೆರೆದರು.

ಮೃತರು ಓರ್ವ ಪುತ್ರ ಹಾಗೂ ಇಬ್ಬರು ಪುತ್ರಿಯರು ಹಾಗು ಅಪಾರ ಬಂಧು ವರ್ಗವನ್ನು ಅಗಲಿದ್ದು, ಮೃತರ ಅಂತ್ಯಕ್ರಿಯೆ ಇಲ್ಲಿನ ಹಿಂದೂ ರುದ್ರಭೂಮಿಯಲ್ಲಿ ಮಂಗಳವಾರ ಬೆಳಗ್ಗೆ 10ಕ್ಕೆ ನಡೆಯಲಿದೆ ಎಂದು ಕುಟುಂಬದ ಮೂಲದವರು ತಿಳಿಸಿದ್ದಾರೆ.

ಸ್ಕ್ವಾಡ್ರನ್ ಲೀಡರ್ ಎ.ಬಿ.ದೇವಯ್ಯ ಭವನದ ಆವರಣಕ್ಕೆ ಬೇಕಿದೆ ಕಾಯಕಲ್ಪ

ಆವರಣದ ಒಂದೆಡೆ ಡಾಂಬರೀಕರಣವಿಲ್ಲ, ಕಲ್ಲು-ಹಳ್ಳಕೊಳ್ಳಗಳಿಂದ ಸಂಚಾರ ದುಸ್ತರ





ಹಳೇ ಡಿಸಿ ಕಚೇರಿ ಎದುರಿನ ಮಾರ್ಗದತ್ತ ಇರುವ ಸ್ಕ್ವಾಡ್ರನ್ ಲೀಡರ್ ಎ.ಬಿ.ದೇವಯ್ಯ ಭವನದ ಆವರಣದ ಗೇಟ್‌ನ (ಓವಲ್ ಮೈದಾನದ ಎದುರು) ಬಣ್ಣ ಮಾಸಿ ತುಕ್ಕು ಹಿಡಿಯುವ ಹಂತಕ್ಕೆ ತಲುಪಿರುವುದು, ಜೊತೆಗೆ ಈ ಆವರಣದಲ್ಲಿ ಡಾಂಬರು ಇಲ್ಲದೆ ಕಲ್ಲು, ಮಣ್ಣು, ಹಳ್ಳಕೊಳ್ಳದೊಂದಿಗೆ ಅವ್ಯವಸ್ಥೆ ಇರುವುದನ್ನು ಚಿತ್ರದಲ್ಲಿ ಕಾಣಬಹುದು. ಮತ್ತೊಂದು ಚಿತ್ರದಲ್ಲಿ ಇದೇ ಜಾಗದ ಮೂಲೆಯಲ್ಲಿ ತ್ಯಾಜ್ಯ ಗುಡ್ಡೆ ಹಿಡಿದಿರುವುನ್ನು ಕಾಣಬಹುದು.

ಮೈಸೂರು,ಡಿ.9(ಪಿಎಂ)– ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಮೈಸೂರಿನ ಸ್ಕ್ವಾಡ್ರನ್ ಲೀಡರ್ ಎ.ಬಿ. ದೇವಯ್ಯ ಭವನದ ಆವರಣವು ಹಳ್ಳಕೊಳ್ಳ ಹಾಗೂ ಕಲ್ಲುಗಳಿಂದ ಕೂಡಿದ್ದು, ಇಲ್ಲಿಗೆ ತಮ್ಮ ವಿವಿಧ ಕೆಲಸ ಕಾರ್ಯಗಳಿಗೆ ಭೇಟಿ ನೀಡುವ ಮಾಜಿ ಸೈನಿಕರು ಮತ್ತು ಅವರ ಕುಟುಂಬಸ್ಥರು ಇಂತಹ ಅವ್ಯವಸ್ಥೆಯಿಂದ ಕಿರಿಕಿರಿ ಅನುಭವಿಸುವಂತಾಗಿದೆ.

ಅದರಲ್ಲಿಯೂ ಇಲ್ಲಿಗೆ ಬರುವ ವಯೋವೃದ್ಧರಾದ ಮಾಜಿ ಸೈನಿಕರು ಇಲ್ಲಿ ಸಂಚರಿಸಲು ಹರಸಾಹಸಪಡಬೇಕಿದೆ. ಮಾಜಿ ಸೈನಿಕರು ಹಾಗೂ ಅವರ ಕುಟುಂಬದ ಶ್ರೇಯೋಭಿವೃದ್ಧಿಗಾಗಿ ವಿವಿಧ ಸೌಲಭ್ಯ ಒದಗಿಸುವ ವ್ಯವಸ್ಥೆ ಇಲ್ಲಿದೆ. ಆದರೆ ಹಳೇ ಜಿಲ್ಲಾಧಿಕಾರಿ ಕಚೇರಿ ಎದುರಿನಿಂದ ಭವನಕ್ಕೆ ಪ್ರವೇಶ ಪಡೆಯಲು ಮುಂದಾದರೆ ಅಂತಹವರು ಇದ್ಯಾವ ಕೊಂಪೆಗೆ ಬಂದಿದ್ದೇವೆ ಎಂದುಕೊಳ್ಳುವುದರಲ್ಲಿ ಸಂದೇಹವಿಲ್ಲ.

ಅಂತಹ ಅವ್ಯವಸ್ಥೆ ಇಲ್ಲಿದ್ದು, ಓವೆಲ್ ಮೈದಾನದ ಎದುರಿನ ಭವನದ ಗೇಟ್ ಮುಂದೆಯೇ ಕಲ್ಲು, ಹಳ್ಳಕೊಳ್ಳ ಮಾತ್ರವಲ್ಲದೆ, ಕಸಕಡ್ಡಿಯ ದರ್ಶನವಾಗುತ್ತದೆ. ಜೊತೆಗೆ ಕಾಂಪೌಂಡ್‌ಗೆ ಹೊಂದಿಕೊಂಡಂತೆ ಗಿಡಗಂಟಿಗಳು ಬೆಳೆದು ನಿಂತಿದ್ದು, ಇಲ್ಲಿನ ಕಬ್ಬಿಣದ ಗೇಟಿನ ಬಣ್ಣ ಮಾಸಿದೆಯಲ್ಲದೆ, ತುಕ್ಕು ಹಿಡಿಯುವ ಹಂತಕ್ಕೆ ತಲುಪಿದೆ. ಇನ್ನು ಚಪ್ಪಡಿ ಕಲ್ಲುಗಳು ಹೇಗೆಂದರೆ ಹಾಗೆ ಬಿದ್ದಿವೆ. ಹಾಗಾಗಿ ಎಚ್ಚರ ತಪ್ಪಿ ಹೆಜ್ಜೆ ಹಾಕಿದರೆ, ಬಿದ್ದು ಗಾಯಗೊಳ್ಳುವುದು ಗ್ಯಾರಂಟಿಯಾಗಿದೆ.

ಗೇಟಿನ ಪಕ್ಕದ ಮೂಲೆಯಲ್ಲಿ ಗಿಡಗಂಟಿ ಬೆಳೆದು ನಿಂತಿದ್ದು, ಇದರ ನಡುವೆ ವಿವಿಧ ಸಸ್ಯದ ಒಣ ಕಸ, ಪ್ಲಾಸ್ಟಿಕ್ ತ್ಯಾಜ್ಯ ರಾಶಿ ರಾಶಿ ಬಿದ್ದಿದೆ. ಇಂತಹ ಅವ್ಯವಸ್ಥೆಯ ನಡುವೆ ಇಲ್ಲಿಗೆ ಭೇಟಿ ನೀಡುವ ದುಸ್ಥಿತಿ ಎದುರಾಗಿದೆ. ಸದರಿ ಭವನಕ್ಕೆ ಜೆಎಲ್‌ಬಿ ರಸ್ತೆ ಮಾರ್ಗದ ಮೂಲಕವೂ ಸಂಪರ್ಕ ಪಡೆಯಬಹುದಾಗಿದ್ದು, ಈ ಮಾರ್ಗ ತಕ್ಕಮಟ್ಟಿಗೆ ವ್ಯವಸ್ಥಿತವಾಗಿದೆ ಎಂದು ಹೇಳಬಹುದು. ಜೊತೆಗೆ ಈ ಮಾರ್ಗದತ್ತ ಇರುವ ಭವನದ ದ್ವಾರ ಒಂದಿಷ್ಟು ಸುಸ್ಥಿತಿಯಲ್ಲಿಯೂ ಇದೆ. ಆದರೂ ಸಾಕಷ್ಟು ಜನ ಹಳೇ ಜಿಲ್ಲಾಧಿಕಾರಿ ಕಚೇರಿ ಮಾರ್ಗವನ್ನೇ ಹೆಚ್ಚು ಬಳಸುತ್ತಿದ್ದಾರೆ. ಏಕೆಂದರೆ ಈ ಭವನಕ್ಕೆ ಇದೇ ಮುಖ್ಯ ರಸ್ತೆಯಂತಿದೆ.

> ಹಳೇ ಡಿಸಿ ಕಚೇರಿ ಎದುರಿನ ಮಾರ್ಗವು ಭವನ ತಲುಪಲು ಸೂಕ್ತವಾಗಿದೆ. ಆದರೆ ಈ ಮಾರ್ಗದಲ್ಲಿ ಹೋದರೆ ಭವನದ ಪ್ರವೇಶ ದ್ವಾರ ಅವ್ಯವಸ್ಥೆಯಿಂದ ಕೂಡಿದೆ. ಈ ಸಮಸ್ಯೆ ಇಂದು ನಿನ್ನೆಯದಲ್ಲ. ಸುಮಾರು 15 ವರ್ಷಗಳಿಂದಲೂ ಇದೇ ದುಸ್ಥಿತಿ. ಇದರಿಂದ ವಯೋವೃದ್ಧ ಮಾಜಿ ಸೈನಿಕರು, ಅವರ ಕುಟುಂಬದವರು ತಮ್ಮ ಕೆಲಸ ಕಾರ್ಯಗಳಿಗಾಗಿ ಇಲ್ಲಿಗೆ ಭೇಟಿ ನೀಡುವುದೇ ಹರಸಾಹಸವಾಗಿದೆ ಇನ್ನಾದರೂ ಸಂಬಂಧಿಸಿ ದವರು ಇಂತಹ ಸಮಸ್ಯೆಗಳನ್ನು ನಿವಾರಿಸಿ ಭವನದ ಆವರಣಕ್ಕೆ ಕಾಯಕಲ್ಪ ನೀಡಬೇಕು.
> -ಎಸ್.ರಾಜೇಂದ್ರ, ಮಾಜಿ ಸೈನಿಕರು.

ಸದರಿ ಭವನದಲ್ಲಿ ಸೈನಿಕರ ವಿಶ್ರಾಂತ ಗೃಹಗಳು ಇವೆ. ಇಲ್ಲಿ 10ಕ್ಕೂ ಹೆಚ್ಚು ಕೊಠಡಿಗಳಿದ್ದು, ವಿವಿಧ ಭಾಗಗಳಿಂದ ಮೈಸೂರು ಹಾಗೂ ಸುತ್ತಮುತ್ತಲ ಪ್ರದೇಶಗಳಿಗೆ ಪ್ರವಾಸಕ್ಕೆ ಬರುವ ಸೈನಿಕರು ಇಲ್ಲಿ ಉಳಿದುಕೊಳ್ಳಲು ವ್ಯವಸ್ಥೆ ಇದೆ ಅಲ್ಲದೆ, ಮೈಸೂರಿನ ವಿವಿಧ ಆಸ್ಪತ್ರೆಗಳಲ್ಲಿ ವೈದ್ಯಕೀಯ ಸೇವೆ ಪಡೆಯಲು ಬರುವ ಸೈನಿಕರು ಹಾಗೂ ಅವರ ಕುಟುಂಬದವರು ಸಹ ಉಳಿದುಕೊಳ್ಳಬಹುದು. ಹೀಗಾಗಿ ಇಲ್ಲಿ ನಿತ್ಯ ಸಂಚಾರ ಇದ್ದೇ ಇರುತ್ತದೆ.

> ಭವನದಲ್ಲಿ ಎಲ್ಲಾ ರೀತಿಯ ಮೂಲಸೌಲಭ್ಯಗಳು ಸಮರ್ಪಕವಾಗಿವೆ. ಹಳೇ ಡಿಸಿ ಕಚೇರಿ ಎದುರಿನ ಮಾರ್ಗದತ್ತ ಇರುವ ಭವನದ ಆವರಣದ ಡಾಂಬರೀಕರಣ, ಚರಂಡಿ ನಿರ್ಮಾಣ ಹಾಗೂ ಹಸರೀಕರಣ ಒಳಗೊಂಡಂತೆ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಈಗಾಗಲೇ ಕ್ರಮ ವಹಿಸಲಾಗಿದೆ. ಆದಷ್ಟು ಶೀಘ್ರದಲ್ಲಿ ಈ ಸಂಬಂಧ ಕಾಮಗಾರಿಗಳು ಆರಂಭಗೊಳ್ಳಲಿವೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಅಧಿಕಾರಿಗಳು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಅಲ್ಲದೆ, ಭವನದ ಮಾಹಿತಿ ಕುರಿತು ಸೂಕ್ತ ನಾಮಫಲಕ ಇಲ್ಲದ ಕಾರಣ ದೂರದ ಊರುಗಳಿಂದ ಬರುವ ಮಾಜಿ ಸೈನಿಕರು ಮತ್ತು ಅವರ ಕುಟುಂಬದವರು ಭವನದ ಸಮೀಪದಲ್ಲೇ ನಿಂತು ಭವನದ ವಿಳಾಸ ಕೇಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಗೋಲ್ಡನ್ ಪಾಮ್ ಎಕ್ಸ್‌ಟೆನ್ಷನ್ ಕ್ಯಾಂಟೀನ್ ಸಹ ಇದೇ ಭವನದಲ್ಲಿದ್ದು, ಇಲ್ಲಿ ದಿನಸಿ ಪದಾರ್ಥಗಳು ಸೇರಿದಂತೆ ಗೃಹೋಪಯೋಗಿ ಸಾಮಗ್ರಿಗಳು ರಿಯಾಯಿತಿ ದರದಲ್ಲಿ ಸೈನಿಕರು ಹಾಗೂ ಮಾಜಿ ಸೈನಿಕರಿಗೆ ದೊರೆಯಲಿವೆ ಹೀಗಾಗಿ ಸಾಕಷ್ಟು ಮಂದಿ ಮಾಜಿ ಸೈನಿಕರು, ಸೈನಿಕರು ಹಾಗೂ ಅವರ ಕುಟುಂಬದವರು ಇಲ್ಲಿಗೆ ಆಗಾಗ್ಗೆ ಭೇಟಿ ನೀಡಿ ಸಾಮಗ್ರಿಗಳನ್ನು ಖರೀಸುತ್ತಾರೆ. ಅಲ್ಲದೆ, ಪುನರ್ವಸತಿ ಸಮಸ್ಯೆಗಳ ನಿವಾರಣೆ, ಪಿಂಚಣಿ ಸೇರಿದಂತೆ ಮೊದಲಾದ ಸೇವೆಗಳ ಸಂಬಂಧವೂ ಸೈನಿಕರು, ಮಾಜಿ ಸೈನಿಕರು ಇಲ್ಲಿಗೆ ಆಗಾಗ್ಗೆ ಭೇಟಿ ನೀಡುತ್ತಾರೆ. ಇಂತಹ ಭವನಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿಯೊಂದಿಗೆ ಭವನದ ಆವರಣದ ದುಸ್ಥಿತಿ ನಿವಾರಣೆಗೆ ಇನ್ನಾದರೂ ಕ್ರಮ ವಹಿಸಿ ಕಾಯಕಲ್ಪ ನೀಡಬೇಕಿದೆ.

ಯಶಸ್ಸಿಗೆ ಅಡ್ಡದಾರಿ, ಸರಳದಾರಿ ಎಂಬುದಿಲ್ಲ

ಪರೀಕ್ಷಾರ್ಥಿಗಳಿಗೆ ಮೈಸೂರು ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್ ಕಿವಿಮಾತು



ಯುಜಿಸಿ–ನೆಟ್ ಪರೀಕ್ಷೆಯ ಉಚಿತ ತರಬೇತಿ ಶಿಬಿರವನ್ನು ಮೈಸೂರು ನಗರ ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್ ಉದ್ಘಾಟಿಸಿದರು.

ಮೈಸೂರು,ಡಿ.9(ಎಸ್‌ಪಿಎನ್)– ಪ್ರಸ್ತುತ ಯುವ ಪೀಳಿಗೆ ನಂಬಿಕೆಯಿಟ್ಟು ಯಾವುದೇ ಕೆಲಸ ಹಮ್ಮಿಕೊಂಡರೂ ಅಲ್ಲಿ ಅದ್ಭುತಗಳನ್ನು ಸೃಷ್ಟಿಸಬಹುದು ಎಂದು ಮೈಸೂರು ನಗರ ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್ ಅಭಿಪ್ರಾಯಪಟ್ಟರು.

ಮೈಸೂರು ಜೆಎಲ್‌ಬಿ ರಸ್ತೆಯಲ್ಲಿರುವ ಲಕ್ಷ್ಮೀಪುರಂ ಸರ್ಕಾರಿ ಪಿಯು ಕಾಲೇಜು ಆವರಣದಲ್ಲಿ ಜ್ಞಾನಬುತ್ತಿ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಯುಜಿಸಿ–ನೆಟ್ ಪರೀಕ್ಷೆಯ ಉಚಿತ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬಹುತೇಕ ಯುವಕರು ಅಪನಂಬಿಕೆಯ ದಾಸರಾಗಿ ಯಶಸ್ಸಿನಿಂದ ವಿಮುಖರಾಗುತ್ತಿದ್ದಾರೆ ಎಂದು ಅಭಿಪ್ರಾಯಪಟ್ಟರು,.

ಸ್ಪಷ್ಟ ಮತ್ತು ನಿಖರ ಗುರಿಯಿಟ್ಟು ಬಿಲ್ಲಿನಿಂದ ಹೊರಟ ಬಾಣ ಎಂದಿಗೂ ವಿಫಲವಾಗುವುದಿಲ್ಲ. ಆದರೆ ಸಂಶಯವಿಟ್ಟುಕೊಂಡು ಬಿಲ್ಲಿನಿಂದ ಹೊರಟ ಬಾಣ ದಿಕ್ಕಾಪಾಲಾಗಿ ಹೋಗುತ್ತದೆ. ಮೂಲತಃ ಎಂಜಿನಿಯರಿಂಗ್ ವಿದ್ಯಾರ್ಥಿ. ಪಿಎಸ್‌ಐ ಆಗಿ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ನಂತರ ಕೆಎಎಸ್ ಪರೀಕ್ಷೆಯಲ್ಲಿ ಕನ್ನಡ ಸಾಹಿತ್ಯ ಆಯ್ಕೆಮಾಡಿಕೊಂಡು ಅಧಿಕಾರಿಯಾದ ಅನುಭವವನ್ನು ವಿವರಿಸಿದರು.

ರಾಷ್ಟ್ರಕವಿ ಕುವೆಂಪು ಅವರ ಮಾತಿನಂತೆ ನಾಳೆ ಎಂದರಾಗದು, ಮುಂದೆ ಎಂದರಾಗದು ಇಂದೆ ನಿರ್ಣಯಿಸಬೇಕೆಂಬ ಮಾತನ್ನು ಪರೀಕ್ಷಾ ಸಿದ್ಧತೆಯಲ್ಲಿ ತೊಡಗಿರುವ ಶಿಬಿರಾರ್ಥಿಗಳು ಮನನ ಮಾಡಿಕೊಳ್ಳಬೇಕು. ಕಠಿಣ ಪರಿಶ್ರಮಕ್ಕೆ ತಕ್ಕ ಅವಕಾಶಗಳು ಸಕಾಲದಲ್ಲಿ ಒದಗಿ ಬಂದರೆ ಯಶಸ್ಸು ಗ್ಯಾರಂಟಿ ಲಭಿಸುತ್ತದೆ. ಯಶಸ್ಸಿಗೆ ಅಡ್ಡದಾರಿ ಅಥವಾ ಸರಳ ದಾರಿ ಎಂಬುದಿಲ್ಲ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮೈಸೂರು ವಿವಿ ನಿವೃತ್ತ ಪ್ರಾಧ್ಯಾಪಕ ಪ್ರೊ.ಎ.ಬಾಲ ಸುಬ್ರಮಣ್ಯಂ ಮಾತನಾಡಿ, ಪ್ರಶ್ನೆಪತ್ರಿಕೆ ರೂಪಿಸುವ ವಿನ್ಯಾಸ ಕಾಲ ಕಾಲಕ್ಕೆ ಬದಲಾಗುತ್ತವೆ. ಸ್ಪರ್ಧಾತ್ಮಕ ಪರೀಕ್ಷೆ ಬರೆಯುವವರು ಅದನ್ನು ಸೂಕ್ಷ್ಮವಾಗಿ ಗ್ರಹಿಸಬೇಕು. ಪಠ್ಯಕ್ರಮಗಳಲ್ಲಾಗುವ ಬದಲಾವಣೆ ತಿಳಿದುಕೊಳ್ಳಬೇಕು. ಜೊತೆಗೆ ಹಳೆಯ ಪ್ರಶ್ನೆಪತ್ರಿಕೆಗಳನ್ನು ಆಗಾಗ್ಗೆ ತಿರುವು ಹಾಕುತಿರಬೇಕು. ಕಠಿಣ ಪರಿಶ್ರಮವಿಲ್ಲದೆ ಇಂದಿನ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಲು ಸಾಧ್ಯವಿಲ್ಲ. ಹುದ್ದೆಗಳ ಸಂಖ್ಯೆ ಅತ್ಯಂತ ಕಡಿಮೆಯಿದೆ. ಆದರೆ ಸ್ಪರ್ಧಾಳುಗಳ ಸಂಖ್ಯೆ ಹೆಚ್ಚಿದೆ. ಪ್ರಶ್ನೆ ಪತ್ರಿಕೆ ತಯಾರಕರು ನಿಮ್ಮನ್ನು ಸ್ಪರ್ಧೆಯಿಂದ ಹೊರಹಾಕುವ ಉದ್ದೇಶವಿಟ್ಟುಕೊಂಡು ಪ್ರಶ್ನೆ ಪತ್ರಿಕೆಗಳನ್ನು ರೂಪಿಸುತ್ತಿದ್ದಾರೆ ಎಂದರು.

ವೇದಿಕೆಯಲ್ಲಿ ಶಿಕ್ಷಣ ತಜ್ಞ ಪ್ರೊ.ಎನ್.ಎನ್.ಪ್ರಹ್ಲಾದ್, ಪತ್ರಿಕೋದ್ಯಮ ವಿಭಾಗದ ವಿಶ್ರಾಂತ ಪ್ರಾಧ್ಯಾಪಕ ಪ್ರೊ. ಪದ್ಮನಾಭ್, ಶಿಕ್ಷಣ ತಜ್ಞ ಪ್ರೊ.ಮಲ್ಲಿಕಾರ್ಜುನ ಶಾಸ್ತ್ರಿ, ಪ್ರೊ.ವಿ.ಜಯಪ್ರಕಾಶ್, ಪ್ರೊ.ಕೃ.ಪ.ಗಣೇಶ್, ಜೈನಹಳ್ಳಿ ಸತ್ಯ ನಾರಾಯಣಗೌಡ, ಕಾರ್ಯದರ್ಶಿ ಎಚ್. ಬಾಲಕೃಷ್ಣ ಉಪಸ್ಥಿತರಿದ್ದರು.

ನಿವೃತ್ತ ಸಾರಿಗೆ ನೌಕರರಿಗೆ ಉಪಧನ, ಗಳಿಕೆ ರಜೆ ಮೊತ್ತ ಪಾವತಿಗೆ 'ಶಕ್ತಿ' ಹಣ

> ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ನಾಲ್ಕು ನಿಗಮಗಳ ಸಾರಿಗೆ ನೌಕರರಿಂದ ಡಿ.31ರಿಂದ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ನೌಕರರಿಂದ ತೀರ್ಮಾನ ಮಾಡಲಾಗಿದೆ

ಮೈಸೂರು,ಡಿ.9(ಎಸ್‌ಪಿಎನ್)– ರಾಜ್ಯದ ನಾಲ್ಕು ರಸ್ತೆ ಸಾರಿಗೆ ಸಂಸ್ಥೆಗಳಲ್ಲಿ ನಿವೃತ್ತಿ ಹೊಂದಿದ ನೌಕರರಿಗೆ ಉಪಧನ ಹಾಗೂ ಗಳಿಕೆ ರಜೆ ನಗದೀಕರಣದ ವ್ಯತ್ಯಾಸದ ಮೊತ್ತವನ್ನು ಪಾವತಿಸಲು ಶಕ್ತಿ ಯೋಜನೆಯಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ 224.05 ಕೋಟಿ ರೂ.ಗಳನ್ನು ಬಳಕೆ ಮಾಡಿಕೊಳ್ಳಲು ರಾಜ್ಯ ಸರ್ಕಾರ ಷರತ್ತು ಬದ್ಧ ಅನುಮತಿ ನೀಡಿದೆ.

ಈ ಸಂಬಂಧ ಆದೇಶ ಹೊರಡಿಸಿರುವ ಸರ್ಕಾರದ ಅಧೀನ ಕಾರ್ಯದರ್ಶಿ (ಸಾರಿಗೆ) ವಿ.ಎನ್.ಪುಷ್ಪಾ ಅವರು, 2020ರ ಜನವರಿ 1ರಿಂದ 2023ರ ಫೆಬ್ರವರಿ 28ರ ವರೆಗಿನ ಅವಧಿಯಲ್ಲಿ ಸೇವಾ ನಿವೃತ್ತಿ ಹೊಂದಿದ ಅಧಿಕಾರಿ ಹಾಗೂ ನೌಕರರಿಗೆ 2020ರ ಜನವರಿ 1ರ ಪರಿಷ್ಕೃತ ವೇತನ ಶ್ರೇಣಿ ಅನ್ವಯ ಉಪಧನ ಹಾಗೂ ಗಳಿಕೆ ರಜೆ ನಗದೀ ಕರಣದ ವ್ಯತ್ಯಾಸ ಮೊತ್ತವನ್ನು ಪಾವತಿಸಬೇಕು ಎಂದು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ. ಇದಕ್ಕಾಗಿ ಸಾರಿಗೆ ಸಂಸ್ಥೆಗೆ ಶಕ್ತಿ ಯೋಜನೆಗಾಗಿ ಒದಗಿಸಿರುವ ಸಹಾಯ ಧನ 3,56,355 ಲಕ್ಷ ಅನುದಾನದ ಪೈಕಿ ಕೆಎಸ್‌ಆರ್‌ಟಿಸಿ 86.55 ಕೋಟಿ ರೂ., ಬಿಎಂಟಿಸಿ 50.25, ಎನ್‌ಡಬ್ಲ್ಯೂಕೆಆರ್‌ಟಿಸಿ 51.50, ಕೆಕೆಆರ್‌ಟಿಸಿ 35.45 ಕೋಟಿ ಸೇರಿದಂತೆ ಒಟ್ಟು 224.05 ಕೋಟಿ ರೂ. ಸೇರಿದಂತೆ ಒಟ್ಟು 224.05 ಕೋಟಿ ರೂ.ಗಳನ್ನು ಬಿಡುಗಡೆ ಗೊಳಿಸುವಂತೆ ಆದೇಶಿಸಿದ್ದಾರೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ಶಕ್ತಿ ಯೋಜನೆಯ ಅನುಷ್ಠಾನದಿಂದಾಗಿ ಆದಾಯ ಗಳಿಕೆಯಲ್ಲಿ ಹೆಚ್ಚಳ ಉಂಟಾಗಿದ್ದರೂ, ತುಟ್ಟಿಭತ್ಯೆ ಹೆಚ್ಚಳದಿಂದ ಹಾಗೂ ವಿದ್ಯಾರ್ಥಿಗಳ ರಿಯಾಯಿತಿ ಪಾಸ್ ದರವನ್ನು 2012ರಿಂದ ಪರಿಷ್ಕರಣೆ ಮಾಡದೇ ಇರುವುದು ಸಾರಿಗೆ ಸಂಸ್ಥೆಯು ನಿವೃತ್ತ ನೌಕರರಿಗೆ ಉಪಧನ ಹಾಗೂ ಗಳಿಕೆ ರಜೆ ನಗದೀಕರಣದ ಮೊತ್ತ 224.05 ಕೋಟಿ ನೀಡಲು ಸಾಧ್ಯವಾಗದಂತಹ ಪರಿಸ್ಥಿತಿ ಉಂಟಾಗಿದೆ. ಜೊತೆಗೆ ದರ ಪರಿಷ್ಕರಣೆ ಮಾಡುವುದಕ್ಕಿಂತ ಹಿಂದೆ ಪ್ರತಿದಿನ ಸರಾಸರಿ ಇಂಧನ ವೆಚ್ಚ 9.16 ಕೋಟಿಯಷ್ಟಿತ್ತು ಪ್ರಸ್ತುತ ಅದು 13.21 ಕೋಟಿಗಳಿಗೆ ಏರಿಕೆಯಾಗಿದೆ. ಪ್ರತಿದಿನ ಇಂಧನ ವೆಚ್ಚದಲ್ಲಿ 4.05 ಕೋಟಿ ರೂ.ಹೆಚ್ಚಳವಾಗಿರುವುದು ಸಂಸ್ಥೆಗೆ ಹೊರೆಯಾಗಿದೆ ಎಂದು ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಬರೆದಿದ್ದ ಪತ್ರದ ಆಧಾರದ ಮೇರೆಗೆ ಶಕ್ತಿ ಯೋಜನೆಗೆ ಮೀಸಲಿಟ್ಟಿರುವ ಹಣದ ಪೈಕಿ 224.05 ಕೋಟಿ ರೂ.ಗಳನ್ನು ಬಳಸಿಕೊಳ್ಳಲು ಅನುಮತಿ ನೀಡಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ

ಶ್ರೀಮತಿ ಕೆ.ವನಜಾಕ್ಷಮ್ಮ ಸಂಸ್ಮರಣಾ 29ನೇ ನೃತ್ಯ ಆರಾಧನಾ ಕಾರ್ಯಕ್ರಮದಲ್ಲಿ ಮನಸೂರೆಗೊಂಡ ವಿದ್ವಾನ್ ವಿಶ್ವದೀಪ್ ಮತ್ತು ಸಮೂಹ ನೃತ್ಯ





ವಿದ್ವಾನ್ ವಿಶ್ವದೀಪ್ ಹಾಗೂ ಸಮೂಹ ನೃತ್ಯ ಪ್ರಸ್ತುತಪಡಿಸಿದ ಉಡುಪಿಯ ನೃತ್ಯನಿಕೇತನ ಕೊಡವೂರು ತಂಡ.

ಮೈಸೂರು, ಡಿ.9(ಎಂಕೆ)– ಮೈಸೂರಿನ ಕುವೆಂಪುನಗರದಲ್ಲಿರುವ ಗಾನ ಭಾರತೀ ರಮಾಗೋವಿಂದ ಕಲಾವೇದಿಕೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಶ್ರೀಮತಿ ಕೆ.ವನಜಾಕ್ಷಮ್ಮ ಸಂಸ್ಮರಣಾ 29ನೇ ನೃತ್ಯ ಆರಾಧನಾ ಕಾರ್ಯಕ್ರಮ ಸಾಂಸ್ಕೃತಿಕ ಪ್ರಿಯರ ಮನ ತಣಿಸಿತು.

ಆರಂಭದಲ್ಲಿ ನಾಟ್ಯಾಚಾರ್ಯ ಪ್ರೊ.ಕೆ. ರಾಮಮೂರ್ತಿರಾವ್ ಅವರ ಪುತ್ರ ವಿದ್ವಾನ್ ಕೆ.ಆರ್.ವಿಶ್ವದೀಪ್, ನಟರಾಜನ ಆರಾಧನಾ ನೃತ್ಯದ ಮೂಲಕ ನೆರೆದಿದ್ದವರು ಗಮನ ಸೆಳೆದರು. ಸುಮಾರು 40 ನಿಮಿಷಕ್ಕೂ ಹೆಚ್ಚು ಕಾಲ ನಿರಂತರವಾಗಿ ಶಿವ ಭಕ್ತಿಯ ಭರತನಾಟ್ಯ ಪ್ರದರ್ಶನ ಎಲ್ಲರ ಮೆಚ್ಚುಗೆ ಪಡೆಯಿತು.

ಬಳಿಕ ವಿದ್ವಾನ್ ಸುಧೀರರಾವ್ ಕೊಡವೂರು ಹಾಗೂ ವಿದುಷಿ ಮಾನಸಿ ಸುಧೀರ್ ನಿರ್ದೇಶನದಲ್ಲಿ ಉಡುಪಿಯ ನೃತ್ಯನಿಕೇತನ ಕೊಡವೂರು ತಂಡ ಸಮೂಹ ನೃತ್ಯ ವೈಭವ ನೋಡುಗರನ್ನು ನಿಬ್ಬೆರಗಾಗಿಸಿತು. ಶಾಸ್ತ್ರೀಯ ಹಿನ್ನಲೆ ಸಂಗೀತಕ್ಕೆ ಅನುಗುಣವಾಗಿ ಸೋಗಸಾಗಿ ಹೆಜ್ಜೆಹಾಕಿದ ನೃತ್ಯ ಕಲಾವಿದರು ಕಲಾರಸಿಕರ ಮನತಣಿಸಿದರು.

> **ನೂಪುರಶ್ರೀ ಪ್ರಶಸ್ತಿ ಪ್ರದಾನ....**
> ನಾಳೆ(ಡಿ.10) ನೃತ್ಯ ವಿದುಷಿ ಡಾ.ತುಳಸಿರಾಮಚಂದ್ರ ಅವರಿಗೆ ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ 'ನೂಪುರಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಗುವುದು. ಜೆಎಸ್‌ಎಸ್ ಮಹಾವಿದ್ಯಾಪೀಠ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ ಉಪಸ್ಥಿತರಿರುವರು.

ಇದಕ್ಕೂ ಮುನ್ನ ಕಾರ್ಯಕ್ರಮ ಅತಿಥಿಯಾಗಿ ಭಾಗವಹಿಸಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಮಲ್ಲಿಕಾರ್ಜುನಸ್ವಾಮಿ ಮಾತನಾಡಿ, ಪ್ರಕೃತಿಯ ಪ್ರತೀಕವಾಗಿರುವ ನಟರಾಜ ನೃತ್ಯದ ಬಹು ಆಯಾಮ ಎಲ್ಲರನ್ನು ಮೂಕ ವಿಸ್ಮಿತರನ್ನಾಗಿದ್ದು, ಭರತನಾಟ್ಯ, ಶಾಸ್ತ್ರೀಯ ಸಂಗೀತ ಇನ್ನಿತರೆ ದೈವಿಕಗಳಿಂದ ನಮ್ಮ ಸಮಾಜದಲ್ಲಿ ಇನ್ನೂ ಸುಸಂಸ್ಕೃತಿಯನ್ನು ಕಾಣುತ್ತಿದ್ದೇವೆ. ಕಲೆ–ಸಾಹಿತ್ಯಕ್ಕೆ ಮಹತ್ವದ ಕೊಡುಗೆಗಳನ್ನು ನೀಡುವ ಮೂಲಕ ಉಳಿಸಬೇಕಿದೆ ಎಂದು ತಿಳಿಸಿದರು.

ಮೈಸೂರು ಮಿತ್ರ ಮಂಗಳವಾರ 10 ಡಿಸೆಂಬರ್ 2024

ಮರಿಯಪ್ಪ ವಿದ್ಯಾಸಂಸ್ಥೆಯಲ್ಲಿ

ಕಟ್ಟಡಗಳ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ

ಕೆ.ಆರ್.ನಗರ, ಡಿ.9– ಪಟ್ಟಣದ ಟಿ.ಮರಿಯಪ್ಪ ವಿದ್ಯಾಸಂಸ್ಥೆ ಉತ್ತಮ ಶಿಕ್ಷಣ ಸಂಸ್ಥೆಯಾಗಿದ್ದು, ಸಾವಿರಾರು ವಿದ್ಯಾರ್ಥಿಗಳನ್ನು ಶಿಕ್ಷಿತರನ್ನಾಗಿ ಮಾಡುವ ಮೂಲಕ ತನ್ನದೇ ಆದ ಅಸ್ತಿತ್ವ ಹೊಂದಿದೆ. ಈ ಸಂಸ್ಥೆ ಜೀರ್ಣೋದ್ಧಾರ ಮಾಡಬೇಕಾದದು ನಮ್ಮೆಲ್ಲರ ಕರ್ತವ್ಯ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಪಟ್ಟಣದ ಟಿ.ಮರಿಯಪ್ಪ ಸ್ಮಾರಕ ವಿದ್ಯಾಸಂಸ್ಥೆಯಲ್ಲಿ ನೂತನ ಕಟ್ಟಡಗಳ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, 1954ರಲ್ಲಿ ಮಧುವನಹಳ್ಳಿಯ ಸಣ್ಣಪ್ಪಗೌಡರು ದಾನವಾಗಿ ನೀಡಿದ ನಿವೇಶನದಲ್ಲಿ ಈ ಶಿಕ್ಷಣ ಸಂಸ್ಥೆ ಆರಂಭಿಸಲಾಯಿತು. 71 ವರ್ಷ ತುಂಬಿರುವ ಇದಕ್ಕೆ ಆಧುನಿಕ ಸ್ಪರ್ಶ ನೀಡಲು ನಿರ್ಧರಿಸಲಾಗಿದೆ ಎಂದರು.

ಈ ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆದು ಅತ್ಯುನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಈ ಸಂಸ್ಥೆಯನ್ನು ಮತ್ತಷ್ಟು ಸದೃಢವಾಗಿ ಬೆಳೆಸಬೇಕಾದ ಜವಾಬ್ದಾರಿ ತಾಲೂಕು ಕುರುಬರ ಸಂಘದ ಪದಾಧಿಕಾರಿಗಳು, ಸಮಾಜದ ಸ್ವಾಮೀಜಿಗಳು ಮತ್ತು ಚುನಾಯಿತ ಜನಪ್ರತಿನಿಧಿಗಳ ಮೇಲಿದೆ. ಅದನ್ನು ಅರಿತು ಎಲ್ಲರೂ ಸಂಸ್ಥೆ ಏಳಿಗೆಗೆ ದುಡಿಯಬೇಕು ಎಂದು ಮನವಿ ಮಾಡಿದರು.

ಸಂಸ್ಥೆ ಕಾರ್ಯದರ್ಶಿಯಾಗಿರುವ ನಾನು ಸಮಾಜದ ಹಿರಿಯ ಮುಖಂಡರೂ ಆದ ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಅವರ ಮಾರ್ಗದರ್ಶನದಲ್ಲಿ ಸಂಸ್ಥೆ ಏಳಿಗೆಗಾಗಿ ದುಡಿಯುವ ಜೊತೆಗೆ ನನ್ನ ಅಧಿಕಾರಾವಧಿಯಲ್ಲಿ ಇಲ್ಲಿ ಶಿಕ್ಷಣ ಕ್ಯಾಂಪಸ್ ಸ್ಥಾಪಿಸುತ್ತೇನೆ ಎಂದು ಭರವಸೆ ನೀಡಿದರು. ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಮಾತನಾಡಿ, ಟಿ.ಮರಿಯಪ್ಪ ಸ್ಮಾರಕ ವಿದ್ಯಾಸಂಸ್ಥೆಗೆ ಆಧುನಿಕ ಸ್ಪರ್ಶ ಕೊಡುವ ಮೂಲಕ ಹಿಂದುಳಿದ ಮತ್ತು ಬಡ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕ್ರಮವಹಿಸಲು ಆಡಳಿತ ಮಂಡಳಿ ನಿರ್ಧರಿಸಿದೆ ಎಂದರು. ಕುರುಬ ಸಮಾಜದವರ ನೂರಾರು ದಾನಿಗಳ ಸಹಕಾರದಿಂದ ಕಟ್ಟಿ ಬೆಳೆಸಿದ ಈ ಸಂಸ್ಥೆಯನ್ನು ಹೆಮ್ಮರವಾಗಿ ಬೆಳೆಸಲು ವಿದ್ಯಾರ್ಥಿಗಳು ಮತ್ತು ಪೋಷಕರು ಎಲ್ಲಾ ಸಹಕಾರ ನೀಡಬೇಕು. ಒಂದನೇ ತರಗತಿಯಿಂದ ಪದವಿ ಶಿಕ್ಷಣ ದವರೆಗೂ ತರಗತಿಗಳನ್ನು ಆರಂಭಿಸಲು ಚಿಂತಿಸಿದ್ದು, ಇದಕ್ಕೆ ಶಾಸಕರು ಸೇರಿದಂತೆ ಸಮುದಾಯದ ಬಾಂಧವರು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಕಾಗಿನೆಲೆ ಕನಕಗುರು ಪೀಠದ ಶ್ರೀಶಿವಾನಂದಪುರಿ ಸ್ವಾಮೀಜಿ, ತಾಲೂಕು ಕುರುಬರ ಸಂಘದ ಅಧ್ಯಕ್ಷ ಚೀರ್ನಹಳ್ಳಿ ಶಿವಣ್ಣ, ಜಿಪಂ ಮಾಜಿ ಸದಸ್ಯರಾದ ಜಿ.ಆರ್.ರಾಮೇಗೌಡ, ಶಿವರಾಮು, ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಎಸ್.ಸಿದ್ದೇಗೌಡ, ಪುರಸಭೆ ಸದಸ್ಯ ನಟರಾಜು, ನಿವೃತ್ತ ಡಿಹೆಚ್ಓ ಡಾ.ಎಸ್.ಎಂ.ಮಾಲೇಗೌಡ, ಕುರುಬರ ಸಂಘದ ಪದಾಧಿಕಾರಿಗಳಾದ ಪ್ರಕಾಶ್, ಕೆ.ಎಂ.ಶ್ರೀನಿವಾಸ್, ರಾಮಕೃಷ್ಣೇಗೌಡ, ಕೃಷ್ಣೇಗೌಡ, ಅಪ್ಪಾಜಿಗೌಡ, ಬಿ.ಎಂ. ಗಿರೀಶ್, ಬಿ.ಎಂ.ನಾಗರಾಜು ಮತ್ತಿತರರಿದ್ದರು.


ನೂತನ ಕಟ್ಟಡಗಳ ನಿರ್ಮಾಣ ಕಾಮಗಾರಿಗೆ ಶಾಸಕ ಡಿ.ರವಿಶಂಕರ್ ಭೂಮಿಪೂಜೆ ನೆರವೇರಿಸಿದರು.

ತಿ.ನರಸೀಪುರದಲ್ಲಿ ಜಂತುಹುಳು ನಿವಾರಣಾ ದಿನಾಚರಣೆ

ತಿ.ನರಸೀಪುರ, ಡಿ.9– ಜಂತುಹುಳು ಮಾತ್ರೆ ವಿತರಿಸಿ ಜಂತುಹುಳು ನಿವಾರಣೆ ಮಾಡಲಾಗುವುದು. ಮಕ್ಕಳ ಆರೋಗ್ಯದ ಮೇಲೆ ಯಾವುದೇ ಅಡ್ಡ ಪರಿಣಾಮ ಬೀರದ ರೀತಿ ಮಾತ್ರೆ ತಯಾರಿಸಲಾಗಿದ್ದು, ಮಕ್ಕಳು ನಿಶ್ಚಿಂತೆಯಿಂದ ಯಾವುದೇ ಭಯ ಅಥವಾ ಹಿಂಜರಿಕೆ ಪಡದೆ 6 ತಿಂಗಳಿಗೊಮ್ಮೆ ಜಂತುಹುಳು ಮಾತ್ರೆ ತೆಗೆದುಕೊಳ್ಳಬೇಕು ಎಂದು ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ ತಿಳಿಸಿದರು.

ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆಯನ್ನು ಮಕ್ಕಳಿಗೆ ಮಾತ್ರೆ ವಿತರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಈ ಮಾತ್ರೆ ಸೇವನೆಯಿಂದ ಮಕ್ಕಳಲ್ಲಿ ಕಂಡು ಬರುವ ಹೊಟ್ಟೆನೋವು, ಆಯಾಸ ಹಾಗೂ ಇನ್ನಿತರ ಸಮಸ್ಯೆಗಳು ಕಡಿಮೆಯಾಗಿ ಅನಿಮಿಯಾವನ್ನು ತಡೆಗಟ್ಟಲು ಸಹಕಾರಿಯಾಗುತ್ತದೆ. ಹೀಗಾಗಿ ಸದೃಢ ಆರೋಗ್ಯವಂತ ಭಾರತ ನಿರ್ಮಿಸಲು ಇಂದಿನಿಂದಲೇ ಮಕ್ಕಳು ಹೆಚ್ಚೆಚ್ಚು ಆರೋಗ್ಯಾಧಿಕಾರಿಗಳು, ಶಿಕ್ಷಕರು ನೀಡುವ ಸಲಹೆ ಪಾಲಿಸಬೇಕು ಎಂದರು.

ಪ್ರತಿಯೊಬ್ಬರೂ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಸೇವಿಸುವ ಆಹಾರ, ಹಣ್ಣು ಹಾಗೂ ಕುಡಿಯುವ ನೀರು ಶುದ್ಧವಾಗಿದೆಯೇ ಎಂದು ಪರೀಕ್ಷಿಸಿ ನಂತರ ಸೇವಿಸಬೇಕು. ಶೌಚದ ನಂತರ ಹಾಗೂ ಊಟಕ್ಕೆ ಮೊದಲು ಮತ್ತು ಊಟದ ನಂತರ ಕೈ ಸ್ವಚ್ಛಗೊಳಿಸಬೇಕು. ಅಲ್ಲದೇ ನಮ್ಮ ಸುತ್ತಮುತ್ತಲಿನ ವಾತಾವರಣ ಶುದ್ಧವಾಗಿಟ್ಟುಕೊಳ್ಳಬೇಕು. ಇದರಿಂದ ನಮ್ಮ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯ ಎಂದರು.

ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್ ಮಾತನಾಡಿ, 9 ರಿಂದ 19 ವರ್ಷದವರಿಗೆ ಜಂತು ಹುಳುವಿನ ಮಾತ್ರೆ ವಿತರಿಸಲಾಗುತ್ತಿದ್ದು, ಇದರ ಉದ್ದೇಶ ರೋಗ ಮುಕ್ತ ಉತ್ತಮ ಸಮಾಜದ ಸ್ಥಾಪನೆಯಾಗಿದೆ. ಜಂತುಹುಳು ತಡೆಗಟ್ಟಿದರೆ, ಅನಿಮಿಯಾ ತಡೆಗಟ್ಟಲು ಸಾಧ್ಯ. ಹಾಗಾಗಿ ವಿದ್ಯಾರ್ಥಿಗಳು ನಿರ್ಲಕ್ಷಿಸದೆ 6 ತಿಂಗಳಿಗೆ ಒಮ್ಮೆ ಮಾತ್ರೆ ತೆಗೆದುಕೊಳ್ಳಬೇಕು ಎಂದರು.

ಮಕ್ಕಳಿಗೆ ಹಲವು ಸಮಸ್ಯೆಗಳು ಎದುರಾಗುತ್ತವೆ. ಅವುಗಳನ್ನು ಹೋಗಲಾಡಿಸಲು ಇದು ಉತ್ತಮ ಮಾರ್ಗವಾಗಿದೆ. ಮಕ್ಕಳು ಮಾತ್ರೆ ಸೇವಿಸಿ, ಆರೋಗ್ಯಾಧಿಕಾರಿಗಳ ಸೂಚನೆಗಳನ್ನು ಪಾಲಿಸುವ ಮೂಲಕ ಆರೋಗ್ಯವಂತರಾಗಿ, ಸದೃಢರಾಗಿ ಸಮಾಜಕ್ಕೆ ಉತ್ತಮ ಪ್ರಜೆಯಾಗಬೇಕು. ಸರ್ಕಾರದ ಮಹತ್ವಾಕಾಂಕಿ ಯೋಜನೆಯಾಗಿರುವ ಇದನ್ನು ಗಂಭೀರವಾಗಿ ಪರಿಗಣಿಸಿ ಅನುಸರಿಸಿದಾಗ ಮಾತ್ರವೇ ಆರೋಗ್ಯವಂತ ಸಮಾಜ ನಿರ್ಮಾಣವಾಗಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷೆ ಮಮತಾ, ಉಪಪ್ರಾಂಶುಪಾಲ ನಾಗರತ್ನ, ಬಿಇಓ ಕಚೇರಿಯ ಪ್ರಸನ್ನ, ಆರೋಗ್ಯ ಇಲಾಖೆ ಸಿಬ್ಬಂದಿ ವರ್ಗ ಹಾಗೂ ಶಾಲೆಯ ಸಹ ಶಿಕ್ಷಕರು ಹಾಜರಿದ್ದರು.


ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ ನಡೆಯಿತು.

ಡಿ.23, ಸಾಗುವಳಿ ಹಕ್ಕುಪತ್ರ ವಿತರಣೆ


ಅಕ್ರಮ ಸಕ್ರಮ ಸಮಿತಿ ಸದಸ್ಯ ಕೆಂಡಗಣ್ಣೇಗೌಡ ಮಾತನಾಡಿದರು.

ಹೆಚ್.ಡಿ.ಕೋಟೆ, ಡಿ.9– ತಾಲೂಕಿನ 223 ಬಗರ್‌ಹುಕುಂ ಸಾಗುವಳಿದಾರರಿಗೆ ಖಾತೆ ಹಾಗೂ 120 ರೈತರಿಗೆ ಸಾಗುವಳಿ ಹಕ್ಕುಪತ್ರವನ್ನು ಡಿ.23ರಂದು ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ವಿತರಿಸಲಾಗುತ್ತದೆ ಎಂದು ಅಕ್ರಮ ಸಕ್ರಮ ಸಮಿತಿ ಸದಸ್ಯ ಕೆಂಡಗಣ್ಣೇಗೌಡ ತಿಳಿಸಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2022–23ರಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ನಡೆದ ಅಕ್ರಮ ಸಕ್ರಮ ಸಮಿತಿ ಸಭೆಯಲ್ಲಿ 511 ರೈತರಿಗೆ ಸಾಗುವಳಿ ಹಕ್ಕುಪತ್ರ ವಿತರಿಸಲು ನಿರ್ಣಯ ಕೈಗೊಳ್ಳಲಾಗಿತ್ತು. ಈ ಪೈಕಿ 393 ಮಂದಿಗೆ ಹಕ್ಕುಪತ್ರ ವಿತರಿಸಲಾಗಿತ್ತು. ಹಲವು ರೈತರಿಗೆ ಖಾತೆ ಮಾಡಿಕೊಡಲು ಕೆಲವು ಕಡೆ ಭೂಮಿ ಹೆಚ್ಚುವರಿಯಾಗಿದ್ದು, ಇನ್ನೂ ಕೆಲವು ಕಡೆ ಅರಣ್ಯ ವ್ಯಾಪ್ತಿಗೆ ಸೇರಿದ್ದರಿಂದ ಸಮಸ್ಯೆ ಎದುರಾಗಿತ್ತು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ನೂತನ ಸಮಿತಿ ಅಸ್ತಿತ್ವಕ್ಕೆ ಬಂದು ಹಲವಾರು ಸಭೆಗಳನ್ನು ನಡೆಸಿ ಬಾಕಿ ಉಳಿದ ಕಡತಗಳನ್ನು ಪರಿಶೀಲಿಸಲಾಯಿತು. ಇದರಲ್ಲಿ 233 ಸಾಗುವಳಿದಾರರಿಗೆ ಖಾತೆ ಮಾಡಿಕೊಡಲು ಹಾಗೂ 120 ಹೊಸ ಸಾಗುವಳಿ ವಿತರಿಸಲು ತೀರ್ಮಾನಿಸಲಾಯಿತು. ಹಾಗಾಗಿ ಅಂದು ಶಾಸಕರ ಅಧ್ಯಕ್ಷತೆಯಲ್ಲಿ ವಿತರಣೆ ಮಾಡಲಾಗುತ್ತದೆ ಎಂದರು.

ಗ್ರೇಡ್–2 ತಹಸೀಲ್ದಾರ್ ಶ್ರೀಧರ್ ಮಾತನಾಡಿ, ತಾಲೂಕಿನಲ್ಲಿ ಸಾಗುವಳಿಗಾಗಿ 9 ಸಾವಿರ ಅರ್ಜಿಗಳು ಸಲ್ಲಿಕೆಯಾಗಿದ್ದು, 7 ಸಾವಿರ ಅರ್ಜಿಗಳಿಗೆ ಭೂಮಿ ಲಭ್ಯ ಇಲ್ಲದೆ ಇರುವುದರಿಂದ ಉಳಿದ ಅರ್ಜಿಗಳನ್ನು ವಜಾ ಮಾಡಲಾಗಿದೆ ಎಂದರು.

ಇದೇ ವೇಳೆ ಅಕ್ರಮ ಸಕ್ರಮ ಸಮಿತಿ ಸದಸ್ಯರಾದ ಬಾಲಯ್ಯ, ತಾಯಮ್ಮ, ಸೋಮೇಗೌಡ, ತಹಸೀಲ್ದಾರ್ ಕಚೇರಿ ನಿರ್ವಾಹಕ ಸಿದ್ದರಾಜು ಇದ್ದರು.

ರಾಮಾಯಣದ ಸಂದೇಶಗಳು ಸರ್ವಕಾಲಕ್ಕೂ ಪ್ರಸ್ತುತ

ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ

ನಂಜನಗೂಡು, ಡಿ.9– ವಾಲ್ಮೀಕಿ ಮಹರ್ಷಿ ರಾಮಾಯಣ ಕೃತಿ ಮೂಲಕ ಇಡೀ ವಿಶ್ವಕ್ಕೆ ರಾಮ ರಾಜ್ಯದ ಪರಿಕಲ್ಪನೆ ಪರಿಚಯ ಮಾಡಿಕೊಟ್ಟ ಮಹಾನ್ ದಾರ್ಶನಿಕರು. ರಾಮಾಯಣದ ಸಂದೇಶಗಳು ಎಲ್ಲಾ ಕಾಲಘಟ್ಟಕ್ಕೂ, ಎಲ್ಲಾ ಪೀಳಿಗೆಗಳಿಗೂ ಅನ್ವಯವಾಗುತ್ತದೆ ಎಂದು ಜಿಪಂ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ ತಿಳಿಸಿದರು.

ತಾಲೂಕಿನ ಮರಳೂರು ಗೊದ್ದನಪುರ ಗ್ರಾಮದಲ್ಲಿ ನೂತನ ವಾಲ್ಮೀಕಿ ಸಂಘದ ಉದ್ಘಾಟನೆ ಮತ್ತು ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರಾಮಾಯಣ ಕೃತಿ ಜಗತ್ತಿನ ಶ್ರೇಷ್ಠ ಕೃತಿಗಳಲ್ಲಿ ಒಂದೆನಿಸಿದೆ. ರಾಮಾಯಣ ಒಬ್ಬ ರಾಜ ಹೇಗೆ ತನ್ನ ಪ್ರಜೆಗಳನ್ನು ಸಲಹಬೇಕು. ಹೇಗೆ ಸಂರಕ್ಷಿಸಬೇಕು ಎಂಬುದನ್ನು ಪರಿಚಯಿಸಿ ಕೊಡುವ ಜೊತೆಗೆ ತಂದೆ ವಾತ್ಸಲ್ಯ, ಸಹೋದರತ್ವ, ಪಿತೃ ವಾಕ್ಯ ಪರಿಪಾಲನೆಯಂತಹ ಕೌಟುಂಬಿಕ ಜೀವನದ ಮಹತ್ವವನ್ನು ಸಾರುತ್ತದೆ. ಅಲ್ಲದೇ ಸಾಮಾಜಿಕ ಮೌಲ್ಯಗಳನ್ನು ಜನರಿಗೆ ತಿಳಿಸುವಂತಹ ಕೃತಿಯಾಗಿದ್ದು, ರಾಮಾಯಣದ ಸಂದೇಶಗಳು ಸರ್ವಕಾಲದಲ್ಲೂ ಪ್ರಸ್ತುತವಾಗಿವೆ. ಮಹರ್ಷಿ ವಾಲ್ಮೀಕಿ ಅವರ ತತ್ವ, ಸಂದೇಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡಬೇಕು ಎಂದರು.

ಸಂಘಟನೆಯವರು ಸಮಾಜದ ಬಡ ಮಕ್ಕಳ ಶಿಕ್ಷಣಕ್ಕೆ ನೆರವಾಗುವ ಕಾರ್ಯಕ್ರಮಗಳನ್ನು ರೂಪಿಸಿ ಸಮಾಜ ಸೇವೆಯಲ್ಲಿ ತೊಡಗಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ವಾಲ್ಮೀಕಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜು, ತಾಲೂಕು ನಾಯಕರ ಸಂಘದ ಅಧ್ಯಕ್ಷ ಬಂಗಾರಸ್ವಾಮಿ, ರಾಜ್ಯ ನಾಯಕರ ಯುವ ಸೇನೆ ರಾಜ್ಯಾಧ್ಯಕ್ಷ ದೇವರಾಜು, ಮರಳೂರು ಗ್ರಾಪಂ ಅಧ್ಯಕ್ಷ ಶ್ರೀಧರ್, ನೂತನ ವಾಲ್ಮೀಕಿ ಸಂಘದ ಅಧ್ಯಕ್ಷ ಶಂಕರ್, ಮುಖಂಡರಾದ ಕೃಷ್ಣ, ಸೂರಿ, ಶಂಭು ನಾಯಕ, ಶಿವಕುಮಾರ್, ಶ್ರೀಕಂಠ ನಾಯಕ, ಸೇರಿದಂತೆ ಸಂಘದ ಪದಾಧಿಕಾರಿಗಳು ಗ್ರಾಮಸ್ಥರು ಇದ್ದರು.


ಮರಳೂರು ಗೊದ್ದನಪುರ ಗ್ರಾಮದಲ್ಲಿ ವಾಲ್ಮೀಕಿ ಜಯಂತಿ ನಡೆಯಿತು.

ಬೈಕ್‌ಗಳ ನಡುವೆ ಡಿಕ್ಕಿ: ಇಬ್ಬರು ಸ್ಥಳದಲ್ಲೇ ಸಾವು

ಪಿರಿಯಾಪಟ್ಟಣ, ಡಿ.9– ಬೈಕ್‌ಗಳ ನಡುವೆ ಡಿಕ್ಕಿ ಸಂಭವಿಸಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿ, ಮತ್ತೋರ್ವ ತೀವ್ರ ಗಾಯಗೊಂಡಿರುವ ಘಟನೆ ತಾಲೂಕಿನ ಚೌಡೇನಹಳ್ಳಿ ಸಮೀಪದ ಬಿಎಂ ರಸ್ತೆಯಲ್ಲಿ ಭಾನುವಾರ ಮಧ್ಯರಾತ್ರಿ ನಡೆದಿದೆ.

ತಾಲೂಕಿನ ಕೋಗಿಲೂರು ಗ್ರಾಮದ ನಿವಾಸಿ ಶಿವಾನಂದ(31), ಕಣಗಾಲು ಗ್ರಾಮದ ನಿವಾಸಿ ಶ್ರೀನಿವಾಸ್ ಸಾವನ್ನಪ್ಪಿದವರು. ಗಾಯಗೊಂಡ ಅಂಬರೀಶ್‌ನನ್ನು ಚಿಕಿತ್ಸೆಗಾಗಿ ಮೈಸೂರಿನ ಆಸ್ಪತ್ರೆಗೆ ದಾಖಲಿಸಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪಿರಿಯಾಪಟ್ಟಣ ಠಾಣೆ ಪೊಲೀಸರು ಪರಿಶೀಲನೆ ನಡೆಸಿದರು. ಬಳಿಕ ಶವಗಳನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿದರು. ಈ ಸಂಬಂಧ ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜಂತು ಹುಳುಗಳಿಂದ ಮಕ್ಕಳ ದೈಹಿಕ ಬೆಳವಣಿಗೆ ಕುಂಠಿತ

ತಹಸೀಲ್ದಾರ್ ಮೋಹನ್ ಕುಮಾರಿ

ಸರಗೂರು, ಡಿ.9– ಜಂತು ಹುಳುಗಳು ಮಕ್ಕಳಲ್ಲಿ ರಕ್ತಹೀನತೆ, ಅಪೌಷ್ಟಿಕತೆ, ದುರ್ಬಲ ಮಾನಸಿಕ ಮತ್ತು ದೈಹಿಕ ಬೆಳವಣಿಗೆಗೆ ಕಾರಣವಾಗಬಹುದು ಎಂದು ತಹಸೀಲ್ದಾರ್ ಮೋಹನ್ ಕುಮಾರಿ ತಿಳಿಸಿದರು.

ಪಟ್ಟಣದ ಬಾಲಕಿಯರ ಪ್ರೌಢಶಾಲೆಯಲ್ಲಿ ನಡೆದ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ತಾಲೂಕಿನಲ್ಲಿ 132 ಶಾಲೆಗಳಿದ್ದು, 14,553 ಮಕ್ಕಳಿದ್ದಾರೆ. ಎಲ್ಲರಿಗೂ ಕಡ್ಡಾಯವಾಗಿ ಜಂತುಹುಳು ಮಾತ್ರೆ ನೀಡಿ ಕಾರ್ಯಕ್ರಮ ಯಶಸ್ವಿಗೊಳಿಸಲು ತಿಳಿಸಿದ ಅವರು, ಜಂತುಹುಳಗಳಿಂದ ಮಕ್ಕಳ ದೈಹಿಕ ಬೆಳವಣಿಗೆ ಕುಂಠಿತವಾಗಲಿದೆ. ಹೀಗಾಗಿ ಇದರ ಬಗ್ಗೆ ನಿರ್ಲಕ್ಷ್ಯ ಬೇಡ ಎಂದುಸಲಹೆ ನೀಡಿದರು.

ತಾಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್ ಮಾತನಾಡಿ, ರಾಜ್ಯದಲ್ಲಿ 2015 ರಿಂದ 2023ರವರೆಗೆ 15 ಸುತ್ತುಗಳಲ್ಲಿ ಸದರಿ ಕಾರ್ಯಕ್ರಮ ಅನುಷ್ಠಾನ ಮಾಡಲಾಗಿದೆ. ಅದರಂತೆ 2024ನೇ ಸಾಲಿನ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮವನ್ನು ಫೆ.9ರಿಂದ ಡಿ.16ರವರೆಗೆ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ 1–19 ವರ್ಷದೊಳಗಿನ ಎಲ್ಲಾ ಮಕ್ಕಳನ್ನು ಗುರಿಯಾಗಿಸಿಕೊಂಡು ಪ್ರಸಕ್ತ ಸಾಲಿನಲ್ಲಿ 58,597 ಮಕ್ಕಳಿಗೆ ಜಂತುಹುಳು ಮಾತ್ರೆ ನೀಡಲು ಕ್ರಿಯಾ ಯೋಜನೆಯೊಂದಿಗೆ ಕಾರ್ಯ ಪ್ರವೃತ್ತರಾಗಿರುತ್ತೇವೆ ಎಂದರು. ಬಿಇಓ ಕಾಂತರಾಜು ಮಾತನಾಡಿದರು. ಪಪಂ ಉಪಾಧ್ಯಕ್ಷ ಶಿವಕುಮಾರ್ ಹಾಗೂ ನಾಗೇಂದ್ರ, ಪುಷ್ಪ, ಆಶಾ ಕಾರ್ಯಕರ್ತೆಯರು, ಶಾಲಾ ಶಿಕ್ಷಕರು ಮುಖಂಡರು ಸಾರ್ವಜನಿಕರು ಹಾಜರಿದ್ದರು.


ಕಾರ್ಯಕ್ರಮವನ್ನು ತಹಸೀಲ್ದಾರ್ ಮೋಹನ್ ಕುಮಾರಿ ಉದ್ಘಾಟಿಸಿದರು.

ಹೈರಿಗೆಯಲ್ಲಿ ಜಂತುಹುಳು ನಿವಾರಣಾ ಕಾರ್ಯಕ್ರಮ


ಹೆಚ್.ಡಿ.ಕೋಟೆ ತಾಲೂಕಿನ ಹಂಪಾಪುರ ಸಮೀಪದ ಹೈರಿಗೆ ಶಾಲೆಯಲ್ಲಿ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮ ನಡೆಯಿತು. ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್, ಗ್ರಾಪಂ ಅಧ್ಯಕ್ಷರಾದ ಜಯನಾಗರಾಜು, ಎಸ್‌ಡಿಎಂಸಿ ಅಧ್ಯಕ್ಷೆ ಕಾಳಮ್ಮ, ಮಾಜಿ ಅಧ್ಯಕ್ಷ ದಿನೇಶ್, ನಾಗೇಂದ್ರ, ಪುಷ್ಪ, ಶಾಲಾ ಶಿಕ್ಷಕರು, ಸಾರ್ವಜನಿಕರಿದ್ದರು.

ಸಮಾವೇಶದಲ್ಲಿ 50 ಸಾವಿರ ಮಂದಿ ಭಾಗಿ

ತಿ.ನರಸೀಪುರ, ಡಿ.9– ಹಾಸನದಲ್ಲಿ ನಡೆದ ಜನಕಲ್ಯಾಣ ಸಮಾವೇಶದಲ್ಲಿ ವರುಣ ಹಾಗೂ ತಿ.ನರಸಿಪುರ ಕ್ಷೇತ್ರದಿಂದ 50 ಸಾವಿರಕ್ಕೂ ಹೆಚ್ಚು ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಹಾಗೂ ಸಿದ್ದರಾಮಯ್ಯ ಅಭಿಮಾನಿಗಳು ಭಾಗವಹಿಸಿದ್ದರು ಎಂದು ಕುರುಬ ಸಮಾಜದ ಹಿರಿಯ ಮುಖಂಡ ಹೆಚ್.ಬಿ.ಚಿಕ್ಕನಂಜಯ್ಯ ತಿಳಿಸಿದರು.



ತಮ್ಮ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂತಹ ಸಮಾವೇಶ ನೋಡಿರಲಿಲ್ಲ. ಹಿಂದೆ ನಡೆದಿಲ್ಲ. ಮುಂದೆ ನಡೆಯುವುದು ಇಲ್ಲ. ಒಂದು ವೇಳೆ ನಡೆದರೆ ಅದರ ನೇತೃತ್ವ ಸಿದ್ದರಾಮಯ್ಯ ವಹಿಸಬೇಕಾಗುತ್ತದೆ. ಸಮಾವೇಶದಲ್ಲಿ ಜಮಾಯಿಸಿದ್ದ ಜನಸಾಗರ ಗಮನಿಸಿದರೆ ಸಿಎಂ ಸಿದ್ದರಾಮಯ್ಯ ಮೇಲೆ ಜನತೆ ಇಟ್ಟಿರುವ ಪ್ರೀತಿ ಎಷ್ಟಿದೆ ಎಂಬುದನ್ನು ಕಾಣಬಹುದಾಗಿದೆ ಎಂದರು. ವಿಪಕ್ಷಗಳು ಆರೋಪಿಸಿದ್ದಂತೆ ಸಿದ್ದರಾಮಯ್ಯ ಅವರು ಹಗರಣದಲ್ಲಿ ಪಾಲ್ಗೊಂಡಿದ್ದರೆ ಸಮಾಜದಲ್ಲಿ ಇಷ್ಟು ಜನ ಸೇರುತ್ತಿರಲಿಲ್ಲ. ಇದನ್ನು ಅವರ ಮೇಲೆ ಆರೋಪ ಮಾಡುತ್ತಿರುವ ವಿಪಕ್ಷಗಳು ಅರ್ಥ ಮಾಡಿಕೊಳ್ಳಬೇಕಿದೆ ಎಂದರು.

ಪೋಷಕರು ಮಕ್ಕಳಿಗೆ ಜಂತು ಹುಳು ಮಾತ್ರೆ ಕೊಡಿಸಿ


ಹಿರಿಯ ವೈದ್ಯಾಧಿಕಾರಿ ಡಾ.ರಮೇಶ್ ಮಕ್ಕಳಿಗೆ ಜಂತು ಹುಳು ಮಾತ್ರೆ ವಿತರಿಸಿದರು.

ಮೂಗೂರು, ಡಿ.9– ರಕ್ತಹೀನತೆ ತಡೆಗಟ್ಟಲು ಪೋಷಕರು ತಪ್ಪದೇ ತಮ್ಮ ಮಕ್ಕಳಿಗೆ ಜಂತುಹುಳು ಮಾತ್ರೆ ಕೊಡಿಸಲು ಮುಂದಾಗಬೇಕು ಎಂದು ಮೂಗೂರು ಸಮುದಾಯದ ಆರೋಗ್ಯ ಕೇಂದ್ರದ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಮೀನಾಕ್ಷಿ ತಿಳಿಸಿದರು.

ಗ್ರಾಮದ ಸಮುದಾಯ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಸೋಮವಾರ ನಡೆದ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನ ಹಾಗೂ ಕ್ಷಯರೋಗ ಪತ್ತೆ ಚಿಕಿತ್ಸಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 1–19 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಶಾಲೆ, ಅಂಗನವಾಡಿ, ಶಾಲೆಯಿಂದ ಹೊರಗುಳಿದ ಮಕ್ಕಳಿಗೂ ಆಶಾ ಕಾರ್ಯಕರ್ತೆ ಹಾಗೂ ಪಿಎಚ್‌ಸಿಓಗಳು ಜಂತುಹುಳು ನಿವಾರಣೆಗೆ ಔಷಧಿ ನೀಡಲಿದ್ದಾರೆ ಎಂದರು.

ಕಾರ್ಯಕ್ರಮವನ್ನು ಹಿರಿಯ ವೈದ್ಯಾಧಿಕಾರಿ ಡಾ.ರಮೇಶ್, ಗ್ರಾಪಂ ಉಪಾಧ್ಯಕ್ಷೆ ಶಾಂತಿ ಉದ್ಘಾಟಿಸಿದರು. ಈ ವೇಳೆ ಕಿರಿಯ ಪ್ರಾಥಮಿಕ ಆರೋಗ್ಯ ಸಂರಕ್ಷಣಾಧಿಕಾರಿ ನರಸಮ್ಮ, ಅನಿತಾ, ಪಿಎಚ್‌ಸಿಓಗಳು, ಆಶಾ ಮೇಲ್ವಿಚಾರಕಿ ಶೋಭಾ ಶಂಕರ್, ಆರೋಗ್ಯ ಕೇಂದ್ರದ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ನಾಳೆ ವಿದ್ಯುತ್ ವ್ಯತ್ಯಯ

ಹೆಚ್.ಡಿ.ಕೋಟೆ, ಡಿ.9– ಹೆಚ್.ಡಿ.ಕೋಟೆ ಉಪವಿಭಾಗ ವ್ಯಾಪ್ತಿಯ ಹೆಚ್.ಡಿ.ಕೋಟೆ ಮತ್ತು ಯರಹಳ್ಳಿ, ಹ್ಯಾಂಡ್‌ಪೋಸ್ಟ್ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತುರ್ತು ಕಾಮಗಾರಿ ಹಿನ್ನೆಲೆಯಲ್ಲಿ ಡಿ.11ರಂದು ಬೆಳಗ್ಗೆ 10ರಿಂದ ಸಂಜೆ 6ರವರೆಗೆ ಹೆಚ್.ಡಿ.ಕೋಟೆ ಟೌನ್, ಮೇಟಿಕುಪ್ಪೆ, ಚಕ್ಕೋಡನಹಳ್ಳಿ, ಭೀಮನಹಳ್ಳಿ, ಹಿರೇಹಳ್ಳಿ, ಅಣ್ಣೂರು, ಪಡುವಕೋಟೆ, ಸವ್ವೆ, ನಾಗನಹಳ್ಳಿ, ಚಿಕ್ಕಕೆರೆಯೂರು, ಹ್ಯಾಂಡ್‌ಪೋಸ್ಟ್, ಹೈರಿಗೆ, ಹೆಬ್ಬಲಗುಪ್ಪೆ ಮತ್ತು ನೂರಲಕುಪ್ಪೆ ಗ್ರಾಪಂ ವ್ಯಾಪ್ತಿಯ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಕಬ್ಬು ಕಟಾವು ವಿಳಂಬ: ರೈತರ ಪ್ರತಿಭಟನೆ

ತಿ.ನರಸೀಪುರ, ಡಿ.9– ಕಬ್ಬು ಕಟಾವು ಮಾಡಲು ವಿಳಂಬ ಮಾಡುತ್ತಿರುವ ಬಣ್ಣಾರಿ ಅಮ್ಮನ್ ಶುಗರ್ ಕಾರ್ಖಾನೆ ವಿರುದ್ಧ ಕಬ್ಬು ಬೆಳೆಗಾರರು ಕಾರ್ಖಾನೆ ಸ್ಥಳೀಯ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿದರು.

ತಾಲೂಕಿನ ಕುಪ್ಯ ಸೇರಿದಂತೆ ವಿವಿಧ ಗ್ರಾಮಗಳ ಗ್ರಾಮಸ್ಥರು ಕಚೇರಿಗೆ ಆಗಮಿಸಿ, ಕಾರ್ಖಾನೆ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ರೈತ ಮುಖಂಡ ಕುಪ್ಯ ಮಹದೇವ ಮಾತನಾಡಿ, ಕಬ್ಬು ಕಟಾವಿಗೆ ಬಂದು ಅನೇಕ ತಿಂಗಳು ಕಳೆದರೂ ಕಾರ್ಖಾನೆಯವರು ಕಟಾವಿಗೆ ಮುಂದಾಗಿಲ್ಲ ಇದರಿಂದ ಬೆಳೆ ಹಾಳಾಗುತ್ತಿದ್ದು, ರೈತರಿಗೆ ನಷ್ಟವಾಗುತ್ತಿದೆ ಎಂದು ಕಿಡಿಕಾರಿದರು.

ಕಟಾವು ಮಾಡಲು ಕಾರ್ಮಿಕರಿಲ್ಲ ಎಂಬ ನೆಪ ಸರಿಯಲ್ಲ. ಕಾರ್ಮಿಕರಿಲ್ಲದಿದ್ದಲ್ಲಿ ಕಬ್ಬು ಕಟಾವು ಮಾಡುವುದಾದರೂ ಹೇಗೆ ಎಂದು ಪ್ರಶ್ನಿಸಿದ ಪ್ರತಿಭಟನಾಕಾರರು ಕಾರ್ಮಿಕರಿಲ್ಲದಿದ್ದರೇ ಕಾರ್ಖಾನೆ ಬಾಗಿಲು ಮುಚ್ಚುವಂತೆ ಆಕ್ರೋಶ ವ್ಯಕ್ತಪಡಿಸಿದರು.

ಇನ್ನಾದರೂ ಸಕ್ಕರೆ ಕಾರ್ಖಾನೆ ಕಬ್ಬು ಕಟಾವಿಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಪುನೀತ್, ಬಸವೇಗೌಡ, ಸಿದ್ದಯ್ಯ, ಮಹೇಶ, ಕೃಷ್ಣ, ರವಿ, ನಾಗೇಂದ್ರ, ಗೋವಿಂದ, ಬಸವರಾಜು, ಪುಟ್ಟಸ್ವಾಮಿ, ಬಸವಣ್ಣ ಜೋಗಯ್ಯ, ಸಿದ್ದೇಶ್, ವೆಂಕಟೇಶ್ ಇದ್ದರು.


ಕಬ್ಬು ಕಟಾವು ವಿಳಂಬ ಖಂಡಿಸಿ ಕಬ್ಬು ಬೆಳೆಗಾರರು ಪ್ರತಿಭಟನೆ ನಡೆಸಿದರು.

ನಗರಸಭೆ ಆಸ್ತಿ ರಕ್ಷಣೆಗೆ ಬದ್ಧ: ಶಾಸಕ ಜಿಡಿಹೆಚ್ ಭರವಸೆ

ಹುಣಸೂರು, ಡಿ.9– ಇಲ್ಲಿನ ನಗರಸಭೆ ಆಸ್ತಿ ರಕ್ಷಣೆಗೆ ಡಿ.25ರೊಳಗೆ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲು ಬದ್ಧ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ಸದಸ್ಯರಿಗೆ ಭರವಸೆ ನೀಡಿದರು.

ನಗರಸಭೆ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ನಗರಸಭೆ ವ್ಯಾಪ್ತಿಯಲ್ಲಿ ಸರ್ಕಾರಿ ಆಸ್ತಿ ಅನ್ಯರ ಪಾಲಾಗುತ್ತಿದ್ದು, ರಕ್ಷಣೆ ಮಾಡುವಂತೆ ಪಕ್ಷಾತೀತವಾಗಿ ಆಗ್ರಹಿಸಿದ ಸದಸ್ಯರಿಗೆ ಉತ್ತರಿಸಿ ಮಾತನಾಡಿದ ಅವರು, ನಗರಸಭೆ ಸದಸ್ಯರು ಸೂಕ್ತ ದಾಖಲೆಯೊಂದಿಗೆ ಸಭೆಗೆ ಹಾಜರಾಗಿ ಚರ್ಚಿಸಿ ಕಾನೂನು ಮೂಲಕ ಬಗೆಹರಿಸಿಕೊಂಡು ನಗರಸಭೆ ಆಸ್ತಿ ಉಳಿಸಬೇಕು. ಇದರಿಂದ ವಿವಿಧ ಯೋಜನೆ ಅನುಷ್ಠಾನಕ್ಕೆ ಸಹಕಾರವಾಗಲಿದೆ ಎಂದರು.

ನಗರದಲ್ಲಿ ಫಾಸ್ಟ್‌ಫುಡ್ ವ್ಯಾಪಾರಿಗಳಿಗೆ ಸೂರು ಕಲ್ಪಿಸುವ ದೃಷ್ಟಿಯಿಂದ ನಗರದ ಹಳೇ ಸೇತುವೆ ಬಳಿ ನಗರಸಭೆ ನಿವೇಶನ ಗುರುತಿಸಲಾಗಿದೆ. ಈ ನಿವೇಶನ ಕಾಫಿ ಬೆಳೆಗಾರರ ಸಹಕಾರ ಸಂಘ ತಮ್ಮ ಆಸ್ತಿ ಎಂದು ವಕಾಲತ್ತು ಹಾಕಿದೆ. ನಗರಸಭೆ ಈ ಸಂಬಂಧ ಸೂಕ್ತ ದಾಖಲೆ ತೋರಿಸಿ ತನ್ನ ಆಸ್ತಿ ಸುಪರ್ದಿಗೆ ಪಡೆಯಲು ಅಧಿಕಾರಿ ವರ್ಗ ಮೀನಾಮೇಷ ಎಣಿಸುತ್ತಿದೆ ಎಂದು ಸದಸ್ಯ ಸತೀಶ್ ಕುಮಾರ್ ಸಭೆ ಗಮನಕ್ಕೆ ತಂದರು. ಈ ವಿಷಯಕ್ಕೆ ಸಂಬಂಧಿಸಿದಂತೆ ಗಣೇಶ್ ಕುಮಾರ್‌ಸ್ವಾಮಿ, ಹರೀಶ್, ವಿವೇಕಾನಂದ ಧ್ವನಿಗೂಡಿಸಿದರು.

ಕಾಂಗ್ರೆಸ್ ಸದಸ್ಯರಾದ ಆಂಡಿ, ಮಂಜು, ರಮೇಶ್ ಅವರು ವಿರೋಧ ವ್ಯಕ್ತಪಡಿಸಿ ಸರ್ವೇ ನಂ.28ರಲ್ಲಿ ಹಲವು ಉದ್ಯಮ ತೆರೆದಿದ್ದು, ಎಲ್ಲರ ವಿರುದ್ಧವೂ ಕಾನೂನು ಕ್ರಮ ತೆಗೆದುಕೊಳ್ಳಬೇಕು. ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಮತ್ತು ಪುಷ್ಪ ಅಮರ್‌ನಾಥ್ ಮಾಲೀಕತ್ವದ ಸಂಭ್ರಮ ಎಂಟರ್‌ಟೈನ್‌ಮೆಂಟ್ ಮೇಲಷ್ಟೇ ಏಕೆ ಕ್ರಮ ಎಂದು ಪ್ರಶ್ನಿಸಿದರು.

ನಗರಸಭಾಧ್ಯಕ್ಷ ಶರವಣ ಮಾತನಾಡಿ, ಮಾಜಿ ಶಾಸಕರಿಗೆ ಸಂಬಂಧಿಸಿದ ಸಂಭ್ರಮ ಎಂಟರ್ ಟೈನ್‌ಮೆಂಟ್ ಮೇಲೆ ಮಾತ್ರ ಕ್ರಮ ಕೈಗೊಂಡಿಲ್ಲ. ಬದಲಿಗೆ ಸರ್ವೇ ನಂ.28ರ ಸರ್ಕಾರಿ ಖರಾಬಿನಲ್ಲಿ ಅಕ್ರಮವಾಗಿ ನಿರ್ಮಿಸಿರುವ ಕಟ್ಟಡದ ಮೇಲೂ ಕಾನೂನು ಕ್ರಮ ತೆಗೆದುಕೊಳ್ಳಲು ತೀರ್ಮಾನಿಸಲಾಗಿದೆ ಎಂದರು. ಇದೇ ವೇಳೆ ಸದಸ್ಯರು ನಗರಸಭೆಯಲ್ಲಿ ಆನ್‌ಲೈನ್ ಅರ್ಜಿ ವಿಲೇ ಇಟ್ಟು ಲಂಚಕ್ಕೆ ಪೀಡಿಸುವ ಪರಿಪಾಠ ನಡೆದಿದೆ ಎಂದು ಆರೋಪಿಸಿದರು. ಇದಕ್ಕೆ ಉತ್ತರಿಸಿದ ಶಾಸಕರು ಆನ್‌ಲೈನ್‌ನಲ್ಲಿ ಅರ್ಜಿ ಸ್ವೀಕರಿಸಿದ 45 ದಿನದೊಳಗೆ ಅರ್ಜಿ ವಿಲೇವಾರಿಯಾಗಬೇಕು. ಅರ್ಜಿಗೆ ಬೇಕಾದ ದಾಖಲೆಗಳ ಕೊರತೆ ಇದ್ದರೇ ಹಿಂಬರಹ ನೀಡಿ ಎಂದರು.

ನಗರಸಭೆ ಸಭಾಂಗಣವನ್ನು ಇತರ ಇಲಾಖೆ ಹಾಗೂ ಸಾರ್ವಜನಿಕರ ಕಾರ್ಯಕ್ರಮದ ಬಳಕೆಗೆ ಅವಕಾಶ ಮಾಡಿಕೊಡಲಾಗುತ್ತಿತ್ತು. ಆದರೆ ಸಭೆ ನಡೆಸಿದವರು ಬೈಕ್‌ಗಳನ್ನು ಕಿತ್ತು, ಆಸನಗಳಿಗೆ ಹಾನಿ ಮಾಡಿ ಹೋಗುತ್ತಿದ್ದಾರೆ. ಇದನ್ನು ನಿಯಂತ್ರಿಸಲು ಇನ್ನು ಮುಂದೆ ಶಾಸಕರ ಅಧ್ಯಕ್ಷತೆಯಲ್ಲಿ ಆಯೋಜಿಸುವ ಸರ್ಕಾರಿ ಸಭೆಗಳನ್ನು ಹೊರತುಪಡಿಸಿ ಇನ್ಯಾವುದೇ ಸಭೆಗಳಿಗೂ ಸಭಾಂಗಣ ನೀಡಬಾರದೆಂಬ ನಿರ್ಧಾರಕ್ಕೆ ಎಲ್ಲಾ ಸದಸ್ಯರು ಒಪ್ಪಿಗೆ ಸೂಚಿಸಿದರು.

ಸಭೆಯಲ್ಲಿ ಪೌರಾಯುಕ್ತೆ ಮಾನಸ, ಉಪಾಧ್ಯಕ್ಷೆ ಆಶಾ, ಪರಿಸರ ಇಂಜಿನಿಯರ್ ಸೌಮ್ಯ ಸೇರಿದಂತೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಹಾಜರಿದ್ದರು.


ಶಾಸಕ ಜಿ.ಡಿ.ಹರೀಶ್‌ಗೌಡ ಅಧ್ಯಕ್ಷತೆಯಲ್ಲಿ ನಗರಸಭೆ ಸಾಮಾನ್ಯ ಸಭೆ ನಡೆಯಿತು.

ಸಾಹಿತ್ಯ ಸಮ್ಮೇಳನದ ಪ್ರಚಾರ ರಥಕ್ಕೆ ಸ್ವಾಗತ


ಕಂಪಲಾಪುರದಲ್ಲಿ ಮಂಡ್ಯದಲ್ಲಿ ನಡೆಯುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಚಾರ ರಥವನ್ನು ಅದ್ಧೂರಿಯಾಗಿ ಸ್ವಾಗತಿಸಲಾಯಿತು. ತಹಸೀಲ್ದಾರ್ ನಿಸರ್ಗಪ್ರಿಯ, ತಾಲೂಕು ಕಸಾಪ ಅಧ್ಯಕ್ಷ ನವೀನ್, ಕಂದಾಯಾಧಿಕಾರಿ ನಂದೀಶ್, ಗ್ರಾಪಂ ಅಧ್ಯಕ್ಷ ಸಣ್ಣತಮ್ಮಯ್ಯ, ಪಿಡಿಓ ಪರಮೇಶ್, ಸದಸ್ಯರಾದ ರಾಣಿ, ನಾಗರಾಜ್ ಮತ್ತಿತರರಿದ್ದರು.

ಉಪೇಂದ್ರ ರಾಜೇ ಅರಸ್ ನಿಧನ



ಬೆಟ್ಟದಪುರ, ಡಿ.9– ಗ್ರಾಮದ ನಿವಾಸಿ ಉಪೇಂದ್ರ ರಾಜೇ ಅರಸ್(58) ಸೋಮವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೈಸೂರಿನ ಅರಸು ಸಮಾಜದ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಅನೀಮಿಯ ಮುಕ್ತ ಭಾರತಕ್ಕೆ ಸಹಕರಿಸಲು ಆರೋಗ್ಯಾಧಿಕಾರಿಗಳ ಮನವಿ

ಅಪೌಷ್ಟಿಕತೆ, ಜಂತುಹುಳು ನಿವಾರಣೆಗಾಗಿ ಅಭಿಯಾನ

ಮೈಸೂರು,ಡಿ.9(ಎಂಟಿವೈ)– ಮಕ್ಕಳಲ್ಲಿ ಅಪೌಷ್ಟಿಕತೆ ಹೋಗಲಾಡಿಸುವುದು ಹಾಗೂ ಕಾಡುತ್ತಿರುವ ಅನೀಮಿಯ ಆರೋಗ್ಯ ಸಮಸ್ಯೆ ನಿಯಂತ್ರಣಕ್ಕೆ ಜಂತುಹುಳು ನಿವಾರಣೆ ಮಾಡುವ ಅಗತ್ಯವಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಮಹಾರಾಜ ಪ್ರೌಢಶಾಲೆ ಆವರಣದಲ್ಲಿ ಸೋಮವಾರ ಜಿ.ಪಂ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ರಾಷ್ಟ್ರೀಯ ಜಂತುಹುಳು ನಿವಾರಣಾ' ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಅನೀಮಿಯ ಸಮಸ್ಯೆ ಹೆಚ್ಚಾಗುತ್ತಿದೆ. ಅನೀಮಿಯ ಮುಕ್ತ ಭಾರತ ಮಾಡುವ ನಿಟ್ಟಿನಲ್ಲಿ ರಾಷ್ಟ್ರೀಯ ಜಂತುಹುಳ ನಿವಾರಣಾ ಅಭಿಯಾನ ಆರಂಭಿಸಲಾಗಿದೆ. ಈ ಅಭಿಯಾನ ಯಶಸ್ವಿಗೊಳಿಸಲು ಎಲ್ಲರೂ ಶ್ರಮಿಸಬೇಕು. ಜಂತುಹುಳ ನಿವಾರಣೆ ಮಾಡಿದರೆ, ಅನೀಮಿಯ ಸಮಸ್ಯೆಯನ್ನು ಶೇ.70ರಷ್ಟು ನಿಯಂತ್ರಿಸಬಹುದು ಎಂದರು.

ಮೈಸೂರು ಜಿಲ್ಲೆಯಲ್ಲಿ ಎಲ್ಲಾ ಅಂಗನವಾಡಿ, ಶಾಲೆಗಳು, ಪದವಿ ಪೂರ್ವ ಕಾಲೇಜು ಮತ್ತು ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳು ಜಂತುಹುಳು ನಿವಾರಣೆಗಾಗಿ ಆರೋಗ್ಯ ಇಲಾಖೆ ನೀಡುವ 'ಅಲ್ಬೆಂಡಜೋಲ್' ಮಾತ್ರೆಯನ್ನು(ಚೀಪುವ ಅಥವಾ ಅಗಿಯಬೇಕು) ಸೇವಿಸಬೇಕು. 1 ರಿಂದ 19 ವರ್ಷದೊಳಗಿನ ವಿದ್ಯಾರ್ಥಿಗಳಿಗೆ ಜಂತುಹುಳುವಿನ ಮಾತ್ರೆ ನೀಡಲಾಗುತ್ತಿದೆ. ಜಿಲ್ಲೆಯಲ್ಲಿ ಈ ಬಾರಿ 7,01,228 ಮಕ್ಕಳಿಗೆ ಜಂತುಹುಳು ಮಾತ್ರೆ ನೀಡುವ ಗುರಿ ಹೊಂದಲಾಗಿದೆ. ಅದಕ್ಕಾಗಿ 20ಕ್ಕೂ ಹೆಚ್ಚು ಆರ್‌ಬಿಎಸ್‌ಕೆ ತಂಡ ಹಾಗೂ 4 ಸಾವಿರಕ್ಕೂ ಹೆಚ್ಚು ಆರೋಗ್ಯ ಸಿಬ್ಬಂದಿ ಜಿಲ್ಲೆಯಲ್ಲಿ ಜಂತುಹುಳು ನಿವಾರಣಾ ಮಾತ್ರೆ ನೀಡುವ ಕಾರ್ಯದಲ್ಲಿ ತೊಡಗಿದ್ದಾರೆ. ಮೊದಲ ಹಂತದಲ್ಲಿ ನಡೆದ ಅಭಿಯಾನದಲ್ಲಿ ಮಾತ್ರೆ ಪಡೆಯದ ವಿದ್ಯಾರ್ಥಿಗಳಿಗೆ ಡಿ.16ರಿಂದ ಎರಡನೇ ಹಂತದ ಅಭಿಯಾನದಲ್ಲಿ ಮಾತ್ರೆ ನೀಡಲಾಗುತ್ತದೆ ಎಂದು ತಿಳಿಸಿದರು.



ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಮಹಾರಾಜ ಪ್ರೌಢಶಾಲೆ ಆವರಣದಲ್ಲಿ 'ರಾಷ್ಟ್ರೀಯ ಜಂತುಹುಳು ನಿವಾರಣಾ' ಅಭಿಯಾನಕ್ಕೆ ಡಿಹೆಚ್‌ಓ ಡಾ.ಪಿ.ಸಿ.ಕುಮಾರಸ್ವಾಮಿ ಚಾಲನೆ ನೀಡಿದರು.

ಜಂತುಹುಳು ನಿವಾರಣಾ ಮಾತ್ರೆ ಮಕ್ಕಳ ಆರೋಗ್ಯದ ಮೇಲೆ ಯಾವುದೇ ರೀತಿಯ ಅಡ್ಡ ಪರಿಣಾಮ ಬೀರುವುದಿಲ್ಲ. ಸಂಶೋಧನೆಯಲ್ಲಿ ದೃಢೀಕರಣಗೊಂಡ ಮಾತ್ರೆಗಳನ್ನೇ ನೀಡಲಾಗುತ್ತಿದೆ. ಮಕ್ಕಳು ನಿಶ್ಚಿಂತೆಯಿಂದ 6 ತಿಂಗಳಿಗೊಮ್ಮೆ 'ಅಲ್ಬೆಂಡಜೋಲ್' ಮಾತ್ರೆ ತೆಗೆದುಕೊಳ್ಳಬೇಕು. ಇದರಿಂದ ಹೊಟ್ಟೆನೋವು, ಆಯಾಸ ಹಾಗೂ ಇನ್ನಿತರ ಸಮಸ್ಯೆಗಳು ಕಡಿಮೆಯಾಗಿ ಅನೀಮಿಯವನ್ನು ತಡೆಗಟ್ಟಲು ಸಹಕಾರಿಯಾಗುತ್ತದೆ. ಹಾಗಾಗಿ ಸದೃಢ, ಆರೋಗ್ಯವಂತ ಭಾರತಕ್ಕೆ ಇಂದಿನಿಂದಲೇ ಮಕ್ಕಳು ಹೆಜ್ಜೆಚ್ಚು ಅರೋಗ್ಯ ಅಧಿಕಾರಿಗಳು, ಶಿಕ್ಷಕರು ನೀಡುವ ಸಲಹೆಯನ್ನು ಪಾಲಿಸಬೇಕು ಎಂದು ಹೇಳಿದರು.

ಆರೋಗ್ಯವಂತ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಅರೋಗ್ಯವಂತರಾಗಿರಬೇಕು. ಅದಕ್ಕಾಗಿ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಉಗುರುಗಳನ್ನು ಕತ್ತರಿಸಬೇಕು. ಮನೆ ಸುತ್ತಮುತ್ತ ನೈರ್ಮಲ್ಯ ಕಾಪಾಡಿಕೊಳ್ಳಬೇಕು. ಹಣ್ಣು–ತರಕಾರಿಗಳನ್ನು ಶುದ್ಧ ನೀರಿನಿಂದ ತೊಳೆದ ಬಳಿಕ ಬಳಸಬೇಕು. ಶೌಚಾಲಯಕ್ಕೆ ಹೋದ ಬಳಿಕ ಸೋಪ್ ಹಾಕಿ ಕೈತೊಳೆದುಕೊಳ್ಳಬೇಕು. ಬಯಲು ಶೌಚ ಮಾಡದೇ ಇರುವುದರಿಂದ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದರು.

ಮೈಸೂರು ಜಿಲ್ಲೆಯಲ್ಲಿ 100 ದಿನಗಳ ಕ್ಷಯ ರೋಗ ಅರಿವು ಕಾರ್ಯಕ್ರಮ ನಡೆಸಲಾಗುತ್ತಿದ್ದು, ಮಕ್ಕಳು ಒಂದು ಬಾರಿಯಾದರೂ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ತಪಾಸಣೆಗೆ ಒಳಪಟ್ಟರೆ ಯಾವುದಾದರೂ ಆರೋಗ್ಯ ಸಮಸ್ಯೆ ಇದ್ದರೆ ತಿಳಿದು ಬಂದು ಸಕಾಲದಲ್ಲಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಲು ಸಾಧ್ಯವಾಗುತ್ತದೆ. ಅಲ್ಲದೆ, ಶಾಲೆಗಳಲ್ಲಿ ಪೂರೈಸುತ್ತಿರುವ ಕುಡಿಯುವ ನೀರಿನ ಶುದ್ಧತೆಯನ್ನು ಪರಿಶೀಲಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಮೈಸೂರು ಡಿಡಿಪಿಐ ಕಚೇರಿ ಇಒ ಅನಂತರಾಜು ಮಾತನಾಡಿ, ಆರೋಗ್ಯ ಇಲಾಖೆ ನಡೆಸುತ್ತಿರುವ ಕಾರ್ಯಕ್ರಮದ ಸದುಪಯೋಗವನ್ನು ಶಿಕ್ಷಣ ಇಲಾಖೆ ಪಡೆದುಕೊಳ್ಳುತ್ತಿದೆ. 1ರಿಂದ 19 ವರ್ಷದವರೆಗಿನ ಮಕ್ಕಳಿಗೆ ಇಂದು ಜಂತುಹುಳು ನಿಯಂತ್ರಣದ ಮಾತ್ರೆ ವಿತರಿಸಲಾಗುತ್ತಿದೆ. ರೋಗ ಮುಕ್ತ ಸಮಾಜದ ಸ್ಥಾಪನೆಗಾಗಿ ಇಂತಹ ಕಾರ್ಯಕ್ರಮ ಮಹತ್ವದ ಪಾತ್ರ ವಹಿಸುತ್ತಿವೆ. ಶಿಕ್ಷಣ ಪಡೆಯುವ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಹಲವಾರು ಸಮಸ್ಯೆ ಎದುರಾಗುತ್ತವೆ. ಅವುಗಳನ್ನು ಹೋಗಲಾಡಿಸಿ, ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳಲು ಇದು ಉತ್ತಮ ಮಾರ್ಗವಾಗಿದೆ. ಮಕ್ಕಳು ಮಾತ್ರೆಯನ್ನು ಸೇವಿಸಿ ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಡಿಡಿಪಿಯು ಮರಿಸ್ವಾಮಿ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಸಿರಾಜ್, ಕಾರ್ಯಕ್ರಮಾಧಿಕಾರಿಗಳಾದ ಗೋಪಿನಾಥ್, ಮಹಾರಾಜ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಉದಯ್ ಶಂಕರ್ ಎನ್., ಉಪಪ್ರಾಂಶುಪಾಲ ಡಾ.ಮಹೇಶ್, ಆರೋಗ್ಯ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಚಿತ್ರಮಂದಿರ / ಚಿತ್ರ	
ಪದ್ಮ ಚಿತ್ರಮಂದಿರ	(ದೂ: 2521923)
ನಾ ನಿನ್ನ ಬಿಡಲಾರೆ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಭೈರತಿ ರಣಗಲ್(ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಪುಷ್ಪಾ–2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಬಘೀರ (ಕ)	4 ಪ್ರದರ್ಶನಗಳು
ಸಂಗಂ	
ಪುಷ್ಪಾ–2 (ತೆ)	4 ಪ್ರದರ್ಶನಗಳು
ಲಿಡೋ	
ಲಕ್ಕಿ ಭಾಸ್ಕರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಜೀಬ್ರಾ (ಕ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಪುಷ್ಪಾ 2 (ಕ): ಬೆ.9.45ಕ್ಕೆ, ಮ.1.45ಕ್ಕೆ, ಪುಷ್ಪಾ 2 (ಹಿಂ): ಸಂ.5.50ಕ್ಕೆ, ಪುಷ್ಪಾ 2 (ತೆ): ರಾ.9.50ಕ್ಕೆ.
ಸ್ಕ್ರೀನ್ 2	ಮೋನಾ 2 (3ಡಿ)(ಇಂ): ಬೆ.11ಕ್ಕೆ, ಮ.3.45ಕ್ಕೆ, ಸಂ.6ಕ್ಕೆ, ಸೋಲೋ ಲೀವಿಂಗ್ ರಿವಾಕ್ (ಜ): ಮ.1.10ಕ್ಕೆ, ಪುಷ್ಪಾ 2 (ತೆ): ರಾ.8.10ಕ್ಕೆ.
ಸ್ಕ್ರೀನ್ 3	ದಿ ಸಬರ್‌ಮತಿ ರಿಪೋರ್ಟ್ (ಹಿಂ): ಬೆ.10.25ಕ್ಕೆ, ಭೈರತಿ ರಣಗಲ್ (ಕ): ಮ.1.05ಕ್ಕೆ, ಹರಿದಾಸರ ದಿನಚರಿ (ಕ): ಸಂ.4ಕ್ಕೆ, ಪುಷ್ಪಾ 2 (ಕ): ಸಂ.6.15ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 4	ಪುಷ್ಪಾ 2 (ತೆ): ಬೆ.10.10ಕ್ಕೆ, ಮ.2.10ಕ್ಕೆ, ಸಂ.6.05ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519


ಸ್ಕ್ರೀನ್ 1	ಅಮರನ್ (ಕ): ಬೆ.10.30ಕ್ಕೆ, ರಾ.7.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಧೀರ ಭಗತ್ ರಾಯ್ (ಕ): ಸಂ.4.30ಕ್ಕೆ.
ಸ್ಕ್ರೀನ್ 2	ಭೈರತಿ ರಣಗಲ್ (ಕ): ಬೆ.10.40ಕ್ಕೆ, ಪುಷ್ಪಾ 2 (ಕ): ಮ.1.15ಕ್ಕೆ, ಸಂ.5.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 3	ಪುಷ್ಪಾ 2 (ಕ): ಬೆ.11.30ಕ್ಕೆ, ರಾ.7.45ಕ್ಕೆ, ಪುಷ್ಪಾ 2 (ತೆ): ಸಂ.4ಕ್ಕೆ.
ಸ್ಕ್ರೀನ್ 4	ಪುಷ್ಪಾ 2 (ತೆ): ಬೆ.10.30ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಪುಷ್ಪಾ 2 (ಕ): ಮ.2.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಏಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಉಪ ಚುನಾವಣೆಯಲ್ಲಿ ಗೆದ್ದಿದ್ದ ಮೂವರು ಕಾಂಗ್ರೆಸ್ ಶಾಸಕರಿಂದ ಪ್ರಮಾಣವಚನ ಸ್ವೀಕಾರ



ಸಿ.ಪಿ.ಯೋಗೀಶ್ವರ್



ಯಾಸೀರ್ ಪಠಾಣ್



ಇ.ಅನ್ನಪೂರ್ಣ

ಬೆಳಗಾವಿ: ಉಪಚುನಾವಣೆಯಲ್ಲಿ ನೂತನವಾಗಿ ಆಯ್ಕೆಯಾದ ಮೂವರು ಕಾಂಗ್ರೆಸ್ ಶಾಸಕರು ಇಂದು ಕರ್ನಾಟಕ ವಿಧಾನಸಭೆಯ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಸುವರ್ಣ ವಿಧಾನ ಸೌಧದಲ್ಲಿ ವಿಧಾನಸಭೆಯ ಚಳಿಗಾಲದ ಅಧಿವೇಶನ ಆರಂಭವಾದ ಬೆನ್ನಲ್ಲೇ ಸಂಡೂರು, ಶಿಗ್ಗಾಂವಿ ಮತ್ತು ಚನ್ನಪಟ್ಟಣ ಮೂರು ಕ್ಷೇತ್ರಗಳಿಗೆ ನಡೆದ ಉಪಚುನಾವಣೆಯಲ್ಲಿ ಗೆದ್ದಿದ್ದ ಇ.ಅನ್ನಪೂರ್ಣ, ಯಾಸೀರ್ ಅಹಮದ್ ಖಾನ್ ಪಠಾಣ್ ಮತ್ತು ಸಿ.ಪಿ.ಯೋಗೀಶ್ವರ್ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ನವೆಂಬರ್ 13ರಂದು ನಡೆದ ಉಪ ಚುನಾವಣೆಯಲ್ಲಿ ಪತಿಯಿಂದ ತೆರವಾದ ಸ್ಥಾನಕ್ಕೆ ಬಳ್ಳಾರಿ ಸಂಸದ ಇ.ತುಕಾರಾಂ ಅವರ ಪತ್ನಿ ಅನ್ನಪೂರ್ಣ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿ, ಗೆದ್ದಿದ್ದರು. ಶಿಗ್ಗಾಂವಿನಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಪುತ್ರ ಬಿಜೆಪಿಯ ಭರತ್ ಬೊಮ್ಮಾಯಿ ಅವರನ್ನು ಪಠಾಣ್ ಸೋಲಿಸಿದ್ದರು.

ಯೋಗೀಶ್ವರ ಅವರು ಚನ್ನಪಟ್ಟಣ ಕ್ಷೇತ್ರದಲ್ಲಿ ಜೆಡಿಎಸ್ ಅಭ್ಯರ್ಥಿ ಹಾಗೂ ಕುಮಾರಸ್ವಾಮಿ ಪುತ್ರ ನಿಖಿಲ್ ಕುಮಾರಸ್ವಾಮಿ ಅವರನ್ನು ಸೋಲಿಸಿ ಗೆಲುವು ಸಾಧಿಸಿದ್ದರು. 224 ಸದಸ್ಯ ಬಲದ ವಿಧಾನಸಭೆಯಲ್ಲಿ ಈಗ ಸ್ಪೀಕರ್ ಹೊರತುಪಡಿಸಿ ಕಾಂಗ್ರೆಸ್‌ನ ಸಂಖ್ಯೆ 136 ಆಗಿದೆ.

ಮಹಾರಾಷ್ಟ್ರದ ಗಡಿಯಲ್ಲಿರುವ ಬೆಳಗಾವಿಯಲ್ಲಿ 2006ರಿಂದ ವರ್ಷಕ್ಕೊಮ್ಮೆ ವಿಧಾನಮಂಡಲದ ಅಧಿವೇಶನಗಳನ್ನು ಆಯೋಜಿಸುತ್ತಿದೆ. ಬೆಂಗಳೂರಿನ ವಿಧಾನ ಸೌಧದ ಮಾದರಿಯಲ್ಲಿ ಸುವರ್ಣ ವಿಧಾನಸೌಧ ರಾಜ್ಯ ಸಚಿವಾಲಯ, ಬೆಳಗಾವಿ ಕರ್ನಾಟಕದ ಅವಿಭಾಜ್ಯ ಅಂಗವಾಗಿದೆ ಎಂಬ ಪ್ರತಿಪಾದನೆಗಾಗಿ ನಿರ್ಮಿಸಲಾಗಿದೆ. ಬೆಳಗಾವಿ ಮತ್ತು ಹತ್ತಿರದ ಕೆಲವು ಸ್ಥಳಗಳು ತನಗೆ ಸೇರಿದ್ದು ಎಂದು ಮಹಾರಾಷ್ಟ್ರ ಹೇಳಿಕೊಳ್ಳುತ್ತದೆ.

ಮಂಡ್ಯ ಸಾಹಿತ್ಯ ಸಮ್ಮೇಳನದ ಕನ್ನಡ ರಥಕ್ಕೆ ಮೈಸೂರಲ್ಲಿ ಅದ್ದೂರಿ ಸ್ವಾಗತ



ಮೈಸೂರಿಗೆ ಆಗಮಿಸಿದ ಮಂಡ್ಯದಲ್ಲಿನ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ 'ಕನ್ನಡ ಜ್ಯೋತಿ ಹೊತ್ತ ಕನ್ನಡ ರಥ'ವನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಮೈಸೂರು, ಡಿ.9(ಜಿಎ)–ಮೈಸೂರಿಗೆ ಆಗಮಿಸಿದ ಮಂಡ್ಯದಲ್ಲಿನ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ 'ಕನ್ನಡ ಜ್ಯೋತಿ ಹೊತ್ತ ಕನ್ನಡ ರಥ'ವನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು.

ನಗರದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗ ರಥವನ್ನು ಜಿಲ್ಲಾಡಳಿತ, ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮತ್ತು ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು ಭುವನೇಶ್ವರಿ ಮೂರ್ತಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಸ್ವಾಗತಿಸಿದರು.

ರಥದ ಮುಂಭಾಗದಲ್ಲಿ ಅಳವಡಿಸಿರುವ ಕೃಷ್ಣರಾಜ ಸಾಗರ ಅಣೆಕಟ್ಟೆ ಹಾಗೂ ಮುಖ್ಯದ್ವಾರದಲ್ಲಿ ಕಾವೇರಿ ಮಾತೆ ಹಾಗೂ ಭುವನೇಶ್ವರಿಯ ಮೂರ್ತಿಗಳು ಆಕರ್ಷಕವಾಗಿವೆ. ವಾಹನದ ಮಧ್ಯಭಾಗ ಮಂಟಪದ ಮಧ್ಯೆ ಕನ್ನಡ ಜ್ಯೋತಿ ಪ್ರಜ್ವಲಿಸಿದರೆ, ಹಿಂಭಾಗದಲ್ಲಿ ರೈತ ಉಳುಮೆ ಮಾಡುವ ಪ್ರತಿಕೃತಿಯೂ ಎಲ್ಲರ ಗಮನಸೆಳೆಯಿತು. ಸಾರ್ವಜನಿಕರು ಕನ್ನಡ ರಥದ ಮುಂಭಾಗ ನಿಂತು ಫೋಟೋ ಕ್ಲಿಕ್ಕಿಸಿಕೊಂಡರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್ ಮಾತನಾಡಿ, ಸಕ್ಕರೆ ನಾಡು ಮಂಡ್ಯದಲ್ಲಿ ಡಿ.20, 21 ಮತ್ತು 22ರ ಮೂರು ದಿನಗಳ ಕಾಲ ವಿಶ್ವವೇ ತಿರುಗಿ ನೋಡುವ ರೀತಿಯಲ್ಲಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ತಯಾರಿ ಆರಂಭಗೊಂಡಿದೆ ಪಕ್ಷ ಜಾತಿ, ಮತ ಹಾಗೂ ಲಿಂಗ ತಾರತಮ್ಯ ಇಲ್ಲದ ರೀತಿಯಲ್ಲಿ ನುಡಿ ಜಾತ್ರೆಯ ಸಮ್ಮೇಳನದ ರಥ ರಾಜ್ಯದ ಎಲ್ಲಾ ಜಿಲ್ಲೆಗಳನ್ನು ಸುತ್ತಿ ನಮ್ಮೂರಿಗೆ ಬಂದಿದೆ. ನಾಳೆ ಮಂಡ್ಯಕ್ಕೆ ಮರಳಲಿದೆ ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು, ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಶರೀಫ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಎಂ.ಡಿ ಸುದರ್ಶನ್ ಹಾಗೂ ಕನ್ನಡಪರ ಸಂಘಟನೆಗಳ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

ಹಣಕಾಸು ಇಲಾಖೆ ಒಪ್ಪಿಗೆ ಪಡೆದ ನಂತರ ಅತಿಥಿ ಶಿಕ್ಷಕರ ಗೌರವಧನ ಹೆಚ್ಚಳ

ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಭರವಸೆ

ಬೆಳಗಾವಿ: ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರಿಗೆ ನೀಡುತ್ತಿರುವ ಮಾಸಿಕ ಗೌರವಧನವನ್ನು ಹಣಕಾಸು ಇಲಾಖೆಯ ಅನುಮೋದನೆ ಪಡೆದ ನಂತರ ಹೆಚ್ಚಿಸಲಾಗುವುದು ಎಂದು ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಸೋಮವಾರ ಹೇಳಿದ್ದಾರೆ.



ಇಂದು ವಿಧಾನಪರಿಷತ್ತಿನಲ್ಲಿ ಬಿಜೆಪಿ ಎಂಎಲ್ಸಿ ಧನಂಜಯ ಸರ್ಜಿ ಅವರ ಪ್ರಶ್ನೆಗೆ ಸಚಿವರು ಉತ್ತರಿಸಿದರು. ಅತಿಥಿ ಶಿಕ್ಷಕರ ಗೌರವಧನವನ್ನು 15 ಸಾವಿರ ರೂ. ಮತ್ತು 16 ಸಾವಿರ ರೂಗೆ ಪರಿಷ್ಕರಿಸಲು ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದರು.

ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಿಕ್ಷಕರ ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷಾಂತ್ಯದವರೆಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ ಎಂದರು.

ಇದೇ ವೇಳೆ ಅತಿಥಿ ಶಿಕ್ಷಕರು ಹಾಗೂ ಅತಿಥಿ ಉಪನ್ಯಾಸಕರ ಜಾಗದಲ್ಲಿ ಅರೆಕಾಲಿಕ ಶಿಕ್ಷಕರನ್ನು ನೇಮಿಸುವ ಯಾವುದೇ ಪ್ರಸ್ತಾವನೆ ಇಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

'ದೇಶ್ ಕೀ ಪ್ರಕೃತಿ ಪರೀಕ್ಷಣ ಅಭಿಯಾನ್' ಕಾರ್ಯಕ್ರಮ

ಮೈಸೂರು,ಡಿ.9– ಆಯುಷ್ ಮಂತ್ರಾಲಯದ ವತಿಯಿಂದ ಡಿಸೆಂಬರ್ 25 ರವರೆಗೆ (2024) 'ದೇಶ್ ಕೀ ಪ್ರಕೃತಿ ಪರೀಕ್ಷಣ ಅಭಿಯಾನ' ಸಮಾಜಮುಖಿ ಆರೋಗ್ಯ ಶಿಕ್ಷಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆಯಲ್ಲಿ ಪ್ರತಿದಿನ ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆವರೆಗೆ ಈ ಸೌಲಭ್ಯವು ಸಾರ್ವಜನಿಕರಿಗೆ ಲಭ್ಯವಿದ್ದು, ಮೈಸೂರಿನ ಹಾಗೂ ಸುತ್ತಮುತ್ತಲಿನ ಜನತೆ ಸೌಲಭ್ಯವನ್ನು ಉಪಯೋಗಿಸಿಕೊಂಡು ತಮ್ಮ ಆರೋಗ್ಯದ ಗುಣಮಟ್ಟವನ್ನು ಕಾಪಾಡಿಕೊಳ್ಳಬಹುದು. 18 ವರ್ಷ ಮೇಲ್ಪಟ್ಟ ಎಲ್ಲಾ ಸಾರ್ವಜನಿಕರು ಈ ಸೌಲಭ್ಯವನ್ನು ಪಡೆಯಲು ಅರ್ಹರಿರುತ್ತಾರೆ. ಸಾರ್ವಜನಿಕರು ಆಸ್ಪತ್ರೆಗೆ ಬರುವಾಗ ತಮ್ಮ ಬಳಿ ಇರುವ ಸ್ಮಾರ್ಟ್‌ಫೋನ್‌ನೊಂದಿಗೆ ಈ ಕಾರ್ಯಕ್ರಮದಲ್ಲಿ ಭಾಗವಹಿಸಬಹುದು ಎಂದು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮಾಜ ಸೇವಕರಿಗೆ ಸನ್ಮಾನ ಕಾರ್ಯಕ್ರಮ

ಮೈಸೂರು, ಡಿ.9–ಮೈಸೂರಿನ ಇಲವಾಲದಲ್ಲಿರುವ ಬ್ರಹ್ಮಾಕುಮಾರೀಸ್ ಜ್ಞಾನ ಸರೋವರ ರಿಟ್ರೀಟ್ ಸೆಂಟರ್‌ನಲ್ಲಿ ಡಿ.15ರಂದು ಜಿಲ್ಲೆಯಲ್ಲಿ ಕರ್ತವ್ಯನಿರತ ಸಮಾಜ ಸೇವಕರನ್ನು ಗುರುತಿಸಿ ಸನ್ಮಾನಿಸಲು ವಿಶೇಷ ಕಾರ್ಯಕ್ರಮ ಏರ್ಪಡಿಸಲಾಗಿದೆ. ಅನೇಕ ಘಟಕಗಳಲ್ಲಿ ಸ್ವಚ್ಛತೆ ಕಾಪಾಡುವ 50 ಸಮಾಜ ಸೇವಕರನ್ನು ಗೌರವಿಸಲಾಗುತ್ತದೆ ಎಂದು ಮೂಲಗಳು ಪ್ರಕಟಣೆಯಲ್ಲಿ ತಿಳಿಸಿವೆ.

ಬೆಳಗಾವಿ ಚಳಿಗಾಲದ ಅಧಿವೇಶನಕ್ಕೆ ವಿರೋಧ

ಮಹಾಮೇಳಾವ್ ನಡೆಸಿದ ಎಂಇಎಸ್ ಕಾರ್ಯಕರ್ತರು ವಶಕ್ಕೆ

ಬೆಳಗಾವಿ: ಬೆಳಗಾವಿಯಲ್ಲಿ ಪ್ರತಿ ಬಾರಿ ಅಧಿವೇಶನ ನಡೆಯುವಾಗಲೂ ಮಹಾರಾಷ್ಟ್ರ ಏಕೀಕರಣ ಸಮಿತಿ (ಎಂಇಎಸ್) ಕ್ಯಾತೆ ತೆಗೆಯುವುದು ಸಾಮಾನ್ಯವಾಗಿ ಹೋಗಿದ್ದು, ಈ ಬಾರಿಯೂ ಸಂಭಾಜಿ ವೃತ್ತದ ಬಳಿ ಮಹಾಮೇಳಾವ್ ನಡೆಸುತ್ತಿದ್ದ ಎಂಇಎಸ್ ಮುಖಂಡರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಎಂಇಎಸ್ ಮುಖಂಡ ಮನೋಹರ ಕಿಣೇಕರ, ಆರ್ ಎಂ. ಪಾಟೀಲ್, ಪ್ರಕಾಶ ಶಿರೋಲಕರ್, ಪ್ರಕಾಶ ಮರ್ಗಾಳೆ ಸೇರಿ 20ಕ್ಕೂ ಅಧಿಕ ಜನರನ್ನು ಇದೀಗ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಅಧಿವೇಶನಕ್ಕೆ ಒಂದು ದಿನ ಮುಂಚೆಯೇ ಬೆಳಗಾವಿಯಲ್ಲಿ ಮಹಾಮೇಳವ್ ನಡೆಸಲು ಎಂಇಎಸ್ ಮುಂದಾಗಿತ್ತು. ಈ ಹಿನ್ನೆಲೆಯಲ್ಲಿ ಗೊಂದಲಗಳು ಸೃಷ್ಟಿಯಾಗುವುದನ್ನು ತಡೆಯುವ ಉದ್ದೇಶದಿಂದ ಹಾಗೂ ಮಹಾಮೇಳಾವಕ್ಕೆ ಬ್ರೇಕ್ ಹಾಕಲು ನಿಷೇಧಾಜ್ಞೆ ಜಾರಿ ಮಾಡಲಾಗಿದೆ.

ಬೆಳಗಾವಿ ನಗರ ಪೊಲೀಸ್ ಕಮಿಷನರ್ ಯಡಾ ಮಾರ್ಟಿನ್ ಅವರು ಈ ಭಾಗದಲ್ಲಿ ನಿಷೇಧಾಜ್ಞೆ ಆದೇಶ ಹೊರಡಿಸಿದ್ದಾರೆ. ಡಿಸೆಂಬರ್ 9 ರಿಂದ 20 ವರೆಗೆ ನಾಲ್ಕು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಯಲ್ಲಿರಲಿದೆ. ಬೆಳಗಾವಿಯ ಟಿಳಕವಾಡಿ, ಕ್ಯಾಂಪ್, ಶಹಾಪೂರ, ಮಾರ್ಕೆಟ್ ಠಾಣೆ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಯಲ್ಲಿ ಇರಲಿದೆ. ವ್ಯಾಕ್ಸಿನ್ ಡಿಪೋ ಲೇಲೆ ಮೈದಾನ, ಧರ್ಮವೀರ ಸಂಭಾಜಿ ವೃತ್ತ, ಸಂಭಾಜಿ ಉದ್ಯಾನ ಹಾಗೂ ಶಿವಾಜಿ ಉದ್ಯಾನ ಭಾಗದಲ್ಲಿ ಮಹಾಮೇಳಾವ್ ನಡೆಸದಂತೆ ನಿಷೇಧಾಜ್ಞೆ ಜಾರಿ ಮಾಡಲಾಗಿದೆ.

ಆಯಿಷ್‌ನಲ್ಲಿ ಅಂತರರಾಷ್ಟ್ರೀಯ ವಿಕಲ ಚೇತನರ ದಿನಾಚರಣೆ

ವಿಕಲಚೇತನರ ಮಕ್ಕಳ ವಿಶೇಷ ಪೋಷಕರಿಗೆ ಪ್ರಶಸ್ತಿ ಪ್ರದಾನ

ಮೈಸೂರು, ಡಿ.9(ಜಿಎ)–ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ಕ್ಲಿನಿಕಲ್ ಸೇವೆಗಳು ಮತ್ತು ವಿಶೇಷ ಶಿಕ್ಷಣ ಇಲಾಖೆ ವತಿಯಿಂದ ಸಂಸ್ಥೆಯ ಜಮ್ಮಾನ ಸಭಾಂಗಣದಲ್ಲಿ ಅಂತರರಾಷ್ಟ್ರೀಯ ವಿಕಲಚೇತನರ ದಿನ ಆಚರಿಸಲಾಯಿತು.

ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಉದ್ಘಾಟಿಸಿ, ವಿಶೇಷ ಚೇತನ ಮಕ್ಕಳನ್ನು ಜವಾಬ್ದಾರಿಯಿಂದ ಪೋಷಿಸುತ್ತಿರುವವರಿಗೆ ಉತ್ತಮ ತಾಯಿ ಪ್ರಶಸ್ತಿ ವಿತರಿಸಿ, ಅಭಿನಂದಿಸಿದರು. ನಂತರ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯಲ್ಲಿ ತರಬೇತಿ ಪಡೆದು ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿದರು.

ಈ ವೇಳೆ ಮಾತನಾಡಿದ ಅವರು, ಡಿ.3ರಂದು ವಿಶೇಷಚೇತನರ ದಿನ ಕಾರ್ಯಕ್ರಮ ನಡೆಸಬೇಕಿತ್ತು. ಆದರೆ, ಸಂಸ್ಥೆ ಉತ್ತಮ ಸೇವೆ ಗುರುತಿಸಿ ರಾಷ್ಟ್ರಪತಿ ನೀಡಿದ ಪ್ರಶಸ್ತಿ ಸ್ವೀಕರಿಸಬೇಕಾದ ಹಿನ್ನೆಲೆಯಲ್ಲಿ ಇಂದು ಕಾರ್ಯಕ್ರಮ ಆಯೋಜನೆ ಮಾಡಿದ್ದಾರೆ. ಸಂಸ್ಥೆಯು ವಿಶೇಷಚೇತನ ಮಕ್ಕಳ ಸಮಾಜದ ಮುಖ್ಯವಾಹಿನಿಗೆ ತರುವ ಕೆಲಸ ಮಾಡುತ್ತಿದೆ ಎಂದರು.



ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ಕ್ಲಿನಿಕಲ್ ಸೇವೆಗಳು ಮತ್ತು ವಿಶೇಷ ಶಿಕ್ಷಣ ಇಲಾಖೆ ವತಿಯಿಂದ ಸಂಸ್ಥೆಯ ಜಮ್ಮಾನ ಸಭಾಂಗಣದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ವಿಕಲಚೇತನರ ದಿನಾಚರಣೆಯಲ್ಲಿ ಉತ್ತಮ ತಾಯಿ ಪ್ರಶಸ್ತಿ ವಿತರಿಸಿ, ಅಭಿನಂದಿಸಲಾಯಿತು.

ಸರ್ಕಾರಿ ಕಾರ್ಯಕ್ರಮದಲ್ಲಿ ಒಂದು ಸ್ಮರಣಿಕೆ ನೀಡಿ ಅಭಿನಂದಿಸುತ್ತೇವೆ. ಆದರೆ, ಇಂದು ನೀಡಿರುವ ಸ್ಮರಣಿಕೆಯಲ್ಲಿ ಅವರ ಫೋಟೋ ಅಳವಡಿಸಿ, ವಿಶೇಷವಾಗಿ ಅವರ ಸಾಧನೆಯನ್ನು ವಿವರಿಸಿರುವುದರಿಂದ ಮತ್ತಷ್ಟು ಮಂದಿಗೆ ಇದರಿಂದ ಸ್ಫೂರ್ತಿಯಾಗಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯಲ್ಲಿ ಮೈಸೂರು ಮಾತ್ರವಲ್ಲದೆ ದೇಶದ ವಿವಿಧ ಭಾಗದಿಂದ ಬಂದು ತರಬೇತಿ ಪಡೆದುಕೊಳ್ಳುತ್ತಿದ್ದಾರೆ. ಇಲ್ಲಿನ ಸೇವೆಯನ್ನು ದೇಶದ ಇತರೆ ರಾಜ್ಯಗಳಿಗೂ ಕೇಂದ್ರ ಸರ್ಕಾರ ವಿಸ್ತರಣೆ ಮಾಡುತ್ತಿದೆ ಎಂದರು.

ನಂತರ ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ಜಂಟಿ ನಿರ್ದೇಶಕ ಎಸ್.ನಟರಾಜ್ ಮಾತನಾಡಿ, ಸಮಾಜದಲ್ಲಿ ವಿಕಲಚೇತನರು ಎಂದ ತಕ್ಷಣ ಅವರು ಸಮಾಜದಲ್ಲಿ ಪ್ರತ್ಯೇಕರು ಎಂಬ ಭಾವನೆ ಇದೆ ಅದರೆ ಅವರಿಗೆ ಸೂಕ್ತ ಸೌಲಭ್ಯ ಒದಗಿಸಿದರೆ ಏನು ಬೇಕಾದರೂ ಸಾಧಿಸುತ್ತಾರೆ ಎಂಬುದು ಸಾಬೀತಾಗಿದೆ ಎಂದರು.

ತಂದೆ–ತಾಯಿಗೆ ಜವಾಬ್ದಾರಿ ಇಲ್ಲದಿದ್ದರೆ ಏನಾಗುತ್ತದೆ ಎಂಬುದನ್ನು ನೋಡಿದ್ದೇವೆ. ಆದರೆ ಇಂದು ಉತ್ತಮ ತಾಯಿ ಪ್ರಶಸ್ತಿ ಸ್ವೀಕರಿಸಿದವರು ಇತರರಿಗೆ ಮಾದರಿಯಾಗಿದ್ದಾರೆ. ನೀವು ಇಲ್ಲಿ ಎಲ್ಲಾ ತರಬೇತಿ ಪಡೆದು, ನಮ್ಮ ಮಕ್ಕಳು ಎಲ್ಲರಂತಿರಲು ಸಾಧಿಸಿ ತೋರಿಸಿದ್ದೀರಿ. ಅದರಂತೆ ನಿಮ್ಮ ಸುತ್ತಮುತ್ತ ಇರುವ ವಿಶೇಷಚೇತನ ಮಕ್ಕಳನ್ನು ಇಲ್ಲಿಗೆ ಕರೆತನ್ನಿ ಎಂದು ಸಲಹೆ ನೀಡಿದರು.

ಇದೇ ವೇಳೆ ವಿಶೇಷಚೇತನ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮದ ಮೂಲಕ ಎಲ್ಲರನ್ನು ರಂಜಿಸಿದರು. ಈ ವೇಳೆ ಸಂಸ್ಥೆಯ ನಿರ್ದೇಶಕಿ ಡಾ.ಎಂ. ಪುಷ್ಪಾವತಿ, ಕ್ಲಿನಿಕಲ್ ವಿಭಾಗದ ಮುಖ್ಯಸ್ಥೆ ಡಾ.ಎನ್.ಸ್ವಪ್ನ ಉಪಸ್ಥಿತರಿದ್ದರು.

ಮೂರು ದಿನ ರಾಷ್ಟ್ರೀಯ ಸಮ್ಮೇಳನ

ಮೈಸೂರು,ಡಿ.9– ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು Exploring Nature's Pharmacy Potential of Meditional and Aromatic plants and their conservation ವಿಷಯ ಕುರಿತು ಜನವರಿ 7 ರಿಂದ 9 ರವರೆಗೆ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ. ಈ ಸಮ್ಮೇಳನದಲ್ಲಿ ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು, ಶೈಕ್ಷಣಿಕ ತಜ್ಞರು, ಯುವ ಉದ್ಯಮದಾರರು ಭಾಗವಹಿಸಬಹುದಾಗಿದೆ. ಅಲ್ಲದೇ, ಯುವ ವಿಜ್ಞಾನಿಗಳು ಮತ್ತು Research Paper presentation ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ Research Paper ಗಳಿಗೆ ನಗದು ಬಹುಮಾನ ನೀಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಗೂಗಲ್ ಫಾರಂ https://forms.gle/JochVVLYyNBHKtdx7 ವೆಬ್‌ಸೈಟ್ ಮೂಲಕ ಡಿ.31 ರೊಳಗೆ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ಅಧಿಕಾರಿಗಳ ಮೊ.ಸಂ: 9845258894, 9880405181 ಹಾಗೂ 9686449019 ಅಥವಾ www.https//:kstacademy.in ವೆಬ್‌ಸೈಟ್ ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಳೆದ 5 ವರ್ಷಗಳಲ್ಲಿ 3,350ಕ್ಕೂ ಹೆಚ್ಚು ಬಾಣಂತಿಯರ ಸಾವು

ಅಂಕಿ–ಅಂಶಗಳೊಂದಿಗೆ ಸಿಎಂ ಸಿದ್ದರಾಮಯ್ಯ ತಿರುಗೇಟು



ಬೆಂಗಳೂರು: ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ 3,350ಕ್ಕೂ ಹೆಚ್ಚು ಬಾಣಂತಿಯರ ಸಾವುಗಳು ಸಂಭವಿಸಿವೆ. ನಮ್ಮ ಅವಧಿಯಲ್ಲಿ ಸಾವು–ನೋವು ಕಡಿಮೆಯಾಗಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂಕಿ–ಅಂಶಗಳ ಮೂಲಕ ಪ್ರತಿಪಕ್ಷಗಳಿಗೆ ತಿರುಗೇಟು ನೀಡಿದ್ದಾರೆ. ಬಳ್ಳಾರಿ ಜಿಲ್ಲೆಯಲ್ಲಿ ಇತ್ತೀಚಿನ ಬಾಣಂತಿಯರ ಸಾವಿನ ಕುರಿತು ಪ್ರತಿಪಕ್ಷ ಬಿಜೆಪಿ ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳ ಕಚೇರಿ ಇಂದು ಬಾಣಂತಿಯರ ಸಾವಿನ ಬಗ್ಗೆ ಅಂಕಿ–ಅಂಶಗಳನ್ನು ಬಿಡುಗಡೆ ಮಾಡಿದೆ.

ಕಳೆದ ಐದು ವರ್ಷಗಳಲ್ಲಿ ಒಟ್ಟು 3,364 ಬಾಣಂತಿಯರು ಮೃತಪಟ್ಟಿದ್ದಾರೆ. ಅಂಕಿ–ಅಂಶಗಳ ಪ್ರಕಾರ, ಬಿಜೆಪಿ ಅಧಿಕಾರದಲ್ಲಿದ್ದಾಗ ಕೋವಿಡ್–19 ಸಮಯದಲ್ಲಿ ಸಂಭವಿಸಿದ ಅತೀ ಹೆಚ್ಚು ತಾಯಂದಿರ ಸಾವುಗಳನ್ನು ಬಹಿರಂಗಪಡಿಸಿದೆ.

2019–2020 ರಲ್ಲಿ, 662 ತಾಯಂದಿರ ಸಾವುಗಳು ವರದಿಯಾಗಿದ್ದು, ನಂತರದ ವರ್ಷದಲ್ಲಿ ಈ ಸಂಖ್ಯೆ 714ಕ್ಕೆ ಸ್ವಲ್ಪ ಏರಿಕೆಯಾಗಿದೆ.

2021–2022 ರಲ್ಲಿ 595 ಬಾಣಂತಿಯರ ಸಾವು, 2022–2023 ರಲ್ಲಿ 527 ಮತ್ತು 2023–2024 ರಲ್ಲಿ 518 ಸಾವುಗಳು ದಾಖಲಾಗಿವೆ.

ನವೆಂಬರ್ 2024ರ ಹೊತ್ತಿಗೆ, ರಾಜ್ಯದಲ್ಲಿ ತಾಯಂದಿರ ಸಾವಿನ ಸಂಖ್ಯೆ 348 ರಷ್ಟಿದೆ.

ಭಾನುವಾರ, ರಾಜ್ಯ ಸರ್ಕಾರ ಬಳ್ಳಾರಿ ಆಸ್ಪತ್ರೆ ಮತ್ತು ರಾಜ್ಯಾದ್ಯಂತ ಇತರ ಸ್ಥಳಗಳಲ್ಲಿ ಬಾಣಂತಿಯರ ಸಾವಿನ ಕುರಿತು ತನಿಖೆಗಾಗಿ ನಾಲ್ಕು ಸದಸ್ಯರ ಸಮಿತಿಯನ್ನು ರಚಿಸಿದೆ.

ಮೋದಿಯಿಂದ ಪದೇ ಪದೇ ದ್ರೋಹ; ನ್ಯಾಯ ಕೇಳುತ್ತಿರುವ ರೈತರು

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ರೈತರಿಗೆ ಮತ್ತೆ ಮತ್ತೆ ದ್ರೋಹ ಬಗೆದಿದ್ದು, ರೈತರು ನ್ಯಾಯ ಕೇಳುತ್ತಿದ್ದಾರೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ರೈತರು ನ್ಯಾಯಕ್ಕಾಗಿ ಪದೇ ಪದೆ ದೆಹಲಿಯ ಬಾಗಿಲಿಗೆ ಏಕೆ ಬರಬೇಕು ಎಂದು ಪ್ರಧಾನಿ ಮೋದಿ ಅವರನ್ನು ಖರ್ಗೆ ಪ್ರಶ್ನಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಖರ್ಗೆ, ಹರಿಯಾಣ ಮತ್ತು ರಾಜಸ್ಥಾನ ಪ್ರವಾಸದಲ್ಲಿರುವ ನೀವು, ದೇಶಕ್ಕೆ ಅನ್ನ ನೀಡುವ ರೈತರ ಹೋರಾಟವನ್ನು ಅರ್ಥಮಾಡಿಕೊಳ್ಳಲು ಪ್ರಯತ್ನಿಸುತ್ತೀರಿ ಎಂದು ನಾನು ಭಾವಿಸುತ್ತೇನೆ. ನಿಮ್ಮ ಸರ್ಕಾರ ಪದೇ ಪದೆ ದ್ರೋಹ ಮಾಡಿರುವುದರಿಂದ ರೈತರು ನ್ಯಾಯ ಕೇಳುತ್ತಿದ್ದಾರೆ ಎಂದು ಹೇಳಿದ್ದಾರೆ.

2022ರ ವೇಳೆಗೆ ದೇಶದ ರೈತರ ಆದಾಯವನ್ನು ದ್ವಿಗುಣಗೊಳಿಸುವ ಭರವಸೆಯನ್ನು ಈಡೇರಿಸದಿರುವುದು. ಕನಿಷ್ಠ ಬೆಂಬಲ ಬೆಲೆಗೆ (ಎಂಎಸ್‌ಪಿ) ಕಾನೂನು ಖಾತರಿ ನೀಡಲು ಸಮಿತಿ ರಚಿಸಿದರೂ ಅದರಂತೆ ಕಾರ್ಯ ನಿರ್ವಹಿಸದೆ ಇರುವುದು. ರೈತರು ಬೆಳೆದ ಬೆಳೆಗಳ ಸಮರ್ಪಕ ಖರೀದಿಯಾಗಲಿ ಮತ್ತು ಬೆಳೆಗಳಿಗೆ ನ್ಯಾಯಯುತ ಬೆಲೆ ಆಗಲಿ ಸಿಗುತ್ತಿಲ್ಲ. ಹೀಗೆ ನಿಮ್ಮ ಸರ್ಕಾರ ರೈತರಿಗೆ ಮತ್ತೆ ಮತ್ತೆ ದ್ರೋಹ ಮಾಡಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ರಸಗೊಬ್ಬರಗಳ ತೀವ್ರ ಕೊರತೆಯಿಂದ ರೈತರು ತೊಂದರೆಗೀಡಾಗಿದ್ದಾರೆ. ರೈತರು ಶಾಂತಿಯುತವಾಗಿ ನಡೆಸುತ್ತಿದ್ದ ಮೆರವಣಿಗೆಯಲ್ಲಿ ಅಶ್ರುವಾಯು ಪ್ರಯೋಗಿಸುವ ಮೂಲಕ ಅವರನ್ನು ತಡೆಯಲು ಪ್ರಯತ್ನಿಸಲಾಗಿದೆ.



ರೈತರ ಮೇಲೆ ಲಾಠಿ ಪ್ರಹಾರ ನಡೆಸಲಾಗಿದೆ ಎಂದು ಖರ್ಗೆ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಪರಿಸ್ಥಿತಿಯಲ್ಲಿ ನೀವು ಮತ್ತು ನಿಮ್ಮ ಸರ್ಕಾರದ ಕೃಷಿ ಸಚಿವರು ಎಷ್ಟೇ ಸುಳ್ಳು ಹೇಳಿದರೂ ರೈತರು ನೀವು ಅವರ ಬದ್ಧ ವಿರೋಧಿ ಎಂಬುದನ್ನು ಅರ್ಥಮಾಡಿಕೊಂಡಿದ್ದಾರೆ. ರೈತರ ಧ್ವನಿ ಎತ್ತುವ ಹಕ್ಕನ್ನು ಕಸಿದುಕೊಳ್ಳಬೇಡಿ. ಅವರಿಗೆ ಅನ್ಯಾಯ ಮಾಡಬೇಡಿ ಎಂದು ಖರ್ಗೆ ಹೇಳಿದ್ದಾರೆ. ಎಂಎಸ್‌ಪಿಗೆ ಕಾನೂನು ಖಾತರಿ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ 101 ರೈತರ ಗುಂಪು ಪಂಜಾಬ್–ಹರಿಯಾಣದ ಶಂಭು ಗಡಿಯಿಂದ ದೆಹಲಿಯತ್ತ ಭಾನುವಾರ ಮಧ್ಯಾಹ್ನ ಪುನಃ ಪಾದಯಾತ್ರೆಯನ್ನು ಆರಂಭಿಸಿತ್ತು. ಆದರೆ ರೈತರು ಕೆಲವೇ ಮೀಟರ್ ದೂರ ಸಾಗಿದ ಬಳಿಕ ಪೊಲೀಸರು ಬಹುಸ್ತರದ ಬ್ಯಾರಿಕೇಡ್‌ಗಳನ್ನು ಇಟ್ಟು ರೈತರನ್ನು ತಡೆದಿದ್ದರು. ಬ್ಯಾರಿಕೇಡ್‌ಗಳತ್ತ ಧಾವಿಸುತ್ತಿದ್ದ ಪ್ರತಿಭಟನಾಕಾರರನ್ನು ಚದುರಿಸಲು ಪೊಲೀಸರು ಅಶ್ರುವಾಯು ಶೆಲ್ ಮತ್ತು ಜಲಫಿರಂಗಿ ಪ್ರಯೋಗಿಸಿದ್ದರು. ಇದರಿಂದಾಗಿ ಹಲವು ರೈತರು ಗಾಯಗೊಂಡಿದ್ದರು.

ಬಿಮ್ಸ್‌ನಲ್ಲಿ ಬಾಣಂತಿಯರ ಸಾವು: ಐಎಎಸ್ ಅಧಿಕಾರಿ ನೇತೃತ್ವದ ತಂಡದಿಂದ ಔಷಧ ಖರೀದಿಯ ತನಿಖೆ

ಬೆಂಗಳೂರು: ಬಳ್ಳಾರಿಯ ಬಿಮ್ಸ್‌ನಲ್ಲಿ ಇತ್ತೀಚೆಗೆ ಐವರು ಬಾಣಂತಿಯರು ಮೃತಪಟ್ಟ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಐಎಎಸ್ ಅಧಿಕಾರಿ ನೇತೃತ್ವದಲ್ಲಿ ಪರಿಶೀಲನಾ ತಂಡವನ್ನು ರಚಿಸಿದೆ. ಈ ತಂಡವು ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ ಔಷಧ ಖರೀದಿಯಲ್ಲಿನ ಅಕ್ರಮಗಳ ಬಗ್ಗೆ ತನಿಖೆ ನಡೆಸುತ್ತದೆ ಮತ್ತು ಇಂತಹ ಘಟನೆಗಳು ಮರುಕಳಿಸದಂತೆ ತಡೆಯುತ್ತದೆ. ಇಂತಹ ಘಟನೆಗಳಲ್ಲಿ ತಂಡವು ಉಲ್ಲಂಘನೆಗಳನ್ನು ತನಿಖೆ ಮಾಡುತ್ತದೆ. ಈಗಿರುವ ವ್ಯವಸ್ಥೆಯಲ್ಲಿ ಅಗತ್ಯ ಸುಧಾರಣೆಗಳನ್ನು ತರಲು ಸಲಹೆ ನೀಡುತ್ತದೆ. ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಡಿ.5 ರಂದು ನಡೆದ ಸಮಿತಿಯ ಸಭೆಯ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಸಮಿತಿಯು ಟೆಂಡರ್ ಮೂಲಕ ಔಷಧಗಳ ಸಂಗ್ರಹಣೆಯಲ್ಲಿನ ಉಲ್ಲಂಘನೆಗಳನ್ನು ಪರಿಶೀಲಿಸಿದೆ. ಔಷಧ ಮಾದರಿಗಳನ್ನು ಎಂಪನೆಲ್ಡ್ ಪ್ರಯೋಗಾಲಯಗಳಿಗೆ ಸಲ್ಲಿಸಿತು. ಕೆಎಸ್‌ಎಂಎಸ್‌ಸಿಎಲ್ ಅಧಿಕಾರಿಗಳ ಪಾತ್ರ ಮತ್ತು ಜವಾಬ್ದಾರಿಗಳನ್ನು ನಿಗದಿಪಡಿಸುವ ಬಗ್ಗೆಯೂ ಚರ್ಚಿಸಲಾಯಿತು. ಕರ್ನಾಟಕ ಕೌಶಲ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಎಂ ಕನಗವಲ್ಲಿ ಅವರ ನೇತೃತ್ವದಲ್ಲಿ ಪರಿಶೀಲನಾ ತಂಡವು ಕಾರ್ಯನಿರ್ವಹಿಸಲಿದ್ದು, ಸಹಾಯಕ ಔಷಧ ನಿಯಂತ್ರಕ ವೆಂಕಟೇಶ್, ಬೆಂಗಳೂರು ವೈದ್ಯಕೀಯ ಕಾಲೇಜಿನ ಮೈಕ್ರೋಬಯಾಲಜಿಸ್ಟ್ ಡಾ. ಅಸೀಮಾ ಬಾನು, ರಾಜೀವ್ ಗಾಂಧಿ ವಿಶ್ವವಿದ್ಯಾಲಯದ ಉಪಕುಲಪತಿಗಳು ನಾಮನಿರ್ದೇಶನಗೊಂಡ ಔಷಧಶಾಸ್ತ್ರದ ಹಿರಿಯ ಪ್ರಾಧ್ಯಾಪಕ ಡಾ. ಆರೋಗ್ಯ ವಿಜ್ಞಾನ ತಂಡದಲ್ಲಿರುತ್ತಾರೆ. ಐದು ದಿನಗಳಲ್ಲಿ ವಿವರವಾದ ವರದಿಯನ್ನು ಸಲ್ಲಿಸುವುದು, ಸಂಗ್ರಹಣೆ ಮತ್ತು ಪರೀಕ್ಷಾ ಕಾರ್ಯವಿಧಾನಗಳಲ್ಲಿನ ಲೋಪಗಳನ್ನು ವಿವರಿಸುವುದು ಮತ್ತು ಸರಿಪಡಿಸುವ ಕ್ರಮಗಳನ್ನು ಶಿಫಾರಸು ಮಾಡುವ ಜವಾಬ್ದಾರಿಯನ್ನು ತಂಡಕ್ಕೆ ವಹಿಸಲಾಗಿದೆ.

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು